ಸಂಪುಟ: 13 Volume ಸಂಚಿಕೆ: 334 Issue ಪುಟಗಳು 08 Pages ಬುಧವಾರ 25 ಫೆಬ್ರವರಿ 2026 ₹6 PRGINO.120927(RNINO:KARKAN/2011/48371) BDR/054/2026-2027 www.mallammanudi.in mallammanudi@gmail.com 9448604450

ಬೀದರ | ಕಲ್ಬುರ್ಗಿ | ಯಾದಗಿರಿ | ರಾಯಚೂರು | ಕೊಪ್ಪಳ | ಬಳ್ಳಾರಿ | ಬಾಗಲಕೋಟೆ | ವಿಜಯನಗರ & ವಿಜಯಪುರ ಜಿಲ್ಲೆಗಳಲ್ಲಿ ಏಕಕಾಲಕ್ಕೆ ಪ್ರಕಟ

# ಮಲ್ಲಮ್ಮ ನುಡಿ

ಕನ್ನಡ ಕಿರಣ

Mallammanudi Regional News Paper
ಪ್ರಾದೇಶಿಕ ಕನ್ನಡ ದೈನಿಕ

ಸಂಪಾದಕರು: ರಮೇಶ ರೆಡ್ಡಿ

**ಬೆಳಗು**

ನಿಷ್ಪ್ರಯೋಜಕ ವ್ಯಕ್ತಿ ಗಳು ಕೇವಲ ತಿನ್ನುವುದಕ್ಕಾಗಿ ಮತ್ತು ಕುಡಿಯುವುದಕ್ಕಾಗಿ ಬದುಕುತ್ತಾರೆ. ಪ್ರಯೋಜನಕಾರಿ ವ್ಯಕ್ತಿ ಗಳು ಬದುಕುವುದಕ್ಕಾಗಿ ತಿನ್ನುತ್ತಾರೆ ಮತ್ತು ಕುಡಿಯುತ್ತಾರೆ.

–ಸಾಕ್ರೆಟಿಸ್

ಸಂಜೆ ದುರ್ಗಮ್ಮ ಸಿಡಿಬಂಡಿ ರಥೋತ್ಸವ 6
ಕಾರು ಅಪಘಾತ: ದೀಪಿಕಾ ನೋಟಗಾರ ಸಾವು 7
ರಾಷ್ಟ್ರಪತಿ ಸೇರಿ ಗಣ್ಯರು, ಮಠಾಧೀಶರಿಗೆ ಆಹ್ವಾನ 8



ತೆಲಂಗಾಣ ರಾಜ್ಯದ ಉಪಮುಖ್ಯಮಂತ್ರಿ ಬಟ್ಟಿ ವಿಕ್ರಮಾರ್ಕ ಅವರು ಇಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಅವರನ್ನು ಕಾವೇರಿಯಲ್ಲಿ ಭೇಟಿಯಾದರು.

## 24ನೇ ರಾಷ್ಟ್ರೀಯ ಅಧ್ಯಕ್ಷರಾಗಿ ಆಯ್ಕೆ

**ಬೀದರ್:** ಅಖಿಲ ಭಾರತ ವೀರಶೈವ ಲಿಂಗಾಯತ ಮಹಾಸಭೆಯ 24ನೇ ರಾಷ್ಟ್ರೀಯ ಅಧ್ಯಕ್ಷರಾಗಿ ಅವಿರೋಧವಾಗಿ ಆಯ್ಕೆಯಾಗಿರುವ ಅರಣ್ಯ, ಜೀವಿಶಾಸ್ತ್ರ ಮತ್ತು ಪರಿಸರ ಸಚಿವರಾದ ಖ್ರಿತಿಚಿಡಿ ಮ್ರಿಚಿಟಜಡಿಜ ಅವರನ್ನು ಬೀದರ ಜಿಲ್ಲೆಯ ಅನುದಾನ ರಹಿತ ಶಾಲಾ ಆಡಳಿತ ಮಂಡಳಿಯ ಸಂಘದ ವತಿಯಿಂದ ಹಳ್ಳಿಖೇಡ ಪಟ್ಟಣದಲ್ಲಿ ಹಮ್ಮಿಕೊಳ್ಳಲಾದ ಅಭಿನಂದನಾ ಸಮಾರಂಭದಲ್ಲಿ ಗೌರವಿಸಲಾಯಿತು.

ಸಮಾರಂಭದಲ್ಲಿ ಮಾತನಾಡಿದ ಸಚಿವರು, ವೀರಶೈವ–ಲಿಂಗಾಯತ ಸಮಾಜವು ಶಿಕ್ಷಣ, ಸಾಮಾಜಿಕ ಸುಧಾರಣೆ ಹಾಗೂ ಮಾನವೀಯ ಮೌಲ್ಯಗಳ ರಕ್ಷಣೆಯಲ್ಲಿ ವಹಿಸಿರುವ ಮಹತ್ವದ ಪಾತ್ರವನ್ನು ಸ್ಮರಿಸಿದರು. ಸಮಾಜದ ಏಕತೆ, ಸಮಾನತೆ ಮತ್ತು



ಶಿಕ್ಷಣದ ಉತ್ತೇಜನಕ್ಕೆ ಮಹಾಸಭೆಯ ಮೂಲಕ ಮತ್ತಷ್ಟು ಪರಿಣಾಮಕಾರಿ ಕಾರ್ಯಯೋಜನೆಗಳನ್ನು ರೂಪಿಸಲಾಗುವುದು ಎಂದು ತಿಳಿಸಿದರು.

ಈ ಸಂದರ್ಭದಲ್ಲಿ ಸಂಘದ ಪದಾಧಿಕಾರಿಗಳು, ಸಮಾಜದ ಮುಖಂಡರು ಹಾಗೂ ಗಣ್ಯರು ಉಪಸ್ಥಿತರಿದ್ದು, ಸಚಿವರಿಗೆ ಅಭಿನಂದನೆ ಸಲ್ಲಿಸಿದರು.

## 49ನೇ ಸ್ಮರಣೋತ್ಸವ ಶರಣ ಸಂಸ್ಕೃತಿ

**ಹಾವೇರಿ:** ಜಿಲ್ಲೆಯ ಸವಣೂರ ನಗರದ ಶ್ರೀ ದೊಡ್ಡಹುಣಸೆ ಕಲ್ಮಠದ ಆವರಣದಲ್ಲಿ ಲಿಂಗೈಕ್ಯ ಶ್ರೀ ಗುರು ರಾಚೋಟೇಶ್ವರ ಮಹಾಸ್ವಾಮಿಗಳವರ 49 ನೇಯ ಸ್ಮರಣೋತ್ಸವ ಶರಣ ಸಂಸ್ಕೃತಿ ಸಮಾರಂಭ ಹಾಗೂ ಕಲ್ಪವೃಕ್ಷ ಪ್ರಶಸ್ತಿ ಪ್ರದಾನ ಸಮಾರಂಭದಲ್ಲಿ ಕರ್ನಾಟಕ ಸರ್ಕಾರದ ಮಾಜಿ ಮುಖ್ಯಮಂತ್ರಿಗಳು ಹಾಗೂ ಹಾವೇರಿ – ಗದಗ ಲೋಕಸಭಾ ಕ್ಷೇತ್ರದ ಸಂಸದರಾದ ಶ್ರೀ ಬಸವರಾಜ ಬೊಮ್ಮಾಯಿರವರು ಭಾಗವಹಿಸಿ, ಮಾತನಾಡಿದರು. ಈ ಸಂಧರ್ಭದಲ್ಲಿ ಶ್ರೀ ಮ.ನಿ.ಪ್ರ ಚನ್ನಬಸವ ಮಹಾಸ್ವಾಮಿಗಳು ದೊಡ್ಡಹುಣಸೆ ಕಲ್ಮಠ ಸವಣೂರು ಶ್ರೀಗಳು ಸೇರಿದಂತೆ ನಾಡಿನ ಹಲವಾರು ಪರಮ ಪೂಜ್ಯರು ಸಾನಿಧ್ಯ ವಹಿಸಿದ್ದರು.



ವಿಧಾನ ಪರಿಷತ್ ಸದಸ್ಯರಾದ ಶ್ರೀ ಸಲೀಂ ಅಹ್ಮದ್, ಮುಖಂಡರಾದ ಶ್ರೀ ಸಂಜೀವಕುಮಾರ ನೀರಲಗಿ ಸೇರಿದಂತೆ ಹಲವಾರು ಪ್ರಮುಖರು ಉಪಸ್ಥಿತರಿದ್ದರು.

**ಮಲ್ಲಮ್ಮ ನುಡಿ**

**ಯುಗಾದಿ ವಿಶೇಷಾಂಕ- 2026**

ಸದಾ ಹೊಸತನಕ್ಕೆ ಹೆಸರಾದ ಪ್ರತಿಷ್ಠಿತ ಪ್ರಾದೇಶಿಕ ಮಲ್ಲಮ್ಮನುಡಿ ದಿನಪತ್ರಿಕೆಯು ಈ ಬಾರಿ ಯುಗಾದಿ ವಿನೂತನ ವಿಶೇಷಾಂಕ–2026 ಹೊರತರಲಿದೆ. ಇದರ ಸಿದ್ಧತೆಯು ಈಗಾಗಲೇ ಆರಂಭವಾಗಿದೆ. ಇದರ ಪ್ರಯುಕ್ತ ವಿಶೇಷ ಸಂಚಿಕೆಗಾಗಿ ಲೇಖಕರಿಂದ ಬರಹಗಳನ್ನು ಆಹ್ವಾನಿಸುತ್ತಿದೆ.

**ಲೇಖಕರು ಪಾಲಿಸಬೇಕಾದ ಸೂಚನೆಗಳು**

- ನನ್ನೂರು ಹಲವು ವೈಶಿಷ್ಟ್ಯಗಳ ತವರು: 200 ಪದ ಮಿತಿ
- ನನ್ನ ಜೀವನದ ಟರ್ನಿಂಗ್ ಪಾಯಿಂಟ್: 200 ಪದಮಿತಿ
- ನಾನು ಪ್ರೀತಿಸಿದೆ. ಆದರೆ ಆಕೆಗೆ ಹೇಳಲೇ ಇಲ್ಲ, ಸ್ವ ಅನುಭವ: 200 ಪದ ಮಿತಿ
- ಕಥೆಗಳು: 600 ಪದಮಿತಿ
- ಯಾವುದೇ ವಿಷಯ ಕುರಿತ ಲಲಿತ ಪ್ರಬಂಧ: 300 ಪದ
- ಕವನ 24 ಸಾಲು ಮೀರದಿರಲಿ.

► ಲೇಖನಗಳನ್ನು ಕಳುಹಿಸಲು ಅಂತಿಮ ದಿನಾಂಕ: 5–03–2026

► ಬರಹಗಳ ಆಯ್ಕೆಯಲ್ಲಿ ಸಂಚಿಕೆ ಸಂಪಾದಕರ ತೀರ್ಮಾನವೇ ಅಂತಿಮ.

ಈ ಮೇಲ್: mallammanudi@gmail.com

# ಪ್ರಿಯಾಂಕ್ ಛಲವಾದಿ ಚಕಮಕಿ

## ರಾಜ್ಯ ಬಿಜೆಪಿ ಹಾಗೂ ಕಾಂಗ್ರೆಸ್ ನಾಯಕರ ನಡುವೆ ಮಾತಿನ ಜಟಾಪಟಿ; ಪರಸ್ಪರ ವಾಕ್ ಸಮರ

• ಮಲ್ಲಮ್ಮ ನುಡಿ ವಾರ್ತೆ ಬೆಂಗಳೂರು

ರಾಜ್ಯ ಬಿಜೆಪಿ ಹಾಗೂ ಕಾಂಗ್ರೆಸ್ ಜಟಾಪಟಿ ಜೋರಾಗಿದೆ ಪರಸ್ಪರ ನಿಂದನೆ ಮತ್ತು ವಾಗ್ದಾಳಿಗೂ ಕಾರಣವಾಗಿದೆ.

ದಲಿತ ಸಮುದಾಯ ಮತ್ತು SCSP-TSP ಯೋಜನೆಗೆ ಸಂಬಂಧಿಸಿದಂತೆ, ವಿಧಾನ ಪರಿಷತ್ತಿನ ಪ್ರತಿಪಕ್ಷ ನಾಯಕ ಛಲವಾದಿ ನಾರಾಯಣಸ್ವಾಮಿ ಮತ್ತು ರಾಜ್ಯ ಐಟಿಬಿಟಿ, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್'ರಾಜ್ ಖಾತೆಯ ಸಚಿವ ಪ್ರಿಯಾಂಕ್ ಖರ್ಗೆ ನಡುವೆ ಟ್ವೀಟ್ ಸಮರ ನಡೆದಿದೆ.

**ರಾಜೀನಾಮೆ ಮಾತ್ರ ಕೊಡಿ:** ನನ್ನನ್ನು ಕೆಣಕಿದ–ರೆ ಕುಟುಕದೆ ಬಿಡುವುದಿಲ್ಲ ಎನ್ನುವ ಛಲವಾದಿ ಎಚ್ಚರಿಕೆಗೆ, ರಾಜೀನಾಮೆ ಮಾತ್ರ ಕೊಡಿ ಸಾಕು, ರಾಜಕೀಯ ನಿವೃತ್ತಿ ಘೋಷಿಸಬೇಕಿಲ್ಲ. ನನ್ನ ಬಗ್ಗೆ ಮಾತನಾಡುವುದನ್ನು ನಿಲ್ಲಿಸಿದರೆ ಸಾಕು ರಾಜಕೀಯ ನಿವೃತ್ತಿಯು ನಿಮಗೆ ಅನಿವಾರ್ಯವಾಗುತ್ತದೆ ಎಂದು ಪ್ರಿಯಾಂಕ್ ಖರ್ಗೆ ಲೇವಡಿ ಮಾಡಿದ್ದಾರೆ.

**ಪ್ರತಿಪಕ್ಷ ನಾಯಕನ ವಿರುದ್ಧ ಕಿಡಿ:** ದಲಿತತ್ವವನ್ನು ತಮಗೆ ಅನುಕಂಪದ ಕಾರ್ಡ್ ಆಗಿ ಬಳಸಿಕೊಳ್ಳುತ್ತಿದ್ದಾರೆ. ಆದರೆ, ನಾವು ಹಾಗಲ್ಲ, ಅದನ್ನು ನಾವು ಸ್ವಾಭಿಮಾನವಾಗಿ ಮತ್ತು ಒಂದು ಹೋರಾಟವನ್ನಾಗಿ ಕಾಣುತ್ತೇವೆ. ಇದನ್ನೇ ನಮಗೆ ಬಾಬಾ ಸಾಹೇಬರು ಹೇಳಿಕೊಟ್ಟಿದ್ದು ಎಂದು ರಾಜ್ಯ ಸಚಿವ ಪ್ರಿಯಾಂಕ್ ಖರ್ಗೆ, ಪ್ರತಿಪಕ್ಷದ ನಾಯಕರ ವಿರುದ್ಧ ಕಿಡಿಕಾರಿದ್ದಾರೆ.





### ಗೂಗಲ್ ಬೇಬಿ: ಲೇವಡಿ

ಸಚಿವ ಪ್ರಿಯಾಂಕ್ ಖರ್ಗೆ ಯವರನ್ನು ಪ್ರತಿಪಕ್ಷದ ನಾಯಕ ಛಲವಾದಿ ನಾರಾಯಣಸ್ವಾಮಿ 'ಗೂಗಲ್ ಬೇಬಿ' ಎಂದು ಲೇವಡಿ ಮಾಡಿದ್ದಾರೆ. ಇದಕ್ಕೆ ಪ್ರತಿಯಾಗಿ ಸಚಿವ ಪ್ರಿಯಾಂಕ್ ಖರ್ಗೆ ಯವರು ಪ್ರತಿಪಕ್ಷದ ನಾಯಕ ಛಲವಾದಿ ನಾರಾಯಣಸ್ವಾಮಿ ಬಗ್ಗೆ ಮಾತನಾಡಿ ಅವರು ಕಾಂಗ್ರೆಸ್ಸಿನಲ್ಲಿ ಇದ್ದವರು ಬಿಜೆಪಿಗೆ ಹೋದ ಮೇಲೆ, ಅವಕಾಶವಾದಿ ನಾರಾಯಣಸ್ವಾಮಿ ಆಗಿದ್ದಾರೆ ಎಂದು ಪ್ರಿಯಾಂಕ್ ಖರ್ಗೆ ತಿರುಗೇಟು ಕೊಟ್ಟಿದ್ದಾರೆ.

### ಜೀರೋದಿಂದ ಹೀರೋ ಮಾಡಿದ್ದು ಯಾರು

ನಿಮ್ಮನ್ನು ಜೀರೋದಿಂದ ಹೀರೋ ಮಾಡಿದ್ದು ಕಾಂಗ್ರೆಸ್ ಪಕ್ಷ, ಹೀರೋ ಆದ ಮೇಲೆಯೇ ಬಿಜೆಪಿ ನಿಮ್ಮನ್ನು ಕರೆದುಕೊಂಡಿದ್ದೇ ಹೊರತು ಬಿಜೆಪಿ ನಿಮ್ಮನ್ನು ಜೀರೋದಿಂದ ಹೀರೋ ಮಾಡಿಲ್ಲ. ನಾನು ಎಲೆಕ್ಟೆಡ್ ರಾಜಕಾರಿಣಿ, ನೀವು ಸದ್ಯಕ್ಕೆ ಸೆಲೆಕ್ಟೆಡ್ ರಾಜಕಾರಿಣಿ ಎಂದು ಕುಟುಕಿದ್ದಾರೆ.

### ನಿಜವಾದ ದಲಿತತ್ವ ಇದೆಯೇ?

ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವ ಪ್ರಿಯಾಂಕ್ ಖರ್ಗೆ ಕುಟುಂಬದಲ್ಲಿ ನಿಜವಾದ ದಲಿತತ್ವ ಇದೆಯೇ? ಎಂದು ವಿಧಾನಪರಿಷತ್ ಪ್ರತಿಪಕ್ಷ ನಾಯಕ ಛಲವಾದಿ ನಾರಾಯಣಸ್ವಾಮಿ ಪ್ರಶ್ನಿಸಿದ್ದಾರೆ. ಕೊಟ್ಟ ಕುದುರೆಯನ್ನು ಏರದವ ವೀರನೂ ಇಲ್ಲ. ಶೂರನೂ ಅಲ್ಲ. ಪ್ರಿಯಾಂಕ್ ಖರ್ಗೆ ಅವರದ್ದು ಕೇವಲ ಅಪ್ಪನ ನೆರಳಿನಲ್ಲಿ ಅಧಿಕಾರ ಅನುಭವಿಸುವ ಪಿತ್ರಾರ್ಜಿತ ರಾಜಕಾರಣ ಎಂದು ವಾಗ್ದಾಳಿ ನಡೆಸಿದ್ದಾರೆ.

### ವಂಶಪಾರಂಪರ್ಯ ಪಟ್ಟಿ

ಸಚಿವ ಪ್ರಿಯಾಂಕ್ ಖರ್ಗೆ ಅವರು, ಬಿಜೆಪಿ ವಂಶಪಾರಂಪರ್ಯ ರಾಜಕಾರಣಿಗಳ ಪಟ್ಟಿ ಈ ಕೆಳಗಿನಂತೆ ಬಿಡುಗಡೆ ಮಾಡಿದ್ದಾರೆ. ರಾಷ್ಟ್ರೀಯ ಅಧ್ಯಕ್ಷರಾದ ನಿತಿನ್ ನಬಿನ್, ರಾಜ್ಯಾಧ್ಯಕ್ಷರಾದ ಬಿವೈ ವಿಜಯೇಂದ್ರ, ಶಾಸಕ ಅರವಿಂದ್ ಬೆಲ್ಲದ್, ಸಂಸದರಾದ ಬಿವೈ ರಾಘವೇಂದ್ರ, ಸಂಸದರಾದ ತೇಜಸ್ವಿ ಸೂರ್ಯ, ಸಂಸದರು ಮತ್ತು ಮಾಜಿ ಸಿಎಂ ಬಸವರಾಜ ಬೊಮ್ಮಾಯಿ, ಮಾಜಿ ಶಾಸಕ ಕುಮಾರ್ ಬಂಗಾರಪ್ಪ, ಶಾಸಕರಾದ ಎಸ್.ರಘು, ಬಿಜೆಪಿ ನಾಯಕ ನಿಖಿಲ್ ಕಟ್ಟಿ, ಬಿಜೆಪಿ ನಾಯಕ ಪ್ರದೀಪ ಶೆಟ್ಟರ್, ಬಿಜೆಪಿ ನಾಯಕ ಅವಿನಾಶ್ ಜಾಧವ್, ಬಿಜೆಪಿ ನಾಯಕ ಸಪ್ತಗಿರಿ ಗೌಡ ಮುಂತಾರವರು ಎಂದಿದ್ದಾರೆ.



ಬೆಂಗಳೂರಿನ ಕೆ ಆರ್ ರಸ್ತೆಯ ಸುತ್ತೂರು ಸದನದಲ್ಲಿ ಸುತ್ತೂರು ಶ್ರೀ ಶಿವರಾತ್ರಿ ದೇಶೀಕೇಂದ್ರ ಸ್ವಾಮೀಜಿ ಅವರನ್ನು ಡಿಸಿಎಂ ಡಿ ಕೆ ಶಿವಕುಮಾರ್ ಅವರು ಮಂಗಳವಾರ ಭೇಟಿ ಮಾಡಿ ಆಶೀರ್ವಾದ ಪಡೆದು, ಸಮಾಲೋಚನೆ ನಡೆಸಿದರು.

## 2 ಲಕ್ಷಕ್ಕೂ ಹೆಚ್ಚು ಪದಾಧಿಕಾರಿಗಳಿಗೆ ಪ್ರಶಿಕ್ಷಣ

• ಮಲ್ಲಮ್ಮ ನುಡಿ ವಾರ್ತೆ ಬೆಂಗಳೂರು

ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ.ವಿಜಯೇಂದ್ರರ ಅಧ್ಯಕ್ಷತೆಯಲ್ಲಿ, ರಾಷ್ಟ್ರೀಯ ಸಂಘಟನಾ ಪ್ರಧಾನ ಕಾರ್ಯದರ್ಶಿ ಬಿ.ಎಲ್.ಸಂತೋಷ್ ಜೀ ಅವರ ಉಪಸ್ಥಿತಿಯಲ್ಲಿ ಫೆ. 26ರಂದು ಸ್ಕೌಟ್ಸ್ ಮತ್ತು ಗೈಡ್ಸ್ ಸಭಾಂಗಣದಲ್ಲಿ ಕರ್ನಾಟಕದ ಎಲ್ಲ ಜಿಲ್ಲಾ ತಂಡಗಳಿಗೆ ಪ್ರಶಿಕ್ಷಣ ಕಾರ್ಯಾಗಾರ ನಡೆಯಲಿದೆ ಎಂದು ಪ್ರಶಿಕ್ಷಣ ಅಭಿಯಾನದ ರಾಜ್ಯ ಸಂಚಾಲಕ ಮತ್ತು ರಾಜ್ಯ ಪ್ರಧಾನ ಕಾರ್ಯದರ್ಶಿ ಪಿ. ರಾಜೀವ್ ಅವರು ತಿಳಿಸಿದ್ದಾರೆ.

ಬಿಜೆಪಿ ರಾಜ್ಯ ಕಾರ್ಯಾಲಯ ಜಗನ್ನಾಥ ಭವನದಲ್ಲಿ ಇಂದು ಪತ್ರಿಕಾಗೋಷ್ಠಿಯಲ್ಲಿ ಅವರು ಮಾತನಾಡಿದರು. ರಾಜ್ಯದ ಪ್ರತಿ ಪ್ರಶಿಕ್ಷಣ ಜಿಲ್ಲೆಯಿಂದ ತಂಡವನ್ನು ನಿಯೋಜಿಸಲಾಗಿದೆ ಎಂದು ಹೇಳಿದರು. 1,156 ಸ್ಥಳಗಳಲ್ಲಿ ಪ್ರಶಿಕ್ಷಣ ವರ್ಗ ನಡೆಯಲಿದೆ. ಒಂದು ಪ್ರಶಿಕ್ಷಣದಲ್ಲಿ ಸರಾಸರಿ 200 ಪದಾಧಿಕಾರಿಗಳು ಭಾಗವಹಿಸಲಿದ್ದು, ಸುಮಾರು 2 ಲಕ್ಷಕ್ಕೂ ಹೆಚ್ಚು ಪದಾಧಿಕಾರಿಗಳಿಗೆ ಪ್ರಶಿಕ್ಷಣ ನೀಡಲಿದ್ದೇವೆ ಎಂದು ತಿಳಿಸಿದರು.

## ದ್ವೇಷ ಭಾಷಣ: ಯತ್ನಾಳ ವಿರುದ್ಧ ಎಫ್ಐಆರ್

• ಮಲ್ಲಮ್ಮ ನುಡಿ ವಾರ್ತೆ ಗುರುಮಠಕಲ್



ಪಟ್ಟಣದಲ್ಲಿ ಛತ್ರಪತಿ ಶಿವಾಜಿ ಮಹಾರಾಜ ಅವರ ಜಯಂತಿ ಅಂಗವಾಗಿ ಫೆಬ್ರವರಿ 21ರಂದು ಭವ್ಯ ಶೋಭಾಯಾತ್ರೆ ಹಾಗೂ ವೇದಿಕೆ ಕಾರ್ಯಕ್ರಮ ಹಮ್ಮಿಕೊಳ್ಳಲಾಯಿತು.

ಕಾರ್ಯಕ್ರಮಕ್ಕೆ ಮುಖ್ಯ ಅತಿಥಿಯಾಗಿ ಬಸನಗೌಡ ಪಾಟೀಲ್ ಯತ್ನಾಳ, ಶಾಸಕರು ಸಭೆಯನ್ನು ಉದ್ದೇಶಿಸಿ ಮಾತನಾಡಿ ತಮ್ಮ ಭಾಷಣದಲ್ಲಿ ಇತಿಹಾಸ ಹಾಗೂ ಸಮಕಾಲೀನ ಸಾಮಾಜಿಕ ವಿಷಯಗಳನ್ನು ಉಲ್ಲೇಖಿಸಿದ ಅವರು, ಕೆಲವು ಹೇಳಿಕೆಗಳನ್ನು ಮಾಡಿದರು.

ಭಾಷಣದಲ್ಲಿ ಮಾಡಲಾದ ಕೆಲ ಹೇಳಿಕೆಗಳು ಮಾಧ್ಯಮ ಹಾಗೂ ಸಾಮಾಜಿಕ ಜಾಲತಾಣಗಳಲ್ಲಿ ವ್ಯಾಪಕ ಚರ್ಚೆಗೆ ಗ್ರಾಸವಾಗಿದ್ದು, ಒಂದು ಸಮುದಾಯವನ್ನು ಗುರಿಯಾಗಿಸಿಕೊಂಡು ದ್ವೇಷ ಭಾಷಣ ಮಾಡಲಾಗಿದೆ ಎಂಬ ಆರೋಪಗಳು ಕೇಳಿಬಂದಿವೆ. ಫೆಬ್ರವರಿ 23ರಂದು ಸಂಬಂಧಿತ ವಿಧಿಗಳಡಿ ಪ್ರಕರಣ ದಾಖಲಿಸಿ ತನಿಖೆ ಕೈಗೊಳ್ಳಲಾಗಿದೆ ಎಂದು ಪೊಲೀಸ್ ಮೂಲಗಳು ತಿಳಿಸಿವೆ.

## ಮತ್ತೆ ದಲಿತ ಮುಖ್ಯಮಂತ್ರಿ ಅಸ್ತ್ರ

• ಮಲ್ಲಮ್ಮ ನುಡಿ ವಾರ್ತೆ ಬೆಂಗಳೂರು

ರಾಜ್ಯ ಕಾಂಗ್ರೆಸ್ ಪಕ್ಷದಲ್ಲಿ ಸಿಎಂ ಪಟ್ಟದ ಗುದ್ದಾಟ ಮುಂದುವರೆದಿದೆ ಕರ್ನಾಟಕ ರಾಜಕೀಯದಲ್ಲಿ ಮತ್ತೊಮ್ಮೆ ಮುಖ್ಯಮಂತ್ರಿ ಸ್ಥಾನ ಕುರಿತ ಚರ್ಚೆ ತೀವ್ರಗೊಂಡಿದೆ. ಹೊರಗೆ ಸರ್ಕಾರ ಸ್ಥಿರವಾಗಿದೆ ಎನ್ನುವ ಚಿತ್ರಣ ಕಂಡು ಬರುತ್ತಿದ್ದರೂ ಆಂತರಿಕವಾಗಿ ಕಾಂಗ್ರೆಸ್ ಪಕ್ಷದಲ್ಲಿ ನಾಯಕತ್ವ ಸಮರ ತೀವ್ರವಾಗಿರುವುದು ಎದ್ದು ಕಾಣುತ್ತಿವೆ.

ಸಿಎಂ ಕುರ್ಚಿಗಾಗಿ ಮುಖ್ಯಮಂತ್ರಿ ಸಿದ್ದರಾಮಯ್ಯ ಮತ್ತು ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ನಡುವಿನ ಜಟಾಪಟಿಯೊಂದಿಗೆ ಇದೀಗ "ದಲಿತ ಮುಖ್ಯಮಂತ್ರಿ" ಎಂಬ ಕೂಗು ಸೇರ್ಪಡೆಗೊಂಡಿದೆ. ನಾಯಕತ್ವ ಬದಲಾವಣೆ ಬಗ್ಗೆ ಹೈಕಮಾಂಡ್ ನಿರ್ಧಾರ ಕೈಗೊಂಡಿದೆ ಎಂದು ಸಚಿವ ಸತೀಶ್ ಜಾರಕಿಹೊಳಿ ಅವರು ಹೇಳಿಕೆ ನೀಡಿರುವ ಹಿನ್ನೆಲೆಯಲ್ಲಿ ಈ ಚರ್ಚೆ ತೀವ್ರಗೊಂಡಿದೆ.

ಮೂಲಗಳ ಪ್ರಕಾರ, ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಅವರು ಡಿ.ಕೆ. ಶಿವಕುಮಾರ್ ಅವರನ್ನು ಮುಖ್ಯಮಂತ್ರಿ ಹಾಗೂ ತಮ್ಮ ಪುತ್ರ ಪ್ರಿಯಾಂಕ್ ಖರ್ಗೆಯನ್ನು ಉಪಮುಖ್ಯಮಂತ್ರಿಯಾಗಿ ಪರಿಗಣಿಸುವ ಚರ್ಚೆಗೆ ಒಲವು ತೋರಿದ್ದಾರೆ ಎನ್ನಲಾಗುತ್ತಿದೆ. ಈ ಮಾಹಿತಿ ಸಿದ್ದರಾಮಯ್ಯ ಬಣದ ಕಣ್ಣು ಕೆಂಪಗಾಗುವಂತೆ ಮಾಡಿದೆ. ಕಾಂಗ್ರೆಸ್ ಅಧಿಕಾರಕ್ಕೆ ಬಂದಿದ್ದು 'ಅಹಿಂದಾ' (ಅಲ್ಪಸಂಖ್ಯಾತರು, ಹಿಂದುಳಿದ ವರ್ಗಗಳು ಮತ್ತು ದಲಿತರು) ಸಮರ್ಥನೆಯಿಂದಾಗಿದ್ದು, ಸಿದ್ದರಾಮಯ್ಯ ಅವರ ನಂತರ ದಲಿತ ನಾಯಕನಿಗೆ ಮುಖ್ಯಮಂತ್ರಿ ಸ್ಥಾನ ನೀಡಬೇಕು ಎಂಬ ಅಭಿಪ್ರಾಯವನ್ನು ಸಿದ್ದರಾಮಯ್ಯ ಬಣವು ಮುಂದಿರಿಸಿದೆ. ಇದಕ್ಕೆ ಪ್ರತಿಯಾಗಿ ಡಿಕೆಶಿ ಬಣ ಮತ್ತೊಂದು ತಂತ್ರ ರೂಪಿಸಲು ಸಿದ್ಧವಾಗಿದೆ.

## ಕುರ್ಚಿ ಕಾಳಗದಲ್ಲಿ ಸಿಎಂ, ಡಿಸಿಎಂ ಬ್ಯುಸಿ

• ಮಲ್ಲಮ್ಮ ನುಡಿ ವಾರ್ತೆ ಬೆಂಗಳೂರು

ಮುಖ್ಯಮಂತ್ರಿ, ಉಪ ಮುಖ್ಯಮಂತ್ರಿಗಳು ಇವತ್ತು ಯುವಜನತೆಯ ಜೀವನದ ಜೊತೆ ಚೆಲ್ಲಾಟ ಆಡುತ್ತಿದ್ದಾರೆ ಎಂದು ಬಿಜೆಪಿ ರಾಜ್ಯಾಧ್ಯಕ್ಷ ಮತ್ತು ಶಾಸಕ ಬಿ.ವೈ.ವಿಜಯೇಂದ್ರ ಅವರು ಆರೋಪಿಸಿದ್ದಾರೆ. ಅವರು ಇಂದು ಮಾಧ್ಯಮಗಳ ಜೊತೆ ಮಾತನಾಡಿದರು. ಯುವಜನತೆ ಕಳೆದ ಎರಡೂವರೆ ವರ್ಷದಿಂದ ಕಣ್ಣೀರು ಹಾಕುತ್ತಿದ್ದಾರೆ. ಪ್ರತಿಭಟನೆ– ಹೋರಾಟ ಮಾಡುತ್ತಿದ್ದಾರೆ;



ಇದ್ಯಾವುದನ್ನೂ ಲೆಕ್ಕಿಸದೇ ಬೆಳಗಾವಿಯ ಅಧಿವೇಶನದ ಸಂದರ್ಭದಲ್ಲೂ ಇದೇ ವಿದ್ಯಾರ್ಥಿಗಳ ಒಕ್ಕೂಟ ಪ್ರತಿಭಟನೆ ಮಾಡಿದರೆ ಲಾಠಿ ಚಾರ್ಜ್ ಮಾಡಿದ್ದರು. ಆಗಲೂ ಸರಕಾರ ಎಚ್ಚೆತ್ತುಕೊಳ್ಳಲಿಲ್ಲ ಎಂದು ದೂರಿದರು. ಮುಖ್ಯಮಂತ್ರಿಗಳ ಜೊತೆ ಭೇಟಿಗೆ ಸಮಯ ನಿಗದಿಪಡಿಸಲು ರಾಜ್ಯ ಹೈಕೋರ್ಟ್ ಮಧ್ಯಸ್ಥಿಕೆ ವಹಿಸಬೇಕಾಯಿತು ಎಂದು ಅವರು ತಿಳಿಸಿದ್ದಾರೆ. ಸಿದ್ದರಾಮಯ್ಯ–ಡಿ.ಕೆ.ಶಿವಕುಮಾರ್ ಅವರು ಕುರ್ಚಿ ಕಾಳಗದಲ್ಲಿ ಬ್ಯುಸಿ ಆಗಿದ್ದಾರೆ. ಒಬ್ಬರು ಕುರ್ಚಿ ಉಳಿಸಿಕೊಳ್ಳಲು, ಇನ್ನೊಬ್ಬರು ಕುರ್ಚಿ ಕಸಿದುಕೊಳ್ಳಲು ಮುಂದಾಗಿದ್ದಾರೆಯೇ ವಿನಾ ಈ ಯುವಜನತೆಯ ಸಮಸ್ಯೆ ಆಲಿಸಲು ಇವರಿಗೆ ಸಮಯ ಸಿಗುತ್ತಿಲ್ಲ ಎಂದು ಟೀಕಿಸಿದರು. ನನ್ನನ್ನು ವಿದ್ಯಾರ್ಥಿಗಳ ಒಕ್ಕೂಟದವರು ಬಂದು ಭೇಟಿ ಮಾಡಿದ್ದರು. 2 ಲಕ್ಷ 85 ಸಾವಿರ ಹುದ್ದೆಗಳು ಇವತ್ತಿಗೂ ಖಾಲಿ ಬಿದ್ದಿವೆ. ಕಾಂಗ್ರೆಸ್ ಸರಕಾರಕ್ಕೆ ಅವುಗಳ ನೇಮಕಾತಿ ಪ್ರಕ್ರಿಯೆ ಪ್ರಾರಂಭಿಸಲು ಆಗುತ್ತಿಲ್ಲ ಎಂದು ಆಕ್ಷೇಪ ವ್ಯಕ್ತಪಡಿಸಿದ್ದಾರೆ. ರಾಜ್ಯದ ಕಾಂಗ್ರೆಸ್ ಸರಕಾರಕ್ಕೆ ಒಂದೇ ಒಂದು ಹುದ್ದೆಯನ್ನೂ ಭರ್ತಿ ಮಾಡಲು ಸಾಧ್ಯವಾಗಿಲ್ಲ. ಮುಖ್ಯಮಂತ್ರಿ, ಉಪ ಮುಖ್ಯಮಂತ್ರಿ, ಸಚಿವಸಂಪುಟದ ಸದಸ್ಯರು ರಾಜ್ಯದುದ್ದಕ್ಕೂ ಭಾಷಣ ಬಿಗಿಯುತ್ತಿದ್ದಾರೆ. ಆದರೆ, ನಾಡಿನ ಯುವಜನತೆಗೆ ನ್ಯಾಯ ನೀಡಲು ಸಾಧ್ಯವಾಗಿಲ್ಲ ಎಂದು ಆಕ್ಷೇಪಿಸಿದರು. ಮೀಸಲಾತಿ ಗೊಂದಲ ಬಳಸಿಕೊಂಡು ರಾಜ್ಯ ಹೈಕೋರ್ಟ್‌ನಲ್ಲಿ ಸರಿಯಾಗಿ ವಾದ ಮಂಡಿಸದೇ ಕಾಲಹರಣ ಮಾಡಿಕೊಂಡು ಕಾಂಗ್ರೆಸ್ ಸರಕಾರ ಕುಳಿತಿದೆ ಎಂದು ವಾಗ್ದಾಳಿ ನಡೆಸಿದ್ದಾರೆ.

## ಹುದ್ದೆ ತುಂಬದೆ ನಿರ್ಲಕ್ಷ್ಯ: ಪ್ರತಿಭಟನೆ

• ಮಲ್ಲಮ್ಮ ನುಡಿ ವಾರ್ತೆ ಬೆಂಗಳೂರು

ಧಾರವಾಡದಲ್ಲಿ ಅಸಂಖ್ಯಾತ ಉದ್ಯೋಗಾಕಾಂಕ್ಷಿಗಳು ಬೀದಿಗೆ ಇಳಿದಿರುವುದನ್ನು ರಾಜ್ಯ ಸರಕಾರ ಲಘುವಾಗಿ ಪರಿಗಣಿಸಬಾರದು ಎಂದು ಕೇಂದ್ರ ಸಚಿವ ತಾಕಿತು ಮಾಡಿದ್ದಾರೆ. ಈ ಕುರಿತು ವರದಿಗಾರರ ಜೊತೆ ಮಾತನಾಡಿದ ಅವರು, ಸರಕಾರಿ ಹುದ್ದೆಗಳನ್ನು ಕಾಲ ಕಾಲಕ್ಕೆ ತುಂಬದೇ ನಿರ್ಲಕ್ಷಿಸಿದ ಪರಿಣಾಮವೇ ಯುವಜನರು ಪ್ರತಿಭಟನೆ ದಾರಿ ತುಳಿಯಲು ಕಾರಣ. ಎಂದು ಸ್ಪಷ್ಟ ಪಡಿಸಿದ್ದಾರೆ ಸರಕಾರಿ ಹುದ್ದೆಗಳನ್ನು ಕಾಲ ಕಾಲಕ್ಕೆ ತುಂಬದೇ ನಿರ್ಲಕ್ಷಿಸಿದ ಪರಿಣಾಮವೇ ಯುವಜನರು ಪ್ರತಿಭಟನೆ ದಾರಿ ತುಳಿಯಲು ಕಾರಣ.

**ಯುವಜನರಿಗೆ ನನ್ನ ಮನವಿ ಇಷ್ಟೇ:** ನಿಮ್ಮ ಪ್ರತಿಭಟನೆ ಶಾಂತಿಯುತವಾಗಿರಲಿ, ನಿಮ್ಮೊಂದಿಗೆ ನಾನಿದ್ದೇನೆ. ರಾಜ್ಯದಲ್ಲಿ 2.94 ಲಕ್ಷ ಸರಕಾರಿ ಹುದ್ದೆಗಳು ಖಾಲಿ ಬಿದ್ದಿವೆ. ಸಂಪುಟ ದರ್ಜೆ ಹುದ್ದೆಗಳು ಮಾತ್ರ ಸೂಪರ್‌ಫಾಸ್ಟ್ ಆಗಿ ಭರ್ತಿ ಆಗುತ್ತಿವೆ. @INCKarnataka ಸರಕಾರದ ಆದ್ಯತೆ ಯಾವ ರೀತಿಯಲ್ಲಿದೆ ಎಂಬುದು ಅರ್ಥವಾಗುತ್ತದೆ ಎಂದು ತಿಳಿಸಿದ್ದಾರೆ.

ಆರ್.ವಿ. ದೇಶಪಾಂಡೆ ಅವರ ಅಧ್ಯಕ್ಷತೆಯ ಕರ್ನಾಟಕ ಆಡಳಿತ ಸುಧಾರಣೆ ಆಯೋಗದ ವರದಿಯಂತೆ ರಾಜ್ಯದಲ್ಲಿ 7 ಲಕ್ಷ ನಿರುದ್ಯೋಗಿಗಳಿದ್ದಾರೆ. ಇವರೆಲ್ಲರೂ ಸರಕಾರಿ ಹುದ್ದೆಗಳ ನಿರೀಕ್ಷೆಯಲ್ಲಿದ್ದು, ಖಾಲಿ ಹುದ್ದೆಗಳನ್ನು ಸರಕಾರ ಹಂತ ಹಂತವಾಗಿ ಭರ್ತಿ ಮಾಡಬೇಕಿತ್ತು. ಕುರ್ಚಿ ಕಿತ್ತಾಟದಲ್ಲಿ ಅಮೂಲ್ಯವಾದ 3 ವರ್ಷಗಳನ್ನು ಪೋಲು ಮಾಡಿದೆ. ಯುವಜನರತ್ತ ಗಮನ ಹರಿಸಲು ಈ ಸರಕಾರಕ್ಕೆ ಟೈಮಿಲ್ಲ! ಎಂದು ಟೀಕಿಸಿದ್ದಾರೆ. ನಿರುದ್ಯೋಗ ಎನ್ನುವುದು ಸರಳ ಸಮಸ್ಯೆ ಅಲ್ಲ. ಅದು ಸದಾ ಕುದಿಯುವ ಜ್ವಾಲಾಮುಖಿ ಎಂಬುದನ್ನು ಸರಕಾರ ಮರೆಯಬಾರದು. ಈ ಹೊತ್ತಿಗೇ ಆಡಳಿಗಾರರು ಎಚ್ಚೆತ್ತು ಬಜೆಟ್‌ನಲ್ಲಿ ಪ್ರತ್ಯೇಕ ಹಣ ಇರಿಸಿ ನೇಮಕಾತಿ ಪ್ರಕ್ರಿಯೆಗೆ ಚಾಲನೆ ನೀಡಬೇಕಿತ್ತು. ಕೂಡಲೇ ಖಾಲಿ ಹುದ್ದೆಗಳ ಭರ್ತಿ ಮಾಡುವ ನಿಟ್ಟಿನಲ್ಲಿ ಸರಕಾರ ತುರ್ತು ಕ್ರಮ ವಹಿಸಬೇಕು ಎಂದು ಎಚ್ಚರಿಸಿದ್ದಾರೆ.

**ಮುಖ್ಯಮಂತ್ರಿ, ಉಪ ಮುಖ್ಯಮಂತ್ರಿಗಳು ಇವತ್ತು ಯುವಜನತೆಯ ಜೀವನದ ಜೊತೆ ಚೆಲ್ಲಾಟ ಆಡುತ್ತಿದ್ದಾರೆ: ಬಿ.ವೈ.ವಿಜಯೇಂದ್ರ**

## ವ್ಯಸನ ಮುಕ್ತ ಭಾರತ ಅಭಿಯಾನ ಕಾರ್ಯಕ್ರಮ
# ಯುವಕರೇ ದೇಶದ ಸಂಪತ್ತು



• **ಮಲ್ಲಮ್ಮ ನುಡಿ ವಾರ್ತೆ, ಭಾಲ್ಕಿ**

ಯುವಕರೇದೇಶದನಿಜವಾದಸಂಪತ್ತು. ಅವರು ಆರೋಗ್ಯವಾಗಿದ್ದರೆ ಇಡೀ ಸಮಾಜವೇಆರೋಗ್ಯಕರವಾಗಿರುತ್ತದೆ ಎಂದು ಓಂ ಶಾಂತಿ ಘಟಕದ ಮುಖ್ಯಸ್ಥರಾದ ರಾಧಾ ಬೇಹನ್ ಜೀ ಅಭಿಪ್ರಾಯಪಟ್ಟರು. ಭೀಮಣ್ಣಾ ಖಂಡ್ರೆ ತಾಂತ್ರಿಕ ಮಹಾವಿದ್ಯಾಲಯದಲ್ಲಿ ಪ್ರಜಾಪಿತ ಬ್ರಹ್ಮಕುಮಾರಿ ಓಂ ಶಾಂತಿ ಕೇಂದ್ರ ಹಾಗೂ ಬಿ.ಕೆ.ಆಯ್.ಟಿ ರಾಷ್ಟ್ರೀಯ ಸೇವಾ ಯೋಜನಾ ಘಟಕದ ಸಹಯೋಗದಲ್ಲಿ "ವ್ಯಸನಮುಕ್ತಭಾರತ ಅಭಿಯಾನ" ಕಾರ್ಯಕ್ರಮವನ್ನು ಆಯೋಜಿಸಲಾಯಿತು.

ಓಂ ಶಾಂತಿ ಘಟಕದ ರಾಧ ಬೇಹನ್ ಕಾಯಕ್ರಮವನ್ನು ಉದ್ಘಾಟಿಸಿದರು. ಈ ಸಂದರ್ಭದಲ್ಲಿ ಮಾತನಾಡಿ, ನಮ್ಮ ದೇಶವು ಯುವಕರ ದೇಶವಾಗಿದ್ದು, ಸುಮಾರು ಶೇ. 2 ಯುವಕರು ಯಾವುದಾದರೊಂದು ವ್ಯಸನದಲ್ಲಿ ಪಾಲ್ಗೊಳ್ಳುತ್ತಿದ್ದಾರೆ. ಇದು ಬಹಳ ಕಳವಳಕಾರಿಯಾದ ವಿಷಯ ಎಂದು ನುಡಿದರು. ವ್ಯಸನ ಎಂದರೆ ಕೇವಲ ಮದ್ಯಪಾನವಷ್ಟೇ ಅಲ್ಲ ಈಗಿನ ಯುವ ಪೀಳಿಗೆ ತಂಬಾಕು, ಸಿಗರೇಟು, ಗುಟಕಾ, ಡ್ರಗ್ಸ್ ಇಂತಹ ವ್ಯಸನಗಳಿಗೆ ಬಲಿಯಾಗುತ್ತಿದ್ದು, ಇದಲ್ಲದೇ ಕ್ರಿಕೇಟ್ ಬೆಟ್ಟಿಂಗ್, ಮಟಕಾ, ಜೂಜಾಟ, ಇದರಲ್ಲಿ ತೊಡಗಿದ್ದು ಇದನ್ನು ನಿಯಂತ್ರಿಸುವುದು ಕಷ್ಟವಾದರು ಅನಿವಾರ್ಯವಾಗಿದೆ ಎಂದರು.

ಮುಖ್ಯ ಅತಿಥಿಗಳಾಗಿ ಆಗಮಿಸಿದ ಭಾಲ್ಕಿಯ ಪ್ರಸಿದ್ಧ ಸ್ತ್ರೀ ರೋಗ ತಜ್ಞರಾದಂತಹ ಡಾ. ಶೈಲಜಾ ತಳವಾಡೆಯವರು ಮಾತನಾಡಿ ವ್ಯಸನ ಎಲ್ಲಿಯವರಿಗೆ ಹರಡಿದೆ ಎಂದರೆ, ಮನುಷ್ಯರು ಪಶುಗಳಂತೆ ವರ್ತಿಸುತ್ತಿದ್ದಾರೆ, ಎಂದು ನಿರ್ಭಯಾ ಬಲಾತ್ಕಾರ ಹಾಗೂ ಹತ್ಯಾಕಾಂಡದ ಉದಾಹರಣೆಯನ್ನು ತೆಗೆದುಕೊಂಡು ವಿವರಸಿದರು. ಹಾಗೇಯೇ ನಾವು ವ್ಯಸನ ಮುಕ್ತರಾಗಲು ಮೊದಲು ನಾವು ವ್ಯಸನಿಗಳಾಗಿದ್ದೇವೆ ಎಂದು ಅರ್ಥ ಮಾಡಿಕೊಳ್ಳಬೇಕು ಅದಾದ ನಂತರ ಅದರಿಂದ ಮುಕ್ತವಾಗುವ ಮಾರ್ಗಗಳು ಹುಡುಕಬೇಕು ಎಂದರು.

ಕಾರ್ಯಕ್ರಮದಲ್ಲಿ ಬಿಕೆ–ಆಯ್‌ಟಿಯ ಎನ್.ಎಸ್.ಎಸ್ ಘಟಕದ ಮುಖ್ಯಸ್ಥರಾದ ಡಾ. ಬಿ ಸೂರ್ಯಕಾಂತ್ ಸ್ವಾಗತಿಸಿದರು. ಮಹಾವಿದ್ಯಾಲಯದ ಎನ್.ಎಸ್.ಎಸ್. ಘಟಕದ ಪದಾಧಿಕಾರಿಗಳಾದಂತಹ ಡಾ. ಮಲ್ಲಿಕಾರ್ಜುನ ಮುಗ್ಗಿ, ಪ್ರೊ. ಗಾಯತ್ರಿ ಮುಗ್ಗಿ, ರಷ್ಮೀ, ಪ್ರೊ. ಸಾವಿತ್ರಿ, ಪ್ರೊ. ಅರ್ಚನಾ, ಮುಂತಾದವರು ಹಾಗೂ ವಿಭಾಗ ಮುಖ್ಯಸ್ಥರು, ಸಿಬ್ಬಂದಿ ವರ್ಗದವರು ಹಾಗೂ ವಿದ್ಯಾರ್ಥಿಗಳು ಕಾರ್ಯಕ್ರಮದಲ್ಲಿ ಪಾಲ್ಗೊಂಡಿದ್ದರು. ನಾವು "ನಶಾಮುಕ್ತ ಭಾರತ ಕಟ್ಟೋಣ" ಎಂದು ಪ್ರತಿಜ್ಞಾ ಬೋಧನೆಯನ್ನು ಮಾಡಲಾಯಿತು. ಪ್ರೊ. ಸುನೀಲ ಸಂಗಮೆಯವರು ಕಾರ್ಯಕ್ರಮವನ್ನು ನಿರೂಪಣೆ ಮಾಡಿ ವಂದಿಸಿದರು.

## ಶ್ರೀಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆ
# ನಿರ್ಗತಿಕರಿಗೆ ಆಶ್ರಯ ವಾತ್ಸಲ್ಯ ಮನೆ ಹಸ್ತಾಂತರ

• **ಮಲ್ಲಮ್ಮ ನುಡಿ ವಾರ್ತೆ, ಭಾಲ್ಕಿ**



ತಾಲೂಕಿನ ಹಲಬರ್ಗಾ ವಲಯದ ಹಾಲಹಿಪ್ಪರಗಾ ಗ್ರಾಮದಲ್ಲಿ, ಶ್ರೀಕ್ಷೇತ್ರ ಗ್ರಾಮಾಭಿವೃದ್ಧಿ ಯೋಜನೆಯ ಜ್ಞಾನ ವಿಕಾಸ ಕಾರ್ಯಕ್ರಮದ ಅಡಿಯಲ್ಲಿ ಗ್ರಾಮ ನಿವಾಸಿ ಮಾಲನಬಿ ಯವರಿಗೆ ವಾತ್ಸಲ್ಯ ಮನೆ ಹಸ್ತಾಂತರ ಕಾರ್ಯಕ್ರಮ ನಡೆಯಿತು. ಈ ಸಂದರ್ಭದಲ್ಲಿ ಮಾತನಾಡಿದ ಶ್ರೀಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆಯ ಜಿಲ್ಲಾ ನಿರ್ದೇಶಕ ಮುರಳಿಧರ.ಹೆಚ್.ಎಲ್, ಹಾಲಹಿಪ್ಪರಗಾ ಗ್ರಾಮದ ನಿವಾಸಿ ನಿರ್ಗತಿಕ ಮಹಿಳೆ ಮಾಲನಬಿ ಯವರಿಗೆ ಮಾತೋಶ್ರೀ ಹೇಮಾವತಿ ವಿ. ಹೆಗ್ಗಡೆಯವರ ಮಾರ್ಗದರ್ಶನದಂತೆ ನಿರ್ಮಿಸಲಾದ ವಾತ್ಸಲ್ಯ ಮನೆ ಹಸ್ತಾಂತರಿಸುತ್ತಿದ್ದೇವೆ. ಡಾ|ಡಿ.ವಿರೇಂದ್ರ ಹೆಗ್ಗಡೆಯವರು ಮತ್ತು ಮಾತೋಶ್ರೀ ಹೇಮಾವತಿ ಅಮ್ಮನವರ ಆಶಯದಂತೆ ಗ್ರಾಮಾಭಿವೃದ್ಧಿ ಯೋಜನೆಯ ಸಮುದಾಯದ ಸಮಗ್ರ ಅಭಿವೃದ್ಧಿಗೆ ವಿವಿಧ ಕಾರ್ಯಕ್ರಮಗಳನ್ನು ಜಾರಿಗೆ ತರುತ್ತಿದೆ. ರಾಜಾದ್ಯಂತ ನಿರ್ಗತಿಕ ಕಟುಂಬಗಳನ್ನು ಗುರುತಿಸಿ ಸುಮಾರು 21 ಸಾವಿರಕ್ಕೂ ಅಧಿಕ ಕುಟುಂಬಗಳಿಗೆ ಮಾಶಾಸನ ನೀಡಲಾಗುತ್ತಿದ್ದು, ಅವರ ಅಗತ್ಯಗಳನ್ನು ಪರಿಗಣಿಸಿ ಚಾಪೆ, ಹೊದಿಕೆ, ಬಟ್ಟೆ, ಔಷಧ್ಧಿಗಳನ್ನು ಒಳಗೊಂಡ ವಾತ್ಸಲ್ಯ ಕಿಟ್ ವಿತರಿಸಲಾಗುತಿತದೆ. ಅಲ್ಲದೇ ಅಂತ್ಯ ಕಆಲದಲ್ಲಿ ವಾಸಿಸಲು ಆಶ್ರಯವಿಲ್ಲದವರಿಗೆ ಹೊಸ ಮನೆಗಳನ್ನು ನಿರ್ಮಿಸಿ ನೀಡುವ ಕಾರ್ಯವೂ ನಡೆಯುತ್ತಿದೆ ಎಂದು ಹೇಳಿದರು. ಜನ ಜಾಗೃತಿ ವೇದಿಕೆಯ ಮಾಧ್ಯಮ ಸಲಹೆಗಾರ ಸಂತೋಷ ಬಿಜಿಪಾಟೀಲ ಮಾತನಾಡಿ, ಗ್ರಾಮಾಭಿವೃದ್ಧಿ ಯೋಜನೆ ಮಹಿಳಾ ಸಬಲೀಕರಣದ ಜೊತೆಗೆ ಹಲವಾರು ಸಮಾಜಮುಖಿ ಕಾರ್ಯಗಳನ್ನು ಯಶಸ್ವಿಯಾಗಿ ಅನುಷ್ಠಾನ ಗೊಳಿಸುತ್ತಿದೆ ಎಂದು ಮೆಚ್ಚುಗೆ ವ್ಯಕ್ತಪಡಿಸಿದರು.

ಈ ಸಂದರ್ಭದಲ್ಲಿ ತಾಲೂಕು ಯೋಜನಾಧಿಕಾರಿ ಸಂತೋಷ ಟಿ.ಎನ್, ಗ್ರಾಮದ ಮುಖಂಡರಾದ ಶಿವಕುಮಾರ ಗುರನಳ್ಳಿ, ರವಿ, ಶರಣುಕುಮಾರ, ಅಜಯಕುಮಾರ, ಶಿವಾನಂದ, ಉಮಾಕಾಂತ, ಆಸೋಕ, ಜ್ಞಾನ ವಿಕಾಸ ಸಮನ್ವಯಾಧಿಕಾರಿ ಸುತಾಜ, ಮೇಲ್ವಿಚಾರಕ ಲಾಯಪ್ಪ ನಂದ್ಯಾಳ, ಮಹಾಂತೇಶ, ಪೂಜಾ, ಮಧು ಸೇರಿದಂತೆ ಒಕ್ಕೂಟದ ಪದಾಧಿಕಾರಿಗಳು ಇದ್ದರು.

# ಪ್ರವೀಣ್ ಕುಮಾರ ಒಲಿದ ಮುಖ್ಯಮಂತ್ರಿ ಪದಕ

• **ಮಲ್ಲಮ್ಮ ನುಡಿ ವಾರ್ತೆ ಬೀದರ್**



ಅಗ್ನಿಶಾಮಕ ಮತ್ತು ತುರ್ತು ಸೇವಾ ಇಲಾಖೆಯ ಅಧಿಕಾರಿ ಮತ್ತು ಸಿಬ್ಬಂದಿಗಳ ತುರ್ತು ಸಂಧರ್ಭಗಳಲ್ಲಿ ನಾಗರಿಕರ ಜೀವ ರಕ್ಷಣೆ ಹಾಗು ಆಸ್ತಿ ಸಂರಕ್ಷಣಾ ಕಾರ್ಯದಲ್ಲಿ ಸಲ್ಲಿಸಿರುವ ಅವಿರತ ಸೇವೆಯನ್ನು ಪರಗಣಿಸಿ ಬಾವಗಿ ಗ್ರಾಮದ ಹೆಮ್ಮೆಯ ಪುತ್ರನಿಗೆ ಒಲಿದ ಮುಖ್ಯಮಂತ್ರಿ ಪದಕ ಪ್ರವೀಣ ಕುಮಾರ ಭಾಲ್ಕೆ ಅವರು ಕರ್ನಾಟಕ ಸರ್ಕಾರದ ಮುಖ್ಯ ಮಂತ್ರಿ ಪದಕ ಪುರಸ್ಕಾರಕ್ಕೆ ಭಾಜನರಾಗಿರುತ್ತಾರೆ. ಪ್ರವೀಣ ಕುಮಾರ ಭಾಲ್ಕೆ ಅವರು ಬೀದರ ತಾಲೂಕಿನ ಬಾವಗಿ ಗ್ರಾಮದವರು, ಇವರು ಬೆಂಗಳೂರಿನ ರಾಜಾಜಿನಗರ ಅಗ್ನಿ ಶಾಮಕ ಠಾಣೆಯಲ್ಲಿ ಸೇವೆ ಸಲ್ಲಿಸುತ್ತಿರುವರು. ಮುಖ್ಯ ಮಂತ್ರಿ ಪದಕ ಪುರಸ್ಕಾರಕ್ಕೆ ಪಾತ್ರರಾದ ಪ್ರವೀಣಕುಮಾರ ಭಾಲ್ಕೆ ಅವರಿಗೆ ಶುಭಾಶಯ ಕೋರಿ ಭಾಲ್ಕೆ ಪರಿವಾರದ ಕಲ್ಲಪ್ಪಾ ಕರಂಜೆ, ರಾಚಪ್ಪಾ ಭಾಲ್ಕೆ ಸಂತೋಷ ಭಾಲ್ಕೆ, ಸಿದ್ಧಾರೂಢ ಭಾಲ್ಕೆ, ಪ್ರಶಾಂತ ಭಾಲ್ಕೆ, ಅವಿನಾಶ ಭಾಲ್ಕೆ ಮತ್ತು ಸೂರ್ಯಕಾಂತ ಹಾವಶೆಟ್ಟಿ, ಕವಿರಾಜ ಕಣಜೆ ವೀರಶಟ್ಟಿ ಕಣಜೆ ಬಾವಗಿ ಗ್ರಾಮದ ಶಿವಕುಮಾರ್ ಸ್ವಾಮಿ, ಭದ್ರಯ್ಯಾ ಸ್ವಾಮಿ, ಚನ್ನಮಲ್ಲಪ್ಪಾ ಹಜ್ಜರಗಿ, ರೇವಣಪ್ಪಾ ಭದ್ರಣ, ಮಡೆಪ್ಪಾ ಹಜ್ಜರಗಿ, ಶಾಂತಯ್ಯಾ ಸ್ವಾಮಿ, ಹಾಗೂ ಜಿಲ್ಲಾ ಮಕ್ಕಳ ಸಾಹಿತ್ಯ ಪರಿಷತ್ ಕಾರ್ಯದರ್ಶಿಗಳಾದ ಓಂಕಾರ ಪಾಟೀಲ, ಮತ್ತು ಅರವಿಂದ ಕುಲಕರ್ಣಿ, ವೀರಭದ್ರಪ್ಪಾ ಉಪ್ಪಿನ, ಸಂಗಮೇಶ ಜ್ಯಾಂತೆ, ಅಶೋಕ ದಿಡಗೆ ಮುಂತಾದವರು ಹರ್ಷ ವ್ಯಕ್ತ ಪಡಿಸಿದ್ದಾರೆ.

# ವಿವಿಧ ಸಹಾಯಧನಕ್ಕೆ ಪ್ರತಿಯೊಬ್ಬ ರೈತರಿಗೂ ಇ–ಕೆವೈಸಿ ಕಡ್ಡಾಯ

• **ಮಲ್ಲಮ್ಮ ನುಡಿ ವಾರ್ತೆ ಬೀದರ್**

ಕೇಂದ್ರ ಸರ್ಕಾರದ ಹಣಕಾಸು ಸಚಿವಾಲಯದ ವೆಚ್ಚ ಇಲಾಖೆಯು ಅಗ್ರಿಸ್ಟಾಕ್ ಘಟಕದಡಿಯಲ್ಲಿ ಕೇಂದ್ರ ಸರ್ಕಾರದ ಮಾನದಂಡಗಳನ್ನು ಅಳವಡಿಸಿ ಭೂಹಿಡುವಳಿಗಳನ್ನು ಹೊಂದಿರುವ ರಾಜ್ಯದ ಎಲ್ಲಾ ರೈತರ ವಿವರಗಳನ್ನೊಳಗೊಂಡ ಸ್ಥಾಪಿಸಲು ಯೋಜಿಸಲಾಗಿದೆ.

ಕೇಂದ್ರ ಸರ್ಕಾರದ ಮಾನದಂಡಗಳ ಪ್ರಕಾರ FRUITS (State Farmer Registry) ಹಾಗೂ ಭೂಮಿ (Land Records System) ದತ್ತಾಂಶಗಳನ್ನು ನಿಯತವಾಗಿ Synchronize ಮಾಡುವುದು ಅತಿ ಮುಖ್ಯವಾಗಿರುತ್ತದೆ. ಹಾಗೂ ಇದರೊಂದಿಗೆ ಈಖಗಉಖಿಖ (State Farmer Registry) ತಂತ್ರಾಂಶದಲ್ಲಿ ರೈತರ e-KYC ಮತ್ತು ರೈತರ ಸಹಮತಿ ಪತ್ರವನ್ನು ವಿದ್ಯುನ್ಮಾನ ರೀತಿಯಲ್ಲಿ (Digital Farmer Consent with e-Sign) ತೆಗೆದುಕೊಳ್ಳುವುದು ಕಡ್ಡಾಯವಾಗಿರುತ್ತದೆ. ಈ ಪ್ರಕ್ರಿಯೆ ಪೂರ್ಣಗೊಂಡ ನಂತರ ಕೇಂದ್ರ ಸರ್ಕಾರಂದಿಂದ ಒಂದು ಕೇಂದ್ರ ನೋಂದಾಯಿತ ರೈತ ಸಂಖ್ಯೆಯನ್ನು (Central Farmer ID) ಸೃಜಿಸಲಾಗುತ್ತದೆ. ಈ ರೀತಿಯಾಗಿ ಸೃಜಿಸಲಾದ ಕೇಂದ್ರ ನೋಂದಾಯಿತ ರೈತ ಸಂಖ್ಯೆಯನ್ನು ಕೇಂದ್ರ ಸರ್ಕಾರದಿಂದ ಅನುಷ್ಠಾನಗೊಳಿಸುವ ಪಿ.ಎಂ.ಕಿಸಾನ್ ಯೋಜನೆಯು ಸೇರಿದಂತೆ ಎಲ್ಲಾ ಯೋಜನೆಗಳಲ್ಲೂ ಕಡ್ಡಾಯವಾಗಿ ಬಳಸಲಾಗುತ್ತದೆ.

ರೈತರು ಕೇಂದ್ರ ಸರ್ಕಾರದ ಪ್ರಮುಖ ಯೋಜನೆಗಳಾದ ಬರಪರಿಹಾರ, ಬೆಳೆ ವಿಮೆ ಹಾಗೂ ಪಿ.ಎಂ.ಕಿಸಾನ್ ಸೌಲಭ್ಯಗಳನ್ನು ಪಡೆಯಲು ತಮ್ಮ ಸಮೀಪದ ರೈತ ಸಂಪರ್ಕ ಕೇಂದ್ರ, ಗ್ರಾಮ ಒನ್ ಕೇಂದ್ರ, ಕಂದಾಯ, ಕೃಷಿ, ತೋಟಗಾರಿಕೆ, ರೇಷ್ಮೆ ಇಲಾಖೆಯ ಕಛೇರಿಗಳಿಗೆ ತಮ್ಮ ಆಧಾರ ಕಾರ್ಡ, ಆಧಾರ್ ನೊಂದಿಗೆ ಜೋಡಣೆಯಾಗಿರುವ ಮೊಬೈಲ್ ಸಂಖ್ಯೆ, ಹಾಗೂ ಎಲ್ಲಾ ಪಹಣಿಗಳನ್ನು ತೆಗೆದುಕೊಂಡು ಹೋಗಿ ತುರ್ತಾಗಿ e-KYC ಮಾಡಿಸುವುದು, ರೈತರ ವಿದ್ಯುನ್ಮಾನ ಸಹಮತಿ ಪತ್ರ (Digital Farmer Consent with e-Sign) ನೀಡುವುದು ಹಾಗೂ ತಮ್ಮ ಎಲ್ಲಾ ಭೂಹಿಡುವಳಿಗಳನ್ನು (ಸರ್ವೆ.ನಂ.) ಕಡ್ಡಾಯವಾಗಿ ಎಐಡಿ (FID) ಯಲ್ಲಿ ಸೇರ್ಪಡೆಗೊಳಿಸಿಕೊಳ್ಳುವುದು ಕಡ್ಡಾಯವಾಗಿರುತ್ತದೆ. ಈ ಕುರಿತು ರೈತರು ಹೆಚ್ಚಿನ ಮಾಹಿತಿಗಾಗಿ ತಮ್ಮ ವ್ಯಾಪ್ತಿಗೆ ಬರುವ ಹತ್ತಿರದ ರೈತ ಸಂಪರ್ಕ ಕೇಂದ್ರ ಅಥವಾ ತಾಲ್ಲೂಕು ಸಹಾಯಕ ಕೃಷಿ ನಿರ್ದೇಶಕರ ಕಛೇರಿಗಳಿಗೆ ಭೇಟಿ ನೀಡಲು ಬೀದರ ಜಂಟಿ ಕೃಷಿ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಮಹಾಶಿವರಾತ್ರಿ ಅಂಗವಾಗಿ ಶಿವಧ್ವಜಾರೋಹಣ

• **ಮಲ್ಲಮ್ಮ ನುಡಿ ವಾರ್ತೆ ಬೀದರ್**



ಹುಮನಾಬಾದ್ ತಾಲೂಕಿನ ಹಳ್ಳಿಖೇಡ (ಬಿ) ಯ ಸಫಲತಾ ಸೇವಾ ಕೇಂದ್ರದಲ್ಲಿ 90ನೇ ಮಹಾಶಿವರಾತ್ರಿ ಅಂಗವಾಗಿ ಶಿವಧ್ವಜಾರೋಹಣವನ್ನು ಭಕ್ತಿಭಾವದಿಂದ ನೆರವೇರಿಸಲಾಯಿತು. ಕಾರ್ಯಕ್ರಮವನ್ನು ಬ್ರಹ್ಮಾಕುಮಾರಿ ಈಶ್ವರೀಯ ವಿಶ್ವ ವಿದ್ಯಾಲಯ ವತಿಯಿಂದ ಆಯೋಜಿಸಲಾಗಿತ್ತು.

ಶಿವಧ್ವಜಾರೋಹಣ ನೆರವೇರಿಸಿ ಪ್ರತಿಜ್ಞಾವಿಧಿ ಬೋಧಿಸಿದ ಬೀದರ್ ಪಾವನಧಾಮ ಕೇಂದ್ರದ ಸಂಚಾಲಕಿ ಬಿ.ಕೆ.ಪ್ರತಿಮಾ ಬಹೆನ್‌ಜಿ ಮಾತನಾಡಿ, "ಮನಸ್ಸು ಸಾಗರದಂತೆ ಶಾಂತವಾಗಿದ್ದರೆ ಮಾತ್ರ ನಿಜವಾದ ಸುಖ ಅನುಭವಿಸಲು ಸಾಧ್ಯ. ಹೊರಗಿನ ಪರಿಸ್ಥಿತಿಗಳಿಗಿಂತ ಒಳಗಿನ ಶಾಂತಿ ಮುಖ್ಯ" ಎಂದು ಹೇಳಿದರು. 'ಶಿವರಾತ್ರಿ' ಪದದಲ್ಲಿ 'ರಾತ್ರಿ' ಅಜ್ಞಾನ ಮತ್ತು ಅಂಧಕಾರವನ್ನು ಸೂಚಿಸುತ್ತದೆ. ಪರಮಜ್ಯೋತಿ ಸ್ವರೂಪನಾದ ಪರಮಾತ್ಮ ಶಿವ ತಂದೆಯು ಮಾನವಕುಲವನ್ನು ದುಃಖ ಮತ್ತು ಅಶಾಂತಿಯಿಂದ ಮುಕ್ತಗೊಳಿಸಲು ಈ ಅಂಧಕಾರಮಯ ಯುಗದಲ್ಲಿ ಅವತರಿಸಿದ್ದಾರೆ ಎಂದು ಅವರು ತಿಳಿಸಿದರು. ಆತ್ಮಗಳು ಪ್ರೀತಿಯಿಂದ ಶಿವನನ್ನು ಸ್ಮರಿಸಿದಾಗ ಸುಖ, ಶಾಂತಿ ಮತ್ತು ಪವಿತ್ರತೆ ದೊರೆಯುತ್ತದೆ. ಇದೇ ಸಹಜ ರಾಜಯೋಗ ಮಾರ್ಗ ಎಂದು ವಿವರಿಸಿದ ಅವರು, ನಿಜವಾದ ಜಾಗರಣೆ ಎಂದರೆ ಇಡೀ ರಾತ್ರಿ ಜಾಗೃತಿಯಾಗಿರುವುದಲ್ಲ; ಮನಸ್ಸಿನಲ್ಲಿ ಆಸುರಿ ಪ್ರವೃತ್ತಿಗಳು ಮತ್ತು ಅಜ್ಞಾನ ಪ್ರವೇಶಿಸದಂತೆ ಎಚ್ಚರಿಕೆಯಿಂದಿರುವುದೇ ನಿಜವಾದ ಜಾಗರಣೆ ಎಂದು ಹೇಳಿದರು. ಪರಮಾತ್ಮನ ಸ್ಮರಣೆ ಮೂಲಕ ಈ ವರ್ಷದ ಶಿವರಾತ್ರಿಯನ್ನು ಅರ್ಥಪೂರ್ಣವಾಗಿ ಆಚರಿಸೋಣ ಎಂದು ಸಂದೇಶ ನೀಡಿದರು.

ಕಾರ್ಯಕ್ರಮದ ಪ್ರಾಸ್ತಾವಿಕವಾಗಿ ಮಾತನಾಡಿದ ಹಳ್ಳಿಖೇಡ ಕೇಂದ್ರದ ಸಂಚಾಲಕಿ ಬಿ.ಕೆ. ಸುಮನ್ ಬಹೆನ್‌ಜಿ, ಪ್ರಜಾಪಿತ ಬ್ರಹ್ಮಾಕುಮಾರಿ ಈಶ್ವರೀಯ ವಿಶ್ವ ವಿದ್ಯಾಲಯವು ಆಧ್ಯಾತ್ಮಿಕ ಜ್ಞಾನ ಮತ್ತು ಮೌಲ್ಯಾಧಾರಿತ ಜೀವನವನ್ನು ಪ್ರಸಾರ ಮಾಡುವ ಉದ್ದೇಶದಿಂದ ಸ್ಥಾಪಿಸಲ್ಪಟ್ಟ ಜಾಗತಿಕ ಸಂಸ್ಥೆಯಾಗಿದೆ ಎಂದು ತಿಳಿಸಿದರು. ವಿಶ್ವ ಶಾಂತಿ ಮತ್ತು ಮೌಲ್ಯಾಧಾರಿತ ಸಮಾಜ ನಿರ್ಮಾಣವು ಮಾನವಕುಲದ ಸಮಗ್ರ ಅಭಿವೃದ್ಧಿಗೆ ಅತ್ಯಂತ ಅಗತ್ಯವಾದ ಗುರಿಗಳಾಗಿವೆ ಎಂದು ಅವರು ಹೇಳಿದರು. ಈ ದಿಕ್ಕಿನಲ್ಲಿ ಆಧ್ಯಾತ್ಮಿಕ ಶಿಕ್ಷಣ ಮತ್ತು ಧ್ಯಾನಾಭ್ಯಾಸದ ಮೂಲಕ ಜನರಲ್ಲಿ ಜಾಗೃತಿ ಮೂಡಿಸಲು ಬ್ರಹ್ಮಾಕುಮಾರಿ ಈಶ್ವರೀಯ ವಿಶ್ವ ವಿದ್ಯಾಲಯ ಸಂಸ್ಥೆ ವಿವಿಧ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳುತ್ತಿದೆ ಎಂದರು.

ಇದೇ ವೇಳೆ 'ನಶಾಮುಕ್ತ ಭಾರತ ಅಭಿಯಾನ'ವು ದೇಶವನ್ನು ವ್ಯಸನಮುಕ್ತವಾಗಿಸುವ ಉದ್ದೇಶದಿಂದ ಕೇಂದ್ರ ಸಾಮಾಜಿಕ ನ್ಯಾಯ ಮತ್ತು ಸಬಲೀಕರಣ ಸಚಿವಾಲಯವು 2020ರಲ್ಲಿ ಆರಂಭಿಸಿದ ಪ್ರಮುಖ ರಾಷ್ಟ್ರೀಯ ಕಾರ್ಯಕ್ರಮವಾಗಿದೆ ಎಂದು ತಿಳಿಸಿದರು. ಈ ಅಭಿಯಾನವನ್ನು ಸಮಾಜದ ಎಲ್ಲ ವರ್ಗಗಳಿಗೆ ತಲುಪಿಸಲು ಬ್ರಹ್ಮಾಕುಮಾರಿಗಳ ಸಂಸ್ಥೆ ರಾ–ಜಯೋಗ ಧ್ಯಾನ, ಉಪನ್ಯಾಸಗಳು ಹಾಗೂ ಜಾಗೃತಿ ಕಾರ್ಯಕ್ರಮಗಳ ಮೂಲಕ ನಿರಂತರವಾಗಿ ಪ್ರಯತ್ನ ನಡೆಸುತ್ತಿದೆ ಎಂದು ಅವರು ಹೇಳಿದರು.

ಇದೇ ಸಂದರ್ಭದಲ್ಲಿ 90ನೇ ಶಿವ ಜಯಂತಿ ನಿಮಿತ್ತ ಕೇಕ್ ಕತ್ತರಿಸಿ ಶಿವನ ಹುಟ್ಟುಹಬ್ಬವನ್ನು ಸಂಭ್ರಮದಿಂದ ಆಚರಿಸಲಾಯಿತು.

ಕಾರ್ಯಕ್ರಮದಲ್ಲಿ ಮುಖ್ಯ ಅತಿಥಿಗಳಾಗಿ ಕೇಶವರಾವ ತಳಘಾಟಕರ್, ಕಲ್ಲಪ್ಪ ಮಜಗೆ, ಚಂದ್ರಕಾಂತ ಶಿವಮೂರ್ತಿ, ಮಲ್ಲಮ್ಮ ತಾಡಂಪಳ್ಳಿ, ಗುಂಡಯ್ಯ ತೀರ್ಥಾ, ಬಿ.ಕೆ. ಶಿಲ್ಪಾ ಬಹೆನ್‌ಜಿ, ಬಿ.ಕೆ. ಸ್ವಾತಿ ಬಹೆನ್‌ಜಿ ಸೇರಿದಂತೆ ವಿವಿಧ ಸೇವಾ ಕೇಂದ್ರಗಳ ಬ್ರಹ್ಮಾಕುಮಾರಿ ಸಹೋದರಿಯರು ಉಪಸ್ಥಿತರಿದ್ದರು. ಕಾರ್ಯಕ್ರಮವನ್ನು ಸಂಗಮೇಶ ಪಾಟೀಲ್ ಸಂಚಾಲಿಸಿದರು. ಬಸವರಾಜ ಬಿರಾದಾರ ವಂದನಾರ್ಪಣೆ ಸಲ್ಲಿಸಿದರು.


**ಕರ್ನಾಟಕ ಸರ್ಕಾರ**

**ಕಾರ್ಯನಿರ್ವಾಹಕ ಅಧಿಕಾರಿಯವರ ಕಛೇರಿ**
**ತಾಲೂಕು ಪಂಚಾಯತ ಹುಲಸೂರ ಜೀ॥ ಬೀದರ**

ಸಂಖ್ಯೆ:ತಾಪಂ/ಕಾನಿಅ/ಟೆಂಡರ್/2025–26 ದಿನಾಂಕ: 24.02.2026

**ದ್ವಿ–ಲಕೋಟೆ ಪದ್ಧತಿಯಲ್ಲಿ**

| | | |
|---|---|---|
| 1 | ಕಾಮಗಾರಿಗಳ ಹೆಸರು ಹಾಗೂ ಇಂಡೆಂಟ್ ಸಂಖ್ಯೆ | ಗೋರ್ಟ (ಬಿ) ಗ್ರಾಮ ಪಂಚಾಯತಿಯ ಗೋರ್ಟಾ (ಬಿ) ಗ್ರಾಮದ SLWM ಘಟಕದ ಮುಂದುವರೆದ ಕಾಮಗಾರಿ |
| 2 | ಲೆಕ್ಕ ಶೀರ್ಷಿಕೆ | 2025–26ನೇ ಸಾಲಿನ ಅನಿರ್ಬಂದಿತ ಅನುದಾನ |
| 3 | ಟೆಂಡರಿಗಿಟ್ಟ ಅಂದಾಜು ಮೊತ್ತ | 7.00 (ಲಕ್ಷ) |
| 4 | ಗುತ್ತಿಗೆದಾರರ ಅರ್ಹತೆ | ಅಧಿಕೃತ ಗುತ್ತಿಗೆದಾರರ |
| 5 | ಟೆಂಡರ್ ಫಾರಂ ಪಡೆಯುವ ದಿನಾಂಕ | 24.02.2026 ರಿಂದ 02.03.2026 ರ ಸಾಯಂಕಾಲ 4:00 ಗಂಟೆಯ ವರೆಗೆ |
| 6 | ಟೆಂಡರ್ ಅರ್ಜಿ ಬೆಲೆ | ಇ–ಪ್ರೊಕ್ಯೂರಮೆಂಟ್ ನಿಯಮಾನುಸಾರ |
| 7 | ಇ.ಎಂ.ಡಿ. | RDPR/2025-26/BD/WORK_INDENT25039 |
| 8 | ಟೆಂಡರ್ ಸಲ್ಲಿಸುವ ದಿನಾಂಕ | 24.02.2026 ರಿಂದ 02.03.2026 ರ ಸಾಯಂಕಾಲ 4:00 ಗಂಟೆಯ ವರೆಗೆ |
| 9 | ತಾಂತ್ರಿಕ ಬಿಡ್ ತೆರೆಯುವ ದಿನಾಂಕ | 03.03.2026 ರಂದು ಸಾಯಂಕಾಲ 4:00 ಗಂಟೆಯ ವರೆಗೆ |
| 10 | ಆರ್ಥಿಕ ಬಿಡ್ ತೆರೆಯುವ ದಿನಾಂಕ | 04.03.2026 ಬೆಳಿಗ್ಗೆ 11:00 ಗಂಟೆ ನಂತರ |
| 11 | ಸರಬರಾಜು ಮಾಡಲು ಕಾಲಮಿತಿ | 07 ದಿನಗಳು |
| 12 | ಹೆಚ್ಚಿನ ವಿವರಗಳಿಗೆ ಸಂಪರ್ಕಿಸಬೇಕಾದ ವಿಳಾಸ | ಕಾರ್ಯನಿರ್ವಾಹಕ ಅಧಿಕಾರಿಯವರ ಕಛೇರಿ ತಾಲೂಕು ಪಂಚಾಯತ ಹುಲಸೂರ |
| 13 | ಅಂತರಜಾಲ ತಾಣದ ವಿಳಾಸ | www.kppp.karnataka.gov.in |

ಕಾರ್ಯನಿರ್ವಾಹಕ ಅಧಿಕಾರಿಗಳು
ತಾಲೂಕು ಪಂಚಾಯತ ಹುಲಸೂರ


# ಶಿವಾಜಿ ಜಯಂತಿ ಸೌಹಾರ್ದಯುತವಾಗಿ ಆಚರಣೆ ಮಾಡಿ: ಸಿಪಿಐ ಶ್ರೀಕಾಂತ



• **ಮಲ್ಲಮ್ಮ ನುಡಿ ವಾರ್ತೆ ತೋರಣ**

ತಾಲೂಕಿನ ತೋರಣ ಗ್ರಾಮದಲ್ಲಿ ಫೆ. 25 ರಂದು ಛತ್ರಪತಿ ಶಿವಾಜಿ ಮಹಾರಾಜರ ಜಯಂತಿಯನ್ನು ಅತ್ಯಂತ ಸೌಹಾರ್ದತೆ ಮತ್ತು ಶಾಂತಿಯುತವಾಗಿ ಆಚರಿಸುವ ಉದ್ದೇಶದಿಂದ ಕಮಲನಗರ ಸಿ.ಪಿ.ಐ ಶ್ರೀಕಾಂತ ಅಲ್ಲಾಪುರೆ ಅವರ ನೇತೃತ್ವದಲ್ಲಿ ಪೂರ್ವಭಾವಿ ಶಾಂತಿ ಸಭೆಯನ್ನು ಮಂಗಳವಾರ ಗ್ರಾಮ ಪಂಚಾಯತ ಆವರಣದಲ್ಲಿ ನಡೆಯಿತು.

ಈ ಸಂದರ್ಭದಲ್ಲಿ ಮಾತನಾಡಿದ ಅವರು ಗ್ರಾಮದ ಪ್ರಮುಖರು ಹಾಗೂ ಯುವಕರು ಭಾಗವಹಿಸಿದ್ದ ಈ ಸಭೆಯಲ್ಲಿ, ಹಬ್ಬದ ಮೆರವಣಿಗೆಯ ಸಂದರ್ಭದಲ್ಲಿ ಯಾವುದೇ ಅಹಿತಕರ ಘಟನೆಗಳು ನಡೆಯದಂತೆ ಕಾನೂನು ಸುವ್ಯವಸ್ಥೆ ಕಾಪಾಡಲು ಪೊಲೀಸರು ಕಟ್ಟುನಿಟ್ಟಿನ ಸೂಚನೆ ನೀಡಿದರು.

ಪಿಎಸ್‌ಐ ಆಶಾ ರಾಠೋಡ ಅವರು ಮಾತನಾಡಿ, ಶಿವಾಜಿ ಮಹಾರಾಜರು ಕೇವಲ ಒಂದು ಸಮುದಾಯಕ್ಕೆ ಸೀಮಿತರಾದವರಲ್ಲ, ಅವರು ರಾಷ್ಟ್ರದ ಆಸ್ತಿ. ಅವರ ಜಯಂತಿಯನ್ನು ಶಿಸ್ತುಬದ್ಧವಾಗಿ ಮತ್ತು ಎಲ್ಲರನ್ನು ಒಗ್ಗೂಡಿಸಿಕೊಂಡು ಆಚರಿಸಬೇಕು ಎಂದು ಕರೆ ನೀಡಿದರು.

ಈ ಸಭೆಯಲ್ಲಿ ಜಯಂತಿ ಉತ್ಸವ ಸಮಿತಿಯ ಅಧ್ಯಕ್ಷರಾದ ಅಂಜಿಕ್ಯ ಪಾಟೀಲ, ಗ್ರಾಮ ಪಂಚಾಯತ ನಿಕಟ ಪೂರ್ವ ಅಧ್ಯಕ್ಷ ಸುನಿಲ ಶೀಗರೆ, ಅರಹಂತ ಸಾವಳೆ, ಪ್ರಕಾಶ ಪಾಟೀಲ ಗ್ರಾಮದ ಪ್ರಮುಖರು ಹಾಗೂ ಪೊಲೀಸ ಸಿಬ್ಬಂದ ವರ್ಗದವರಾದ ಲೋಕೇಶ್, ರಾಜಪ್ಪ, ವಸಂತ, ಮಲ್ಲಿಕಾರ್ಜುನ ಸೇರಿದಂತೆ ಅನೇಕರು ಭಾಗವಹಿಸಿ ತಮ್ಮ ಸಲಹೆಗಳನ್ನು ನೀಡಿದರು. ಗ್ರಾಮದ ಎಲ್ಲಾ ಮುಖಂಡರು ಪೊಲೀಸ್ ಇಲಾಖೆಯೊಂದಿಗೆ ಸಹಕರಿಸಿ, ಮಾದರಿ ಜಯಂತಿಯನ್ನು ಆಚರಿಸುವುದಾಗಿ ಒಮ್ಮತದ ನಿರ್ಧಾರ ಕೈಗೊಂಡರು.

# ಸಂಪಾದಕೀಯ



ಮಾಣಿಕರೆಡ್ಡಿ ಕೌಡಾಳೆ
ಪ್ರಧಾನ ಸಂಪಾದಕರು
ಮೋ: 9845028349

## ರಿಯಲ್ ಎಸ್ಟೇಟ್‌ನಿಂದ ಬಂದ ರಾಜಕಾರಣಿಗಳಿಂದ ಜನರ ಅಭಿವೃದ್ಧಿ ಸಾಧ್ಯವೇ?

ಇತ್ತೀಚಿನ ದಿನಗಳಲ್ಲಿ ರಿಯಲ್ ಎಸ್ಟೇಟ್ ಕ್ಷೇತ್ರದಲ್ಲಿ ದೊಡ್ಡ ಮಟ್ಟದ ಆರ್ಥಿಕ ಶಕ್ತಿ ಗಳಿಸಿದ ಹಲವರು ರಾಜಕೀಯ ಕ್ಷೇತ್ರಕ್ಕೆ ಪ್ರವೇಶಿಸುತ್ತಿರುವುದು ಸಾಮಾನ್ಯ ಸಂಗತಿಯಾಗಿ ಪರಿಣಮಿಸಿದೆ. ಹಣಕಾಸು ಸಾಮರ್ಥ್ಯ, ವ್ಯಾಪಾರಿಕ ಜಾಲ ಹಾಗೂ ಪ್ರಭಾವದ ಆಧಾರದ ಮೇಲೆ ಜನಪ್ರತಿನಿಧಿಗಳಾಗುವ ಈ ಪ್ರವೃತ್ತಿ ಜನತಂತ್ರದ ಮೂಲ ಉದ್ದೇಶಗಳ ಬಗ್ಗೆ ಹಲವು ಪ್ರಶ್ನೆಗಳನ್ನು ಎಬ್ಬಿಸುತ್ತದೆ. ಇಂತಹ ರಾಜಕಾರಣಿಗಳಿಂದ ನಿಜವಾದ ಜನಾಭಿವೃದ್ಧಿ ಸಾಧ್ಯವೇ ಎಂಬುದು ಚಿಂತನೆಗೆ ಕಾರಣವಾಗಿದೆ.

ರಿಯಲ್ ಎಸ್ಟೇಟ್ ಕ್ಷೇತ್ರದಲ್ಲಿ ಕಾರ್ಯನಿರ್ವಹಿಸುವವರು ಸಾಮಾನ್ಯವಾಗಿ ಲಾಭದ ದೃಷ್ಟಿಕೋಣದಿಂದ ಕಾರ್ಯನಿರ್ವಹಿಸುವುದು ಸಹಜ. ವ್ಯಾಪಾರದಲ್ಲಿ ಲಾಭ ಮುಖ್ಯ ಗುರಿಯಾಗಿರುವುದರಿಂದ, ಅದೇ ಮನೋಭಾವ ರಾಜಕೀಯದಲ್ಲಿಯೂ ಮುಂದುವರಿಯುವ ಸಾಧ್ಯತೆ ಇದೆ. ಜನಸೇವೆಗಿಂತಲೂ ವೈಯಕ್ತಿಕ ಹಿತಾಸಕ್ತಿ, ಭೂ ವ್ಯವಹಾರಗಳ ವಿಸ್ತರಣೆ, ಆಸ್ತಿ ಹೆಚ್ಚಳದ ಕಡೆ ಹೆಚ್ಚು ಗಮನ ಹರಿಸುವ ಅಪಾಯ ಇದೆ. ಇದು ಸಾರ್ವಜನಿಕ ಸಂಪತ್ತಿನ ದುರುಪಯೋಗಕ್ಕೂ, ಭೂ ದಂಧೆಗಳಿಗೆ ದಾರಿಯಾಗುವ ಸಂಭವವಿದೆ.

ಕೆಲವು ಸಂದರ್ಭಗಳಲ್ಲಿ ರಿಯಲ್ ಎಸ್ಟೇಟ್ ಹಿನ್ನೆಲೆಯ ರಾಜಕಾರಣಿಗಳು ತಮ್ಮ ಅಧಿಕಾರವನ್ನು ಬಳಸಿಕೊಂಡು ನಗರ ಯೋಜನೆ, ರಸ್ತೆ, ಕೈಗಾರಿಕಾ ವಲಯಗಳ ಅಭಿವೃದ್ಧಿ ಎಂಬ ಹೆಸರಿನಲ್ಲಿ ತಮ್ಮದೇ ವ್ಯವಹಾರಗಳಿಗೆ ಅನುಕೂಲವಾಗುವಂತೆ ನಿರ್ಧಾರಗಳನ್ನು ತೆಗೆದುಕೊಳ್ಳುವ ಆರೋಪಗಳು ಕೇಳಿಬರುತ್ತವೆ. ಇದರಿಂದ ಸಾಮಾನ್ಯ ಜನರ ಹಿತಾಸಕ್ತಿಗೆ ಧಕ್ಕೆಯಾಗುತ್ತದೆ. ಬಡವರು, ರೈತರು ತಮ್ಮ ಭೂಮಿಯನ್ನು ಕಳೆದುಕೊಳ್ಳುವ ಪರಿಸ್ಥಿತಿಯೂ ಉಂಟಾಗುತ್ತದೆ.

ಆದರೆ ಎಲ್ಲಾ ರಿಯಲ್ ಎಸ್ಟೇಟ್ ಹಿನ್ನೆಲೆಯವರು ಒಂದೇ ರೀತಿಯವರಲ್ಲ ಎಂಬುದನ್ನು ಸಹ ಗಮನಿಸಬೇಕು. ಕೆಲವರು ತಮ್ಮ ಆರ್ಥಿಕ ಸಾಮರ್ಥ್ಯವನ್ನು ಜನಸೇವೆಗೆ ಬಳಸಿಕೊಂಡು ಉತ್ತಮ ರಸ್ತೆಗಳು, ಮೂಲಸೌಕರ್ಯ, ವಸತಿ ಯೋಜನೆಗಳು, ಉದ್ಯೋಗಾವಕಾಶಗಳನ್ನು ಸೃಷ್ಟಿಸುವಲ್ಲಿ ಸಹಕಾರ ನೀಡಿರುವ ಉದಾಹರಣೆಗಳೂ ಅಭಿವೃದ್ಧಿ ಮನೋಭಾವ, ಪ್ರಾಮಾಣಿಕತೆ ಮತ್ತು ಜನಪರ ದೃಷ್ಟಿಕೋಣ ಇದ್ದರೆ ಯಾವುದೇ ಕ್ಷೇತ್ರದಿಂದ ಬಂದವರೂ ಉತ್ತಮ ಜನಪ್ರತಿನಿಧಿಗಳಾಗಬಹುದು.

ಇಲ್ಲಿ ಮುಖ್ಯವಾಗಿರುವುದು ವ್ಯಕ್ತಿಯ ಹಿನ್ನೆಲೆ ಅಲ್ಲ, ಅವರ ಮನೋಭಾವ ಮತ್ತು ಕಾರ್ಯಪದ್ಧತಿ. ಜನರ ವಿಶ್ವಾಸವನ್ನು ಪಡೆದು ಅಧಿಕಾರಕ್ಕೆ ಬಂದವರು ತಮ್ಮ ಹುದ್ದೆಯನ್ನು ವೈಯಕ್ತಿಕ ಲಾಭಕ್ಕಾಗಿ ಬಳಸಿಕೊಳ್ಳದೇ, ಜನರ ಸಮಸ್ಯೆಗಳಿಗೆ ಸ್ಪಂದಿಸಿ, ಪಾರದರ್ಶಕ ಆಡಳಿತ ನೀಡಬೇಕು. ಜನರೂ ಸಹ ಹಣದ ಪ್ರಭಾವಕ್ಕೆ ಮರುಳಾಗದೆ, ಪ್ರಾಮಾಣಿಕ ಮತ್ತು ಸೇವಾ ಮನೋಭಾವ ಹೊಂದಿದವರನ್ನು ಆಯ್ಕೆ ಮಾಡುವ ಜವಾಬ್ದಾರಿ ಹೊಂದಿದ್ದಾರೆ.

ಒಟ್ಟಿನಲ್ಲಿ, ರಿಯಲ್ ಎಸ್ಟೇಟ್ ಕ್ಷೇತ್ರದಿಂದ ಬಂದ ರಾಜಕಾರಣಿಗಳಿಂದ ಜನರ ಅಭಿವೃದ್ಧಿ ಸಾಧ್ಯವಾಗುವುದು ಅವರ ನಿಷ್ಠೆ, ನೈತಿಕತೆ ಮತ್ತು ಜನಪರ ಬದ್ಧತೆಯ ಮೇಲೆ ಅವಲಂಬಿತವಾಗಿದೆ. ರಾಜಕೀಯವು ವ್ಯಾಪಾರದ ಸಾಧನವಾಗದೆ, ಜನಸೇವೆಯ ವೇದಿಕೆಯಾಗಬೇಕು. ಆಗ ಮಾತ್ರ ನಿಜವಾದ ಅಭಿವೃದ್ಧಿ ಸಾಧ್ಯವಾಗುತ್ತದೆ.

# ಶಹಾಪುರ್ ಗೇಟ್ ಬಳಿ ಸ್ಥಳಾಂತರಿಸಿದರೆ ಉಗ್ರ ಹೋರಾಟ: ಹೊಸಳ್ಳಿ ಎಚ್ಚರಿಕೆ



**ಮಲ್ಲಮ್ಮ ನುಡಿ ವಾರ್ತೆ ಬೀದರ್** ನೂತನ ಮಹಾನಗರ ಪಾಲಿಕೆ ಕಚೇರಿಯನ್ನು ನಗರದ ಹೊರವಲಯದಲ್ಲಿರುವ ಶಹಾಪುರ ಗೇಟ್ ಬಳಿ ಸ್ಥಳಾಂತರಿಸದೆ ಇದ್ದ ಜಾಗದಲ್ಲಿಯೇ ನರ್ಮಿಸುವಂತೆ ಪಾಲಿಕೆ ಸದಸ್ಯರಾದ ಶಶಿ ಹೊಸಳ್ಳಿ ಆಗ್ರಹಿಸಿದರು. ನಗರದ ಜಿಲ್ಲಾ ಪತ್ರಿಕಾ ಭವನದಲ್ಲಿ ಪತ್ರಿಕಾಗೋಷ್ಠಿ ಉದ್ದೇಶಿಸಿ ಮಾತನಾಡಿದ ಅವರು, ಇದ್ದ ಜಾಗದಲ್ಲಿಯೆ ಮರ್‍ನಾಲ್ಕು ಅಂತಸ್ತಿನಲ್ಲಿ ಕಚೇರಿ ನರ್ಮಿಸಬಹುದು. ಆದರೆ ಪೌರಾಡಳಿತ ಸಚಿವ ರಹಿಮ್ ಖಾನ್, ಹಾಲಿ ಮಹಾನಗರ ಪಾಲಿಕೆ ಅಧ್ಯಕ್ಷ ಮಹಮ್ಮದ್ ಗೌಸ್ ಹಾಗೂ ಇತರೆ ಕಾಂಗ್ರೆಸ್ ಸದಸ್ಯರ ಜಮಿನು ಇದ್ದು, ಅವುಗಳಿಗೆ ಹೆಚ್ಚಿನ ಬೆಲೆ ಬಂದು ಲಾಭ ಮಾಡಿಕೊಳ್ಳಲೆಂದೆ ಅಲ್ಲಿ ಶಿಫ್ಟ್ ಮಾಡಲು ಮೊನ್ನೆ ನಡೆದ ಪಾಲಿಕೆಯ ಸಾಮಾನ್ಯ ಸಭೆಯಲ್ಲಿ ನರ್ಧರಿಸಿದ್ದಾರೆ ಎಂದು ಆರೋಪಿಸಿದರು. ಪಾಲಿಕೆಯಲ್ಲಿ ಕಾಂಗ್ರೆಸ್ ಪಕ್ಷಕ್ಕೆ ಬಹುಮತವಿದೆ ಎಂಬ ಮಾತ್ರಕ್ಕೆ ಏಕಸ್ವಾಮ್ಯವಾಗಿ ರ್‍ತಿಸುತ್ತಿರುವ ಕೈ ಪಡೆ ಸರ್‍ವಜನಿಕರ ಹಿತ ಚಿಂತಿಸದೆ ಬರೀ ಹಣ ಹೊಡೆಯುವ ಹುನ್ನಾರ ನಡೆಸುತ್ತಿದೆ ಎಂದು ದೂರಿದರು. ನಗರದ ನೂರ್ ಕಾಲೇಜು ಎದುರಿರುವ ಪಾಲಿಕೆ ವ್ಯಾಪ್ತಿಯಲ್ಲಿರುವ 10 ಎಕರೆ ಜಮಿನಿನಲ್ಲಿ ಬರೀ ಎಂಟು ಎಕರೆ ಜಮಿನಿಗೆ ಕಾಂಪೌಂಡ್ ಗೋಡೆ ನರ್ಮಿಸಲಾಗಿದ್ದು, ಎರಡು ಎಕರೆ ಬಗ್ಗೆ ಯಾವುದೇ ಸ್ಪಷ್ಟತೆ ಇಲ್ಲದಂತಾಗಿದೆ. ಹೀಗೆ ಕಾಂಗ್ರೆಸ್ ಸದಸ್ಯರು ತಮ್ಮ ಮನಸ್ಸಿಗೆ ಬಂದಂತೆ ರ್‍ತಿಸುತ್ತಿರುವುದನ್ನು ನಗರದ ಜನ ಗಮನಿಸುತ್ತಿರುವರು ಎಂದರು. ನಗರ ವಾಸಿಗಳಿಗೆ ಕುಡಿಯುವ ನೀರು, ನಿರಂತರ ವಿದ್ಯುತ್, ಒಳ ಚರಂಡಿ ಇತ್ಯಾದಿ ಮೂಲಭೂತ ವ್ಯವಸ್ಥೆ ಬಗ್ಗೆ ತಲೆ ಕೆಡಸಿಕೊಳ್ಳದ ಅಡಳಿತಾರೂಢ ಸದಸ್ಯರು ಹಣದ ಹಿಂದೆ ಬಿದ್ದ ಕಾರಣ ಅಭಿವೃದ್ಧಿ ಮರಿಚಿಕೆಯಾಗಿದೆ ಎಂದು ಕುಟುಕಿದ ಅವರು, ಶಹಾಪುರ್ ಗೇಟ್ ಬಳಿ ನರ್ಮಿಸಲು ಉದ್ದೇಸಿಸಿರುವ ಮಹಾನಗರ ಪಾಲಿಕೆ ಕಚೇರಿಯನ್ನು ಸ್ಥಳಾಂತರಿಸದೆ ಇದ್ದ ಜಾಗದಲ್ಲಿಯೇ ನರ್ಮಿಸಿ. ಇಲ್ಲವಾದರೆ 15 ದಿವಸದ ಒಳಗೆ ಎಲ್ಲ ಸಮುದಾಯದ ಮುಖಂಡರ ಜೊತೆ ರ್‍ಚಿಸಿ ಹೋರಾಟಕ್ಕಿಳಿಯಬೇಕಾಗುತ್ತದೆ ಎಂದು ಎಚ್ಚರಿಸಿದರು. ಪಾಲಿಕೆಯ ಇನ್ನರ್‍ವ ಹಿರಿಯ ಸದಸ್ಯರಾದ ರಾಜಾರಾಮು ಚಿಟ್ಟಾ ಮಾತನಾಡಿ, ಬೊಮ್ಮಗೊಂಡೇಶ್ವರ ವೃತ್ತದ ಬಳಿಯ ಜಾಬಶೆಟ್ಟಿ ಕಾಂಪ್ಲಿಕ್ಸ್ ನಿಂದ ಗುಂಪಾ ರಿಂಗ್ ರಸ್ತೆ, ಅಲ್ಲಿಂದ ಹೈದ್ರಾಬಾದ್ ರಸ್ತೆ ವರೆಗೆ ವಿದ್ಯೂತ್ ದೀಪ ವ್ಯವಸ್ಥೆ ಇಲ್ಲದೇ ಕತ್ತಲು ಅವರಿಸಿದೆ. ಈಗ ಕೆಲವೆಡೆ 20 ಕಂಬಗಳನ್ನು ಹಾಕಲಾಗಿದೆ. ಉಳಿದ ಪರ್ಣ ಪ್ರಮಣದ ವಿದ್ಯುತ್ ದೀಪಗಳ ಕಂಬಗಳನ್ನು ಅಳವಡಿಸುವಂತೆ ಅವರು ಆಗ್ರಹಿಸಿದರು. ಪಾಲಿಕೆ ಸದಸ್ಯರಾದ ರಾಜು ಚಿಂತಾಮಣಿ ಮಾತನಾಡಿದರು. ಸದಸ್ಯರಾದ ಶಿವಕುಮಾರ ಬಾವಿಕಟ್ಟಿ, ಪ್ರಭು ಪ್ರದಾನ, ಅಭಿ ಕಾಳೆ, ಸಂತೋಷ ಪಾಟೀಲ, ಸಂಗಮೇಶ, ಸಂಗಮೇಶ ಹಾಗೂ ಇತರರು ಪತ್ರಿಕಾಗೋಷ್ಠಿಯಲ್ಲಿದ್ದರು.

# ತ್ರೀ ಗಾಡ್ಸ್ ಕ್ರಿಯೇಷನ್ಸ್ ವತಿಯಿಂದ ಬಳ್ಳಾರಿ ದುರ್ಗಮ್ಮ ದೇವಿ ಆಲ್ಬಮ್ ಬಿಡುಗಡೆ




• ಮಲ್ಲಮ್ಮ ನುಡಿ ವಾರ್ತೆ
ಬಳ್ಳಾರಿ

ಯುವ ಪ್ರತಿಭೆಯ ಭಕ್ತಿ ಸಮರ್ಪಣೆ: ಕನಕ ದುರ್ಗಮ್ಮ ದೇವಿಯ ಆಲ್ಬಮ್ ಸಾಂಗ್ ಅನಾವರಣ

ಕನಕ ದುರ್ಗಮ್ಮ ದೇವಿಗೆ ಸಂಗೀತ ನಮನ: ಬಳ್ಳಾರಿಯಲ್ಲಿ ಭಕ್ತಿ ಆಲ್ಬಮ್ ಸಾಂಗ್ ಬಿಡುಗಡೆ

ಬಳ್ಳಾರಿ: ಬಳ್ಳಾರಿ ಜಿಲ್ಲೆಯಲ್ಲಿ ಚಲನಚಿತ್ರ ಸಾಕ್ಷಾಚಿತ್ರ ನಿರ್ಮಿಸಲು ಹಲವಾರು ವಿಷಯಗಳಿಗೆ ಹಣದ ಕೊರತೆಯಿಂದ ಇಂತಹ ವಿಷಯದಲ್ಲಿ ಆಸಕ್ತಿ ಇರುವ ಯುವಕರು ಚಿತ್ರಗಳನ್ನು ನಿರ್ಮಿಸಲು ಮುಂದಾಗುತ್ತಿಲ್ಲ ಒಳ್ಳೆಯ ಕಥಾ ವಸ್ತುವನ್ನು ಸಿದ್ಧಪಡಿಸಿಕೊಂಡಲ್ಲಿ ನಾನು ಅಂತಹ ಚಲನಚಿತ್ರ ಅಥವಾ ಸಾಕ್ಷಾ ಚಿತ್ರ ನಿರ್ಮಿಸಲು ಸ್ವತಃ ನಾನಾಗಲಿ ಅಥವಾ ಮತ್ತೊಬ್ಬ ನಿರ್ಮಾಪಕನ ಸಹಾಯದಿಂದಾಗಲಿ ಹಣದ ವ್ಯವಸ್ಥೆ ಮಾಡಿಸುವುದಾಗಿ ಜಿಕೆ ಫೌಂಡೇಶನ್ ಸಂಸ್ಥಾಪಕ ಜಿಕೆ ಸ್ವಾಮಿ ತಿಳಿಸಿದರು.

ಅವರು ನಗರದ ಇನ್ಫ್ಯಾಂಟ್ರಿ ರಸ್ತೆಯಲ್ಲಿರುವ ಫಂಕ್ಷನ್ ಹಾಲ್ ಒಂದರಲ್ಲಿ ತ್ರೀ ಗಾಡ್ಸ್ ಕ್ರಿಯೇಶನ್ಸ್ ವತಿಯಿಂದ ಹೊರತರಲಾದ ಬಳ್ಳಾರಿ ದುರ್ಗಮ್ಮ ದೇವಿ ಆಲ್ಬಮ್ ಬಿಡುಗಡೆ ಮಾಡಿ ಮಾತನಾಡಿ, ದುರ್ಗಮ್ಮ ದೇವಿಯ ಸಿಡಿ ಬಂಡಿ ರಥೋತ್ಸವ ದಿನದಂದು ಆಲ್ಬಮ್ ಬಿಡುಗಡೆ ಮಾಡುತ್ತಿರುವುದು ಅದು ದೇವಿಗೆ ಸಮರ್ಪಣೆಯಾದಂತೆ ಆಗಿದೆ, ಆ ದೇವಿಯ ಆಶೀರ್ವಾದ ಮತ್ತು ಕಪಿಯಿಂದ ನಿಮ್ಮ ಜರ್ನಿ ಹೀಗೆ ಯಾವುದೇ ಅಡೆತಡೆ ಇಲ್ಲದೆ ಮುಂದೆ ಸಾಗಲಿ ಎಂದು ಆಶಿಸಿದರು.

ಈ ಆಲ್ಬಮ್ ಸಾಂಗ್ ನ ನಿರ್ದೇಶನವನ್ನು

ಅಲಿ ಯಾಸೀನ್ ಮತ್ತು ಅಜಿತ್ ಕುಮಾರ್ ಮಾಡಿದರೆ, ಅನಂತ್ ರೆಡ್ಡಿ ಮತ್ತು ರಘು ಛಾಯಾಗ್ರಹಣವಿದೆ, ಕುಮಾರಿ ಕಾವೇರಿ ರಮೇಶ್ ಪಾಟೀಲ ಅವರ ಗೀತ ರಚನೆಗೆ

ನೃತ್ಯ ನಿರ್ದೇಶನವನ್ನು ಬಿಜೇಎನ್ ಎಸ್ ಬಬ್ಲು, ನವೀನ್ ಮಾಡಿದ್ದಾರೆ. ಈ ಆಲ್ಬಮ್ ನಲ್ಲಿ ರಾಣಿ, ಪ್ರಶಿತಾ ನಟಿಸಿದ್ದಾರೆ.

# ಶಿವಾಜಿ ಮಹಾರಾಜರು ಯುವ ಪೀಳಿಗೆಗೆ ಸ್ಫೂರ್ತಿ: ಹಿಟ್ನಾಳ



• ಮಲ್ಲಮ್ಮ ನುಡಿ ವಾರ್ತೆ
ಕೊಪ್ಪಳ

ಶಿವಾಜಿ ಮಹಾರಾಜರು ದೇಶ ಕಂಡ ಅಪ್ರತಿಮ ರಾಷ್ಟ್ರಪ್ರೇಮಿ ಹಾಗೂ ಶೂರ ಯೋಧರಾಗಿದ್ದು, ಅವರ ಜಯಂತಿಯನ್ನು ಆಚರಿಸುವುದರಿಂದ ಅವರು ನೀಡಿದ ಸೇನಾ ಹಾಗೂ ಆಡಳಿತಾತ್ಮಕ ಮೌಲ್ಯಗಳನ್ನು ಯುವ ಪೀಳಿಗೆಗೆ ತಲುಪಿಸಲು ಸಾಧ್ಯವಾಗುತ್ತದೆ ಎಂದು ಕೊಪ್ಪಳ ವಿಧಾನಸಭಾ ಕ್ಷೇತ್ರದ ಶಾಸಕರಾದ ಕೆ. ರಾಘವೇಂದ್ರ ಹಿಟ್ನಾಳ ಅವರು ಹೇಳಿದರು.

ಅವರು ಸೋಮವಾರದಂದು ಕೊಪ್ಪಳ ನಗರದ ಸಾಹಿತ್ಯ ಭವನದಲ್ಲಿ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಹಾಗೂ ನಗರಸಭೆ ಕೊಪ್ಪಳ ಇವರ ಸಂಯುಕ್ತಾಶ್ರಯದಲ್ಲಿ ಆಯೋಜಿಸಲಾಗಿದ್ದ ಶ್ರೀ ಛತ್ರಪತಿ ಶಿವಾಜಿ ಜಯಂತಿ ಕಾರ್ಯಕ್ರಮದ ನಿಮಿತ್ತ ಶಿವಾಜಿ ಅವರ ಭಾವಚಿತ್ರಕ್ಕೆ ಪುಷ್ಪನಮನ ಸಲ್ಲಿಸಿ, ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದರು.

ಶಿವಾಜಿ ಮಹಾರಾಜರು ಸಣ್ಣ ವಯಸ್ಸಿನಲ್ಲಿ ಅಗಾಧ ಸಾಧನೆ ಮಾಡಿದವರು. ಅವರ ಆಡಳಿತಾತ್ಮಕ ಸುಧಾರಣೆಗಳು ಇಂದಿಗೂ ಪ್ರೇರಣಾದಾಯಕವಾಗಿವೆ. ಡಾ. ಬಾಬಾ ಸಾಹೇಬ್ ಅಂಬೇಡ್ಕರ್ ಅವರು ಹೇಳಿದ ಹಾಗೆ ಸಮಾಜದ ಪ್ರತಿಯೊಬ್ಬರು ಶಿಕ್ಷಣ, ಹೋರಾಟ, ಸಂಘಟನೆಯನ್ನು ಮೈಗೂಡಿಸಿಕೊಳ್ಳಬೇಕು ಎಂದು ಹೇಳಿದರು.

ವಿಧಾನ ಪರಿಷತ್ ಸದಸ್ಯೆ ಹೇಮಲತಾ ನಾಯಕ ಅವರು ಮಾತನಾಡಿ, ಛತ್ರಪತಿ ಶಿವಾಜಿಯವರು ಅಪ್ಪಟ ದೇಶಪ್ರೇಮಿ, ತಾಯಿ ಜೀಜಾಬಾಯಿಯ ಪ್ರೇರಣೆಯಿಂದ ಶಿವಾಜಿ ಮಹಾರಾಜರು ಸಂಸ್ಕಾರವಂತರಾಗಿ ಆದರ್ಶ ಜೀವನ ನಡೆಸಿದರು. ಜೀಜಾಬಾಯಿ ಅವರ ಸ್ವರಾಜ್ಯದ ಕನಸು ನನಸು ಮಾಡಿದ ಅಪ್ರತಿಮ ವೀರ ಶಿವಾಜಿ ಮಹಾರಾಜರು. ಶಿವಾಜಿ ಮಹಾರಾಜರ ಜೀವನ ಮೌಲ್ಯಗಳನ್ನು ಪ್ರತಿಯೊಬ್ಬರೂ ಜೀವನದಲ್ಲಿ ಅಳವಡಿಸಿಕೊಳ್ಳಬೇಕು ಎಂದು ಹೇಳಿದರು.

ಅಪರ ಜಿಲ್ಲಾಧಿಕಾರಿ ಸಿದ್ರಾಮೇಶ್ವರ ಅವರು ಮಾತನಾಡಿ, ಛತ್ರಪತಿ ಶಿವಾಜಿ ಕೇವಲ ಒಬ್ಬ ಯೋಧನಲ್ಲ. ರಾಜಕೀಯವಾಗಿ ಅವರ ಕೊಡುಗೆ ಅತ್ಯಂತ ಪ್ರಸ್ತುತವಾಗಿವೆ. ಶಿವಾಜಿ ಅವರ ಜೀವನ ಕೇವಲ ಹಿಂದೂ ಧರ್ಮಕ್ಕೆ ಸಂಬಂಧಿಸಿದಲ್ಲ, ಅವರು ಎಲ್ಲ ಧರ್ಮವನ್ನು ಗೌರವದಿಂದ ಕಾಣುತ್ತಿದ್ದರು. ಅವರು ನೀಡಿದ ಕೊಡುಗೆಗಳನ್ನು ನಾವು ಗಮನದಲ್ಲಿಟ್ಟುಕೊಂಡು ಭಾರತದ ಸಂಸ್ಕೃತಿಯನ್ನ ಎತ್ತಿಹಿಡಿಯಬೇಕು. ಶಿವಾಜಿಯವರು ಮಾನವ ಕುಲಕ್ಕೆ ಸಂಬಂಧಪಟ್ಟವರು. ಅವರ ಕೊಡುಗೆ ಮತ್ತು ಅವರು ನಡೆದು ಬಂದ ಹಾದಿಯಲ್ಲಿ ನಾವೆಲ್ಲರೂ ನಡೆಯಬೇಕು ಎಂದರು.

ವಿಶೇಷ ಉಪನ್ಯಾಸದಲ್ಲಿ ಮಾತನಾಡಿದ ವಕೀಲರು ಹಾಗೂ ನಿವೃತ್ತ ಉಪನ್ಯಾಸಕ ಉದಯಸಿಂಗ್ ಠಾಕೂರ ಅವರು, ತಾಯಿ ಜೀಜಾಬಾಯಿ ಅವರು ಛತ್ರಪತಿ ಶಿವಾಜಿ ಅವರನ್ನು ತುಂಬಾ ಧೈರ್ಯ, ಸಹನೆಯಿಂದ ಬೆಳೆಸಿದ್ದಾರೆ. ಭಾರತೀಯ ಸ್ತ್ರೀಯರ ಬಗ್ಗೆ ಶಿವಾಜಿ ಅವರಿಗೆ ಅಪಾರವಾದ ಗೌರವ ಅವರಲ್ಲಿ ಇತ್ತು. ಇಂದಿನ ಯುವ ಪೀಳಿಗೆಯು ಅವರ ಆದರ್ಶಗಳನ್ನು ಅಳವಡಿಸಿಕೊಳ್ಳಬೇಕು ಎಂದು ಹೇಳಿದರು.

ಕಾರ್ಯಕ್ರಮದಲ್ಲಿ ಕೊಪ್ಪಳ ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಪ್ರಸನ್ನ ವೀರಣ್ಣ ಗಡಾದ್, ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕ ಕರ್ಣಕುಮಾರ ಹಾಗೂ ಸಮಾಜದ ಮುಖಂಡರಾದ ಮಾರುತಿ, ವಿಶ್ವನಾಥ, ಗವಿಸಿದ್ದಪ್ಪ, ಉಮೇಶ್ ಬಾಬು, ಪ್ರಭು ಕಿಡದಾಳ, ರಮೇಶ, ಸರೋಜಾ ಬಾಕಳೆ, ಮೈಲಾರಪ್ಪ, ಕೃಷ್ಣ, ಮಹಾಂತೇಶ ಸೇರಿದಂತೆ ಇತರರು ಇದ್ದರು.

# ಕೆರೆ ದುರಸ್ತಿ, ಸೇತುವೆ ಕಾಮಗಾರಿಗೆ ಚವ್ಹಾಣ ಚಾಲನೆ



• ಮಲ್ಲಮ್ಮ ನುಡಿ ವಾರ್ತೆ
ಔರಾದ

ಶಾಸಕ ಪ್ರಭು ಬಿ.ಚವ್ಹಾಣ ಅವರು ತಾಲೂಕಿನ ಯನಗುಂದಾ ಗ್ರಾಮದ ಬಳಿ ಸೇತುವೆ, ಬೋಂತಿ ಗ್ರಾಮ ಪಂಚಾಯಿತಿಯ ವ್ಯಾಪ್ತಿಯ ಕೆರೆ ದುರಸ್ತಿ ಕಾಮಗಾರಿಗಳಿಗೆ ಭಾನುವಾರ ಶಂಕುಸ್ಥಾಪನೆ ನೆರವೇರಿಸಿದರು.

ಈ ವೇಳೆ ಮಾತನಾಡಿದ ಅವರು, ಪ್ರತಿ ಮಳೆಗಾಲದಲ್ಲಿ ದೊಡ್ಡ ಮಟ್ಟದ ಅಡಚಣೆ ಉಂಟಾಗುತ್ತಿದ್ದ ಹಿನ್ನೆಲೆಯಲ್ಲಿ ಯನಗುಂದಾ ಗ್ರಾಮದ ಬಳಿ ಸೇತುವೆ ನಿರ್ಮಾಣದ ಅಗತ್ಯತೆ ಬಹಳ ದಿನಗಳಿಂದ ಕೇಳಿಬರುತ್ತಿತ್ತು. ಕಳೆದ ಮಳೆಗಾಲದ ಸಂದರ್ಭದಲ್ಲಿ ತೀವ್ರ ಮಳೆಯಿಂದಾಗಿ ಸೇತುವೆ ಮುಚ್ಚಿ ಹೋಗಿರುವುದರಿಂದ ಸಾಕಷ್ಟು ದಿನ ಈ ರಸ್ತೆಯ ಮೇಲೆ ಸಂಪೂರ್ಣ ಸಂಚಾರ ಸ್ಥಗಿತಗೊಂಡು ಶಾಲಾ ಮಕ್ಕಳು, ರೈತರು ಹಾಗೂ ಸಾರ್ವಜನಿಕರಿಗೆ ಸಾಕಷ್ಟು ಅನಾನುಕೂಲ ಆಗಿತ್ತು.

ನಂತರ ಸರ್ಕಾರದ ಮೇಲೆ ನಿರಂತರ ಒತ್ತಡ ತಂದು ಸೇತುವೆಗೆ 3 ಕೋಟಿ ಅನುದಾನ ತಂದಿದ್ದು, ಇದೀಗ ಸೇತುವೆ ನಿರ್ಮಾಣವಾಗುವುದರಿಂದ ಗ್ರಾಮಸ್ಥರ ಸಂಚಾರ ಸುಗಮವಾಗಲಿದೆ. ರೈತರ ಕೃಷಿ ಉತ್ಪನ್ನಗಳ ಸಾಗಣೆಗೆ ಸಹಾಯವಾಗಲಿದೆ. ಕಾಮಗಾರಿ ಗುಣಮಟ್ಟದಲ್ಲಿ ಯಾವುದೇ ತೊಡಕು ಬರದಂತೆ ಅಧಿಕಾರಿಗಳು ಕಾಳಜಿ ವಹಿಸಬೇಕು ಎಂದು ಸೂಚಿಸಿದರು.

ಇದಕ್ಕೂ ಮುನ್ನ ರಾಮಸಿಂಗ್ ನಾಯಕ್ ತಾಂಡಾ ಬಳಿ ಅತ್ಯಧಿಕ ಮಳೆಯಿಂದ ಕೊಚ್ಚಿಕೊಂಡು ಹೋಗಿದ್ದ ಕೆರೆ ದುರಸ್ತಿಯ 1.5 ಕೋಟಿ ಮೊತ್ತದ ಕಾಮಗಾರಿಗೆ ಭೂಮಿ ಪೂಜೆ ನೆರವೇರಿಸಿದರು. ಈ ಭಾಗದಲ್ಲಿ ಜನ ಜಾನುವಾರುಗಳಿಗೆ ನೀರಿನ ಮೂಲವಾಗಿದ್ದ ಕೆರೆ ಕೊಚ್ಚಿಕೊಂಡು ಹೋಗಿದ್ದರಿಂದ ಬೇಸಿಗೆ ಅವಧಿಯಲ್ಲಿ ನೀರಿನ ಅಭಾವ ಉಂಟಾಗುವ ಭೀತಿ ಎದುರಾಗಿತ್ತು. ಆದ್ದರಿಂದ ಬಹಳಷ್ಟು ಒತ್ತು ಕೊಟ್ಟು ಶಿಥಿಲಗೊಂಡ ಎಲ್ಲ ಕೆರೆಗಳ ದುರಸ್ತಿಗಾಗಿ ಸರ್ಕಾರಕ್ಕೆ ಪತ್ರ ಬರೆದಿದ್ದು, ನಿರಂತರ ಒತ್ತಡ ಹೇರುತ್ತಾ ಬರುತ್ತಿದ್ದೇನೆ. ಇದೀಗ ಕೆರೆ ನಿರ್ಮಾಣ ಆರಂಭವಾಗಿದ್ದು ಜನತೆಗೆ ಸಂತೋಷವಾಗಿದೆ. ಬೇಸಿಗೆ ಅವಧಿಯಲ್ಲಿ ಜನ-ಜಾನುವಾರುಗಳಿಗೆ ವರದಾನವಾಗಿ ಪರಿಣಮಿಸುವ ಕೆರೆಯ ಕಾಮಗಾರಿ ಅತ್ಯಂತ ಗುಣಮಟ್ಟದಿಂದ ಮಾಡಬೇಕು. ಕಾಮಗಾರಿಯ ಬಗ್ಗೆ ಯಾವುದೇ ರೀತಿಯ ದೂರುಗಳು ಬಾರದ ರೀತಿಯಲ್ಲಿ ಕೆಲಸ ಮಾಡಬೇಕು ಎಂದು ಗುತ್ತಿಗೆದಾರರಿಗೆ ಕಟ್ಟುನಿಟ್ಟಿನ ಸೂಚನೆ ನೀಡಿದರು.

ಗ್ರಾಮೀಣ ಭಾಗದ ಮೂಲಭೂತ ಸೌಕರ್ಯಗಳ ಅಭಿವೃದ್ಧಿಗೆ ನಾನು ಸದಾ ಬದ್ಧನಾಗಿದ್ದು, ಜನತೆಗೆ ಅತ್ಯವಶ್ಯಕವಿರುವ ಎಲ್ಲ ಅಭಿವೃದ್ಧಿ ಕೆಲಸಗಳನ್ನು ಆದ್ಯತೆಯ ಮೇರೆಗೆ ಮಾಡುತ್ತಾ ಬಂದಿದ್ದೇನೆ. ಬಾಕಿ ಉಳಿದಿರುವ ಎಲ್ಲ ಕೆಲಸಗಳನ್ನು ಹಂತ ಹಂತವಾಗಿ ಮಾಡುತ್ತೇನೆ ಎಂದು ಭರವಸೆ ನೀಡಿದರು. ಈ ಸಂದರ್ಭದಲ್ಲಿ ಮುಖಂಡರಾದ ರಾಮಶೆಟ್ಟಿ ಪನ್ನಾಳೆ, ಧೊಂಡಿಬಾ ನರೋಟೆ, ಶಿವರಾಜ ಅಲ್ಮಾಜೆ, ಖಂಡೋಬಾ ಕಂಗಟೆ, ಪ್ರತೀಕ ಚವ್ಹಾಣ, ಶಿವಕುಮಾರ ಮಜಗೆ, ನಾಗನಾಥ ಲಕ್ಕಾ, ರಮೇಶ ಗೌಡಾ, ಜಗದೀಶ ಪಾಟೀಲ, ಅಶೋಕ ಅಲ್ಮಾಜೆ, ಶಿವಕುಮಾರ ಪಾಟೀಲ, ಸೂರ್ಯಕಾಂತ ಅಲ್ಮಾಜೆ, ನಾಗನಾಥ ಬಿರಾದಾರ ಸೇರಿದಂತೆ ಇತರರು ಉಪಸ್ಥಿತರಿದ್ದರು.

# ಇ.ಎಸ್.ಐ.ಸಿ. ಕಾರ್ಯ ಶ್ಲಾಘನೀಯ: ನಮೋಶಿ

• ಮಲ್ಲಮ್ಮ ನುಡಿ ವಾರ್ತೆ
ಕಲಬುರಗಿ



ಆಸ್ಪತ್ರೆಗೆ ಬರುವ ಬಡವರು, ವಿಮೆ ವ್ಯಾಪ್ತಿಯಲ್ಲಿ ಬರುವ ಶ್ರಮಿಕ ವರ್ಗದ ರೋಗಿಗಳಿಗೆ ಗುಣಮಟ್ಟದ ಸೇವೆ ನೀಡುವಲ್ಲಿ ಕಲಬುರಗಿ ಇ.ಎಸ್.ಐ.ಸಿ ಆಸ್ಪತ್ರೆ ಕಾರ್ಯ ಶ್ಲಾಘನೀಯವಾಗಿದೆ ಮತ್ತು ಮಾದರಿಯಾಗಿದೆ ಎಂದು ವಿಧಾನ ಪರಿಷತ್ ಶಾಸಕ ಶಶಿಲ್ ಜಿ. ನಮೋಶಿ ಹೇಳಿದರು.

ಮಂಗಳವಾರ ಇಲ್ಲಿನ ಇ.ಎಸ್.ಐ.ಸಿ ಆಸ್ಪತ್ರೆಯ ಅಡಿಟೋರಿಯಂ ಸಭಾಂಗಣದಲ್ಲಿ ಇ.ಎಸ್.ಐ.ಸಿ.ಯ 75ನೇ ವರ್ಷದ ಸಂಸ್ಥಾಪನಾ ದಿನಾಚರಣೆ ಕಾರ್ಯಕ್ರಮದಲ್ಲಿ ಭಾಗವಹಿಸಿ ಮಾತನಾಡಿದ ಅವರು, 8 ಜಿಲ್ಲೆಗಳ ವ್ಯಾಪ್ತಿ ಹೊಂದಿರುವ ಕಲಬುರಗಿ ಪ್ರಾಂತ್ಯದಲ್ಲಿ 2014 ರಲ್ಲಿ 50 ಸಾವಿರ ಕಾರ್ಮಿಕರು ನೋಂದಣಿ ಮಾಡಿಕೊಂಡಿದ್ದರೆ, ಇಂದು ಇದರ ಸಂಖ್ಯೆ 2.50 ಲಕ್ಷಕ್ಕೆ ಏರಿದೆ. ಇದು ಇ.ಎಸ್.ಐ.ಸಿ ಸಂಸ್ಥೆ ಮತ್ತು ಆಸ್ಪತ್ರೆಯ ಕಾರ್ಯಕ್ರಮತೆ, ಸೇವೆಗೆ ಹಿಡಿದ ಕನ್ನಡಿಯಾಗಿದೆ ಎಂದರು. ಕಲ್ಯಾಣ ಕರ್ನಾಟಕ ಭಾಗವು ಹೆಚ್ಚಾಗಿ ಬಡ, ಕಾರ್ಮಿಕದವರೆ ಹೆಚ್ಚಾಗಿದ್ದಾರೆ. ಸಣ್ಣ-ಪುಟ್ಟ ಚಿಕಿತ್ಸೆಗೆ ಜನ ಸೋಲಾಪುರ, ಹಯದ್ರಾಬಾದ್ ನತ್ತು ಜನ ಮುಖ ಮಾಡುತ್ತಾರೆ. ಇದನ್ನು ತಪ್ಪಿಸಬೇಕಿದೆ. ಈ ನಿಟ್ಟನಲ್ಲಿ ತಮ್ಮ ಹೆಚ್.ಕೆ.ಇ. ಸಂಸ್ಥೆಯ ಎಂ.ಆರ್.ಎಂ.ಸಿ. ಮೆಡಿಕಲ್ ಕಾಲೇಜು ಇ.ಎಸ್.ಐ.ಸಿ ಅಸ್ಪತ್ರೆ ಜೊತೆಗೆ ಸೇರಿ ಕೆಲಸ ಮಾಡುವ ಪ್ರಸ್ತಾಪ ಇದೆ. ಅ ಮೂಲಕ ಪ್ರದೇಶದ ಜನರಿಗೆ ಗುಣಮಟ್ಟದ ಸೇವೆ ನೀಡುವುದು ತಮ್ಮ ಉದ್ದೇಶವಾಗಿದೆ ಎಂದರು.

ಚಿಂಚೋಳಿ ಶಾಸಕ ವಿನಾಶ ಜಾಧವ ಮಾತನಾಡಿ, ಜನರಲ್ಲಿ ಸಾಮಾನ್ಯವಾಗಿ ಸರ್ಕಾರಿ ಆಸ್ಪತ್ರೆಗಳಿಗೆ ಹೋದರೆ ಸರಿಯಾಗಿ ಸ್ಪಂದಿಸುವುದಿಲ್ಲ ಎಂಬ ಅಳಕಿದೆ. ಇದನ್ನು ಹೋಗಲಾಡಿಸಬೇಕಾದ ಜವಾಬ್ದಾರಿ ನಮ್ಮೆಲ್ಲರ ಮೇಲಿದೆ. ಖಾಸಗಿ ಆಸ್ಪತ್ರೆಗೆ ಹೋಗಿ ಲಕ್ಷಾಂತರ ರೂ. ಹಣ ಸುರಿಯುವ ಬದಲು ಇಂತಹ ಅಸ್ಪತ್ರೆಗಳಿಗೆ ಬಂದು ಜನ ವೈದ್ಯಕೀಯ ಸೇವೆ ಪಡೆಯಬೇಕು ಎಂದರು. ಡ್ರಗ್ಸ್-ಕ್ರೈಮ್ ಮುಕ್ತ ನಗರಕ್ಕೆ ಕೈಜೋಡಿಸಿ: ಕಲಬುರಗಿ ನಗರ ಪೊಲೀಸ್ ಆಯುಕ್ತ ಡಾ.ಎಸ್.ಡಿ.ಶರಣಪ್ಪ ಮಾತನಾಡಿ ಸುಮಾರು 75 ವರ್ಷ ಸತತ ರೋಗಿಗಳ ಬರವಸೆ ಇಟ್ಟುಕೊಂಡು ಸಾಗುತ್ತಿರುವ ಇ.ಎಸ್.ಐ.ಸಿ ಸಂಸ್ಥೆ ಮತ್ತು ಅದರ ತಂಡದ ಕಾರ್ಯವೈಖರಿ ಬಗ್ಗೆ ಮೆಚ್ಚುಗೆ ವ್ಯಕ್ತಪಡಿಸಿದ ಅವರು, ಕಲಬುರಗಿ ನಗರವನ್ನು ಡ್ರಗ್ಸ್ ನತ್ತು ಸಯಬರ್ ಕ್ರೈಮ್ ಮುಕ್ತ ನಗರವನ್ನಾಗಿಸಲು ಪೊಲೀಸ್ ಇಲಾಖೆ ಪಣ ತೊಟ್ಟಿದ್ದು, ವಿದ್ಯಾರ್ಥಿ ವೃಂದ ಇದಕ್ಕೆ ಸಗಕಾರ ನೀಡಬೇಕು. ಮದ್ಯ ಮತ್ತು ಮಾದಕ ವಸ್ತುಗಳಿಗೆ ಬಲಿಯಾಗಬಾರದು. ಯಾವುದೇ ರೀತಿಯ ಕಾನೂನು ವಿರೋಧಿ ಚಟುವಟಿಕೆಗಳ ಬಗ್ಗೆ ಮಾಹಿತಿ ಇದ್ದಲ್ಲಿ 112 ಸಂಖ್ಯೆಗೆ, ಸೈಬರ್ ಕ್ರೈಮ್ ಪ್ರಕರಣದಲ್ಲಿ ಭಯವಿಲ್ಲದೆ 1930 ಸಂಖ್ಯೆಗೆ ಕರೆ ಮಾಡಿದಲ್ಲಿ ಪೊಲೀಸ್ ತಂಡ ನಿಮ್ಮ ನೆರವಿಗೆ ಬರಲಿದೆ ಎಂದು ಅಭಯ ಹಸ್ತ ನೀಡಿದರು.

ಇ.ಎಸ್.ಐ.ಸಿ ಮೆಡಿಕಲ್ ಕಾಲೇಜಿನ ಡೀನ್ ಡಾ.ಎಸ್.ವಿ.ಕ್ಷೀರಸಾಗರ ಪ್ರಸ್ತಾವಿಕವಾಗಿ ಮಾತನಾಡಿ, ಇ.ಎಸ್.ಐ.ಸಿ ಆಸ್ಪತ್ರೆಯಲ್ಲಿ ತುಂಬಾ ಕಡಿಮೆ ವೆಚ್ಚದಲ್ಲಿ ಗುಣಮಟ್ಟದ ಸೇವೆ ನೀಡಲಾಗುತ್ತಿದೆ. ಕಳೆದ ಜನವರಿ ಮಾಹೆಯಲ್ಲಿ 33,088 ರೋಗಿಗಳು ಓ.ಪಿ.ಡಿ ಸೇವೆ ಹಾಗೂ 1,732 ಜನ ಒಳರೋಗಿಯಾಗಿ ವೈದ್ಯಕೀಯ ಸೇವೆ ಪಡೆದಿದ್ದಾರೆ. ಓಪಿಡಿ ಭೇಟಿಗಳಲ್ಲಿ 11,638 ವಿಮಾ ಹೊಂದಿದ ಪ್ರಯೋಜನಾರ್ಥಿಗಳು ಇದ್ದರೆ, 21,450 ಸಾಮಾನ್ಯ ಸಾರ್ವಜನಿಕರು ಆಗಿದ್ದಾರೆ. ಒಳರೋಗಿ ಸೇವೆಗಳಲ್ಲಿ 721 ಮಂದಿ ವಿಮಾದಾರರಿದ್ದರೆ, 1,011 ಮಂದಿ ವಿಮಾ ರಹಿತ ರೋಗಿಗಳಿದ್ದಾರೆ. ಕಲಬುರಗಿ ಇಎಸ್ಐಸಿ ಕೇವಲ ವಿಮಾ ಹೊಂದಿದ ಕಾರ್ಮಿಕರಷ್ಟೇ ಅಲ್ಲದೆ, ಸಾರ್ವಜನಿಕರಿಗೂ ಚಿಕಿತ್ಸೆ ನೀಡಲು ಲಭ್ಯವಿದೆ ಎಂದು ಅವರು ಒತ್ತಿ ಹೇಳಿದರು. ವಿಮಾಧಾರಕರಿಗೆ ನಗದುರಹಿತ ಚಿಕಿತ್ಸೆ ಲಭ್ಯವಿದ್ದು, ಸಾಮಾನ್ಯ ಸಾರ್ವಜನಿಕರಿಗೆ ಅತಿ ಕಡಿಮೆ ದರದಲ್ಲಿ ಸೇವೆಗಳು ಒದಗಿಸಲಾಗುತ್ತಿದೆ. ಉದಾಹರಣೆಗೆ ಸಿಬಿಸಿ ಸೇವೆಗೆ 11 ರೂ., ಎಕ್ಸ್-ರೇ ಸೇವೆಗೆ 14 ರೂ., ಅಲ್ಟ್ರಾಸೌಂಡ್ ಸೇವೆಗೆ 30 ರೂ., ಸಾಮಾನ್ಯ ಪ್ರಸವಕ್ಕೆ 1,272 ರೂ., ಮುತ್ತಿನ ಕಣ್ಣು ಶಸ್ತ್ರಚಿಕಿತ್ಸೆಗೆ 487 ರೂ. ಮಾತ್ರ ರೋಗಿಗಳಿಂದ ಪಡೆಯಲಾಗುತ್ತಿದೆ. ಇನ್ನು ಒಳರೋಗಿಗಳಿಗೆ ಪ್ರತಿ ದಿನದ ವಾರ್ಡ್ ಹಾಸಿಗೆ ಬಾಡಿಗೆಗೆ 75 ರೂ., ಐಸಿಯು ವಾರ್ಡ್ ನಲ್ಲಿದಲ್ಲಿ ದಿನಕ್ಕೆ 257 ರೂ. ಹಾಸಿಗೆ ಬಾಡಿಗೆ ಪಡೆಯುತ್ತಿದ್ದು, ಹೀಗೆ ಕೈಗೆಟುಕುವ ದರದಲ್ಲಿ ಸಮರ್ಪಿತ ಸೇವೆ ನೀಡಲಾಗುತ್ತಿದೆ ಎಂದರು. ಕಾರ್ಯಕ್ರಮದಲ್ಲಿ ಶಾಸಕರಾದ ಬಸವರಾಜ ಮತ್ತಿಮೂಡ, ಶರಣಬಸಪ್ಪ ಎಂ. ಪಪ್ಪ, ಎಂ.ಸುಬ್ರಮಣ್ಯಂ, ಡಾ.ಪ್ರಶಾಂತ ಪಾಟೀಲ, ಎಸ್.ವಿ.ಯುವರಾಜ, ಅಕಾಡೆಮಿಕ್ ರಿಜಿಸ್ಟ್ರಾರ್ ಡಾ.ಐ.ಅಮೃತಾ ಸ್ವಾತಿ, ಇ.ಎಸ್.ಯ.ಸಿ ಪ್ಯಾರಾ ಮೆಡಿಕಲ್ ಕಾಲೇಜು ಪ್ರಾಂಶುಪಾಲ ಡಾ.ಸಂತೋಷ ಬಿರಾದಾರ, ಇ.ಎಸ್.ಐ.ಸಿ ನರ್ಸಿಂಗ್ ಕಾಲೇಜು ಪ್ರಾಂಶುಪಾಲ ಡಾ.ಪಿ.ಎಂ.ಪ್ರತಿಭಾ, ಇ.ಎಸ್.ಐ.ಸಿ. ಮೆಡಿಕಲ್ ಕಾಲೇಜು ಜಂಟಿ ನಿರ್ದೇಶಕ ಲಕ್ಷ್ಮೀನಾರಾಯಣ ಮೀನಾ ಸೇರಿದಂತೆ ಆಸ್ಪತ್ರೆಯ ಬೋಧಕ-ಬೋಧಕೇತರ ವೃಂದ, ವಿದ್ಯಾರ್ಥಿಗಳು, ರೋಗಿಗಳು ಇದ್ದರು.

# ಅನಧಿಕೃತ ರೆಸಾರ್ಟಗಳ ವಿರುದ್ಧ ಕ್ರಮ

• ಮಲ್ಲಮ್ಮ ನುಡಿ ವಾರ್ತೆ
ಕೊಪ್ಪಳ



ಜಿಲ್ಲೆಯಲ್ಲಿರುವ ಅನಧಿಕೃತ ರೆಸಾರ್ಟ್ಗಳ ವಿರುದ್ಧ ಸಂಬಂಧಿಸಿದ ಇಲಾಖೆಯ ಅಧಿಕಾರಿಗಳು ಸೂಕ್ತ ಕಾನೂನು ಕ್ರಮ ಜರುಗಿಸಬೇಕೆಂದು ಜಿಲ್ಲಾಧಿಕಾರಿ ಡಾ. ಸುರೇಶ ಬಿ. ಇಟ್ನಾಳ ಹೇಳಿದರು.

ಅವರು ಮಂಗಳವಾರ ಜಿಲ್ಲಾಧಿಕಾರಿಗಳ ಕಛೇರಿ ಸಭಾಂಗಣದಲ್ಲಿ ಕೊಪ್ಪಳ ಜಿಲ್ಲೆಯಲ್ಲಿರುವ ಅನಧಿಕೃತ ರೆಸಾರ್ಟ್ ಮತ್ತು ಹೋಂಸ್ಟೇಗಳ ವಿರುದ್ಧ ಕಾನೂನು ಕ್ರಮ ಕೈಗೊಳ್ಳುವ ಕುರಿತು ವಿವಿಧ ಇಲಾಖೆಯ ಅಧಿಕಾರಿಗಳಿಗೆ ಕರೆದ ಸಭೆಯಲ್ಲಿ ಅಧ್ಯಕ್ಷತೆ ವಹಿಸಿ ಮಾತನಾಡಿದರು.

ಈಗಾಗಲೇ ಎಫ್ಐಆರ್ ಆದ ರೆಸಾರ್ಟ್ಗಳ ಟ್ರೇಡ್ ಲೈಸೆನ್ಸ್ ರದ್ದುಪಡಿಸಿ ಇತರೆ ಕ್ರಮಗಳನ್ನು ಜರುಗಿಸಬೇಕು. ಪ್ರತಿಯೊಂದಕ್ಕೂ ನಾನೇ ಕರೆದು ತಮಗೆ ಹೇಳಬೇಕಾ, ಹಾಗಾದರೆ ತಮ್ಮ ಜವಾಬ್ದಾರಿ ಏನು ಎಂದು ಅಧಿಕಾರಿಗಳನ್ನು ತರಾಟೆಗೆ ತೆಗೆದುಕೊಂಡರು. ತಮ್ಮ ಇಲಾಖೆಗಳಿಗೆ ಸಂಬಂಧಿಸಿದ ಕೆಲಸವನ್ನು ಜವಾಬ್ದಾರಿಯಿಂದ ತಾವು ನಿರ್ವಹಿಸಬೇಕು. ಸರ್ಕಾರದ ನಿಯಮಗಳನ್ವಯ ಅಗತ್ಯ ದಾಖಲೆಗಳನ್ನು ಪರಿಶೀಲಿಸದೆ ಹೋಂಸ್ಟೇ ಮತ್ತು ರೆಸಾರ್ಟ್ಗಳಿಗೆ ಕಟ್ಟಡ ಪರವಾನಗಿ ನೀಡಿದ್ದಲ್ಲಿ ಅಂತಹ ಅಧಿಕಾರಿಗಳ ಮೇಲೆ ಕಾನೂನು ಕ್ರಮ ಜರುಗಿಸಬೇಕಾಗುತ್ತದೆ ಎಂದು ಹೇಳಿದರು.

ಪರಿಸರ ಸೂಕ್ಷ್ಮ ವಲಯದ ವ್ಯಾಪ್ತಿಯಲ್ಲಿ ಯಾವುದೇ ಅಕ್ರಮ ರೆಸಾರ್ಟ್ ಹಾಗೂ ಹೋಂಸ್ಟೇಗಳು ಇರುವ ಹಾಗಿಲ್ಲ. ಈ ಕುರಿತು ಕಂದಾಯ ಮತ್ತು ಅರಣ್ಯ ಇಲಾಖೆ ಅಧಿಕಾರಿಗಳು ಜಂಟಿಯಾಗಿ ಸರ್ವೆ ಕಾರ್ಯ ಕೈಗೊಳ್ಳಬೇಕು. ಜಿಲ್ಲೆಯಲ್ಲಿ ಅನಧಿಕೃತ ಮದ್ಯ ಮಾರಾಟ ಮತ್ತು ಕಾನೂನು ಬಾಹಿರ ಚಟುವಟಿಕೆಗಳು ಕಂಡು ಬಂದರೆ ತಕ್ಷಣ ಅವುಗಳಿಗೆ ಸಂಬಂಧಿಸಿದ ಇಲಾಖೆಯವರು ಕಡಿವಾಣ ಹಾಕಬೇಕು. ಹವಾಮಾ ವ್ಯಾಪ್ತಿಯಲ್ಲಿ ಯಾವುದೇ ರೆಸಾರ್ಟ್ಗಳಿಗೆ ಅನುಮತಿ ನೀಡಲು ಬರುವುದಿಲ್ಲ.

ಈ ಕುರಿತು ಅಧಿಕಾರಿಗಳು ಗಮನಹರಿಸಬೇಕು. ಹಂಪಿ ಕೆಫೆ, ರಾಖಿ ಮಿಡೋಸ್ ರೆಸಾರ್ಟ್ ಸೇರಿದಂತೆ ಇತರೆ ನಿಯಮ ಉಲ್ಲಂಘನೆ ಮಾಡಿದ ರೆಸಾರ್ಟ್ಗಳ ಟ್ರೇಡ್ ಲೈಸೆನ್ಸ್ ಕ್ಯಾನ್ಸಲ್ ಆಗಿರುವ ಕುರಿತು ಮಾಹಿತಿ ನೀಡಿ ಎಂದರು. ಉಪಲೋಕಾಯುಕ್ತರು ದಾಖಲಿಸಿದ ಸೊಮೊಟೊ ಪ್ರಕರಣಗಳ ಕಂಪ್ಲೈಯನ್ಸ್ ರಿಪೋರ್ಟ್ಗಳನ್ನು ಕೊಡಬೇಕೆಂದು ಹೇಳಿದರು.

ಜಿಲ್ಲಾ ಪಂಚಾಯತ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ವರ್ಣಿತ್ ನೇಗಿ ಅವರು ಮಾತನಾಡಿ, ಕೆಲಸ ಕೇವಲ ಪೇಪರ್‌ನಲ್ಲಿ ಆಗಬಾರದು. ಗ್ರೌಂಡ್ ಲೇವಲ್‌ನಲ್ಲಿ ಕೆಲಸ ಆಗಬೇಕು. ಟ್ರೇಡ್ ಲೈಸೆನ್ಸ್ ರದ್ದಾದ ಮೇಲೆ ಅವುಗಳನ್ನು ಮುಚ್ಚುವ ಕೆಲಸ ಆಗಬೇಕು. ತಾಲ್ಲೂಕು ಪಂಚಾಯತ ಕಾರ್ಯನಿರ್ವಾಹಕ ಅಧಿಕಾರಿ ಮತ್ತು ಪಿಡಿಓಗಳು ಏನು ಮಾಡುತ್ತಿದ್ದೀರಾ, ಈ ಕುರಿತು ಗಮನ ಹರಿಸುತ್ತಿರಬೇಕು. ಸಭೆಗೆ ಬಂದಾಗ ಮಾತ್ರವೇ ಕೆಲಸ ಮಾಡಿದಹಾಗೆ ಹೇಳಬಾರದು ಎಂದು ಹೇಳಿದರು.

ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಡಾ. ರಾಮ್ ಎಲ್. ಅರಸಿದ್ದಿ ಮಾತನಾಡಿ, ಅಧಿಕಾರಿಗಳು ಯಾವುದೇ ಅನುಮತಿ ನೀಡುವ ಮುಂಚೆ ಎಲ್ಲವನ್ನೂ ಪರಿಶೀಲನೆ ಮಾಡಿ ಕೊಡಬೇಕು. ಇಲ್ಲವಾದರೆ ಕಾನೂನು ಸಮಸ್ಯೆ ಆಗುತ್ತವೆ. ನಮ್ಮ ಪೊಲೀಸರು ಕೇಳಿದಾಗ ಅವರು ಆ ಅನುಮತಿ ಪಡೆದಿದ್ದೇವೆ, ಇದು ಪಡೆದಿದ್ದೇವೆ ಎಂದು ರೆಸಾರ್ಟ್ನವರು ನಮ್ಮ ಪೊಲೀಸರಿಗೆ ಹೇಳುತ್ತಾರೆ. ಮೊನ್ನೆ ಮುನಿರಾಬಾದನಲ್ಲಿ ಘಟನೆಯಾದ ನಂತರ ಗಂಗಾವತಿ ಮತ್ತು ಸಾಣಾಪುರದಲ್ಲಿ ನಮ್ಮ ಪೊಲೀಸರನ್ನು ಗಸ್ತಿಗೆ ನಿಯೋಜಿಸಲಾಗಿದೆ ಎಂದು ಹೇಳಿದರು. ಈ ಸಭೆಯಲ್ಲಿ ಅಪರ ಜಿಲ್ಲಾಧಿಕಾರಿ ಸಿದ್ರಾಮೇಶ್ವರ, ಉಪ ಅರಣ್ಯ ಸಂರಕ್ಷಣಾಧಿಕಾರಿ ನಿರ್ಮಲಾ, ಸಹಾಯಕ ಆಯುಕ್ತರಾದ ಕ್ಯಾ. ಮಹೇಶ ಮಾಲಗಿತ್ತಿ, ಪ್ರವಾಸೋದ್ಯಮ ಇಲಾಖೆಯ ಸಹಾಯಕ ನಿರ್ದೇಶಕರಾದ ನಾಗರಾಜ ಸೇರಿದಂತೆ ಜಿಲ್ಲಾ ಮಟ್ಟದ ವಿವಿಧ ಇಲಾಖೆಯ ಅಧಿಕಾರಿಗಳು, ತಹಶೀಲ್ದಾರರು, ತಾಲ್ಲೂಕು ಪಂಚಾಯತ ಕಾರ್ಯನಿರ್ವಾಹಕ ಅಧಿಕಾರಿಗಳು ಹಾಗೂ ಪಿಡಿಓ ಗಳು ಸೇರಿದಂತೆ ಇತರರು ಉಪಸ್ಥಿತರಿದ್ದರು.

## ಎಸ್‌ಸಿಪಿ ಟಿಎಸ್‌ಪಿ ಹಣವನ್ನು ಸಮರ್ಪಕವಾಗಿ ಬಳಸಿ

# ಎಸ್‌ಸಿ.ಎಸ್‌ಟಿ ಸಮಗ್ರ ಅಭಿವೃದ್ಧಿಗೆ ಒತ್ತು ಕೊಡಿ: ಮೂರ್ತಿ

• ಮಲ್ಲಮ್ಮ ನುಡಿ ವಾರ್ತೆ
ಬೀದರ




ಜಿಲ್ಲೆಯಲ್ಲಿ ಪ್ರತಿವರ್ಷ ಎಸ್‌ಸಿಪಿ ಮತ್ತು ಟಿಎಸ್‌ಪಿ ಅನುದಾನವನ್ನು ಸಮರ್ಪಕವಾಗಿ ಬಳಸಿ ಅನುಸೂಚಿತ ಜಾತಿ ಹಾಗೂ ಅನುಸೂಚಿತ ಬುಡಕಟ್ಟುಗಳ ಸಮಗ್ರ ಅಭಿವೃದ್ಧಿಗೆ ಹೆಚ್ಚಿನ ಒತ್ತು ನೀಡಬೇಕು ಎಂದು ಕರ್ನಾಟಕ ರಾಜ್ಯ ಅನುಸೂಚಿತ ಜಾತಿಗಳು ಮತ್ತು ಅನುಸೂಚಿತ ಬುಡಕಟ್ಟುಗಳ ಆಯೋಗದ ಅಧ್ಯಕ್ಷರಾದ ಡಾ.ಮೂರ್ತಿ ಎಲ್ ತಿಳಿಸಿದ್ದಾರೆ.

ನಗರದ ಜಿಲ್ಲಾಧಿಕಾರಿಗಳ ಸಭಾಂಗಣದಲ್ಲಿ ನಡೆದ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಅವರು, ಎಸ್‌ಸಿಪಿ ಮತ್ತು ಟಿಎಸ್‌ಪಿ ಹಣವನ್ನು ವಶಿಷ್ಠ ಜಾತಿ ಮತ್ತು ಪ್ರಶಿಷ್ಟ ಪಂಗಡಗಳ ಅಭಿವೃದ್ಧಿಗೆ ಸರಿಯಾಗಿ ಖರ್ಚು ಮಾಡಬೇಕೆಂದು ಅಧಿಕಾರಿಗಳಿಗೆ ಸೂಚಿಸಿದರು. ಈ ವರ್ಗದ ಜನರಿಗೆ ಸಂವಿಧಾನದ ಕಲಂ 16 ಅಡಿಯಲ್ಲಿ ನ್ಯಾಯ ದೊರಕಿಸುವ ಕೆಲಸವನ್ನು ಆಯೋಗ ನಿರಂತರವಾಗಿ ಮಾಡುತ್ತಿದೆ ಎಂದು ಹೇಳಿದರು.

ನಮ್ಮ ಆಯೋಗದಿಂದ ಈಗಾಗಲೇ ಸುಮಾರು 150 ಪ್ರಕರಣಗಳನ್ನು ಇತ್ಯರ್ಥಪಡಿಸಲಾಗಿದೆ ಎಂದು ಅವರು ಮಾಹಿತಿ ನೀಡಿದರು. ಪತ್ರಿಕಾಗೋಷ್ಠಿಗೆ ಮುನ್ನ ಜಿಲ್ಲೆಯ ಅನುಸೂಚಿತ ಜಾತಿ ಮತ್ತು ಅನುಸೂಚಿತ ಪಂಗಡದ ಮುಖಂಡರ ಸಭೆ ನಡೆಸಿ ಅವರ ಸಮಸ್ಯೆಗಳನ್ನು ಆಲಿಸಲಾಗಿದೆ ಎಂದು ತಿಳಿಸಿದರು. ಈ ಜಿಲ್ಲೆಗೆ ಸಂಬಂಧಿಸಿದ ಪ್ರಮುಖ ಸಮಸ್ಯೆಗಳಾಗಿ ಜಮೀನಿನ ಸಮಸ್ಯೆ, ದೌರ್ಜನ್ಯ ಪ್ರಕರಣಗಳು ಹಾಗೂ ನಕಲಿ ಜಾತಿ ಆದಾಯ ಪ್ರಮಾಣ ಪತ್ರ ವಿತರಣೆಗಳಿವೆ ಎಂದು ಹೇಳಿದರು. ಇಂತಹ ವಿಷಯಗಳನ್ನು ಆಯೋಗ ಗಂಭೀರವಾಗಿ ಪರಿಗಣಿಸಲಿದೆ ಎಂದು ಭರವಸೆ ನೀಡಿದರು.

ಅನುಸೂಚಿತ ಜಾತಿ ಹಾಗೂ ಅನುಸೂಚಿತ ಪಂಗಡದ ಜನರು ಅರಣ್ಯ ಭೂಮಿಯಲ್ಲಿ ಹಲವು ವರ್ಷಗಳಿಂದ ಸಾಗುವಳಿ ಮಾಡಿಕೊಂಡು ಬರುತ್ತಿದ್ದು, 53, 57 ಮತ್ತು ಸಿ ಫಾರಂ ಹೊಂದಿರುವವರು ಅರ್ಜಿ ಸಲ್ಲಿಸಿದ್ದಾರೆ. ವರ್ಷಗಳಿಂದ ಅರಣ್ಯ ಭೂಮಿಯಲ್ಲಿ ಕೃಷಿ ಮಾಡುತ್ತಿರುವವರನ್ನು ಒಕ್ಕಲೆಬ್ಬಿಸಬಾರದು ಎಂದು ಅವರು ಸ್ಪಷ್ಟಪಡಿಸಿದರು.

ಮುಂದಿನ ತಿಂಗಳು ಅರಣ್ಯ ಇಲಾಖೆ ಹಾಗೂ ಕಂದಾಯ ಇಲಾಖೆಯ ಉನ್ನತ ಅಧಿಕಾರಿಗಳ ಸಭೆ ಕರೆಯಲಾಗಿದ್ದು, ಸಾಗುವಳಿ ಮಾಡುತ್ತಿರುವ ಜನಾಂಗದವರನ್ನು ಒಕ್ಕಲೆಬ್ಬಿಸದಂತೆ ಜಿಲ್ಲಾಧಿಕಾರಿಗಳಿಗೆ ಆದೇಶ ನೀಡಲು ಆಯೋಗ ಸೂಚಿಸಲಿದೆ ಎಂದರು.

ಅನುಸೂಚಿತ ಜಾತಿ ಮತ್ತು ಅನುಸೂಚಿತ ಪಂಗಡದ ಜನರ ಭೂಮಿಗೆ ಸಂಬಂಧಿಸಿದ ಪೋಡ್ಡಿ ಸೇರಿದಂತೆ ಇತರೆ ಕೆಲಸಗಳನ್ನು ಕಂದಾಯ ಇಲಾಖೆ ತ್ವರಿತಗತಿಯಲ್ಲಿ ಮಾಡಬೇಕೆಂದು ಆಗ್ರಹಿಸಿದರು. ಮಸಣ ಭೂಮಿಗೆ ಸಂಬಂಧಿಸಿದಂತೆ ಜಿಲ್ಲೆಯಲ್ಲಿ ಬೇಡಿಕೆ ಇರುವ ಗ್ರಾಮಗಳಿಗೆ ಭೂಮಿ ಒದಗಿಸುವುದು ಅನಿವಾರ್ಯ ಎಂದು ಹೇಳಿದರು.

ನಕಲಿ ಜಾತಿ ಮತ್ತು ಆದಾಯ ಪ್ರಮಾಣ ಪತ್ರಗಳನ್ನು ತಡೆಯಲು ಮುಂದಿನ ದಿನಗಳಲ್ಲಿ ಕುಲಶಾಸ್ತ್ರೀಯ ಅಧ್ಯಯನದ ಮೂಲಕ ಕಟ್ಟುನಿಟ್ಟಿನ ಕ್ರಮ ಕೈಗೊಳ್ಳಲಾಗುವುದು ಎಂದು ಅವರು ಸ್ಪಷ್ಟಪಡಿಸಿದರು. ಅಲೆಮಾರಿ ಜನಾಂಗದವರ ಸಮಸ್ಯೆಗಳನ್ನು ಆಲಿಸಲು ಅವರ ಹಟ್ಟಿಗಳಿಗೆ ಭೇಟಿ ನೀಡುವುದಾಗಿ ತಿಳಿಸಿದರು.

ಈ ಸಂದರ್ಭದಲ್ಲಿ ಆಯೋಗದ ಸದಸ್ಯರಾದ ಸುನೀಲ ಉಕ್ಕಲಿ, ಕಾರ್ಯದರ್ಶಿ ಡಾ.ಎಚ್.ಎಸ್.ಶಿವರಾಮ, ಜಿಲ್ಲಾಧಿಕಾರಿ ಶಿಲ್ಪಾ ಶರ್ಮಾ, ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಣಾಧಿಕಾರಿ ಡಾ.ಗಿರೀಶ್ ಬದೋಲೆ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಪ್ರದೀಪ ಗುಂಟಿ, ಬೀದರ ಮಹಾನಗರ ಪಾಲಿಕೆಯ ಆಯುಕ್ತರಾದ ಮುಕುಲ್ ಜೈನ್, ಸೇರಿದಂತೆ ಅನೇಕ ಅಧಿಕಾರಿಗಳು ಹಾಗೂ ಗಣ್ಯರು ಉಪಸ್ಥಿತರಿದ್ದರು.

## ಪ್ರಧಾನಮಂತ್ರಿ ರಾಷ್ಟ್ರೀಯ ಅಪ್ರೆಂಟಿಸ್ ಮೇಳ ಯಶಸ್ವಿ

# ಕೌಶಲ್ಯಾದಿಂದ ಉದ್ಯೋಗದತ್ತ 195 ವಿದ್ಯಾರ್ಥಿಗಳು




• ಮಲ್ಲಮ್ಮ ನುಡಿ ವಾರ್ತೆ. ಗುರುಮಠಕಲ್

ಯುವಕರಿಗೆ ಕೈಗಾರಿಕಾ ತರಬೇತಿ ಹಾಗೂ ಉದ್ಯೋಗಾವಕಾಶಗಳನ್ನು ಒದಗಿಸುವ ಉದ್ದೇಶದಿಂದ ಆಯೋಜಿಸಲಾದ ಪ್ರಧಾನ್ ಮಂತ್ರಿ ರಾಷ್ಟ್ರೀಯ ಶಿಶಿಕ್ಷು ಮೇಳ ಮಂಗಳವಾರ ಯಶಸ್ವಿಯಾಗಿ ನಡೆಯಿತು.

ಪಟ್ಟಣದ ಸರಕಾರಿ ಕೈಗಾರಿಕಾ ತರಬೇತಿ ಸಂಸ್ಥೆಯ ಆವರಣದಲ್ಲಿ ಆಯೋಜಿಸಲಾದ ಶಿಶಿಕ್ಷುಮೇಳದಲ್ಲಿ ಒಟ್ಟು 250 ವಿದ್ಯಾರ್ಥಿಗಳು ಭಾಗವಹಿಸಿದ್ದು, ಅವರಲ್ಲಿ 195 ವಿದ್ಯಾರ್ಥಿಗಳು ವಿವಿಧ ಖ್ಯಾತ ಕಂಪನಿಗಳಲ್ಲಿ ಅಪ್ರೆಂಟಿಸ್‌ಶಿಪ್ ತರಬೇತಿಗೆ ಸಂದರ್ಶನದ ಮುಖಾಂತರ ಆಯ್ಕೆಯಾಗಿದ್ದಾರೆ.

ಕಾರ್ಯಕ್ರಮವನ್ನು ಜಿಲ್ಲಾ ಕೌಶಲ್ಯಾಭಿವೃದ್ಧಿ ಇಲಾಖೆಯಾದಗಿರಿಯ ಸಹಾಯಕ ನಿರ್ದೇಶಕರಾದ ಬಸಪ್ಪ ಎಸ್ ತಳವಡಿ ಉದ್ಘಾಟಿಸಿದರು. ನೌಕರರ ಸಂಘದ ತಾಲೂಕಾಧ್ಯಕ್ಷ ಸಂತೋಷ್ ನೀರೆಟಿ, ಪ್ರಾಥಮಿಕ ಶಾಲಾ ಶಿಕ್ಷಕರ ಸಂಘದ ತಾಲೂಕಾಧ್ಯಕ್ಷ ನಾರಾಯಣರೆಡ್ಡಿ, ದಯಾನಂದ ಹಿರೇಮಠ, ಮಹೀಂದ್ರ ಅಂಡ್ ಮಹೀಂದ್ರ ಕಂಪನಿಯಿಂದ ಜಿ. ಸುರೇಶ್ ಕುಮಾರ್, ಜುಮೆಟೆಕ್ ಬೆಂಗಳೂರು ಸಂಸ್ಥೆಯಿಂದ ಅಭಯ್, ಕೀವಾರಾಜ್ ಪ್ರೈವೇಟ್ ಲಿಮಿಟೆಡ್ ಬೆಂಗಳೂರು ವತಿಯಿಂದ ದತ್ತರಾಜ್ ಬಿ, ಎಲ್ ಅಂಡ್ ಟಿ ಬೆಂಗಳೂರು ಸಂಸ್ಥೆಯಿಂದ ಜಾಕ್ಸನ್ ಹಾಗೂ ಎಂ ಆರ್ ಎಫ್ ಹೈದರಾಬಾದ್ ವತಿಯಿಂದ ಪಿ. ಸಾಯಿನಾಥ್ ಗೌಡ ಭಾಗವಹಿಸಿ ವಿದ್ಯಾರ್ಥಿಗಳಿಗೆ ಕೈಗಾರಿಕೆಗಳಲ್ಲಿ ಪ್ರಾಯೋಗಿಕ ಅನುಭವದ ಜೊತೆ ತರಬೇತಿ ಅವಧಿಯಲ್ಲಿ ಸ್ಟೈಪೆಂಡ್ ಸಹಿತ ಉದ್ಯೋಗಾವಕಾಶ ಕುರಿತು ಮಾಹಿತಿ ನೀಡಿದರು.

ಈ ಮೇಳವು ತಾಲೂಕಿನ ಯುವಕರಿಗೆ ಕೈಗಾರಿಕಾ ಕ್ಷೇತ್ರದಲ್ಲಿ ಅನುಭವ ಮತ್ತು ಭವಿಷ್ಯದ ಶಾಶ್ವತ ಉದ್ಯೋಗದ ದಾರಿಗೆ ಸಹಕಾರಿಯಾಗಿದ್ದು ,ಸರ್ಕಾರದ ಕೌಶಲ್ಯಾಭಿವೃದ್ಧಿ ಯೋಜನೆಗಳ ಲಾಭ ಪಡೆದು ಕೇವಲ ಉದ್ಯೋಗಿಗಳಾಗದೆ ಉದ್ಯಮಿಗಳಾಗಿ ಎಂದು ಬಸಪ್ಪ ಎಸ್ ತಳವಡಿ ಅಭಿಪ್ರಾಯಪಟ್ಟರು. ಅತಿ ಹೆಚ್ಚು ವಿದ್ಯಾರ್ಥಿಗಳನ್ನು ಹೊಂದಿರುವ ಗುರುಮಠಕಲ್ ಕೈಗಾರಿಕಾ ತರಬೇತಿ ಸಂಸ್ಥೆಯ ವ್ಯವಸ್ಥೆ ಕುರಿತು ಪ್ರಶಂಸೆ ವ್ಯಕ್ತಪಡಿಸಿದರು.

ಮೇಳದ ಉದ್ದೇಶಿಸಿ ಮಾತನಾಡಿದ ಕಾಲೇಜಿನ ಪ್ರಾಚಾರ್ಯ ಕಲ್ಲಪ್ಪ ಯುವಕರಿಗೆ ಅಪ್ರೆಂಟಿಸ್‌ಶಿಪ್ (ಕೈಗಾರಿಕಾ ತರಬೇತಿ) ಅವಕಾಶ ಒದಗಿಸುವುದುದಲ್ಲದೆ ಕೈಗಾರಿಕೆಗಳಲ್ಲಿ ಪ್ರಾಯೋಗಿಕ ಅನುಭವದ ಜೊತೆ ತರಬೇತಿ ಅವಧಿಯಲ್ಲಿ ಸ್ಟೈಪೆಂಡ್ ಸಹಿತ ಉದ್ಯೋಗಾವಕಾಶ ಕಲ್ಪಿಸುವದಾಗಿದೆ,ಉದ್ಯೋಗವನ್ನಾರಿಸಿ ನಾವು ಹೋಗುವ ಅವಶ್ಯಕತೆ ತಪ್ಪಿದೆ ಎಲ್ಲರೂ ಈ ಮೇಳದ ಸದುಪಯೋಗ ಮಾಡಿಕೊಳ್ಳಬೇಕು ಎಂದು ಹೇಳಿದರು.

ಮೇಳದಲ್ಲಿ ಕಿರಿಯ ತರಬೇತಿ ಅಧಿಕಾರಿಗಳಾದ ಭೀಮಶಪ್ಪ ಜಿ, ವೆಂಕಟರಮಲು ಎಚ್, ಜಿಲ್ಹೆಕಾರ್ ಅಲಿ, ನಾಗಿರೆಡ್ಡಿ, ಜಿಲೆಂದರ್ ಕೋರಿ, ಯಮನಪ್ಪ ಹಾಗೂ ಚಂದ್ರಶೇಖರ್, ದ್ವಿತೀಯ ದರ್ಜೆ ಸಹಾಯಕರಾದ ಸುರೇಶ್ ರಾಥೋಡ್, ವಿಜಯ ಭಾಸ್ಕರ್, ಎಮ್ ಎಮ್ ಗಾರಂಪಳ್ಳಿ ಪ್ರಾಚಾರ್ಯ ರಾಜಶೇಖರ್ ಯಾದವ್ ಹಾಗೂ ಮೌನೇಶ್ವರ ಐಟಿಐ ಕಾಲೇಜಿನ ಪ್ರಾಚಾರ್ಯ ಮಹೇಶ್, ನೂರಾರು ಸಂಖ್ಯೆಯಲ್ಲಿ ವಿವಿಧ ಕಾಲೇಜಿನ ವಿದ್ಯಾರ್ಥಿಗಳು ಕಾರ್ಯಕ್ರಮದಲ್ಲಿ ಭಾಗವಹಿಸಿದ್ದರು.

### ಮೇಳದಿಂದ 60 ವಿದ್ಯಾರ್ಥಿಗಳ ಬದುಕಿಗೆ ಆಸರೆ

**ಮಹೀಂದ್ರ & ಮಹೀಂದ್ರ (ಜಹೀರಾಬಾದ್ ಘಟಕ) ೬೦ ವಿದ್ಯಾರ್ಥಿಗಳು, ಜೂಮ್ ಟೆಕ್ ಬೆಂಗಳೂರು ೨೫ ವಿದ್ಯಾರ್ಥಿಗಳು, ಕೀವಾರಾಜ್ ಪ್ರೈವೇಟ್ ಅಮಿಟೆಡ್ ೩೦ ವಿದ್ಯಾರ್ಥಿಗಳು, ಎಲ್ ಅಂಡ್ ಟಿ ಗೆ ೪೦ ವಿದ್ಯಾರ್ಥಿಗಳು, ಎಮ್ ಅರ್ ಎಫ್ ಸಂಗಾರೆಡ್ಡಿಗೆ ೪೦ ವಿದ್ಯಾರ್ಥಿಗಳು ಆಯ್ಕೆ.**

# ವಿಕಲಚೇತನರ ಪ್ರಗತಿಗೆ ವಿವಿಧ ತರಬೇತಿ

• ಮಲ್ಲಮ್ಮ ನುಡಿ ವಾರ್ತೆ ಯಾದಗಿರಿ



ಈ ಎರಡು ದಿನಗಳ ತರಬೇತಿ ಅತ್ಯಂತ ಅವಶ್ಯಕವಾಗಿದೆ. ಎಲ್ಲರೂ ಇದರ ಸದುಪಯೋಗವನ್ನು ಪಡೆದುಕೊಂಡು ತಮ್ಮ ಜೀವನದಲ್ಲಿ ಅಳವಡಿಸಿಕೊಳ್ಳಬೇಕು, ಎಂದು ಗ್ರಾಮ ಪಂಚಾಯತಿ ಅಭಿವೃದ್ಧಿ ಅಧಿಕಾರಿ ರಾಜು ಮೇಟಿ ಹೇಳಿದರು. ಯಾದಗಿರಿ ತಾಲೂಕಿನ ಹತ್ತಿಕುಣಿ ಗ್ರಾಮ ಪಂಚಾಯತ್ ಎಪಿಡಿ ಸಂಸ್ಥೆಯ ವತಿಯಿಂದ ಎರಡು ದಿನಗಳ ಉದ್ಯಮಶೀಲತಾ ಅಭಿವೃದ್ಧಿ ಕಾರ್ಯಕ್ರಮ ಗೆ ಚಾಲನೆ ನೀಡಿ ಮಾತನಾಡಿದರು.

ವೈದ್ಯಾಧಿಕಾರಿ ಬಸ್ಸರೆಡ್ಡಿ ಪಾಟೀಲ್ ಮಾತನಾಡಿ, ಎಪಿಡಿ ಸಂಸ್ಥೆ ಹಲವು ವರ್ಷಗಳಿಂದ ವಿಕಲಚೇತನರ ಅಭಿವೃದ್ದಿಗಾಗಿ ಕಾರ್ಯನಿರ್ವಹಿಸುತ್ತಿದ್ದು, ವಿವಿಧ ತರಬೇತಿಗಳನ್ನು ನೀಡುತ್ತಿದೆ. ಈ ತರಬೇತಿಯ ಸದುಪಯೋಗವನ್ನು ಎಲ್ಲರೂ

ಪಡೆದುಕೊಳ್ಳಬೇಕು, ಎಂದು ತಿಳಿಸಿ ಸಂಸ್ಥೆಗೆ ಅಭಿನಂದನೆ ಸಲ್ಲಿಸಿದರು. ವಾಟರ್ ಏಡ್ ಸಂಸ್ಥೆಯ ಶ್ರೀದೇವಿ ಅವರು ಮಾತನಾಡಿ, ಈ ತರಬೇತಿ ನಿಮ್ಮ ಭವಿಷ್ಯಕ್ಕೆ ಉಪಯುಕ್ತವಾಗಿದ್ದು, ಎಲ್ಲರೂ ಸಕ್ರಿಯವಾಗಿ ಭಾಗವಹಿಸಿ ಪ್ರಯೋಜನ ಪಡೆಯಬೇಕು, ಎಂದು ಹೇಳಿದರು.

ನಂತರ ಸಂಪನ್ಮೂಲ ವ್ಯಕ್ತಿಯಾಗಿ ಪಶು ಇಲಾಖೆಯ ದೀಪಾ ತರಬೇತಿಯನ್ನು ನಡೆಸಿಕೊಟ್ಟರು. ಈ ಸಂದರ್ಭದಲ್ಲಿ ಕಾರ್ಯಕ್ರಮವನ್ನು ಸಂಸ್ಥೆಯ ಮುಖ್ಯಸ್ಥರಾದ ಮಧುಕೇಶವ್ ಅಧ್ಯಕ್ಷತೆವಹಿಸಿದರು, ಆಯುಷ್ ಇಲಾಖೆಯ ಡಾ. ರಮೇಶ್, ಹಾಗೂ ಪಶು ಆಸ್ಪತ್ರೆಯ ಡಾ. ಗೀತಾ, ಸಂಪ್ರಿತಾ ದೇವಪುತ್ರ, ಶಿವಯೋಗಪ್ಪ, ರಮೇಶ್ ಕಟ್ಟಿಮನಿ, ಶಿಲ್ಪಾ, ಮೋಹನ್, ಬಸವರಾಜ್ ಮನ್ನು, ಹಾಗೂ ಸಾಬಣ್ಣ ಉಪಸ್ಥಿತರಿದ್ದರು.

## ಮುಖ್ಯಾಮಂತ್ರಿ ಬದಲಾವಣೆ ಇಲ್ಲ

• ಮಲ್ಲಮ್ಮ ನುಡಿ ವಾರ್ತೆ ಬಳ್ಳಾರಿ

ಸಿಎಂ ಹಾಗೂ ಡಿಸಿಎಂ ಇಬ್ಬರೂ ಪಕ್ಷದ ಹೈಕಮಾಂಡ್ ನಾಯಕರನ್ನು ಭೇಟಿ ಮಾಡಿ ಚರ್ಚೆ ನಡೆಸಿದ್ದಾರೆ. ಅವರಿಗೆ ಹೇಳಬೇಕಾದ ವಿಷಯಗಳನ್ನು ವರಿಷ್ಠರು ತಿಳಿಸಿದ್ದು, ಸದ್ಯಕ್ಕೆ ಸಿಎಂ ಬದಲಾವಣೆ ಕುರಿತು ಯಾವುದೇ ಅಂತಿಮ ನಿರ್ಧಾರ ಕೈಗೊಳ್ಳಲಾಗಿಲ್ಲ ಎಂದು ಕಾಂಗ್ರೆಸ್ ಸಿಡಬ್ಲ್ಯೂಸಿ ಸದಸ್ಯರು ಹಾಗೂ ರಾಜ್ಯಸಭಾ ಸದಸ್ಯರಾದ ಡಾ. ನಾಸೀರ್ ಹುಸೇನ್ ತಿಳಿಸಿದ್ದಾರೆ.

ನಗರ ಪಾಲಿಕೆಯ ಸಾಮಾನ್ಯ ಸಭೆಗೆ ಹಾಜರಾಗಲು ಜಿಲ್ಲಾ ಪಂಚಾಯತ್‌ನ ನಜೀರ್ ಸಾಬ್ ಸಭಾಂಗಣಕ್ಕೆ ಆಗಮಿಸಿದ ಅವರು ಸುದ್ದಿಗಾರರೊಂದಿಗೆ ಮಾತನಾಡಿ, "ರಾಜ್ಯದ ಸಿಎಂ ಬದಲಾವಣೆ ಅಥವಾ ಬೇರೆ ಯಾರನ್ನಾದರೂ ಸಿಎಂ ಮಾಡುವ ಪ್ರಶ್ನೆಯ ಬಗ್ಗೆ ಹೈಕಮಾಂಡ್ ಯಾವುದೇ ತೀರ್ಮಾನ ಮಾಡಿಲ್ಲ. ಪಕ್ಷದ ವರಿಷ್ಠರಾದ ಕೆ.ಸಿ. ವೇಣುಗೋಪಾಲ್, ರಂದೀಪ್ ಸಿಂಗ್ ಸುರ್ಜೇವಾಲಾ, ರಾಹುಲ್ ಗಾಂಧಿ ಸೇರಿದಂತೆ ರಾಷ್ಟ್ರೀಯ ನಾಯಕರು ಚರ್ಚಿಸಿ ಅಂತಿಮ ನಿರ್ಧಾರ ಮಾಡಿದ ನಂತರವೇ ಜನತೆಗೆ ತಿಳಿಸಲಾಗುತ್ತದೆ" ಎಂದರು.

# ಸ್ವಾಮೀಜಿಯವರು ಆದಷ್ಟು ಬೇಗನೆ ಚೇತರಿಕೆ: ಕುಮಾರ ನಾಯಕ



• ಮಲ್ಲಮ್ಮ ನುಡಿ ವಾರ್ತೆ ಯಾದಗಿರಿ

ಹೈದರಾಬಾದ್ ನಲ್ಲಿ ಚಿಕಿತ್ಸೆ ಪಡೆಯುತ್ತಿರುವ ರಾಜನಹಳ್ಳಿಯ ವಾಲ್ಮೀಕಿ ಗುರುಪೀಠದ ಪೀಠಾಧಿಪತಿಗಳಾದ ಡಾ. ವಾಲ್ಮೀಕಿ ಪ್ರಸನ್ನಾನಂದ ಸ್ವಾಮೀಜಿಯವರ ಆರೋಗ್ಯ ವಿಚಾರಿಸಿದ ರಾಯಚೂರು ಯಾದಗಿರಿ ಲೋಕಸಭಾ ಕ್ಷೇತ್ರದ ಸಂಸದ ಜಿ ಕುಮಾರ ನಾಯಕ ಅವರು ಇಂದು ಹೈದರಾಬಾದ್ ನ ಅಪೋಲೋ ಆಸ್ಪತ್ರೆಗೆ ಭೇಟಿ ನೀಡಿ ಶ್ರೀಗಳ ಯೋಗಕ್ಷೇಮವನ್ನು ವಿಚಾರಿಸಿದರು. ನಂತರ ಶ್ರೀಗಳಿಗೆ ಚಿಕಿತ್ಸೆ ನೀಡಿದ ವೈದ್ಯರನ್ನು ಭೇಟಿಯಾಗಿ ಶ್ರೀಗಳ ಆರೋಗ್ಯ ಕುರಿತು ವಿಚಾರಿಸಿದರು, ಈಗಾಗಲೇ ಶ್ರೀಗಳಿಗೆ ಲಘು ಶಸ್ತ್ರ ಚಿಕಿತ್ಸೆಯ ಜೊತೆಗೆ ಸ್ಟಂಟ್ ಅನ್ನು ಹಾಕಿದ್ದು ಶ್ರೀಗಳಿಗೆ ಸದ್ಯ ವಿಶ್ರಾಂತಿಯ ಅಗತ್ಯ ಇದ್ದು ಜೊತೆಗೆ ತಜ್ಞ ವೈದ್ಯರ ತಂಡ ಶ್ರೀಗಳನ್ನು ನಿತ್ಯ ಪರಿಶೀಲನೆ ನಡೆಸುತ್ತಿದ್ದೇವೆ, ಚಿಕಿತ್ಸೆಗೆ ಶ್ರೀಗಳು ಸ್ಪಂದಿಸುತ್ತಿದ್ದು ಶೀಘ್ರವೇ ಗುಣಮುಖರಾಗಲಿದ್ದಾರೆ ಎಂದು ವೈದ್ಯರು ಮಾಹಿತಿ ನೀಡಿದರು. ಪ್ರಸ್ತುತ ಶ್ರೀಗಳ ಸ್ಥಿತಿ ಸ್ಥಿರವಾಗಿದೆ ಎಂದು ಆಸ್ಪತ್ರೆ ಮೂಲಗಳು ತಿಳಿಸಿವೆ ಶ್ರೀಗಳ ಆರೋಗ್ಯದ ಬಗ್ಗೆ ಭಕ್ತರು ಹಾಗೂ ಅನುಯಾಯಿಗಳು ಪ್ರಾರ್ಥನೆ ಸಲ್ಲಿಸುತ್ತಿದ್ದು, ಶೀಘ್ರ ಸ್ವಾಮೀಜಿಗಳು ಚೇತರಿಸಿಕೊಂಡು ನಮ್ಮ ಮಧ್ಯ ಬರಲಿದ್ದಾರೆ, ವೈದ್ಯರ ಸಲಹೆಯಂತೆ ಶ್ರೀಗಳು ಸದ್ಯ ಆಸ್ಪತ್ರೆಯ ವಿಶೇಷ ಘಟಕದಲ್ಲಿ ವಿಶ್ರಾಂತಿಯಲ್ಲಿದ್ದು ಶ್ರೀಗಳಿಗೆ ಪೂರ್ಣ ಚಿಕಿತ್ಸೆ ಮುಗಿಯುವ ತನಕ ಭಕ್ತಾಧಿಗಳು ಹಾಗೂ ಸಮಾಜದ ಬಂಧುಗಳು, ಗಣ್ಯರು ಸಹಕರಿಸಬೇಕೆಂದು ಆಸ್ಪತ್ರೆಯ ವೈದ್ಯರು ಸಲಹೆ ನೀಡಿದ್ದಾರೆ ಎಂದು ಅವರು ತಿಳಿಸಿದರು.

# ಬಂಜಾರ ಸಮುದಾಯದ ಆತ್ಮಸ್ಥೈರ್ಯವನ್ನು ಕುಗ್ಗಿಸಲು ಚಂದ್ರು ಲಮಾಣಿ ಬಂಧನ: ಸುರೇಶ ಬಳೂಟಗಿ ಆರೋಪ

• ಮಲ್ಲಮ್ಮ ನುಡಿ ವಾರ್ತೆ ಕೊಪ್ಪಳ



ಬಂಜಾರ ಸಮಾಜವನ್ನು ರಾಜಕೀಯ,ಆರ್ಥಿಕ,ಸಾಮಾಜಿಕ ಕ್ಷೇತ್ರಗಳಲ್ಲಿ ನಿರ್ನಾಮ ಮಾಡಲು ಕಾಂಗ್ರೆಸ ನಾಯಕರು ಮತ್ತು ಕೆಲವು ಪಟ್ಟಭದ್ರ ಹಿತಾಸಕ್ತಿಗಳು ಸಂಚು ರೂಪಿಸಿ ಶಿರಹಟ್ಟಿ ಶಾಸಕ ಡಾ: ಚಂದ್ರು ಲಮಾಣಿ ಅವರನ್ನು ಲೋಕಾಯುಕ್ತ ದಾಳಿ ಮಾಡಿಸುವುದರ ಮೂಲಕ ಬಂಧಿಸಿರುವುದು ಖಂಡನೀಯ ಎಂದು ಗೋರ ಸೇನಾ ರಾಜ್ಯ ಪ್ರಧಾನ ಕಾರ್ಯದರ್ಶಿ ಸುರೇಶ ಬಳೂಟಗಿ ಹೇಳಿದರು. ಪಟ್ಟಣದಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು ಕಾಂಗ್ರೆಸ್ ಪಕ್ಷ ಮೊದಲಿನಿಂದಲೂ ಪರಿಶಿಷ್ಟ ಜಾತಿಯ ನಾಯಕರನ್ನು ತುಳಿಯುತ್ತ ಬಂದಿರುವುದು ನಮಗೆಲ್ಲ ಗೊತ್ತಿರುವ ವಿಚಾರ, ಸಂವಿಧಾನ ಶಿಲ್ಪಿ ಡಾ: ಬಿ . ಆರ್. ಅಂಬೇಡ್ಕರ್ ಅವರನ್ನೇ

ರಾಜಕೀಯವಾಗಿ ಸೋಲಿಸಿ, ಅವರು ಮರಣವಾದ ಸಮಾಧಿಗೆ ಒಂದಿಂಚೂ ಜಾಗ ನೀಡದೇ ಅವರನ್ನು ತುಚ್ಛವಾಗಿ ಕಂಡ ಪಕ್ಷ ಕಾಂಗ್ರೆಸ್. ಅಂಬೇಡ್ಕರ ಅವರ ಜ್ಞಾನಕ್ಕೆ ಇಡೀ ವಿಶ್ವ ತಲೆ ತೂಗುತ್ತಿದ್ದರೂ ಭಾರತ ರತ್ನ ಪ್ರಶಸ್ತಿ ನೀಡದೆ ಅವಮಾನ ಮಾಡಿದ ಪಕ್ಷ ತಮ್ಮ ವಂಶಸ್ಥರಿಗೆಲ್ಲ ತಮಗೆ ತಾವೇ ಭಾರತ ರತ್ನ ಪ್ರಶಸ್ತಿ ನೀಡಿಕೊಂಡು ದೊಡ್ಡ ಸಾಧನೆ ಮಾಡಿದವರ ಥರ ಇವತ್ತು ಭಾಷಣ ಮಾಡುತ್ತಿದ್ದಾರೆ. ಹೀಗಿರುವಾಗ ನಮ್ಮ ಬಂಜಾರ ಸಮಾಜದ ಬಡ ಕುಟುಂಬದಿಂದ ಶ್ರಮಪಟ್ಟು ಓದಿ ವೈದ್ಯರಾಗಿ ಸಮಾಜ ಸೇವೆ ಮಾಡುವ ಮೂಲಕ ಪ್ರಸಿದ್ಧರಾದ ಡಾಕ್ಟರ್ ಚಂದ್ರು ಲಮಾಣಿ ಅವರನ್ನು ಗುರುತಿಸಿ ಬಿಜೆಪಿ ಪಕ್ಷ ಟಿಕೆಟ್ ನೀಡಿ ಗೆಲ್ಲಿಸಿ, ಶಾಸಕರನ್ನಾಗಿ ಮಾಡಿದ್ದರು. ಶಾಸಕರಾಗಿ ಶಿರಹಟ್ಟಿ ಕ್ಷೇತ್ರದಲ್ಲಿ ಅನೇಕ ಅಭಿವೃದ್ಧಿ ಕಾರ್ಯಗಳನ್ನು ಮಾಡಿದ್ದಾರೆ, ಹಾಗೂ ಒಳಮೀಸಲಾತಿ ಬಗ್ಗೆ ಸದನದಲ್ಲಿ ವಿರೋಧಿಸಿದ ಕಾರಣಕ್ಕೆ ಇವರ ಧ್ವನಿ ಅಡಗಿಸಲು ಕಾಂಗ್ರೆಸ್ ನಾಯಕರು ಹಾಗೂ ಕೆಲವು ಸಮಾಜ ಘಾತುಕರು ಸಂಚು ರೂಪಿಸಿ,ಅಮಾಯಕ ಡಾಕ್ಟರ್ ಚಂದ್ರು ಲಮಾಣಿ ಅವರನ್ನು ಲೋಕಾಯುಕ್ತ

ಪೊಲೀಸರ ಮೂಲಕ ದಾಳಿ ಮಾಡಿ ಅವರನ್ನು ರಾಜಕೀಯವಾಗಿ ಮುಗಿಸಲು ಬಂಧಿಸಿರುವುದು ದುರಂತ. ನಮ್ಮ ಬಂಜಾರ ಸಮುದಾಯದ ಆತ್ಮ ವಿಶ್ವಾಸ ಕುಗ್ಗಿಸಲು ಈ ರೀತಿ ಅನೇಕ ಪ್ರಕರಣ ದಾಖಲು ಮಾಡುತ್ತಿರುವುದು ನಾಚಿಕೆಗೇಡಿನ ಸಂಗತಿ,ನಮ್ಮ ರಾಜಕೀಯ ಜೀವನಕ್ಕೆ ತೊಡಕಾಗುತ್ತಾರೆಂದು ಚಿತ್ತಾಪುರ ಕ್ಷೇತ್ರದ ಬಂಜಾರ ಸಮುದಾಯದ ಮುಖಂಡ ಮಣಿಕಂಠ ರಾಠೋಡ ಅವರ ಮೇಲೆ

ಅನೇಕ ಪ್ರಕರಣ ದಾಖಲಿಸಿ ಅವರನ್ನು ಮೂಲೆಗುಂಪು ಮಾಡಲು ಪ್ರಯತ್ನಿಸುತ್ತಿರುವುದು ಇದೇ ಕಾಂಗ್ರೆಸ್ ಪಕ್ಷದ ನಾಯಕರು. ನಾವು ನ್ಯಾಯ ಕೇಳಲು ಹೋರಾಟ ಮಾಡಿದರೆ ಎಫ್. ಐ. ಆರ್. ದಾಖಲಿಸಿ ಮಾನಸಿಕವಾಗಿ ಕುಗ್ಗಿಸಲು ತಂತ್ರ ಹೂಡಿದ್ದು ಇದೇ ಕಾಂಗ್ರೆಸ್ ನಾಯಕರು. ಹೀಗಾಗಿ ಈ ಕೂಡಲೇ ಪ್ರಕರಣವನ್ನು ಕೂಲಂಕುಷವಾಗಿ ಪರಿಶೀಲಿಸಿ ತನಿಖೆ ನಡೆಸಿ,ಇದರ ಪೂರ್ವಾಪರ ವಿಚಾರಣೆ ನಡೆಸಿ ಅಮಾಯಕ ಶಾಸಕರನ್ನು ಬಿಡುಗಡೆಗೊಳಿಸಬೇಕು. ಇದೇ ಥರ ನಮ್ಮ ಬಂಜಾರ ಸಮುದಾಯವನ್ನು

ಹತ್ತಿಕ್ಕಲು ನೀವು ಇಂಥವಾಮಮಾರ್ಗ ಅನುಸರಿಸಿದರೆ ನಾವು ರಾಜ್ಯಾದ್ಯಂತ ನಿಮ್ಮ ವಿರುದ್ಧ ಹೋರಾಡುತ್ತೇವೆ. ನಮ್ಮ ಬಂಜಾರ ಸಮುದಾಯದ ಜನರ ಬೆಂಬಲದಿಂದ ನಿಮಗೆ ಅಧಿಕಾರ ಸಿಕ್ಕಿದೆ, ಇದನ್ನು ಮರೆತ ನಿಮ್ಮನ್ನು ಮುಂದಿನ ದಿನಗಳಲ್ಲಿ ನಿಮಗೆ ಚುನಾವಣೆಗಳಲ್ಲಿ ತಕ್ಕ ಪಾಠ ಕಲಿಸಲು ನಾವೆಲ್ಲ ಸೇರಿ ತಯಾರಾಗಿದ್ದೇವೆ . ಪರಿಶಿಷ್ಟ ಜಾತಿ ಮತ್ತು

ಪರಿಶಿಷ್ಟ ಪಂಗಡಗಳ ಜನರನ್ನು ಮತ್ತು ನಾಯಕರನ್ನು ಗುರಿಯಾಗಿಸಿ ಇಂಥ ಕಾರ್ಯ ಮಾಡುವ ಬದಲು ನಮ್ಮನ್ನು ಬೆಳೆಸುವ ಯೋಜನೆ ತರುವ ಬಗ್ಗೆ ವಿಚಾರ ಮಾಡಬೇಕು ಎಂದರು.

# ಮಾತೋಶ್ರೀ ರಮಾತಾಯಿ ಅಂಬೇಡ್ಕರ್‌ರ 128ನೇ ಜಯಂತ್ಯುತ್ಸವ: ಗೋರನಾಳಕರ್

ಮಲ್ಲಮ್ಮ ನುಡಿ ವಾರ್ತೆ ಬೀದರ್

ನಾಳೆ ಗುರುವಾರ ಬೆಳಿಗ್ಗೆ 11.30 ಗಂಟೆಗೆ ನಗರದ ಪೂಜ್ಯ ಡಾ.ಚನ್ನಬಸವ ಪಟ್ಟದ್ದೇವರ ರಂಗಮಂದಿರದಲ್ಲಿ ಮಾತೋಶ್ರೀ ರಮಾತಾಯಿ ಅಂಬೇಡ್ಕರ್ ಅವರ 128ನೇ ಜಯಂತ್ಯೋತ್ಸವ ನಿಮಿತ್ಯ ಜಿಲ್ಲೆಯ ವಿದ್ಯಾರ್ಥಿಗಳಿಗೆ ಐ.ಎ.ಎಸ್, ಕೆ.ಎ.ಎಸ್ ಪೂರ್ವ ಸಿದ್ದತೆ ಪರಿಕ್ಷೆ ಬಗ್ಗೆ ತರಬೇತಿ, ಕಾನೂನು ಅರಿವು ಹಾಗೂ ನೆರವು ಮತ್ತು ಜಿಲ್ಲಾ ಮಟ್ಟದ ಸಾಂಸ್ಕೃತಿಕ ಸಮಭ್ರಮ ಕಾರ್ಯಕ್ರಮಗಳು ನಡೆಯಲಿವೆ ಎಂದು ಬುದ್ದ ಬೆಳಕು ಟ್ರಸ್ಟ್ ಅಧ್ಯಕ್ಷರು ಜಯಂತ್ಯೋತ್ಸವ ಕಾರ್ಯಕ್ರಮದ ಆಯೋಜಕರಲ್ಲೊಬ್ಬರಾದ ಮಹೇಶ ಗೋರನಾಳಕರ್ ತಿಳಿಸಿದರು.



ನಗರದ ಜಿಲ್ಲಾ ಪತ್ರಿಕಾ ಭವನದಲ್ಲಿ ಪತ್ರಿಕಾಗೋಷ್ಠಿಉದ್ದೇಶಿಸಿ ಮಾತನಾಡಿದ ಅವರು, ಬುದ್ದ ಬೆಳಕು ಟ್ರಸ್ಟ್ ವತಿಯಿಂದ ಜರುಗಲಿರುವ ಈ ಕಾರ್ಯಕ್ರಮವನ್ನು ಬೆಂಗಳೂರು ಅಕ್ಕ ಐಎಎಸ್ ಅಕಾಡೆಮಿ ಅಧ್ಯಕ್ಷರಾದ ಡಾ.ಶಿವಕುಮಾರ ಉದ್ಘಾಟಿಸಲಿದ್ದು, ಮಾತೋಶ್ರೀ ರಮಾತಾಯಿ ಅಂಬೇಡ್ಕರ್ ಜಯಂತ್ಯೋತ್ಸವ ಸಮಿತಿ ಅಧ್ಯಕ್ಷೆ ನಂದಮ್ಮ ಕುಂದೆ ಅಧ್ಯಕ್ಷತೆ ವಹಿಸುವರು. ಮುಖ್ಯ ಅತಿಥಿಗಳಾಗಿ ಸರ್ಕಾರದ ನಿವೃತ್ತ ಅಪರ ಕಾರ್ಯದರ್ಶಿ ಡಾ.ಭೀಮಸೇನರಾವ ಶಿಂಧೆ, ನಿವೃತ್ತ ಎಇ ಮಲ್ಲಿಕಾರ್ಜುನ ಸುಬಾನೆ ಹಾಗೂ ಮನೆ ಮನೆಗೆ ಅಂಬೇಡ್ಕರ್ ಅಭಿಯಾನ ಅನುಷ್ಠಾನ ಸಮಿತಿ ಅಧ್ಯಕ್ಷರಾದ ಡಾ.ಕಾಶಿನಾಥ ಚಲವಾ ಮುಖ್ಯ ಅತಿಥಿಗಳಾಗಿ ಭಾಗವಹಿಸುವರು. ಜಯಂತ್ಯೋತ್ಸವ ಸಮಿತಿಯ ಗೌರವಾಧ್ಯಕ್ಷೆ ಉಷಾಬಾಯಿ ಬನಸೊಡೆ, ಕಾರ್ಯಾಧ್ಯಕ್ಷೆ ಕಲ್ಪನಾ ಗೋರನಾಳಕರ್, ಸಮಾಜ ಕಲ್ಯಾಣ ಇಲಾಖೆಯ ಸಹಾಯಕ ನಿರ್ದೇಶಕ ಅನಿಲಕುಮಾರ ಮೇಲ್ದೊಡ್ಡಿ, ಸಾಮಾಜಿಕ ಹೋರಾಟಗಾರ ಮನೋಜ ವಾಲೆ ಸೇರಿದಂತೆ ಸಮಿತಿಯ ಇತರೆ ಪದಾಧಿಕಾರಿಗಳು ಭಾಗವಹಿಸುವರು. ಸಾಂಸ್ಕೃತಿಕ ಸಂಭ್ರಮ ಕಾರ್ಯಕ್ರಮವನ್ನು ಹುಮನಾಬಾದ್ ಮಾಜಿ ತಾ.ಪಂ ಸ್ಥಾಯಿ ಸಮಿತಿ ಅಧ್ಯಕ್ಷ ಬಾಬು ಟೈಗರ್ ಉದ್ಘಾಟಿಸಲಿದ್ದು, ಶಶಿಕಲಾ ಶರ್ಮಾ, ಮಹಾದೇವಿ ಕಸ್ತುರೆ, ಕಮಳಮ್ಮ ಸಂತಪುರೆ ಹಾಗೂ ಗಂಗಮ್ಮ ಫುಲೆ ಉಪಸ್ಥಿತರಿವರು ಎಂದವರು ಹೇಳಿದರು.

ಮನೆ ಮನೆಗೆ ಅಂಬೇಡ್ಕರ್ ಅಭಿಯಾನ ಅನುಷ್ಠಾನ ಸಮಿತಿ ಅಧ್ಯಕ್ಷರಾದ ಡಾ.ಕಾಶಿನಾಥ ಚಲವಾ ಈ ಸಂದರ್ಭದಲ್ಲಿ ಮಾತನಾಡಿ, ಮಾತೋಶ್ರೀ ರಮಾತಾಯಿ ಅಂಬೇಡ್ಕರ್ ಅವರು ಮಹಾರಾಷ್ಟ್ರ ರಾಜ್ಯದ ರತ್ನಗಿರಿ ಜಿಲ್ಲೆಯ ವನಂದಾ ಗ್ರಾಮದಲ್ಲಿ 7 ಫೆಬ್ರವರಿ 1898ರಂದು ಜನಿಸಿದರು. ಅವರ ವಿಚಾರಧಾರೆಗಳನ್ನು ಪರಿಚಯಿಸುವ ಹಾಗೂ ಅವರ ತ್ಯಾಗಮಯಿ ಬದುಕು ತಿಳಿಸುವ ಕಾರ್ಯಕ್ರಮ ಇದಾಗಿರುತ್ತದೆ ಎಂದರು.

ಜಯಂತ್ಯೋತ್ಸವ ಸಮಿತಿ ಅಧ್ಯಕ್ಷೆ ನಂದಮ್ಮ ಕುಂದೆ ಮಾತನಾಡಿ, ಇದು ಕೇವಲ ಅಂಬೇಡ್ಕರ್ ವಾದಿಗಳು ಹಾಗೂ ಬೌದ್ಧ ಅನುಯಾಯಿಗಳ ಕಾರ್ಯಕ್ರಮ ಆಗಿರದೆ ಇಡೀ ಮಹಿಳಾ ಸಮೂಹದ ಕಾರ್ಯಕ್ರಮ ಇದಾಗಿರುತ್ತದೆ. ಈ ಅಪರೂಪದ ಕಾರ್ಯಕ್ರಮಕ್ಕೆ ಎಲ್ಲ ಸಮುದಾಯದ ಮಹಿಳೆಯರು ಸಾಕ್ಷಿಗಳಾಗಬೇಕೆಂದು ಕೋರಿದರು. ಯುವ ಮುಖಂಡ ಶರಣು ಫುಲೆ ಪತ್ರಿಕಾಗೋಷ್ಠಿಯಲ್ಲಿದ್ದರು.

# 53, ಅಂಗನವಾಡಿ ಕಾರ್ಯಕರ್ತೆ, 165 ಸಹಾಯಕಿಯರ ಖಾಲಿ ಹುದ್ದೆಗೆ ಅರ್ಜಿ ಆಹ್ವಾನ

ಮಲ್ಲಮ್ಮ ನುಡಿ ವಾರ್ತೆ ಯಾದಗಿರಿ

ಯಾದಗಿರಿ ಜಿಲ್ಲೆಯಲ್ಲಿ ವಿವಿಧ ಕಾರಣಗಳಿಂದ ಖಾಲಿ ಇರುವ 53–ಅಂಗನವಾಡಿ ಕಾರ್ಯಕರ್ತೆ ಹಾಗೂ 165–ಅಂಗನವಾಡಿ ಸಹಾಯಕಿಯರ ಗೌರವಸೇವೆಗಳ ನೇಮಕಾತಿಕೈಗೊಳ್ಳಲು ಜಿಲ್ಲಾಧಿಕಾರಿಗಳು ಅನುಮತಿ ನೀಡಿದ್ದು, ಜಿಲ್ಲೆಯ ಅಂಗನವಾಡಿ ಕಾರ್ಯಕರ್ತೆ ಹಾಗೂ ಸಹಾಯಕಿಯರ ಖಾಲಿ ಹುದ್ದೆಗಳ ವಿವರ ಯೋಜನೆ ಶಹಾಪೂರ ಕಾರ್ಯಕರ್ತೆ 12, ಸಹಾಯಕಿ 56, ಖಾಲಿ ಹುದ್ದೆಗಳ ಇದೆ. ಸುರಪುರ ಕಾರ್ಯಕರ್ತೆ 23 ಸಹಾಯಕಿ 54 ಖಾಲಿ ಹುದ್ದೆಗಳ ಇದೆ. ಯಾದಗಿರಿ ಕಾರ್ಯಕರ್ತೆ 11 ಸಹಾಯಕಿ 31 ಖಾಲಿ ಹುದ್ದೆಗಳ ಇದೆ. ಗುರುಮಠಕಲ್ ಕಾರ್ಯಕರ್ತೆ 07 ಸಹಾಯಕಿ 24 ಖಾಲಿ ಹುದ್ದೆಗಳ ಇದೆ. ಕಾರ್ಯಕರ್ತೆ 53 ಸಹಾಯಕಿ 165 ಖಾಲಿ ಹುದ್ದೆಗಳ ನೇಮಕಾತಿಗಾಗಿ ಆನ್‌ಲೈನ್ ಅಧಿಸೂಚನೆ ಹೊರಡಿಸಲು ಕ್ರಮವಹಿಸಲಾಗಿದ್ದು, ವೆಬ್‌ಸೈಟ್ ತಾಂತ್ರಿಕ ಸಮಸ್ಯೆಯ ಕಾರಣ ಅಲ್ಪ ವಿಳಂವಾಗಲಿದ್ದು, ಸಧ್ಯದಲ್ಲಿಯೇ ಆನ್‌ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದೆ ಯಾದಗಿರಿ ಎಂದು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಉಪ ನಿರ್ದೇಶಕರು ತಿಳಿಸಿದ್ದಾರೆ.

ಜಿಲ್ಲೆಯಲ್ಲಿ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಮೂಲಕ "ಮಿಷನ್ ಶಕ್ತಿ" ಯೋಜನೆಯಡಿ ಅನುಷ್ಠಾನಗೊಳ್ಳುತ್ತಿರುವ ಯೋಜನೆಗಳು ಸಂಬಾಲ್ ಅಡಿಯಲ್ಲಿ ಸಖಿ ಒನ್ ಸ್ಟಾಪ್ ಸೆಂಟರ್, ಮಹಿಳಾ ಸಹಾಯವಾಣಿ (181), ಬೇಟಿ ಬಚಾವೋ ಬೇಟಿ ಪಢಾವೋ, ನಾರಿ ಅದಾಲತ್ ಹಾಗೂ ಸಾಮರ್ಥ್ಯ ಅಡಿಯಲ್ಲಿ ಶಕ್ತಿ ಸದನ (ಸ್ವಾಧಾರಗೃಹ), ಪ್ರಧಾನ ಮಂತ್ರಿ ಮಾತೃವಂದನಾ ಯೋಜನೆ, ಮಹಿಳಾ ಸಬಲೀಕರಣ ಘಟಕ ಮತ್ತು ಅಕ್ಕಪಡೆ ಯೋಜನೆಗಳ ಪ್ರಗತಿ ಪರಿಶೀಲನೆಯನ್ನು ಕೈಗೊಂಡು ಮಿಷನ್ ಶಕ್ತಿ ಯೋಜನೆಯ ಮೂಲಕ ಮಹಿಳಾ ಪರ ಹೆಚ್ಚು ಹೆಚ್ಚು ಅರಿವು ಕಾರ್ಯಕ್ರಮಗಳು ಆಯೋಜಿಸುವಂತೆ ಮಾನ್ಯ ಜಿಲ್ಲಾಧಿಕಾರಿಗಳು ಸೂಚಿಸಿದರು. ಸಖಿ ಒನ್ ಸ್ಟಾಪ್ ಸೆಂಟರ್ ಮೂಲಕ ದಿನದ 24*7 ಗಂಟೆಗಳ ಕಾಲ ನೊಂದ ಮಹಿಳೆಯರಿಗೆ ಒಂದೇ ಸೂರಿನಡಿ ವೈದ್ಯಕೀಯ ನೆರವು, ಆಪ್ತ ಸಮಾಲೋಚನೆ, ಪೋಲೀಸ್ ನೆರವು, ಕಾನೂನು ನೆರವು ಹಾಗೂ ತಾತ್ಕಾಲಿಕ ವಸತಿ ಸೌಲಭ್ಯ ಸೇವೆಗಳನ್ನು ಇಲ್ಲಿಯವರೆಗೆ ಒಟ್ಟು 729–ಮಹಿಳೆಯರಿಗೆ ಒದಗಿಸಲಾಗಿರುತ್ತದೆ. 2026ರ ಜನವರಿ ಮಾಹೆಯಲ್ಲಿ 24–ಮಹಿಳೆಯರು ಸಖಿಯ ಆಶ್ರಯ ಪಡೆದಿರುತ್ತಾರೆ. ಇತ್ತೀಚಿಗೆ ನಗರದಲ್ಲಿ ಕಾರ್ಯನಿರ್ವಹಿಸುತ್ತಿರುವ ಸಖಿ ಒನ್ ಸ್ಟಾಪ್ ಸೆಂಟರ್‌ಗೆ ಮಾನ್ಯ ಜಿಲ್ಲಾಧಿಕಾರಿಗಳು ಭೇಟಿ ನೀಡಿ ಆಡಳಿತಾಧಿಕಾರಿಗಳ ಕಾರ್ಯಕ್ಷಮತೆ ಕೊರತೆ ಮತ್ತು ಕೆಲಸದಲ್ಲಿನ ನಿರಾಸಕ್ತಿಯಿಂದಾಗಿ ಕೇಂದ್ರದ ಚಟುವಟಿಕೆಗಳ ಬಗ್ಗೆ ತೀವ್ರ ಅಸಮಾಧಾನ ವ್ಯಕ್ತಪಡಿಸಿ, ತರಾ–ಟೆಗೆ ತೆಗೆದುಕೊಂಡಿರುತ್ತಾರೆ. ಮತ್ತು ಅಸಮರ್ಪಕ ಕಾರ್ಯನಿರ್ವಹಿಸುತ್ತಿರುವ ಸಖಿ ಒನ್ ಸ್ಟಾಪ್ ಸೆಂಟರ್ ನ ಆಡಳಿತಾಧಿಕಾರಿಗಳು ಹಾಗೂ ಇತರೆ ಸಿಬ್ಬಂದಿಗಳನ್ನು ಸೇವೆಯಿಂದ ವಜಾಗೊಳಿಸಿ, ಸದರಿ ಹುದ್ದೆಗಳಿಗೆ ಅರ್ಹ ಅಭ್ಯರ್ಥಿಗಳನ್ನು ನೇಮಕ ಮಾಡಿಕೊಳ್ಳಲು ಹಾಗೂ ಜಿಲ್ಲಾ ಮಹಿಳಾ ಸಬಲೀಕರಣ ಘಟಕವನ್ನು ಸಖಿ ಸೆಂಟರ್‌ಗೆ ವರ್ಗಾಯಿಸಿ ಕಾರ್ಯನಿರ್ವಹಿಸುವಂತೆ ಕ್ರಮವಹಿಸಲು ಸೂಚಿಸಿದರು. ಸಖಿ ಒನ್ ಸ್ಟಾಪ್ ಸೆಂಟರ್‌ನ ಕಾರ್ಯಕ್ಷಮತೆಯನ್ನು ವೃದ್ಧಿಸಲು ಸಿ.ಸಿ.ಟಿ.ವಿ ಕ್ಯಾಮೆರಾ ನಿರಂತರ ನಿಗಾವಹಿಸಲು ಮೊಬೈಲ್‌ನಲ್ಲಿ ಇನ್‌ಸ್ಟಾಲ್ ಮಾಡಿಕೊಳ್ಳುವುದಲ್ಲದೇ, ಕಾರ್ಯನಿರ್ವಹಿಸುವ ಸಿಬ್ಬಂದಿಗಳ ಹಾಜರಾತಿ ಮತ್ತು ಕೇಂದ್ರದಲ್ಲಿ ಕಳೆಯುವ ಕಾಲದ ಆಧಾರದ ಮೇಲೆ ಗೌರವಧನ ಪಾವತಿಸುವಂತೆ ಕ್ರಮವಹಿಸುವಂತೆ ತಿಳಿಸಿದರು. ಮಹಿಳೆಯರ ರಕ್ಷಣೆ ಹಾಗೂ ಪ್ರಗತಿಗಾಗಿ, ಹೆಣ್ಣು ಮಕ್ಕಳ ಶಿಕ್ಷಣಕ್ಕಾಗಿ ಅಭಿವೃದ್ಧಿ ಪರ ಕಾರ್ಯಕ್ರಮಗಳನ್ನು ಕೈಗೊಂಡು ಕಾರ್ಯನಿರ್ವಹಿಸಲು ಇಲಾಖಾ ಅಧಿಕಾರಿಗಳಿಗೆ ಸೂಚಿಸಿದರು. ಮಹಿಳೆಯರ ಸಹಾಯಕ್ಕಾಗಿ ತುರ್ತು ವಾಹನ ಸೌಲಭ್ಯ ಒದಗಿಸಲು ಮಹಿಳಾ ಸಹಾಯವಾಣಿ 181, ಪೋಲಿಸ್ ಸಹಾಯವಾಣಿ 112, ಸಖಿ ಒನ್ ಸ್ಟಾಪ್ ಸೆಂಟರ್‌ನ ದೂ.ಸಂ. 08473200028, ಸಖಿ ಒನ್ ಸ್ಟಾಪ್ ಸೆಂಟರ್‌ನ ಆಪ್ತಸಮಾಲೋಚಕಿ ಮಾಲಾಶ್ರೀ 7026203535, ಜಿಲ್ಲಾ ಮಹಿಳಾ ಸಬಲೀಕರಣ ಘಟಕದ ಲಿಂಗತಜ್ಞರಾದ ಬಸಲಿಂಗಮ್ಮ 7975131103 ಹಾಗೂ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಅಧಿಕಾರಿಗಳು ಭೀಮರಾಯ 9945089111ಗೆ ಸಂಪರ್ಕಿಸಬಹುದು. ಹೆಚ್ಚಿನ ಮಾಹಿತಿಗಾಗಿ ಆಯಾ ತಾಲ್ಲೂಕಿನ ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳ ಕಛೇರಿ ಅಥವಾ ಮಿನಿವಿಧಾನ ಸೌಧದಲ್ಲಿ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಉಪ ನಿರ್ದೇಶಕರ ಕಛೇರಿಗೆ ಸಂಪರ್ಕಿಸಬಹುದು ಎಂದು ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಮಹಿಳೆಯರು ಆರ್ಥಿಕವಾಗಿ ಸಬಲರಾಗಬೇಕು

• ಮಲ್ಲಮ್ಮ ನುಡಿ ವಾರ್ತೆ ಯಾದಗಿರಿ



ಮಹಿಳೆಯರು ಆರ್ಥಿಕವಾಗಿ ಸಬಲರಾಗಿ ಸ್ವತಂತ್ರ ಬದುಕು ಕಟ್ಟಿಕೊಳ್ಳಬೇಕೆಂದು ಶಾಸಕ ಶರ–ಣಗೌಡ ಕಂದಕೂರ ಹೇಳಿದರು.

ಇಲ್ಲಿನ ತಮ್ಮ ಜನ ಸಂಪರ್ಕ ಕಚೇರಿಯಲ್ಲಿ ಶನಿವಾರ ಡಿ.ದೇವರಾಜ ಅರಸು ಹಿಂದುಳಿದ ವರ್ಗಗಳ ನಿಗಮದಿಂದ ಆಯೋಜಿಸಿದ್ದ ಗುರುಮಠಕಲ್ ಮತಕ್ಷೇತ್ರದ 21 ಫಲಾನುಭವಿಗಳಿಗೆ ಹೊಲಿಗೆ ಯಂತ್ರ ವಿತರಿಸಿ ಮಾತನಾಡಿದರು.

ಸರ್ಕಾರ ನೀಡಿರುವ ಹೊಲಿಕೆ ಯಂತ್ರಗಳಿಂದ ಸ್ವಯಂ ಉದ್ಯೋಗಿಗಳಾಗಬೇಕು. ಇನ್ನೂ 19 ಜನಕ್ಕೆ ಹೊಲಿಕೆ ಯಂತ್ರಗಳು ಮಂಜೂರು ಆಗಿದ್ದು, ಅವುಗಳು ಸಹ ಇಷ್ಟರಲ್ಲಿಯೇ ವಿತರಿಸಲಾಗುವುದೆಂದರು.

ಅವಕಾಶ ನೀಡಿದರೇ ಏನೆಲ್ಲ ಸಾಧನೆ ಮಾಡುವ ಶಕ್ತಿ ಮಹಿಳೆಯರಲ್ಲಿ ಇದೆ. ಪುರುಷರಾದವರು ಅವರಿಗೆ ಸಮಾನ ಹಕ್ಕುಗಳನ್ನು ನೀಡಿ ಸಮಾಜದ ಮುಖ್ಯವಾಹಿನಿಯಲ್ಲಿ ಬರುವಂತೆಯೇ ನೋಡಿಕೊಳ್ಳಬೇಕೆಂದರು. ವಿವಿಧ ಇಲಾಖೆಗಳಿಂದ ಏನೆಲ್ಲ ಸೌಲಭ್ಯಗಳು ಮಹಿಳೆಯರಿಗೆ ಸಿಗಬೇಕೋ, ಅದೆಲ್ಲವೂ ಸಕಾಲಕ್ಕೆ ಒದಗಿಸಿಕೊಡಲು ತಾವು ಸಿದ್ದವೆಂದು ಶಾಸಕ ಕಂದಕೂರ ಭರವಸೆ ನೀಡಿದರು.

> "ಹೆಣ್ಣು ಮಕ್ಕಳಿಗೆ ಉನ್ನತ ಶಿಕ್ಷಣ ಕೊಡಿಸಿ, ಅವರಿಗೆ ಬೇಗನೆ ಮತ್ತು ಬಾಲ್ಯವಿವಾಹ ಮಾಡಬೇಡಿ ಎಂದು ಸಲಹೆ ನೀಡಿದ ಶಾಸಕರು, ಹಳ್ಳಿಗಳಲ್ಲಿ ವಿದ್ಯಾವಂತ ಮಹಿಳೆಯರು ಈ ಬಗ್ಗೆ ಅರಿವು ಮೂಡಿಸಬೇಕೆಂದರು.

ನಿಗಮದ ಜಿಲ್ಲಾ ವ್ಯವಸ್ಥಾಪಕಿ ಟಿ. ಪ್ರೀಯದರ್ಶನಿ ಪ್ರಾಸ್ತಾವಿಕವಾಗಿ ಮಾತನಾಡಿ, ಯೋಜನೆಗಳ ಕುರಿತು ವಿವರಿಸಿದರು. ಸಹಾಯಕ ಅಭಿವೃದ್ಧಿ ಅಧಿಕಾರಿ ಮೌನೇಶ ನಿರೂಪಿಸಿದರು. ಡಿಎಸ್ ಮಹಿಳಾ ಘಟಕದ ಪ್ರತಿನಿಧಿಗಳಾದ ಪರಿಮಳ ಚಾಮನಳ್ಳಿ, ಅಶ್ವಿನಿ ಯಡ್ಡಳ್ಳಿ, ಸಾವಿತ್ರಿ ಯಡ್ಡಳ್ಳಿ, ಶಿಲ್ಪಾ ಬಸವರಾಜ, ಅನುಸೂಯ ತಿಮ್ಮಪ್ಪ ಸೇರಿದಂತೆ–ಯೇ ಇತರರಿದ್ದರು.

# 431ನೇ ವಿಜೃಂಭಣೆ ವರ್ಧಂತಿ ಉತ್ಸವ



**ಮಲ್ಲಮ್ಮ ನುಡಿ ವಾರ್ತೆ, ಸಿಂಧನೂರು**

ಶ್ರೀ ರಾಘವೇಂದ್ರ ಸ್ವಾಮಿಗಳ ಮಠದಲ್ಲಿ ಮಂಗಳವಾರ ರಾಯರ ವರ್ಧಂತಿ ಉತ್ಸವದಲ್ಲಿ ನಡೆದ ಅಷ್ಟಾಕ್ಷರ ಹೋಮ ನಡೆಯಿತು 2-ಹೋಮದಲ್ಲಿ ಪಾಲ್ಗೊಂಡ ಮಾಜಿ ಸಂಸದ ಕೆ.ವಿರುಪಾಕ್ಷಪ್ಪ 3-ವರ್ಧಂತಿ ಮಹೋತ್ಸವದಲ್ಲಿ ರಾಯರ ಪ್ರಸಾದ ಸ್ವೀಕರಿಸಿದ ಭಕ್ತ ಸಮೂಹ – ಶ್ರೀ ಗುರುರಾಯರ ಅಷ್ಟಾಕ್ಷರ ಹೋಮ;ವಿಬ್ರಂಬಣೆಯಿಂದ ನಡೆದ ವರ್ಧಂತಿ ಉತ್ಸವ-ಸಿಂಧನೂರು24:- ನಗರದ ರಾಘವೇಂದ್ರ ಸ್ವಾಮಿ ಮಠದಲ್ಲಿ ಮಂಗಳವಾರ ರಾಯರ 431ನೇ ವರ್ಧಂತಿ ಉತ್ಸವವು ವಿದ್ರಂಬಣೆಯಿಂದ ವಿಜ್ರಂಬಣೆ ಯಿಂದ ನಡೆಯಿತು. ಬೆಳಿಗ್ಗೆ ರಾಯರ ಬೃಂದಾವನಕ್ಕೆ ವಿಶೇಷ ಪೂಜೆ ಅಲಂಕಾರ ಮಾಡಲಾಗಿತ್ತು. ವರ್ಧಂತಿ ಉತ್ಸವದ ಪ್ರಯುಕ್ತ ಶ್ರೀ ಗುರುರಾಯರ ಅಷ್ಟಾಕ್ಷರ ಹೋಮವನ್ನು ಅರ್ಚಕ ಶಂಕರಾಚಾರ್ಯ ಆಲಂಪಲ್ಲಿ ನಡೆಸಿದರು. ನಂತರ ವಿವಿಧ ಭಜನಾ ಮಂಡಳಿಗಳಿಂದ ಭಜನೆ ನಡೆಯಿತು. ನೂರಾರು ಭಕ್ತರ ಸಮ್ಮುಖದಲ್ಲಿ ರಥೋತ್ಸವವು ಜರುಗಿತು. ಶ್ರೀ ಮಠದ ವತಿಯಿಂದ ಭಕ್ತರಿಗೆ ಪ್ರಸಾದದ ವ್ಯವಸ್ಥೆ ಕಲ್ಪಿಸಲಾಗಿತ್ತು. ಮಠದ ವಿಚಾರಣಾಕರ್ತ ರಾಘವೇಂದ್ರ ರಾವ್ ಕುಲಕರ್ಣಿ, ನವೀನ್ ಆಚಾರ್, ಪಂಡಿತರಾದ ಗುರುರಾಜ ದಾಸ್, ರಾಮಕೃಷ್ಣ ಆಚಾರ್ಯ ಗೋನವಾರ,

ಮಠಾಧಿಕಾರಿ ನರಸಿಂಹ ಆಚಾರ್ಯ ಪುರೋಹಿತ, ನಗರಸಭೆ ಪೌರಾಯುಕ್ತ ಪಾಂಡುರಂಗ ಇಟಗಿ, ನಗರಸಭೆ ಮಾಜಿ ಸದಸ್ಯ ಸದಸ್ಯರಾದ ಚಂದ್ರಶೇಖರ್ ಮೈಲಾರ, ವೆಂಕಟರಾವ್ ಬಂಡಿ, ಪತ್ರಕರ್ತರ ಸಂಘದ ಅಧ್ಯಕ್ಷ ಶರಣಪ್ಪ ಬೇರ್ಗಿ, ಮುಖಂಡರಾದ ರಾಜೇಂದ್ರಗೌಡ ಬಾದರ್ಲಿ, ಶಶಿಧರಗೌಡ ವಕೀಲ, ಮಹೇಶ ಸೌದ್ರಿ ಅನೇಕರು ಭಾಗವಹಿಸಿದ್ದರು.

# ಇತಿಹಾಸ ಪ್ರಸಿದ್ಧ : ಸಿಡಿಬಂಡಿ ರಥೋತ್ಸವ ಶ್ರೀ ಕನಕ ದುರ್ಗಮ್ಮ ದೇವಿಗೆ ವಿಶೇಷ ಅಲಂಕಾರ

• **ಮಲ್ಲಮ್ಮ ನುಡಿ ವಾರ್ತೆ ಬಳ್ಳಾರಿ**

ನಗರದ ಅಧಿದೇವತೆ ಶ್ರೀ ಕನಕ ದುರ್ಗಮ್ಮ ದೇವಿ ಸಿಡಿಬಂಡಿ ರಥೋತ್ಸವ ನಿಮಿತ್ತ ಮಂಗಳವಾರ ಬೆಳಿಗ್ಗೆ ದೇವಾಲಯದಲ್ಲಿ ವಿಶೇಷ ಪೂಜೆಗಳು ವಿಜೃಂಭಣೆಯಿಂದ ನೆರವೇರಿದವು. ಬೆಳಿಗ್ಗೆ ವಿಶೇಷ ಅಭಿಷೇಕ, ಅರ್ಚನೆ, ಚಿನ್ನಾಭರಣಗಳಿಂದ ವಿಶೇಷ ಅಲಂಕಾರ, ಮಹಾನೈವೇದ್ಯ, ಮಂಗಳಾರತಿ ಸೇರಿದಂತೆ ವಿವಿಧ ಪೂಜೆಗಳು ವಿಜೃಂಭಣೆಯಿಂದ ನಡೆದವು. ಸಿಡಿಬಂಡಿ ಉತ್ಸವ ಹಿನ್ನೆಲೆ ಮಾಜಿ ಸಚಿವ, ಗ್ರಾಮೀಣ ಶಾಸಕ ಬಿ.ನಾಗೇಂದ್ರ, ಬಳ್ಳಾರಿ ನಗರ ಶಾಸಕ ನಾರಾ ಭರತ್ ರೆಡ್ಡಿ, ರಾಜ್ಯಸಭಾ ಸದಸ್ಯ ಡಾ.



ಸೈಯದ್ ನಾಸಿರ್ ಹುಸೇನ್, ಸಂಸದ ಈ.ತುಕಾರಾಂ, ಪಾಲಿಕೆ ಮೇಯರ್ ಪಿ.ಗಾದೆಪ್ಪಾ, ಮಾಜಿ ಸಚಿವ ಬಿ.ಶ್ರೀರಾಮಲು, ಮಾಜಿ ಶಾಸಕ ಗಾಲಿ ಸೋಮಶೇಖರ್ ರೆಡ್ಡಿ, ವಿಧಾನ ಪರಿಷತ್ ಸದಸ್ಯ ವೈ.ಎಂ.ಸತೀಶ್ ಸೇರಿದಂತೆ ಮಹಾನಗರ ಪಾಲಿಕೆ ಸದಸ್ಯರು ವಿವಿಧ ಗಣ್ಯರು, ಅಧಿಕಾರಿಗಳು ದೇಗುಲಕ್ಕೆ ತೆರಳಿ ವಿಶೇಷ ಪೂಜೆ, ಅರ್ಚನೆ ಸಲ್ಲಿಸಿ ಭಕ್ತಿ ಸಮರ್ಪಿಸಿದರು.

# ಸಂಘಟನೆಯೇ ಬದಲಾವಣೆಯ ಶಕ್ತಿ: ಹೊರಟ್ಟಿ

• **ಮಲ್ಲಮ್ಮ ನುಡಿ ವಾರ್ತೆ ಬೀದರ**

ಸಂಘಟನೆ ಎನ್ನುವುದು ಬಹಳ ಮುಖ್ಯ, ನೀವು ಎಲ್ಲರೂ ಮಹಿಳಾ ಸಂಘವನ್ನು ಕಟ್ಟಿಕೊಂಡು ರಾಜ್ಯವ್ಯಾಪಿ ಸಂಘಟನೆ ರೂಪಿಸುತ್ತಿರುವುದು ಶ್ಲಾಘನೀಯವಾಗಿದೆ ಎಂದು ವಿಧಾನ ಪರಿಷತ್ತಿನ ಸಭಾಪತಿಗಳಾದ ಬಸವರಾಜ ಹೊರಟ್ಟಿ ಅವರು ಅಭಿಪ್ರಾಯ ವ್ಯಕ್ತಪಡಿಸಿದ್ದಾರೆ.

ಅವರು ಸೋಮವಾರ ಪೂಜ್ಯ ಚೆನ್ನಬಸವ ಪಟ್ಟದೇವರ ರಂಗಮಂದಿರದಲ್ಲಿ ಅಖಿಲ ಕರ್ನಾಟಕ ರಾಜ್ಯ ಸರಕಾರಿ ಮಹಿಳಾ ನೌಕರರ ಸಂಘ ಜಿಲ್ಲಾ ಘಟಕದ ವತಿಯಿಂದ ಹಮ್ಮಿಕೊಂಡಿದ್ದ ಜಿಲ್ಲಾ ಘಟಕದ ಉದ್ಘಾಟನೆ, ಮತ್ತು ಪದಗ್ರಹಣ ಕಾರ್ಯಕ್ರಮ ಹಾಗೂ ಸರಕಾರಾದ ಯೋಜನೆಗಳ ಅನುಷ್ಠಾನ ಮತ್ತು ಆಡಳಿತದಲ್ಲಿ ಮಹಿಳೆಯರ ಪಾತ್ರ ಕುರಿತು ಒಂದು ದಿನದ ಕಾರ್ಯಾಗಾರ ಕುರಿತು ಕಾರ್ಯಕ್ರಮ ಉದ್ಘಾಟಿಸಿ



ಅವರು ಮಾತನಾಡಿದರು

ಬೀದರ್‌ನಲ್ಲಿ ಇಷ್ಟೊಂದು ದೊಡ್ಡ ಮಟ್ಟದ ಕಾರ್ಯಕ್ರಮ ಆಯೋಜಿಸಿರುವುದು ನನಗೆ ಅಪಾರ ಸಂತೋಷ ತಂದಿದೆ ಎಂದ ಅವರು ಹೆಣ್ಣು ಮಕ್ಕಳು ಸಮಾಜದ ಎಲ್ಲಾ ರಂಗಗಳಲ್ಲಿ ಪ್ರಾಮಾಣಿಕವಾಗಿ ಕಾರ್ಯನಿರ್ವಹಿಸುತ್ತಾರೆ ಎಂದು ಪ್ರಶಂಸಿದರು, ಇನ್ನಷ್ಟು ಸಂಘಟಿ-ತರಾಗಿ ಒಗ್ಗಟ್ಟು ಪ್ರದರ್ಶಿಸುವುದು ಅಗತ್ಯವೆಂದರು. ತಮ್ಮ ಹಕ್ಕುಗಳಿಗಾಗಿ ನಿರಂತರ ಹೋರಾಟ ಮಾಡುವುದು ತುಂಬಾ ಅವಶ್ಯಕ. ಹೋರಾಟದ ಮೂಲಕವೇ ಬದಲಾವಣೆ ಸಾಧ್ಯ ಎಂದು ಸಭಾಪತಿಗಳು ಅಭಿಪ್ರಾಯಪಟ್ಟರು.

ತಮ್ಮ ಜೀವನ ಅನುಭವವನ್ನು ಹಂಚಿಕೊಂಡ ಅವರು, ನಾನು ಕೂಡ ಚಿಕ್ಕ ವಯಸ್ಸಿನಿಂದಲೇ ಹೋರಾಟದ ಮೂಲಕವೇ ಈ ಹಂತಕ್ಕೆ ಬಂದವನು. ನಿಮ್ಮ ಸಂಘದ ಹೋರಾಟಗಳಲ್ಲಿ ನಾನು ಸದಾ ನಿಮ್ಮ ಜೊತೆ ಇರುತ್ತೇನೆ, ಎಂದು ಭರವಸೆ ನೀಡಿದರು.

ಅರಣ್ಯ, ಜೀವಿಶಾಸ್ತ್ರ ಮತ್ತು ಪರಿಸರ ಹಾಗೂ ಬೀದರ ಜಿಲ್ಲಾ ಉಸ್ತುವಾರಿ ಸಚಿವರಾದ ಈಶ್ವರ ಬಿ.ಖಂಡ್ರೆ ಅವರು ಮಾತನಾಡಿ, ಮಹಿಳೆ ಮತ್ತು ಪುರುಷರು ಸಮಾಜದಲ್ಲಿ ಒಂದೇ ನಾಣ್ಯದ ಎರಡು ಮುಖಗಳಂತೆ. ಇವರಿಬ್ಬರೂ ಇದ್ದಾಗ ಮಾತ್ರ ಮಾನವ ಸಮಾಜದ ಸೃಷ್ಟಿ ಹಾಗೂ ಪ್ರಗತಿ ಸಾಧ್ಯವಾಗುತ್ತದೆ ಎಂದು ಹೇಳಿದರು.

ಇಂದಿನ ಕಾಲಘಟ್ಟದಲ್ಲಿ ಮಹಿಳೆಯರು ಪ್ರತಿಯೊಂದು ಕ್ಷೇತ್ರದಲ್ಲೂ ಮುಂಚೂಣಿಯಲ್ಲಿ ಗುರುತಿಸಿಕೊಂಡಿದ್ದಾರೆ. ದೇಶದ ಅತ್ಯುನ್ನತ ಹುದ್ದೆಗಳಿಂದ ಹಿಡಿದು ವಿಜ್ಞಾನ, ಆಡಳಿತ, ಅಂತರಿಕ್ಷ ಕ್ಷೇತ್ರಗಳವರೆಗೂ ಮಹಿಳೆಯರು ಸಾಧನೆ ಮಾಡಿರುವುದನ್ನು ಉಲ್ಲೇಖಿಸಿದ ಅವರು, ದ್ರೌಪದಿ ಮುರ್ಮು, ಇಂದಿರಾ ಗಾಂಧಿ, ಮದರ್ ತೆರೆಸಾ, ಕಲ್ಪನಾ ಚಾವ್ಲಾ ಮುಂತಾದ ಮಹನೀಯರ ಸಾಧನೆಯನ್ನು ಸ್ಮರಿಸಿದರು. ಐಎಎಸ್, ಐಪಿಎಸ್, ವಿಜ್ಞಾನಿಗಳು ಸೇರಿದಂತೆ ವಿವಿಧ ಇಲಾಖೆಗಳಲ್ಲಿಯೂ ಮಹಿಳೆಯರು ಸಮರ್ಥವಾಗಿ ಕಾರ್ಯನಿರ್ವಹಿಸುತ್ತಿದ್ದಾರೆ .

# ಪಕ್ಷ ಕೊಟ್ಟಿರುವ ಜವಾಬ್ದಾರಿಯನ್ನು ನಿಸ್ವಾರ್ಥ ಸೇವೆಯಿಂದ ಮಾಡುವೆ: ಭಾರತಿ

• **ಮಲ್ಲಮ್ಮ ನುಡಿ ವಾರ್ತೆ ಗಂಗಾವತಿ**

ಭಾರತೀಯ ಜನತಾ ಪಾರ್ಟಿ ನಗರ ಘಟಕ ಮತ್ತು ಗ್ರಾಮೀಣ ಘಟಕದಲ್ಲಿ ನೂತನ ಪದಾಧಿಕಾರಿಗಳ ಆಯ್ಕೆಯನ್ನು ಮಾಡಲಾಗಿದ್ದು, ಬಿಜೆಪಿ ನಗರ ಘಟಕ ಅಧ್ಯಕ್ಷ ಚಂದ್ರಶೇಖರ್ ಹೀರೂರು ಮತ್ತು ಗ್ರಾಮೀಣ ಘಟಕ ಅಧ್ಯಕ್ಷ ಡಿ.ಕೆ. ಆಗೋಲಿ ಇಬ್ಬರೂ ಕೂಡಿಕೊಂಡು ಕ್ಷೇತ್ರದ ಶಾಸಕರಾದ ಗಾಲಿ ಜನಾರ್ದನ ರೆಡ್ಡಿ ಅವರ ನಿರ್ದೇಶನದ ಮೇರೆಗೆ ಹೊಸ ಸಾರಥಿಗಳನ್ನು ಆಯ್ಕೆ ಮಾಡಿಕೊಂಡಿದ್ದಾರೆ, ಪಕ್ಷಕ್ಕೆ ನಿಷ್ಠೆ ಮತ್ತು ಸ್ವಾಭಿಮಾನದಿಂದ ಕೆಲಸ ಮಾಡುವ ಕಾರ್ಯಕರ್ತರಿಗೆ ಈ ಬಾರಿ ಆಯ್ಕೆ ಮಾಡಿದ್ದಾರೆ. ನಗರದಲ್ಲಿ ಎ.ಭಾರತಿ ಗಂಡ ಕೃಷ್ಣ ಆಗಲೂರು ಇವರು ಬಿಜೆಪಿ ಪಕ್ಷದಲ್ಲಿ ಸುಮಾರು



20 ವರ್ಷಗಳ ಹೆಚ್ಚು ಕಾಲ ಪಕ್ಷಕ್ಕಾಗಿ ಸಕ್ರಿಯವಾಗಿ ಕಾರ್ಯಕರ್ತೆಯಾಗಿ ನಿರಂತರ ಪಕ್ಷದಲ್ಲಿದ್ದರೂ ಸಹ ಗುರುತಿಸಲಿಲ್ಲ ಆದರೆ, ಗಂಗಾವತಿ ಕ್ಷೇತ್ರಕ್ಕೆ ಗಾಲಿ ಜನಾರ್ದನ ರೆಡ್ಡಿ ಅವರು ಬಂದು ಕೆ.ಆರ್.ಪಿ ಪಕ್ಷ-ಕ್ಕೆ ವಿಧಾನಸಭೆಗೆ ಸ್ಪರ್ಧಿಸಿದ್ದರು ಆನಂತರ ಬಿಜೆಪಿಯಲ್ಲಿದ್ದ ಇವರು ಗಾಲಿ ಜನಾರ್ದನ್ ರೆಡ್ಡಿ ಅವರ ಕೆಆರ್‌ಪಿಗೆ ಸೇರಿಕೊಂಡು ನಗರ ಮಂಡಲ ಮಹಿಳಾ ಸದಸ್ಯರಾಗಿ ಸಕ್ರಿಯವಾಗಿ ಕೆಲಸವನ್ನು ಮಾಡಿದ್ದು, ಇವರ ಸೇವೆಯನ್ನು ಗುರುತಿಸಿದ ಕ್ಷೇತ್ರದ ಶಾಸಕರಾದ ಗಾಲಿ ಜನಾರ್ದನ ರೆಡ್ಡಿ ಆರೋಗ್ಯ ರಕ್ಷಾ ಸಮಿತಿ ಸದಸ್ಯರಾಗಿ ನಮ್ಮ ನಿರ್ದೇಶನ ಮಾಡಿದ್ದರು ಮತ್ತು ಈಗ ಬಿಜೆಪಿ ಬಿಜೆಪಿಗೆ ಹೊಸ ಪದಾಧಿಕಾರಿಗಳ ಆಯ್ಕೆ ಮಾಡುವಲ್ಲಿ ಶಾಸಕರಾದ ಜನಾರ್ದನ ರೆಡ್ಡಿ ಅವರು ನಗರ ಬಿಜೆಪಿ ಮಹಿಳಾ ಮೋರ್ಚ ಮಂಡಲ ಅಧ್ಯಕ್ಷರನ್ನಾಗಿ ಆಯ್ಕೆ ಮಾಡಿದ್ದಾರೆ. ಬಹಳ ವರ್ಷಗಳಿಂದ ಬಿಜೆಪಿಯಲ್ಲಿ ವರ್ತಿಸಿಕೊಂಡೆ ಸಕ್ರಿಯ ರಾಜಕಾರಣದಲ್ಲಿ ತೊಡಗಿರುವ ಇವರು ಮುಂದಿನ ದಿನಮಾನಗಳಲ್ಲಿ ನಡೆಯುವ ಪ್ರತಿಯೊಂದು ಚುನಾವಣೆಗಳಲ್ಲಿ ಪಕ್ಷದ ಗೆಲುವಿಗೆ ಕಾರ್ಯಕರ್ತರನ್ನು ಒಗ್ಗೂಡಿಸಿ ಮತ್ತು ಬಿಜೆಪಿ ಪಕ್ಷದ ಕೇಂದ್ರ ಸರ್ಕಾರ ಮತ್ತು ಈ ಹಿಂದೆ ನಡೆಸಿದ ರಾಜ್ಯ ಸರ್ಕಾರದ ಅಭಿವೃದ್ಧಿಗಳ ಬಗ್ಗೆ ಯೋಜನೆಗಳ ಬಗ್ಗೆ ವಿವರವಾದ ವಿಷಯಗಳನ್ನು ಪ್ರತಿಯೊಬ್ಬರ ಮಹಿಳೆಯರಿಗೆ ಮನಮುಟ್ಟುವಂತೆ ತಲುಪಿಸಿ, ಮಹಿಳೆಯರ ಮತಗಳನ್ನು ಸೆಳೆದುಕೊಳ್ಳುವ

ಚಾಣಾಕ್ಷತನ ಇವರಿಗೆ ಇರುವುದರಿಂದ, ಕ್ಷೇತ್ರದ ಶಾಸಕರು ಇವರನ್ನು ನಗರ ಮಂಡಲದ ಮಹಿಳಾ ಮೋರ್ಚಾ ಅಧ್ಯಕ್ಷರನ್ನಾಗಿ ಆಯ್ಕೆ ಮಾಡಿದ್ದಾರೆಂದು ತಿಳಿದು ಬಂದಿದೆ. ಮಾಧ್ಯಮದೊಂದಿಗೆ ಮಾತನಾಡಿದ ಅವರು ಪಕ್ಷ ನನ್ನನ್ನು ಗುರುತಿಸಿ ಒಂದು ಜವಾಬ್ದಾರಿಯನ್ನು ನೀಡಿ ಕೊಟ್ಟ ಜವಾಬ್ದಾರಿಯನ್ನು ಅತ್ಯಂತ ಶ್ರದ್ಧೆ ಮತ್ತು ನಿಸ್ವಾರ್ಥ ಸೇವೆಯಿಂದ ಪಕ್ಷಕ್ಕಾಗಿ ಸಂಘಟನೆ ಮಾಡಿ ಪಕ್ಷದ ಗೆಲುವಿಗೆ ಶ್ರಮಿಸುತ್ತೇನೆಂದು ತಿಳಿಸಿದರು.

# ಕುಡಿಯುವ ನೀರಿನ ಸಮಸ್ಯೆ ಇರಲೆಬಾರದು

• **ಮಲ್ಲಮ್ಮ ನುಡಿ ವಾರ್ತೆ ಕೊಪ್ಪಳ**

ಈಗಾಗಲೇ ಬೇಸಿಗೆ ಆರಂಭವಾಗಿರುವುದರಿಂದ ಕೊಪ್ಪಳ ಜಿಲ್ಲೆಯಲ್ಲಿ ಕುಡಿಯುವ ನೀರಿನ ಸಮಸ್ಯೆಗಳಾಗದಂತೆ ಸಂಬಂಧಿಸಿದ ಇಲಾಖೆಯ ಅಧಿಕಾರಿಗಳು ಮುಂಜಾಗ್ರತೆ ವಹಿಸಬೇಕೆಂದು ಹಿಂದುಳಿದ ವರ್ಗಗಳ ಕಲ್ಯಾಣ. ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಹಾಗೂ ಕೊಪ್ಪಳ ಜಿಲ್ಲಾ ಉಸ್ತುವಾರಿ ಸಚಿವರಾದ ಶಿವರಾಜ ಎಸ್.ತಂಗಡಗಿ ಹೇಳಿದರು. ಅವರು ಸೋಮವಾರ ಕೊಪ್ಪಳ ಜಿಲ್ಲಾ ಪಂಚಾಯತ ಜೆ.ಎಚ್. ಪಟೇಲ್ ಸಭಾಂಗಣದಲ್ಲಿ ಕೊಪ್ಪಳ ಜಿಲ್ಲೆಯಲ್ಲಿ ಪ್ರಗತಿಯಲ್ಲಿರುವ ಅಮೃತ 2.0 ಯೋಜನಾ ಕಾಮಗಾರಿಗಳ ಪ್ರಗತಿ ಮತ್ತು ಜಲಜೀವನ ಮಿಷನ್ ಯೋಜನೆ ಹಾಗೂ ಬಹುಗ್ರಾಮ ಕುಡಿಯುವ ನೀರಿನ ಯೋಜನೆಗಳ ಪ್ರಗತಿ ಪರಿಶೀಲನಾ ಸಭೆ ನಡೆಸಿ ಮಾತನಾಡಿದರು. ಜಿಲ್ಲೆಯ 7



ತಾಲ್ಲೂಕಿನಲ್ಲಿ ನೀರಿನ ಸಮಸ್ಯೆಗಳಾಗದಂತೆ ನೋಡಿಕೊಳ್ಳಲು ತಾಲ್ಲೂಕು ಪಂಚಾಯತ ಕಾರ್ಯನಿರ್ವಾಹಕ ಅಧಿಕಾರಿಗಳು. ಜೆಇಗಳು. ಎ. ಡಬ್ಲೂಗಳು ತಮ್ಮ ವ್ಯಾಪ್ತಿಯ ಪಂಚಾಯತಿ- ಪಂಚಾಯತಿಯ ಎಲ್ಲಾ ಕಡೆ ಭೇಟಿ ನೀಡಿ ಎಲ್ಲಿ ನೀರಿನ ಸಮಸ್ಯೆಗಳಾಗಬಹುದು ಎನ್ನುವ ಕುರಿತು ಮುಂಚಿತವಾಗಿ ಮಾಹಿತಿ ಪಡೆಯಬೇಕು. ಸಮಸ್ಯೆಗಳಾದರೆ ಜನ ನಮಗೆ ಕರೆ ಮಾಡುತ್ತಾರೆ ಹಾಗಾಗಿ ಜಿಲ್ಲೆಯ ಯಾವ ಒಂದು ಊರಿನಲ್ಲಿ ನೀರಿನ ಸಮಸ್ಯೆಯಾಗಬಾರದು ಎಂದು ಹೇಳಿದರು.

ಯಾವ ತಾಲೂಕಿನಲ್ಲಿ ನೀರಿನ ಸಮಸ್ಯೆಯಾಗಬಹುದೆಂದು ಗುರುತಿಸಿ ಈಗಿನಿಂದಲೇ ಆಯಾ ತಾಲ್ಲೂಕಿನ ಶಾಸಕರ ಮುಖಾಂತರ ಸಿಇಓ ಅವರಿಗೆ ಮಾಹಿತಿ ನೀಡಿ. ಈ ಕುರಿತು ನಾನು ಬರುವ ಅಧಿವೇಶನದಲ್ಲಿ ಮಾತನಾಡುತ್ತೇನೆ. ಕುಷ್ಟಗಿ ಮತ್ತು ಯಲಬುರ್ಗಾ ತಾಲೂಕುಗಳಿಗೆ ಕೃಷ್ಣಾ ನದಿಯಿಂದ ನೀರು ಬರುತ್ತವೆ ಅಲ್ಲಿ ನೀರಿನ ಕಾಮಗಾರಿಗಳು ಸಮರ್ಪಕವಾಗಿ ಆದರೆ ನೀರಿನ ಸಮಸ್ಯೆಗಳೆ ಬರುವದಿಲ್ಲ. ನಮ್ಮ ಜಿಲ್ಲೆಯಲ್ಲಿ ಕುಡಿಯುವ ನೀರಿನ ಎಲ್ಲಾ ಕಾಮಗಾರಿಗಳು ಮುಗಿದರೆ ನೀರಿನ ಸಮಸ್ಯೆ ಇರುವುದಿಲ್ಲ. ಕುಡಿಯುವ ನೀರಿನ ಕೆಲಸ ಮತ್ತು ಕಾಮಗಾರಿಗಳನ್ನು ಅಧಿಕಾರಿಗಳು ಮುತುವರ್ಜಿವಹಿಸಿ ಫಾಲೋ ಮಾಡಬೇಕು. ಕಾಲ ಮಿತಿಯಲ್ಲಿ ಕೆಲಸ ಮಾಡದ ಗುತ್ತಿಗೆದಾರರಿಗೆ ದಂಡ ಹಾಕಬೇಕು. ಇಲ್ಲದಿದ್ದರೆ ಆ ಕೆಲಸವನ್ನು ಸರಿಯಾಗಿ ಮಾಡುವ ಮತ್ತೊಬ್ಬ ಗುತ್ತಿಗೆದಾರರಿಗೆ ಕೊಡಬೇಕೆಂದು ಸಂಬಂಧಿಸಿದ ಇಲಾಖೆಯ ಅಧಿಕಾರಿಗಳಿಗೆ ಸೂಚನೆ ನೀಡಿದರು. ಈ ಸಭೆಯಲ್ಲಿ ಕರ್ನಾಟಕ ವಿಧಾನಸಭೆ ಮುಖ್ಯ ಸಚೇತಕರು ಹಾಗೂ ಕುಷ್ಟಗಿ ವಿಧಾನಸಭಾ ಕ್ಷೇತ್ರದ ಶಾಸಕರಾದ ದೊಡ್ಡನಗೌಡ ಪಾಟೀಲ. ಕೊಪ್ಪಳ ಸಂಸದರಾದ ಕೆ. ರಾಜಶೇಖರ ಹಿಟ್ನಾಳ. ವಿಧಾನ ಪರಿಷತ್ ಸದಸ್ಯರಾದ ಹೇಮಲತಾ ನಾಯಕ. ಜಿಲ್ಲಾಧಿಕಾರಿ ಡಾ.ಸುರೇಶ ಬಿ. ಇಟ್ನಾಳ. ಜಿಲ್ಲಾ ಪಂಚಾಯತ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ವರ್ಣಿತ್ ನೇಗಿ. ಸಹಾಯಕ ಆಯುಕ್ತರಾದ ಕ್ಯಾ. ಮಹೇಶ ಮಾಲಗಿತ್ತಿ. ಜಿಲ್ಲಾ ಪಂಚಾಯತ ಉಪ ಕಾರ್ಯದರ್ಶಿ ಟಿ. ಕೃಷ್ಣಮೂರ್ತಿ. ಜಿಲ್ಲೆಯ ಎಲ್ಲಾ ತಾಲ್ಲೂಕಿನ ಕಾರ್ಯನಿರ್ವಾಹಕ ಅಧಿಕಾರಿಗಳು. ಎ.ಡಬ್ಲೂ. ಹಾಗೂ ಜೆಇಗಳು ಮತ್ತು ಗುತ್ತಿಗೆದಾರರು ಸೇರಿದಂತೆ ಇತರೆ ವಿವಿಧ ಇಲಾಖೆಯ ಅಧಿಕಾರಿಗಳು ಉಪಸ್ಥಿತರಿದ್ದರು.

# ಕಲ್ಲುತೂರಾಟ: ತಪ್ಪಿತಸ್ಥರನ್ನು ಕಠಿಣ ಶಿಕ್ಷೆ

• **ಮಲ್ಲಮ್ಮ ನುಡಿ ವಾರ್ತೆ ಬಳ್ಳಾರಿ**

ಬಾಗಲಕೋಟೆಯಲ್ಲಿ ಶಿವಾಜಿ ಮಹಾರಾಜರ ಜಯಂತಿ ಮೆರವಣಿಗೆ ಮೇಲೆ ಕಲ್ಲು ತೂರಿದ ಮುಸ್ಲಿಂ ಕಿಡಿಗೇಡಿಗಳನ್ನು ಬಂಧಿಸಿ ಕಾನೂನು ಕ್ರಮ ಜರುಗಿಸಿ ಕಠಿಣ ಕ್ರಮ ತೆಗೆದುಕೊಂಡು ರಾಜ್ಯದಿಂದ ಗಡಿಪಾರು ಮಾಡಿ ತಪ್ಪಿತಸ್ಥರನ್ನು ಕಠಿಣ ಶಿಕ್ಷೆಗೆ ಗುರಿಪಡಿಸಬೇಕೆಂದು ಹಿಂದೂ ಜಾಗರಣ ವೇದಿಕೆ ಬಳ್ಳಾರಿ ಜಿಲ್ಲಾ ಘಟಕದ ಪದಾಧಿಕಾರಿಗಳು ಆಗ್ರಹಿಸಿದರು ಅವರು ಇಂದು ನಗರದ ಜಿಲ್ಲಾಧಿಕಾರಿಗಳ ಮೂಲಕ ಗೃಹ ಮಂತ್ರಿಗಳಿಗೆ ಮನವಿ ಪತ್ರವನ್ನು ಸಲ್ಲಿಸಿ, ಶಿವಾಜಿ ಮಹಾರಾಜರ ಜಯಂತಿ ಅಂಗವಾಗಿ ಬಾಗಲಕೋಟೆಯಲ್ಲಿ ಮೆರಣಿಗೆ ಮೇಲೆ ಮುಸ್ಲಿಂ ಮತಾಂತದರಿಂದ ಕಲ್ಲು ತೂರಾಟ ಮಾಡಿದ್ದು ಶಿವಾಜಿ ಮಹಾರಾಜರಿಗೆ ಮಾಡಿದ ಅವಮಾನ ಕಲ್ಲು ತೂರಿದ




ಮುಸ್ಲಿಂ ಮತಾಂಧರನ್ನು ಶೀಘ್ರವೇ ಬಂಧನ ಮಾಡಿ ಅವರ ಮೇಲೆ ಕಟ್ಟುನಿಟ್ಟಾದ ಕಾನೂರು ಕ್ರಮ ಜರುಗಿಸಿಬೇಕು ಮತ್ತು ಘಟನೆಯ ಹಿಂದೆ ಕಾಣದ ಕೈಗಳ ಕೈವಾಡ ಇರುವುದು ಪತ್ತೆ ಹಚ್ಚಿ ಅವರನ್ನು ಸಹ ಬಂಧಿಸಬೇಕು ರಾಜ್ಯದಲ್ಲಿ ಶಾಂತಿ ಸುವ್ಯವಸ್ಥೆ ಕದಡಿದ ಕಿಡಿಗೇಡಿಗಳ ಮೇಲೆ ಗುಂಡಾ ಕಾಯ್ದೆ ಹಾಕಿ ರಾಜ್ಯದಿಂದ ಗಡಿಪಾರು ಮಾಡಬೇಕೆಂದು ರಾಜ್ಯದ ಗೃಹ ಮಂತ್ರಿಗಳಲ್ಲಿ ಆಗ್ರಹಿಸುತ್ತಿದ್ದೇವೆ ಎಂದರು. ಇದೇ ರೀತಿ ರಾಜ್ಯದಲ್ಲಿ ಹಿಂದೂ ಧಾರ್ಮಿಕ ಆಚರಣೆಗಳ ಮೇಲೆ ನಿರಂತರವಾಗಿ ಈ ರೀತಿಯ ಆಕ್ರಮಣಗಳು ಇತ್ತೀಚಿನ ದಿನಗಳಲ್ಲಿ ಹೆಚ್ಚಾಗುತ್ತಿದ್ದು ಇದನ್ನು ಸೂಕ್ತ ರೀತಿಯಲ್ಲಿ ತನಿಖೆ ನಡೆಸಿ ಸಂಬಂಧಪಟ್ಟವರನ್ನು ಬಂಧಿಸಬೇಕು ಮತ್ತು ಅಂಥವರನ್ನು ಕಠಿಣ ಶಿಕ್ಷೆಗೆ ಗುರಿಪಡಿಸಬೇಕೆಂದು ವಿಶ್ವ ಹಿಂದೂ ಪರಿಷತ್ ಪದಾಧಿಕಾರಿಗಳು ಆಗ್ರಹಿಸುತ್ತಿದ್ದೇವೆ ಎಂದರು. ಇದಕ್ಕೂ ಮುನ್ನ ಡಾಕ್ಟರ್ ರಾಜಕುಮಾರ್ ರಸ್ತೆಯ ಕಾಗೆ ಪಾರ್ಕ್ ನಿಂದ ಮೆರವಣಿಗೆ ಮೂಲಕ ರಾಯಲ್ ಸರ್ಕಲ್ ಗೆ ಬಂದು ಪ್ರತಿಭಟನೆ ನಡೆಸಿ ನಂತರ ಜಿಲ್ಲಾಧಿಕಾರಿಗಳ ಕಚೇರಿಗೆ ಬಂದು ಮನವಿ ಪತ್ರವನ್ನು ಸಲ್ಲಿಸಿದರು.

ಈ ಸಂದರ್ಭದಲ್ಲಿ ಜಿಲ್ಲಾ ಸದಸ್ಯರಾದ ಮುಲ್ಲಂಗಿ ಕಿಶೋರ್ ಕುಮಾರ್, ಅರ್ಜುನ್ ಸಿಂಗ್ ರಾಜ್‌ಪುರೋಹಿತ್, ಎಗ್ರಿಸ್ವಾಮಿ, ಮಣಿಕಂಠ, ರಾಜು, ಗೋವಿಂದನಾಯಕ, ಸ್ವಾಮಿ ರಾವ್ ಮನೋಜ್ ಮತ್ತು ಕೊಂಡಯ್ಯ

# ಸರ್ಕಾರಿ ಜಮೀನು ಕೊಳ್ಳೆ ಹೊಡೆಯುವವರ ವಿರುದ್ಧ ಕಠಿಣ ಕ್ರಮ

• **ಮಲ್ಲಮ್ಮ ನುಡಿ ವಾರ್ತೆ ಬಳ್ಳಾರಿ**

ಸರ್ಕಾರಿ ಸ್ಥಳ, ಜಮೀನುಗಳನ್ನು ಕಬಳಿಕೆ ಮಾಡಿದವರ ವಿರುದ್ಧ ಕಠಿಣ ಕ್ರಮ ಕೈಗೊಳ್ಳಲೂ, ಶೀಘ್ರ ತನಿಖಾ ಸಮಿತಿ ರಚನೆ, ನಾವು ಗುರುತಿಸಿದ ಸರ್ಕಾರಿ ಸ್ಥಳವನ್ನು ನುಂಗಿದ ಭೂಪರ ವಿರುದ್ಧ ಕ್ರಮಕ್ಕೆ ನಗರ ಶಾಸಕ ನಾರಾ ಭರತ್ ರೆಡ್ಡಿ ಸಿಡಿಮಿಡಿ, ನಗರದ ಈದ್ಗಾ ಮೈದಾನದ 11.5 ಎಕರೆ ಜಮೀನು ಪರಭಾರೆ ಮಾಡಿದವರ ವಿರುದ್ಧ ಕೂಡಲೇ ಕ್ರಿಮಿನಲ್ ಕೇಸ್ ದಾಖಲಿಸಿ, ಸರ್ಕಾರಿ ಜಮೀನನ್ನು ಕಬಳಿಸಲು ಪಾಲಿಕೆ ಅಧಿಕಾರಿಗಳೇ ಸಾಥ್ ಜನಪ್ರತಿನಿಧಿಗಳು ಸಿಡಿಮಿಡಿ, ಅಧಿಕಾರಿಗಳ ವಿರುದ್ಧ ಕ್ರಮ ಆಗದಿದ್ದರೆ ಪಾಲಿಕೆಯನ್ನೇ ಇನ್ನೊಬ್ಬರಿಗೆ ಪರಭಾರೆ ಅಧಿಕಾರಿಗಳ ವಿರುದ್ಧ ಶಾಸಕರು ಗರಂ, ಇವು ಸೋಮವಾರ ನಗರದ ಜಿ.ಪಂ.ಸಭಾಂಗಣದಲ್ಲಿ ನಡೆದ ಸಾಮಾನ್ಯ ಸಭೆಯ ಮುಖ್ಯಾಂಶಗಳು. ಮಹಾನಗರ ಪಾಲಿಕೆ ಮೇಯರ್ ಪಿ. ಗಾದೆಪ್ಪ ಅವರ ಅಧ್ಯಕ್ಷತೆಯಲ್ಲಿ ಸಾಮಾನ್ಯ ಸಭೆ ನಡೆಯಿತು. ಇದಕ್ಕೂ ಮುನ್ನ ಮೇಯರ್ ಅವರು ಬಜೆಟ್ ಮಂಡಿಸಿ ಗಮನ ಸೆಳೆದರು.

ಜಮೀನು ಕಬಳಿಕೆ, ತನಿಖಾ



ಸಮಿತಿ ರಚನೆ: ಸಭೆಯಲ್ಲಿ ನಗರದ ಈದ್ಗಾ ಮೈದಾನಕ್ಕೆ ಸಂಬಂಧಿಸಿದ 11.5 ಎಕರೆ ಜಮೀನು ಪರಭಾರೆ ಗದ್ದಲ ಮಾತಿನ ಚಕಮಕಿ ಜೋರಾಗಿ ನಡೆಯಿತು. ಇದಷ್ಟೇ ಅಲ್ಲ, ಇಂತಹ ಪ್ರಕರಣಗಳು ನಮ್ಮ ಪಾಲಿಕೆ ಅಧಿಕಾರಿಗಳ ಕುಮ್ಮಕ್ಕಿನಿಂದಲೇ ಸಾಕಷ್ಟು ನಡೆದಿವೆ ಎಂದು ಎಂದು ಸದಸ್ಯರು ಆರೋಪಿಸುತ್ತಿದ್ದಂತೆ, ಮಧ್ಯಪ್ರವೇಶಿಸಿದ ಗ್ರಾಮೀಣ ಶಾಸಕ ಬಿ.ನಾಗೇಂದ್ರ ಅವರು ಮಾತನಾಡಿ, ಇದನ್ನು ಸೇರಿಸಿ ಈ ಹಿಂದೆ ನಡೆದ ಎಲ್ಲ ಅಕ್ರಮಗಳ ಕುರಿತು ತನಿಖೆ ನಡೆಸಲು ಪ್ರತ್ಯೇಕ ತನಿಖಾ ತಂಡ ರಚಿಸೋಣ, ಯಾರೇ ಇರಲಿ ಅಂತವರ ವಿರುದ್ಧ ಕಠಿಣ ಕ್ರಮವಾಗಲೀ ಎಂದರು. ಇದರಲ್ಲಿ ನಮ್ಮ ಪಾಲಿಕೆ ಅಧಿಕಾರಿಗಳ ಪಾಲು ಹೆಚ್ಚಿದೆ ಎಂದು ಸದಸ್ಯರು ಹೇಳಿದಾಗ, ತಪ್ಪು ಯಾರೇ ಮಾಡಿರಲಿ ಅಂತವರ ವಿರುದ್ಧ ಕ್ರಮವಾಗಲಿ ಎಂದರು.

ಸರ್ಕಾರಿ ಸ್ಥಳವನ್ನೇ ನುಂಗಿದ ಭೂಪರು: ನಾವು ನಗರದ 8 ನೇ ವಾರ್ಡ್ ಹಂದ್ರಾಳ ಪ್ರದೇಶದ ಸರ್ಕಾರಿ ಜಮೀನಿನಲ್ಲಿ ನಾವು ಶಾಲೆ ನಿರ್ಮಾಣ ಮಾಡಬೇಕು ಎಂದು ಸ್ಥಳ ಪರಿಶೀಲನೆ ಮಾಡಿದ್ದೆ, ಅದಕ್ಕೆ ನಮ್ಮ ಅಧಿಕಾರಿಗಳು ಬಿ ಖಾತೆ ಮಾಡಿಕೊಟ್ಟಿರುವುದು ಆಘಾತವನ್ನುಂಟು ಮಾಡಿದೆ ಎಂದು ನಗರ ಶಾಸಕ ನಾರಾ ಭರತ್ ರೆಡ್ಡಿ ಅಧಿಕಾರಿಗಳ ವಿರುದ್ಧ ಕೆಂಡ ಮಂಡಲರಾದರು. ಸರ್ಕಾರಿ ಜಮೀನಿಗೆ ಬಿ ಖಾತಾ ಮಾಡಿಕೊಡಲು ಹೇಗೆ ಸಾಧ್ಯ, ಇದನ್ನು ನೋಂದಣಿ ಮಾಡಿದ್ದು ಯಾರು, ಹೇಗೆ ಎನ್ನುವುದು ತಿಳಿಯದಾಗಿದೆ. ಈ ಕುರಿತು ತನಿಖೆಯಾಗಬೇಕು, ತಪ್ಪಿತಸ್ಥರು ಯಾರೇ ಇರಲಿ ಕ್ರಮವಾಗಬೇಕು, ಅವರನ್ನು ಜೈಲಿಗೆ ಅಟ್ಟಿಸಬೇಕು ಎಂದು ಆಕ್ರೋಶ ವ್ಯಕ್ತಪಡಿಸಿದರು. ನೋಂದಣಿ ಅಧಿಕಾರಿಗಳು ನಾವೇನಾದರೂ ರಿಜಿಸ್ಟ್ರೇಷನ್ ಗೆ ಹೋದ್ರೆ ಎಲ್ಲ ದಾಖಲೆ ನೋಡ್ತಾರೆ, ಸರ್ಕಾರಿ ಆಸ್ತಿ ಅಂದ್ರೆ ಯಾರಿಗೆ ಬೇಕಾದ್ರೂ ನೋಂದಣಿ ಮಾಡಿಸಿ ಕೈ ತೊಳೆದುಕೊಳ್ತಾರೆ ಅಂದ್ರೆ ಎಲ್ಲಿಗೆ ಬಂತು ವ್ಯವಸ್ಥೆ ಎಂದು ಬೇಸರ ವ್ಯಕ್ತಪಡಿಸಿದರು.

ಕೂಡಲೇ ಕ್ರಿಮಿನಲ್ ಕೇಸ್ ದಾಖಲಿಸಿ ಜೈಲಿಗಟ್ಟಿ: ನಗರದ ಈದ್ಗಾ ಮೈದಾನಕ್ಕೆ ಸೇರಿದ 11.5 ಎಕರೆ ಜಮೀನನ್ನು ಕಬಳಿಸಿದವರು ಯಾರೇ ಇರಲಿ ಅಂತವರ ವಿರುದ್ಧ ಕೂಡಲೇ ಕ್ರಿಮಿನಲ್ ಕೇಸ್ ದಾಖಲಿಸಿ ಎಂದು ರಾಜ್ಯಸಭೆ ಸದಸ್ಯ ಡಾ.ಸೈಯದ್ ನಾಸಿರ್ ಹುಸೇನ್ ಅವರು ಪಾಲಿಕೆ ಆಯುಕ್ತ ಮಂಜುನಾಥ್ ಅವರಿಗೆ ಸೂಚಿಸಿದರು. ಕ್ರಮ ಕೈಗೊಂಡಿದೆ, ದೂರು ದಾಖಲಿಸಿದೆ ಎಂದು ಕೈತೊಳೆದು ಕೊಂಡರೆ ಸಾಲದು, ಇದರ ಕಿಂಗ್ ಪಿನ್ ಯಾರು, ಲಾಗಿನ್ ಯಾರದ್ದು, ಯಾರು ಇದರಲ್ಲಿ ಪಾಲಿಕೆ ಅಧಿಕಾರಿಗಳು ಸಿಬ್ಬಂದಿಗಳು ಶ್ಯಾಮೀಲಾಗಿದ್ದಾರೆ ಎಲ್ಲರ ಮೇಲೂ ಕ್ರಿಮಿನಲ್ ಕೇಸ್ ದಾಖಲಿಸಿ, ಇಲ್ಲಾಂದ್ರೆ ಪಾಲಿಕೆ ಆಯುಕ್ತರೇ ಇದರಲ್ಲಿ ಶ್ಯಾಮೀಲಾಗಿದ್ದಾರೆ, ಎಲ್ಲ ಅಕ್ರಮದಲ್ಲಿ ನಿಮ್ಮ ಪಾಲು ಇದೆ ಎಂದು ಅನುಮಾನ ಮೂಡಲಿದೆ, ಕೂಡಲೇ ಎಲ್ಲರ ವಿರುದ್ಧ ಕಠಿಣ ಕ್ರಮ ಕೈಗೊಳ್ಳಿ ಎಂದು ಆಯುಕ್ತರಿಗೆ ನಾಸಿರ್ ಹುಸೇನ್ ಅವರು ಖಡಕ್ ಸೂಚನೆ ನೀಡಿದರು.

# ಹೆಣ್ಣು ಮಕ್ಕಳು ಕಣ್ಣೀರು ಹಾಕಬಾರದು

• **ಮಲ್ಲಮ್ಮ ನುಡಿ ವಾರ್ತೆ ಕೊಪ್ಪಳ**

ಹೆಣ್ಣು ಮಕ್ಕಳು ಗಂಡನ ಮನೆಗೆ ಹೋಗುವಾಗ ಅಳುವುದು ಸಹಜ. ಆದರೆ ಮರುದಿನದಿಂದ ಅವರು ಜೀವನ ಪರ್ಯಂತ ನಗುತ್ತಿರಬೇಕು ಎಂದು ಕಾಗಿನೆಲೆ ಕನಕ ಗುರು ಪೀಠ ಹೊಸದುರ್ಗ ಶಾಖಾ ಮಠದ ಪೀಠಾಧಿಪತಿ ಶ್ರೀ ಈಶ್ವರಾನಂದ ಪುರಿ ಸ್ವಾಮೀಜಿ ಹೇಳಿದರು.

ತಾಲೂಕಿನ ಹಾಲವರ್ತಿ ಗ್ರಾಮದ ಕನಕ ಗುರು ಪೀಠದ ಶಾಖ ಮಠದ ಶ್ರೀ ಜಡೇಶ್ವರ ಜಾತ್ರೆ ನಿಮಿತ್ತ ಹಮ್ಮಿಕೊಂಡಿದ್ದ 14 ಜೋಡಿಗಳ ಸಾಮೂಹಿಕ ವಿವಾಹ ಕಾರ್ಯಕ್ರಮದಲ್ಲಿ ಸಾನಿಧ್ಯ ವಹಿಸಿ ಆಶೀರ್ವಚನ ನೀಡಿದರು.

ಮದುವೆ ದಿನ ಹೆಣ್ಣಿನ ಕಡೆಯಿಂದ ವರೋಪಚಾರವಾಗಿ ಏನನ್ನು ಪಡೆದಿದ್ದೀರೋ ಅದು ಇವತ್ತಿಗೆ ಕೊನೆ ಆಗಬೇಕು. ಹೆಂಡತಿಯನ್ನು ಪ್ರೀತಿಯಿಂದ ತವರು ಮನೆಗೆ ಕಳಿಸಿ. ಆದರೆ ವರದಕ್ಷಿಣೆಗಾಗಿ ಹೆಂಡತಿಯನ್ನು ಯಾವತ್ತೂ ತವರು ಮನೆಗೆ ಕಳಿಸಬೇಡಿ. ಯಾವ ಮನೆಯಲ್ಲಿ ಹೆಣ್ಣಿಗೆ ಗೌರವ ಇರುತ್ತದೋ ಆ ಮನೆಯಲ್ಲಿ ದೇವತೆಗಳು ವಾಸಿಸುತ್ತಾರೆ.



> “ ಸಾಮೂಹಿಕ ವಿವಾಹದಿಂದ ಬಡವರಿಗೆ ಸಾಕಷ್ಟು ಅನುಕೂಲವಾಗಲಿದೆ. ಹೊಸ ಬದುಕಿಗೆ ಪಾದಾರ್ಪಣೆ ಮಾಡಿದ ನವ ದಂಪತಿಗಳಿಗೆ ಸಂತಾನ ಪ್ರಾಪ್ತಿಯಾಗಲಿ. ಹುಟ್ಟುವ ತಮ್ಮ ಮಕ್ಕಳು ಮುಂದೆ ಚನ್ನಾಗಿ ಓದಿ ಐಎಎಸ್, ಐಪಿಎಸ್ ಅಧಿಕಾರಿಗಳಾಗಲಿ.
>
> **ಜಿ.ಬಿ. ವಿನಯಕುಮಾರ್,**
> **ಇನ್ಸೈಟ್ ಐಎಎಸ್ ಸಂಸ್ಥಾಪಕ ನಿರ್ದೇಶಕ.**

ಹೆಣ್ಣು ಮಗಳು ತನ್ನ ತಾಯಿ, ತಂದೆ ಸೇರಿದಂತೆ ಇಡೀ ಕುಟುಂಬವನ್ನು ಬಿಟ್ಟು ಗಂಡನನ್ನೇ ನಂಬಿ ನಿಮ್ಮ ಮನೆಗೆ ಬಂದಿರುತ್ತಾಳೆ. ಅವಳನ್ನು ಅಷ್ಟೇ ಗೌರವದಿಂದ ಹಾಗೂ ಪ್ರೀತಿಯಿಂದ ಕಾಣುವುದು ನಿಮ್ಮ ಕರ್ತವ್ಯ ಎಂದು ಮಾರ್ಮಿಕವಾಗಿ ನುಡಿದರು.

ಕೊಪ್ಪಳ ಶಾಸಕ ರಾಘವೇಂದ್ರ ಹಿಟ್ನಾಳ ಮಾತನಾಡಿ, ಸಾಮಂತ ವಿವಾಹಗಳು ಹೆಚ್ಚುಹೆಚ್ಚು ನಡೆಯಬೇಕು. ಇದರಿಂದ ಒಂದು ವೆಚ್ಚಕ್ಕೆ ಕಡಿವಾಣ ಬೀಳುತ್ತದೆ. ಬಡವರಿಗೆ ಸಾಲದ ಹೊರೆ ತಪ್ಪುತ್ತದೆ. ಗ್ರಾಮಗಳಲ್ಲಿ ಇಂತಹ ವಿವಾಹಗಳು ನಡೆಯುವುದರಿಂದ ಗ್ರಾಮಸ್ಥರಲ್ಲಿ ಒಗ್ಗಟ್ಟು ಹಾಗೂ ಬಾಂಧವ್ಯ ವೃದ್ಧಿಯಾಗುತ್ತದೆ. ಈ ನಿಟ್ಟಿನಲ್ಲಿ ಹಾಲವರ್ತಿಯ ಗ್ರಾಮಸ್ಥರು ಪ್ರತಿ ವರ್ಷ ಸಾಮಾಜಿಕ ವಿವಾಹ ಹಮ್ಮಿಕೊಳ್ಳುವ ಮೂಲಕ ಇತರರಿಗೆ ಮಾದರಿಯಾಗಿದ್ದಾರೆ. ಈ ಕಾರ್ಯಕ್ರಮ ಜಾತ್ಯತೀತವಾಗಿ ನಡೆಯುತ್ತಿರುವುದು ಹೆಮ್ಮೆಯ ಸಂಗತಿ ಎಂದು ಹೇಳಿದರು.

ಈ ಸಂದರ್ಭದಲ್ಲಿ ಕನಕ ಗುರು ಪೀಠ ಕೆ ಆರ್ ನಗರ ಸಂಸ್ಥಾನ ಮಠದ ಶ್ರೀ ಶಿವಾನಂದ ಪುರಿ ಸ್ವಾಮೀಜಿ, ಬಾದಿಮನಾಳ ಹಾಗೂ ಹಾಲವರ್ತಿ ಪೀಠದ ಶ್ರೀ ಶಿವಸಿದ್ದೇಶ್ವರ ಸ್ವಾಮೀಜಿ ಸಾನಿಧ್ಯ ವಹಿಸಿದ್ದರು. ಮಾಜಿ ಶಾಸಕ ಕೆ ಬಸವರಾಜ ಹಿಟ್ನಾಳ್, ಹಿಂದುಳಿದ ಜಾತಿಗಳ ಒಕ್ಕೂಟದ ರಾಜ್ಯಾಧ್ಯಕ್ಷ ಕೆ.ಎಂ. ರಾಮಚಂದ್ರಪ್ಪ, ಎಂಎಸ್ಪಿಎಲ್ ಕಂಪನಿ ಇಡಿ ಪ್ರಭು, ಎಸ್.ಕೆ. ಸ್ಟೀಲ್ ಕಂಪನಿ ವ್ಯವಸ್ಥಾಪಕ ಪ್ರಭು, ಮುಖಂಡರಾದ ಭರಮಪ್ಪ ನಗರ, ಗೂಳಪ್ಪ ಹಲಗೇರಿ ವೆಂಕಟೇಶ್ ಬಾರಕೇರ, ಹನುಮಂತಪ್ಪ ಅರಸನಕೇರಿ, ಬಸವರಾಜ ಬಂಗಾಳಿ, ದೇವು ನಾಗನೂರ, ಕುಬೇರ ಮಜ್ಜಿಗಿ, ಹನುಮೇಶ ಹೊಸಳ್ಳಿ, ಹನುಮಂತಪ್ಪ ಕೌದಿ, ಭರಮಪ್ಪ ಗೊರವರ, ಆನಂದ ಕಿನ್ನಾಳ, ಮಹೇಂದ್ರ ಹಾಲವರ್ತಿ, ಗವಿಸಿದ್ದಯ್ಯ ಹಿರೇಮಠ, ಮುದಿಯಪ್ಪ ಆದೋನಿ, ಮಾರ್ಕಂಡೇಯ ಹಿರೇಮಠ, ಮಂಜುನಾಥ ಬಂಗಾಳಿ ಸೇರಿದಂತೆ ಇತರರು ಇದ್ದರು.

# ಆರೋಗ್ಯ ಇಲಾಖೆಯಿಂದ ವಿವಿಧ ಹುದ್ದೆಗಳಿಗೆ ಅರ್ಜಿ ಆಹ್ವಾನ

ಮಲ್ಲಮ್ಮ ನುಡಿ ವಾರ್ತೆರಾಯಚೂರು

ಇಲ್ಲಿನ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯಿಂದ ರಾಷ್ಟ್ರೀಯ ನಗರ ಆರೋಗ್ಯ ಅಭಿಯಾನದಡಿ ಮತ್ತು ಪಿ.ಎಂ ಅಭೀಮ್ ಯೋಜನೆಯಡಿಯಲ್ಲಿ 2025-26 ನೇ ಸಾಲಿಗೆ ಖಾಲಿ ಇರುವ ವಿವಿಧ ಹುದ್ದೆಗಳಿಗೆ ರಾಷ್ಟ್ರೀಯ ಆರೋಗ್ಯ ಅಭಿಯಾನದ ನಿಯಮಾನುಸಾರ ಗುತ್ತಿಗೆ ಆಧಾರದ ಮೇಲೆ ನೇಮಕಾತಿ ಮಾಡಿಕೊಳ್ಳಲು ಅರ್ಹ ಅಭ್ಯರ್ಥಿಗಳಿಂದ ಆನ್‌ಲೈನ್ ಮೂಲಕ ಅರ್ಜಿಗಳನ್ನು ಆಹ್ವಾನಿಸಲಾಗಿದೆ.

ಹುದ್ದೆಗಳ ವಿವರ : ಪಿ.ಎಂ. ಅಭೀಮ್ ಕಾರ್ಯಕ್ರಮದಡಿ ಕಿರಿಯ ಮಹಿಳಾ ಆರೋಗ್ಯ ಸಹಾಯಕಿಯರು-18 ಹುದ್ದೆಗಳು, ಎನ್.ಯು.ಹೆಚ್.ಎಂ. ಕಾರ್ಯಕ್ರಮದಡಿ ಕಿರಿಯ ಮಹಿಳಾ ಆರೋಗ್ಯ ಸಹಾಯಕಿಯರು-01ಹುದ್ದೆ ಹಾಗೂ ಎನ್.ಯು.ಹೆಚ್.ಎಂ. ಕಾರ್ಯಕ್ರಮದಡಿ ಆರೋಗ್ಯ ನಿರೀಕ್ಷಣಾಧಿಕಾಧಿಕಾರಿಗಳು-01 ಹುದ್ದೆಗೆ ಗುತ್ತಿಗೆ ಆಧಾರದ ನೇಮಕಾತಿಯನ್ನು ರಾಷ್ಟ್ರೀಯ ಆರೋಗ್ಯ ಅಭಿಯಾನದ ನಿಯಮಾನುಸಾರ, ರೋಷ್ಟರ್ ಕಮ್ ಮೇರಿಟ್ ಆಧಾರದ ಮೇಲೆ ಹುದ್ದೆಗಳನ್ನು ಭರ್ತಿ ಮಾಡಿಕೊಳ್ಳಲಾಗುವುದು, ಅರ್ಹ ವಿದ್ಯಾರ್ಹತೆಯುಳ್ಳ ಅಭ್ಯರ್ಥಿಗಳು ಮಾರ್ಚ್ 11ರೊಳಗಾಗಿ ವೆಬ್‌ಸೈಟ್: ಏಣಣಠಿ://ಡಿಚುಛ್ಝಿಣಡಿ.ಟುಛಿ.ಎಟ ಆನ್‌ಲೈನ್ ಮೂಲಕ ಅರ್ಜಿ ಸಲ್ಲಿಸಬಹುದಾಗಿದೆ. ಕೊನೆಯ ದಿನಾಂಕದ ನಂತರ ಬಂದ ಅರ್ಜಿಗಳನ್ನು ಪರಿಗಣಿಸಲಾಗುವುದಿಲ್ಲ. ಅರ್ಜಿಗಳನ್ನು ಆನ್‌ಲೈನ್ ಹೊರತು ಪಡಿಸಿ ಇತರೆ ಯಾವುದೇ ಮೂಲಗಳಿಂದ ಸಲ್ಲಿಸುವ ಅರ್ಜಿಗಳನ್ನು ಸ್ವೀಕರಿಸಲಾಗುವುದಿಲ್ಲ. ಗುತ್ತಿಗೆ ಆಧಾರದ ನೇಮಕಾತಿಯು ಎನ್.ಹೆಚ್.ಎಂ. ನಿಯಮಾವಳಿಯ ಷರತ್ತು ಮತ್ತು ನಿಬಂಧನೆಗಳಿಗೆ ಒಳಪಟ್ಟಿರುತ್ತದೆ.

ಹೆಚ್ಚಿನ ಮಾಹಿತಿಗಾಗಿ ಸದಸ್ಯ ಕಾರ್ಯದರ್ಶಿಗಳು ಹಾಗೂ ಜಿಲ್ಲಾ ಯೋಜನಾ ಅಭಿವೃದ್ಧಿ ಅಧಿಕಾರಿಗಳು, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಂಘ, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿಗಳ ಕಾರ್ಯಲಯ ರಾಯಚೂರು ಕಚೇರಿ ಅವಧಿಯಲ್ಲಿ ಮಾಹಿತಿ ಪಡೆಯಬಹುದು ಅಥವಾ ಮೊಬೈಲ್ ಸಂಖ್ಯೆ: 9449843121, 9844193931ಗೆ ಸಂಪರ್ಕ ಮಾಡಬಹುದಾಗಿದೆ ಎಂದು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಂಘದ ಜಿಲ್ಲಾ ಯೋಜನಾ ಅಭಿವೃದ್ಧಿ ಅಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಅಲ್ಪಸಂಖ್ಯಾತರ ಯೋಜನೆ ಕುರಿತು ಅರಿವು ಅಗತ್ಯ

- ಮಲ್ಲಮ್ಮ ನುಡಿ ವಾರ್ತೆ ಬಳ್ಳಾರಿ



ಅಲ್ಪಸಂಖ್ಯಾತಸಮುದಾಯಗಳಿಗಿರುವ ಕೇಂದ್ರ ಮತ್ತು ರಾಜ್ಯ ಪುರಸ್ಕೃತ ಯೋಜನೆಗಳಕುರಿತುಸಮುದಾಯದ ಜನರಿಗೆ ಅರಿವು ಮೂಡಿಸಬೇಕು ಎಂದು ರಾಜ್ಯಸಭೆ ಸದಸ್ಯ ಡಾ. ಸೈಯದ್ ನಾಸೀರ್ ಹುಸೇನ್ ಅವರು ಅಧಿಕಾರಿಗಳಿಗೆ ನಿರ್ದೇಶನ ನೀಡಿದರು.

ನಗರದ ನೂತನ ಜಿಲ್ಲಾಡಳಿತ ಭವನದ ಸಭಾಂಗಣದಲ್ಲಿ ಮಂಗಳವಾರ ಏರ್ಪಡಿಸಿದ್ದ ಜಿಲ್ಲಾ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ ಪ್ರಧಾನಮಂತ್ರಿಗಳ ಹೊಸ 15 ಅಂಶಗಳ ಪ್ರಗತಿ ಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ವಿವಿಧ ಇಲಾಖೆಗಳಲ್ಲಿ ಅಲ್ಪಸಂಖ್ಯಾತರಿಗಿರುವಯೋಜನೆಗಳನ್ನು ಪಟ್ಟಿಮಾಡಿಕೊಂಡು, ಅವುಗಳನ್ನು ಅವರಿಗಾಗಿಯೇ ತಲುಪಿಸಲು ಸಾಕಷ್ಟು ಪ್ರಚಾರ ಕಾರ್ಯ ಕೈಗೊಳ್ಳಬೇಕು. ಇದರಿಂದ ಸಮುದಾಯಗಳ ಜನರು ಸೌಲಭ್ಯ ಪಡೆಯಲು ಮುಂದೆ ಬರುತ್ತಾರೆ ಎಂದು ಅಲ್ಪಸಂಖ್ಯಾತರ ಅಭಿವೃದ್ಧಿ ನಿಗಮದ ಜಿಲ್ಲಾ ವ್ಯವಸ್ಥಾಪಕರಿಗೆ ಸೂಚಿಸಿದರು.

ಕೇಂದ್ರಮತ್ತುರಾಜ್ಯಸರ್ಕಾರಗಳು ಅಲ್ಪಸಂಖ್ಯಾತರಅಭಿವೃದ್ಧಿಗಾಗಿಯೇ ಪ್ರಧಾನಮಂತ್ರಿಗಳಹೊಸ15ಅಂಶಗಳ ಕಾರ್ಯಕ್ರಮದಡಿಯೋಜನೆಗಳನ್ನು ಜಾರಿಗೊಳಿಸಿದೆ. ಅವುಗಳನ್ನು ಕ್ಷೇತ್ರಮಟ್ಟದಲ್ಲಿ ಪರಿಪೂರ್ಣವಾಗಿ ಅನುಷ್ಠಾನಗೊಳಿಸಬೇಕು. ಆದರೆ ಸಮುದಾಯಗಳಲ್ಲಿ ಮಾಹಿತಿ ಕೊರತೆ ಇದೆ. ಹಾಗಾಗಿ ವಿವಿಧ ಇಲಾಖೆಗಳು ನೀಡುವ ಫಲಾನುಭವಿ ಆಧಾರಿತ ಮತ್ತು ಸಮುದಾಯ ಆಧಾರಿತ ಯೋಜನೆಗಳನ್ನು ಅರ್ಹ ಅಲ್ಪಸಂಖ್ಯಾತರಿಗೆ ತಲುಪಿಸಲು ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ ಅಧಿಕಾರಿಗಳು ಮಾಹಿತಿ ಕೇಂದ್ರದ ಮೂಲಕ ಜನರಲ್ಲಿ ಅರಿವು ಮೂಡಿಸಬೇಕು ಎಂದರು.

ವಿವಿಧ ಇಲಾಖೆಗಳಲ್ಲಿನ ಅಲ್ಪಸಂಖ್ಯಾತರಿಗೆ ಸಿಗಬೇಕಾದ ಸೌಲಭ್ಯ ಮತ್ತು ಯೋಜನೆಗಳಲ್ಲಿ ಪ್ರಗತಿ ಸಾಧಿಸಬೇಕು. ಮುಖ್ಯವಾಗಿ ಫಲಾನುಭವಿಗಳು ಅರ್ಜಿ ಹಾಕದಿರುವುದು ಎದ್ದು ಕಾಣುತ್ತಿದೆ. ಒಬ್ಬ ಫಲಾನುಭವಿ ಯಾವುದೇ ಯೋಜನೆಯಡಿ ಸಾಲ-ಸೌಲಭ್ಯ ಪಡೆಯಲು ಬ್ಯಾಂಕ್‌ಗೆ ಸಲ್ಲಿಸಬೇಕಾದ ದಾಖಲೆಗಳ ಬಗ್ಗೆ ಮಾಹಿತಿ ಇರುವುದಿಲ್ಲ, ಅಧಿಕಾರಿಗಳೂ ಮಾರ್ಗದರ್ಶನ ನೀಡುವುದಿಲ್ಲ. ಇದರಿಂದ ಅವನು ಯೋಜನೆ ಪಡೆಯುವುದಾದರೂ ಹೇಗೆ? ಹಾಗಾಗಿ ಪೂರಕ ದಾಖಲೆ ಸಲ್ಲಿಸುವ ಕುರಿತು ಅಗತ್ಯ ನಿರ್ದೇಶನ ನೀಡಬೇಕು ಅಥವಾ ಅಧಿಕಾರಿಯು ಬ್ಯಾಂಕ್‌ನವರೊಂದಿಗೆ ಸಮನ್ವಯತೆ ಮೂಲಕ ಕಾರ್ಯನಿರ್ವಹಿಸಬೇಕು ಎಂದು ತಿಳಿಸಿದರು.

ಪ್ರಧಾನಮಂತ್ರಿಗಳ ಹೊಸ 15 ಅಂಶಗಳ ಕಾರ್ಯಕ್ರಮದಡಿ ಎಲ್ಲ ಇಲಾಖೆಗಳು ನಿಗಧಿತ ಗುರಿ ಸಾಧಿಸುವ ಮೂಲಕ ಸಮರ್ಪಕವಾಗಿ ಅನುಷ್ಠಾನಗೊಳಿಸಬೇಕು ಎಂದು ಸೂಚಿಸಿದರು.

ಅಲ್ಪಸಂಖ್ಯಾತರಿಗೆ ಸವಲತ್ತುಗಳನ್ನು ತಲುಪಿಸುವ ಕಡೆ ಅಧಿಕಾರಿಗಳು ಗಮನಹರಿಸಬೇಕು. ಪ್ರತಿಯೊಬ್ಬ ನಾಗರಿಕರಿಗೂ ಎಲ್ಲ ಯೋಜನೆಗಳು ಮಾಹಿತಿದೊರೆಯುವಂತೆ ಅಧಿಕಾರಿಗಳು ಕಾರ್ಯನಿರ್ವಹಿಸಬೇಕು ಎಂದು ತಿಳಿಸಿದರು.

ನಗರದಲ್ಲಿ ವಕ್ಫ್ ಆಸ್ತಿ ಕಬಳಿಕೆ ಪ್ರಕರಣ ಬೆಳಕಿಗೆ ಬಂದಿದ್ದು, ಈವರೆಗೂ ಕ್ರಮ ಕೈಗೊಂಡಿಲ್ಲ; ಏನು ಮಾಡುತ್ತಿದ್ದೀರಿ, ಈ ಕೂಡಲೇ ಪರಿಶೀಲಿಸಿ ಸಂಬಂಧಿಸಿದ ಎಲ್ಲಾ ಮಾಹಿತಿ ದಾಖಲೆಗಳನ್ನು ಸಲ್ಲಿಸಬೇಕು ಎಂದು ರಾಜ್ಯಸಭಾ ಸದಸ್ಯ ಡಾ.ಸೈಯದ್ ನಾಸೀರ್ ಹುಸೇನ್ ಅವರು ಜಿಲ್ಲಾ ವಕ್ಫ್ ಕಚೇರಿ ಅಧಿಕಾರಿಗೆ ಸೂಚಿಸಿದರು.

ಜಿಲ್ಲಾಧಿಕಾರಿ ನಾಗೇಂದ್ರ ಪ್ರಸಾದ್.ಕೆ ಅವರು ಮಾತನಾಡಿ, ಅಧಿಕಾರಿಗಳು ತಮ್ಮ ಇಲಾಖೆಗಳ ಯೋಜನೆ, ಸೌಲಭ್ಯ ಮತ್ತು ನಿಗದಿಪಡಿಸಿದ ಭೌತಿಕ-ಆರ್ಥಿಕ ಗುರಿ ಬಗ್ಗೆ ನಿರ್ದಿಷ್ಟ ಹಾಗೂ ಪೂರಕ ಮಾಹಿತಿಯನ್ನು ಸಭೆಗೆ ನೀಡಬೇಕು ಎಂದು ತಿಳಿಸಿದರು.

ಸಭೆಯಲ್ಲಿ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಮಹಮ್ಮದ್ ಹಾರೀಸ್ ಸುಮೇರ್, ಜಿಪಂ ಉಪಕಾರ್ಯದರ್ಶಿ ಶಶಿಕಾಂತ್ ಶಿವಪುರೆ, ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ ಜಿಲ್ಲಾ ಅಧಿಕಾರಿ ರಾಜು, ಕರ್ನಾಟಕ ಅಲ್ಪಸಂಖ್ಯಾತರ ಅಭಿವೃದ್ಧಿ ನಿಗಮದ ಜಿಲ್ಲಾ ವ್ಯವಸ್ಥಾಪಕ ಮೆಹಬೂಬ್ ಸೇರಿದಂತೆ ವಿವಿಧ ಇಲಾಖೆಗಳ ಜಿಲ್ಲಾ ಮಟ್ಟದ ಅಧಿಕಾರಿಗಳು ಹಾಗೂ ಇನ್ನಿತರರು ಉಪಸ್ಥಿತರಿದ್ದರು.

# ಅರ್ಜಿ ಆಹ್ವಾನ

- ಮಲ್ಲಮ್ಮ ನುಡಿ ವಾರ್ತೆ ಬಳ್ಳಾರಿ

ಸಮಾಜ ಕಲ್ಯಾಣ ಇಲಾಖೆ ವತಿಯಿಂದ 2026-27 ನೇ ಸಾಲಿಗೆ ಜಿಲ್ಲೆಯಲ್ಲಿ ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡದ ಜನಾಂಗದವರ ಶ್ರೇಯಸ್ಸಿಗಾಗಿ ಪ್ರೋತ್ಸಾಹಿಸಿ,

ಶ್ರಮಿಸಿ, ಗಣನೀಯ ಸೇವೆ ಸಲ್ಲಿಸಿದ ಅರ್ಹ ವ್ಯಕ್ತಿಗಳಿಂದ ಡಾ.ಬಾಬು ಜಗಜೀವನರಾಂ ಹಾಗೂ ಡಾ.ಬಿ.ಆರ್.ಅಂಬೇಡ್ಕರ್ ಪ್ರಶಸ್ತಿಗಾಗಿ ಅರ್ಜಿ ಆಹ್ವಾನಿಸಲಾಗಿದೆ.

ಏ.05 ರಂದು ಡಾ.ಬಾಬು ಜಗಜೀವನರಾಂ ಅವರ 119ನೇ ಹಾಗೂ ಏ.14ರಂದು ಡಾ.ಬಿ.ಆರ್. ಅಂಬೇಡ್ಕರ್ ಅವರ 135ನೇ ಜನ್ಮ ದಿನಾಚರಣೆ ಅಂಗವಾಗಿ ಮೇಲ್ಕಂಡ ಪ್ರಶಸ್ತಿಗಳನ್ನು ನೀಡಿ ಗೌರವಿಸಲಾಗುತ್ತದೆ.

ಆಸಕ್ತಿಯುಳ್ಳ ಅಭ್ಯರ್ಥಿಗಳು ಅರ್ಜಿಗಳನ್ನು ಮಾ.05 ರೊಳಗಾಗಿ ಜಿಲ್ಲಾ ಸಮಾಜ ಕಲ್ಯಾಣ ಇಲಾಖೆ ಕಚೇರಿಗೆ ಸಲ್ಲಿಸಬಹುದಾಗಿದೆ.

ಹೆಚ್ಚಿನ ಮಾಹಿತಿಗಾಗಿ ದೂ.08392-267932 ಗೆ ಸಂಪರ್ಕಿಸಬಹುದು ಎಂದು ಸಮಾಜ ಕಲ್ಯಾಣ ಇಲಾಖೆಯ ಉಪನಿರ್ದೇಶಕ ಚಿದಾನಂದಪ್ಪ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಪ್ರಾಂತಿಯ ಅಧ್ಯಕ್ಷರಾಗಿ ಪುರುಷೋತ್ತಮ ರೆಡ್ಡಿ ಆಯ್ಕೆ



- ಮಲ್ಲಮ್ಮ ನುಡಿ ವಾರ್ತೆ ಬಳ್ಳಾರಿ

ಭಾರತೀಯ ಲೆಕ್ಕಪರಿಶೋಧಕ ಸಂಸ್ಥೆ ದಕ್ಷಿಣ ಪ್ರಾಂತೀಯ ಬಳ್ಳಾರಿ ಶಾಖೆಯ ನೂತನ ಅಧ್ಯಕ್ಷರಾಗಿ ಪುರುಷೋತ್ತಮ ರೆಡ್ಡಿ ಕೆ. ದಮ್ಮೂರು ಅವರು ಸರ್ವಾನುಮತದಿಂದ ಆಯ್ಕೆಯಾಗಿದ್ದಾರೆ.

ನಗರದ ರಾಘವೇಂದ್ರ ಕಾಲನಿಯಲ್ಲಿರುವ ಶಾಖೆಯಲ್ಲಿ ಫೆ.22 ರಂದು ಜರುಗಿದ ಸಮಾರಂಭದಲ್ಲಿ ನೂತನ ಪದಾಧಿಕಾರಿಗಳ ಪದಗ್ರಹಣ ಮಾಡಿದರು.

ಈ ಹಿಂದಿನ ಅಧ್ಯಕ್ಷ .ಗಜರಾಜ ಡಿ. ನೂತನ ಪದಾಧಿಕಾರಿಗಳಿಗೆ ಅಧಿಕಾರ ಹಸ್ತಾಂತರಿಸಿದರು. ಈ ವೇಳೆ ಶಾಖೆಯ ಕಾರ್ಯದರ್ಶಿಯಾಗಿ ಶರಣ್ ಪಾಟೀಲ್, ಉಪಾಧ್ಯಕ್ಷರಾಗಿ ಕೆ.ವಿ. ಸ್ವಪ್ನಪ್ರಿಯಾ, ಖಜಾಂಚಿಯಾಗಿ ವಿಶ್ವನಾಥ ಆಚಾರಿ ವಿ., ವಿದ್ಯಾರ್ಥಿ ವಿಭಾಗದ ಅಧ್ಯಕ್ಷರಾಗಿ ಹನುಮಂತರೆಡ್ಡಿ ಸಿ., ಸಹನಿಯುಕ್ತ ಸದಸ್ಯರಾಗಿ ಜಿತೇಂದ್ರ ಸುತಾರ್, ವೆಂಕಟೇಶ್ ಗುಂಡ ಆಯ್ಕೆಯಾಗಿದ್ದಾರೆ.

# ಸ್ಮಶಾನ ವಾಟಿಕೆಯಲ್ಲಿ ಸೌಲಭ್ಯ ಕಲ್ಪಿಸಲು ಮನವಿ



- ಮಲ್ಲಮ್ಮ ನುಡಿ ವಾರ್ತೆ ಬಳ್ಳಾರಿ

ಮೋಕಾ ರಸ್ತೆಯಲ್ಲಿನ ಅಟಲ್ ಬಿಹಾರಿ ವಾಜಪೇಯಿ ಲೇಔಟ್ ಹತ್ತಿರ ಇರುವ ಹಿಂದುಗಳ ಸ್ಮಶಾನವಾಟಿಕೆಯಲ್ಲಿ ನಾಗರಿಕರಿಗೆ ಸರಿಯಾದ ಅಂತ್ಯಕ್ರಿಯ ಮಾಡಲು ವ್ಯವಸ್ಥೆ ಇರುವುದಿಲ್ಲ ಅನಾನುಕೂಲವಾಗಿರುತ್ತದೆ ಯಾವುದೇ ಸೌಲಭ್ಯವಿಲ್ಲದೆ ನೀರು ಮತ್ತು ವಿದ್ಯುತ್ ವ್ಯವಸ್ಥೆ ಇರುವುದಿಲ್ಲ ಸ್ವಚ್ಛತೆ ಇರುದಿಲ್ಲ ಗಿಡಗಳು ಬೆಳೆದು

ನಿಂತಿರುತ್ತದೆ ಬಹಳ ಗಂಭೀರವಾಗಿ ಇರುತ್ತದೆ ಹಿರಿಯ ನಾಗರಿಕರಿಗೆ ಮತ್ತು ಮಹಿಳೆಯರಿಗೆ ಮತ್ತು ವಯಸ್ಸಾದ ವೃದ್ಧರಿಗೆ ಅಂತಕ್ರಿಯೆಯಲ್ಲಿ ಭಾಗಿಯಾಗಲು ಬಹಳ ತೆ-ೂಂದರೆ ಆಗುತ್ತದೆ ಹಿರಿಯ ನಾಗರಿಕರಿಗೆ ಎಲ್ಲಾನಾಗರಿಕರಿಗೆ

ಅನುಕೂಲ ಮಾಡಿ ಮಾಡಿಕೊಳ್ಳಬೇಕೆಂದು ಆಯುಕ್ತರಿಗೆ ಮನವಿ ಸಲ್ಲಿಸಿದ್ದಾರೆ. ಈ ಸಂದರ್ಭಧಲ್ಲಿ ಕೆ ಆರ್ ಎಸ್ ಪಕ್ಷದ ಎಸ್ಸಿ ಎಸ್ ಜಿಲ್ಲಾಧ್ಯಕ್ಷ ದಾಸರಿ ವೆಂಕಟೇಶಲು, ಜಿಲ್ಲಾ ಕಾರ್ಯದರ್ಶಿ ಜಾನ್ ಹಾಗೂ ಜಿಲ್ಲಾ ಕಾರ್ಯದರ್ಶಿ ಜನಾರ್ಧನ ಹಾಗೂ ರಾಮಚಂದ್ರಪ್ಪ ಇದ್ದರು.

# ಜೂರಿ ಪರೀಕ್ಷೆ ಯಶಸ್ವಿ 12 ಮಂದಿ ಯೋಗ ತೀರ್ಪುಗಾರರಾಗಿ ಆಯ್ಕೆ



- ಮಲ್ಲಮ್ಮ ನುಡಿ ವಾರ್ತೆ ಬಳ್ಳಾರಿ

ಬಳ್ಳಾರಿಯ ಶ್ರೀ ಸತ್ಯ ಸಾಯಿ ಮಂದಿರದಲ್ಲಿ ಶ್ರೀ ವಿಶ್ವಬಂಧು ನಾಗೇಶ್ ಗುರುಜಿಯವರ ಮಾರ್ಗದರ್ಶನದಲ್ಲಿ ಸ್ವಾಮಿ ವಿವೇಕಾನಂದ ಅಂತರಾಷ್ಟ್ರೀಯ ಯೋಗ ಅಕಾಡೆಮಿ ವತಿಯಿಂದ ಜೂರಿ ಪರೀಕ್ಷೆ ಯಶಸ್ವಿಯಾಗಿ ನಡೆಯಿತು.

ಈ ಪರೀಕ್ಷೆಯಲ್ಲಿ ಉತ್ತೀರ್ಣರಾದ ಬಳ್ಳಾರಿ ಜಿಲ್ಲೆಯ ಜಿಲ್ಲಾ ಪತಂಜಲಿ ಯೋಗಸಮಿತಿ ಸದಸ್ಯರಾದ ಇಸ್ವಿ ಪಂಪಾಪತಿ ಹಾಗೂ ಡಾ. ಎಪಿಜೆ ಅಬ್ದುಲ್ ಕಲಾಂ ವಸತಿ ಶಾಲೆಯ ದೈಹಿಕ ಶಿಕ್ಷಕರಾದ ಶ್ರೀ ರಂಗಪ್ಪ, ಸೇರಿ 12 ಮಂದಿ ಶಿಕ್ಷಕರು ಯೋಗಾಸನ ಸ್ಪರ್ಧೆಗಳ ತೀರ್ಪುಗಾರರಾಗಿ ಆಯ್ಕೆಯಾಗಿದ್ದು, ರಾಜ್ಯದ ಯಾವುದೇ ಯೋಗಾಸನ ಸ್ಪರ್ಧೆಗಳಲ್ಲಿ ತೀರ್ಪುಗಾರರಾಗಿ ಕಾರ್ಯನಿರ್ವಹಿಸಲು ಅರ್ಹತೆ ಪಡೆದಿದ್ದಾರೆ. ಈ ಸಂದರ್ಭದಲ್ಲಿ ಮಾತನಾಡಿದ ಶ್ರೀ ವಿಶ್ವ ಬಂಧು ನಾಗೇಶ್ ಗುರುಜಿ, ಪರೀಕ್ಷೆಯಲ್ಲಿ ಉತ್ತೀರ್ಣರಾದ ಶಿಕ್ಷಕರಿಗೆ ಅಭಿನಂದನೆ ಸಲ್ಲಿಸಿ, ಯೋಗಕ್ಷೇತ್ರದಲ್ಲಿ ಗುಣಮಟ್ಟದ ತೀರ್ಪುಗಾರರ ಅಗತ್ಯತೆ ಕುರಿತು ತಿಳಿಸಿದರು.

ಕಾರ್ಯಕ್ರಮದ ಅಧ್ಯಕ್ಷತೆಯನ್ನು ಅವರು ವಹಿಸಿದ್ದರು.

ಕಾರ್ಯಕ್ರಮವನ್ನು ಬಳ್ಳಾರಿ ಹಾಗೂ ವಿಜಯನಗರ ಜಿಲ್ಲೆಗಳ ಆಯುಷ್ ಇಲಾಖೆ ಮುಖ್ಯಸ್ಥರಾದ ಡಾ. ಪಣೀಂಧರ್ ಉದ್ಘಾಟಿಸಿದರು.

ಕಾರ್ಯಕ್ರಮದ ಆಯೋಜಕರಾಗಿ ಚಿದಂಬರಾವ್ (ಪತಂಜಲಿ ಯೋಗ ಸಮಿತಿ ಸಂಚಾಲಕರು, ರಾಜ್ಯ ಜೂರಿ ಸದಸ್ಯರು ಹಾಗೂ ರೆಫ್ರಿ) ಮತ್ತು ಎ. ರಾಘವೇಂದ್ರ (ಎರ್ಕಿ ಯೋಗ ಕೇಂದ್ರ ಕುರೇಕುಪ್ಪ ಕಾರ್ಯಾಧ್ಯಕ್ಷರು, ಗ್ಲೋಬಲ್ ಯೋಗ ಸಮಿತಿಯ ರಾಜ್ಯ ಸಂಯೋಜಕರು, ರಾಜ್ಯ ಜೂರಿ ಸದಸ್ಯರು ಹಾಗೂ ರೆಫ್ರಿ) ಕಾರ್ಯನಿರ್ವಹಿಸಿದರು.

ಮುಖ್ಯ ಅತಿಥಿಗಳಾಗಿ ಪಂಪಾಪತಿ ಮತ್ತು ಪ್ರಕಾಶ್ (ರಾಜ್ಯ ಸಮಿತಿ ಸದಸ್ಯರು, ಪತಂಜಲಿ ಯೋಗ ಸಮಿತಿ ಬಳ್ಳಾರಿ), ಹತ್ತಿಕಾಳು ವಿರುಪಾಕ್ಷಪ್ಪ (ಗೌರವ ಅಧ್ಯಕ್ಷರು, ಜಿಲ್ಲಾ ಪತಂಜಲಿ ಯೋಗ ಸಮಿತಿ), ಅಶೋಕ್ ದಿನ್ನಿ (ಅಧ್ಯಕ್ಷರು, ಭಾರತ ಸ್ವಾಭಿಮಾನ ಟ್ರಸ್ಟ್), ವಸ್ತ್ರದ್ (ಗೌರವ ಅಧ್ಯಕ್ಷರು, ಗ್ಲೋಬಲ್ ಯೋಗ ಸಮಿತಿ ಬಳ್ಳಾರಿ) ಹಾಗೂ ರಮೇಶ್ ಕೆ (ಅಧ್ಯಕ್ಷರು, ಗ್ಲೋಬಲ್ ಯೋಗ ಸಮಿತಿ ಬಳ್ಳಾರಿ) ಉಪಸ್ಥಿತರಿದ್ದರು.

ಕಾರ್ಯಕ್ರಮದ ಅಂಗವಾಗಿ ಯೋಗ ಸ್ಪರ್ಧೆಯೂ ನಡೆಯಿತು. ಎರ್ಕಿ ಯೋಗ ತಂಡ ಹಾಗೂ ಹರಗಿನದೋಣಿ ಯೋಗ ತಂಡದ ಮಕ್ಕಳಿಂದ ನಡೆದ ಯೋಗ ಪ್ರದರ್ಶನವಾಯಿತು.

# ಮೀನುಗಾರರಿಗೆ ಸಲಕರಣೆ ಕಿಟ್ ವಿತರಿಸಿದ ಶಾಸಕ ಗಣೇಶ್



- ಮಲ್ಲಮ್ಮ ನುಡಿ ವಾರ್ತೆ ಬಳ್ಳಾರಿ

ಮೀನುಗಾರಿಕೆ ಇಲಾಖೆ ವತಿಯಿಂದ 2025-26ನೇ ಸಾಲಿನ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದವರಿಗೆ ವಿಶೇಷ ಘಟಕ ಉಪಯೋಜನೆಯಡಿ ಕಂಪ್ಲಿ ಮತ್ತು ಕುರುಗೋಡು ಮೀನುಗಾರರಿಗೆ ಕಂಪ್ಲಿ ಶಾಸಕ ಹಾಗೂ ಕರ್ನಾಟಕ ರಾಜ್ಯ ಸಹಕಾರ ಕೈಮಗ್ಗ ನೇಕಾರರ ಮಹಾಮಂಡಳಿ ನಿಯಮಿತ (ಕಾವೇರಿ ಹ್ಯಾಂಡ್‌ಲೂಮ್ಸ್) ದ ಅಧ್ಯಕ್ಷರೂ ಆದ ಜೆ.ಎನ್.ಗಣೇಶ್ ಅವರು ಮಂಗಳವಾರ ಮೀನುಗಾರಿಕೆ ಸಲಕರಣೆ ಕಿಟ್ ವಿತರಿಸಿದರು.

ಫಲಾನುಭವಿ ಯೋಜನೆಯಡಿ ಮೀನು ಮಾರಾಟಗಾರ ರಾಹುಲ್ ನಾಗಪ್ಪ ಅವರಿಗೆ ಶಾಸಕರು ನಾಲ್ಕು ಚಕ್ರದ ವಾಹನ

ಖರೀದಿಗೆ ಸಹಾಯಧನದ ಚೆಕ್ ವಿತರಿಸಿದರು. ಇದೇ ವೇಳೆ ಮತ್ಸಾಶ್ರಯ ಫಲಾನುಭವಿಗಳಿಗೆ ಮನೆ ನಿರ್ಮಾಣಕ್ಕಾಗಿ ಕಾರ್ಯಾದೇಶ ಪ್ರತಿ ವಿತರಣೆ ಮಾಡಲಾಯಿತು.

ಈ ಸಂದರ್ಭದಲ್ಲಿ ಮೀನುಗಾರಿಕೆ ಉಪನಿರ್ದೇಶಕ ಶಿವಣ್ಣ, ಮೀನುಗಾರಿಕೆ ಸಹಾಯಕ ನಿರ್ದೇಶಕರಾದ ಬಿ.ಭಾವನ ಸೇರಿದಂತೆ ಇಲಾಖಾ ಸಿಬ್ಬಂದಿ ಹಾಗೂ ಸ್ಥಳೀಯ ಮೀನುಗಾರರು ಇದ್ದರು.

# 25ಕ್ಕೆ ಜಿಲ್ಲಾ ಮಟ್ಟದ ದಿಶಾ ಸಮಿತಿ ಸಭೆ

- ಮಲ್ಲಮ್ಮ ನುಡಿ ವಾರ್ತೆ ಬಳ್ಳಾರಿ

ಜಿಲ್ಲಾ ಪಂಚಾಯತ್ ವತಿಯಿಂದ ಫೆ.25 ರಂದು ಬೆಳಿಗ್ಗೆ 11 ಗಂಟೆಗೆ ನಗರದ ಜಿಲ್ಲಾ ಪಂಚಾಯತ್‌ನ ಅಬ್ದುಲ್ ನಜೀರ್ ಸಾಬ್ ಸಭಾಂಗಣದಲ್ಲಿ ಜಿಲ್ಲಾ ಅಭಿವೃದ್ಧಿ ಸಮನ್ವಯ ಉಸ್ತುವಾರಿ ಸಮಿತಿ "ದಿಶಾ" ಸಮಿತಿಯ ಮೂರನೇ ತ್ರೈಮಾಸಿಕ ಸಭೆ ನಡೆಸಲು ನಿಗದಿಪಡಿಸಲಾಗಿದೆ.

ಬಳ್ಳಾರಿ ಲೋಕಸಭಾ ಕ್ಷೇತ್ರದ ಸಂಸದರು ಹಾಗೂ ಜಿಲ್ಲಾ ಮಟ್ಟದ ದಿಶಾ ಸಮಿತಿಯ ಅಧ್ಯಕ್ಷರೂ ಆದ ಈ.ತುಕಾರಾಮ್ ಅವರು ಸಭೆಯ ಅಧ್ಯಕ್ಷತೆ ವಹಿಸುವರು. ಸಭೆಗೆ ಸಂಬಂಧಪಟ್ಟ ಇಲಾಖಾ ಅಧಿಕಾರಿಗಳು ಅಗತ್ಯಪೂರ್ಣ ಮಾಹಿತಿಯೊಂದಿಗೆ ತಪ್ಪದೇ ಹಾಜರಾಗಬೇಕು.

*ಅಹವಾಲು ಸ್ವೀಕಾರ:*

ಸಭೆಗೂ ಮುನ್ನ ಅಂದು ಬೆಳಿಗ್ಗೆ 10 ಗಂಟೆಗೆ ನಗರದ ಕೋಟೆ ಪ್ರದೇಶದ ಜಿಲ್ಲಾ ಪಂಚಾಯತ್ ಕಚೇರಿ ಆವರಣದಲ್ಲಿ ಕೇಂದ್ರ ಮತ್ತು ಕೇಂದ್ರ ಪುರಸ್ಕೃತ ಹಾಗೂ ಇತರೆ ಯೋಜನೆಗಳ ಕುರಿತಂತೆ ಸಂಸದ ಈ.ತುಕಾರಾಮ್ ಅವರು ಸಾರ್ವಜನಿಕರಿಂದ ಅಹವಾಲು ಸ್ವೀಕರಿಸುವರು. ಅಧಿಕಾರಿಗಳು ತಪ್ಪದೇ ಹಾಜರಿರಬೇಕು ಎಂದು ಜಿಲ್ಲಾ ಪಂಚಾಯತ್‌ನ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಹಾಗೂ ದಿಶಾ ಸಮಿತಿಯ ಸದಸ್ಯ ಕಾರ್ಯದರ್ಶಿಯೂ ಆದ ಮಹಮ್ಮದ್ ಹ್ಯಾರೀಸ್ ಸುಮ್ಮೈರ್ ಅವರು ತಿಳಿಸಿದ್ದಾರೆ.

# ಅಂಗಾರೆಡ್ಡಿಯವರ ಪುಣ್ಯತಿಥಿ



- ಮಲ್ಲಮ್ಮ ನುಡಿ ವಾರ್ತೆ ಬಳ್ಳಾರಿ

ನಗರದಲ್ಲಿ ರಾಘವ ಮೆಮೋರಿಯಲ್ ಅಸೋಶಿಯೇಶನ್ ಬಳ್ಳಾರಿ ವತಿಯಿಂದ ದಿವಂಗತ ಹೆಚ್ ಲಿಂಗಾರೆಡ್ಡಿ ಅವರ 50 ನೇ ಪುಣ್ಯತಿಥಿ ಸಮಾರಂಭ ರಾಘವ ಕಲಾ ಮಂದಿರದಲ್ಲಿ ನಡೆಯಿತು.

ಕಾರ್ಯಕ್ರಮವನ್ನೂ ಸಂಸ್ಥೆಯ ಪದಾಧಿಕಾರಿಗಳು ಮತ್ತು ದಿವಂಗತ ಹೆಚ್. ಲಿಂಗಾರೆಡ್ಡಿ ಕುಟುಂಬದವರು ಪುಣ್ಯಸ್ಮರಣೆ ಕಾರ್ಯಕ್ರಮ ನೇರವೇರಿಸಿದರು.

ದಿವಂಗತ ಹೆಚ್ ಲಿಂಗಾ ರೆಡ್ಡಿ ರವರ ಸಾಧನೆಯನ್ನು ಕುರಿತು ಉಪನ್ಯಾಸ ನೀಡಿ. ಲಿಂಗಾರೆಡ್ಡಿ ಅವರು ಕುರುಗೋಡು ಶಾಸಕರಾಗಿದ್ದರು.

ಕಂಪ್ಲಿ ಸಕ್ಕರೆ ಕಾರ್ಖಾನೆ, ಬಳ್ಳಾರಿ ನಗರದಲ್ಲಿ ದಾರದ ಮಿಲ್, ಜನತಾ ಬಜಾರ್ ಸ್ಥಾಪನೆ ಮಾಡಿದರು. ರಾಘವ ಕಲಾ ಮಂದಿರಕ್ಕೂ ಅವರ ಕೊಡುಗೆ ಬಹಳ ಇದೆ. ವಕೀಲರ ಸಂಘದ ಅಧ್ಯಕ್ಷರಾಗಿ ಸೇವೆ ಸಲ್ಲಿಸಿದ್ದರು.

ಕಂಪ್ಲಿ ಸಕ್ಕರೆ ಕಾರ್ಖಾನೆ ಸಂಕಷ್ಟದಲ್ಲಿದ್ದಾಗ ಮನೆಯಲ್ಲಿನ ಚಿನ್ನಾಭರಣವನ್ನು ಬಳಸಿಕೊಂಡವರು.

ಇವರ ಬಗ್ಗೆ ರಾಘವ ಮೆಮೋರಿಯಲ್ ಅಸೋಸಿಯೇಷನ್ ಗೌರವ ಕಾರ್ಯದರ್ಶಿ ಎನ್ ಪ್ರಕಾಶ್ ಅವರ ಸಾಧನೆಯನ್ನು ಸ್ಮರಿಸಿದರು.

ಈ ಸಂದರ್ಭದಲ್ಲಿ ಸಂಸ್ಥೆಯ ಗೌರವಾಧ್ಯಕ್ಷ ಕೆ. ಚನ್ನಪ್ಪ, ಉಪಾಧ್ಯಕ್ಷರು ಹೆಚ್. ವಿಷ್ಣುವರ್ಧನ್ ರೆಡ್ಡಿ, ಬಾಣಪುರ ರಮೇಶಗೌಡ, ಜಂಟಿ ಕಾರ್ಯದರ್ಶಿ ನಟರಾಜ್, ಸದಸ್ಯರುಗಳಾದ ಎನ್.ಬಸವರಾಜ್.ಕೆ ರಾಮಾಂಜನೇಯಲು, ಶ್ರೀನಿವಾಸಲು, ಎಂ ಹೇಮ ಚಂದ್ರರೆಡ್ಡಿ, ಭೀಮನೇನಿ ಭಾಸ್ಕರ್, ಹೆಚ್ ರಾಮಪ್ರಕಾಶ್ ರೆಡ್ಡಿ, ವಿ.ಜನಾರ್ದನ, ಜಿ ಆರ್ ವೆಂಕಟೇಶಲು, ಬಿಎಂ ಬಸವರಾಜ್, ಆರ್ ದೇವಣ್ಣ, ಎಂರಾಮಾಂಜನೇಯಲು, ರಾಮಚಂದ್ರ, ಶೇಷ ರೆಡ್ಡಿ , ರಮಣಪ್ಪ ಭಜಂತ್ರಿ ಮತ್ತು ಕಲಾಭಿಮಾನಿಗಳು ಇದ್ದರು

# ಸುಭದ್ರಮ್ಮ ಮನ್ಸೂರು ಪ್ರಶಸ್ತಿ ಪ್ರದಾನ

- ಮಲ್ಲಮ್ಮ ನುಡಿ ವಾರ್ತೆ ಬಳ್ಳಾರಿ



ನಗರದ ದೊಡ್ಡನಗೌಡ ರಂಗಮಂದಿರದಲ್ಲಿ ನಡೆದ ಕಲಾ ವೈಭವ ಸಮಾರಂಭದಲ್ಲಿ ಜನಪದ ಕಲಾವಿದ ಸಿರುಗುಪ್ಪದ ಸಾದುರಾಯಪ್ಪ ಅವರಿಗೆ ಬಳ್ಳಾರಿ ಜಿಲ್ಲಾ ಕಲಾವಿದರ ಸಂಘದಿಂದ ನೀಡುವ ಸುಭದ್ರಮ್ಮ ಮನ್ಸೂರು ಪ್ರಶಸ್ತಿಯನ್ನು ಲೋಕಸಭಾ ಸದಸ್ಯ ಈ.ತುಕಾರಾಂ ನೀಡಿ ಗೌರವಿಸಿದರು.

ಸಂಘದ ಅಧ್ಯಕ್ಷ ಯಲ್ಲಗೌಡ ಇದ್ದರು.
ಶಂಕರಬಂಡೆ ರ್ಮದಲಾದವರು

# ಸಮುದಾಯ ಸೇವೆಗೆ ಶಿಕ್ಷಣ ಬಳಕೆ



ವಾರ್ತೆಬಾಗಲಕೋಟೆ

ಶಿಕ್ಷಣ ಕೇವಲ ಪುಸ್ತಕ ಜ್ಞಾನಕ್ಕೆ ಸೀಮಿತವಾಗದೆ ಅದು ಸಮುದಾಯ ಸೇವೆಗೆ ಬಳಕೆಯಾದಾಗ ಪರಿಪೂರ್ಣವಾಗಬಲ್ಲದು ಎಂದು ಸಂಸ್ಥೆಯ ಕಾರ್ಯಾಧ್ಯಕ್ಷೆ ಶ್ರೀಲತಾ ಹೆರಂಜಲ ಅಭಿಪ್ರಾಯಪಟ್ಟರು.

ನಗರದ ವಿದ್ಯಾಪ್ರಸಾರಕ ಮಂಡಳದ ಎಸ್.ಆರ್.ನರಸಾಪೂರ ಕಲಾ ಮತ್ತು ಎಂ.ಬಿ.ಶಿರೂರ ವಾಣಿಜ್ಯ ಮಹಾವಿದ್ಯಾಲಯ ತನ್ನ ದತ್ತು ಗ್ರಾಮ ಸೀಮಿಕೇರಿ ಲಡ್ಡು ಮುತ್ಯಾ ದೇವಸ್ಥಾನ ಆವರಣದಲ್ಲಿ ಎರಡೂ ರಾಷ್ಟ್ರೀಯ ಸೇವಾ ಯೋಜನೆಯ ಏಳು ದಿನಗಳ ವಾರ್ಷಿಕ ವಿಶೇಷ ಶಿಬಿರವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಎನ್‌ಎಸ್‌ಎಸ್ ಕೇವಲ ಒಂದು ಚಟುವಟಿಕೆ ಆಗದೇ ಸಮಾಜಕ್ಕೆ ಸೇವೆ ಸಲ್ಲಿಸುವ, ಗ್ರಾಮಸ್ಥರೊಂದಿಗೆ ಬೆರೆಯುವ ಮತ್ತು ನಾಯಕತ್ವ ಗುಣಗಳನ್ನು ಬೆಳೆಸಿಕೊಳ್ಳುವ ಒಂದು ಅಮೂಲ್ಯ ಅವಕಾಶವಾಗಿದೆ. ಶಿಬಿರದ ವಿವಿಧ ಚಟುವಟಿಕೆಗಳಲ್ಲಿ ತೊಡಗಿಕೊಳ್ಳುವುದರ ಮೂಲಕ ವಿದ್ಯಾರ್ಥಿಗಳು ತಮ್ಮ ವ್ಯಕ್ತಿತ್ವವನ್ನು ಕೊಡುಗೆಯನ್ನು ನೀಡಬೇಕು ಎಂದು ಶ್ರೀಲತಾ ಹೇಳಿದರು.

ಕಾಲೇಜು ಉಪವಿಭಾಗದ ಅಧ್ಯಕ್ಷ ಡಾ.ಪಿ.ಆರ್.ಜೋಶಿ ಮಾತನಾಡಿ, ಶಿಬಿರದಲ್ಲಿ ಪಾಲ್ಗೊಳ್ಳುವುದರ ಮೂಲಕ ಉಳಿದವರೊಂದಿಗೆ ಒಂದಾಗಿ ಹೇಗೆ ಬಾಳಬೇಕು ಹಾಗೂ ಸಮಸ್ಯೆಗಳನ್ನು ಹೇಗೆ ಎದುರಿಸಬೇಕು ಎಂಬುದನ್ನು ತಿಳಿದುಕೊಳ್ಳಬಹುದಾಗಿದೆ. ತಮ್ಮಲ್ಲಿನ ಸುಪ್ತವಾಗಿರುವ ಪ್ರತಿಭೆಯನ್ನು ಪ್ರದರ್ಶಿಸಲು ಇದೊಂದು ಉತ್ತಮ ವೇದಿಕೆಯಾಗಿದೆ. ಶಿಬಿರದಲ್ಲಿ ಅನುಭವವನ್ನು ಸಮಾಜದ ಒಳಿತಿಗಾಗಿ ಬಳಸಿಕೊಳ್ಳಬೇಕು. ಸಾಮಾಜಿಕ ಸಮಸ್ಯೆಗಳಿಗೆ ಸ್ಪಂದಿಸುವ ಮನೋಭಾವವನ್ನು ಬೆಳೆಸಿಕೊಳ್ಳಬೇಕು ಎಂದು ಸಲಹೆ ನೀಡಿದರು.

ಅಧ್ಯಕ್ಷತೆ ವಹಿಸಿದ್ದ ಪ್ರಾಚಾರ್ಯ ಶ್ರೀನಿವಾಸ ನರಗುಂದ ಮಾತನಾಡಿ, ವಿದ್ಯಾರ್ಥಿಗಳು ಅಧ್ಯಯನದ ಜೊತೆಗೆ ಸೇವಾ ಮನೋಭಾವವನ್ನು ಬೆಳೆಸಿಕೊಳ್ಳಬೇಕು. ಗ್ರಾಮೀಣ ಪರಿಸರದ ಅನುಭವವನ್ನು ಪಡೆದುಕೊಂಡು ಹಲವು ಸಮಸ್ಯೆಗಳ ಬಗ್ಗೆ ಜನರಲ್ಲಿ ಜಾಗೃತಿಯನ್ನುಂಟು ಮಾಡಬೇಕು ಎಂದರು.

ಭ್ರಮರಾಂಬ ಮಡಿವಾಳರ ಸ್ವಾಗತಿಸಿದರು. ಅಕ್ಷತಾ ಬೋಕಿ ನಿರೂಪಿಸಿದರು. ಸೌಮ್ಯ ಅಂಗಡಿ ವಂದಿಸಿದರು. ಎನ್‌ಎಸ್‌ಎಸ್ ಕಾರ್ಯಕ್ರಮಾಧಿಕಾರಿಗಳಾದ ಎಸ್. ವಾಯ್.ಬೊಮ್ಮಣ್ಣವರ ಹಾಗೂ ಎಸ್.ಎಂ.ಹಡಪದ, ಶಿಬಿರದ ವಿದ್ಯಾರ್ಥಿ ನಾಯಕ ಪಾಂಡು ಗುದಗಿ ವೇದಿಕೆ ಮೇಲಿದ್ದರು.

# ಗ್ರಾಮೀಣ ಪ್ರದೇಶದಲ್ಲೂ ಗುಣಮಟ್ಟದ ಶಿಕ್ಷಣ

• ಮಲ್ಲಮ್ಮ ನುಡಿ ವಾರ್ತೆ ಬಾಗಲಕೋಟೆ



ಶಿಕ್ಷಣ ಎನ್ನುವುದು ನಿಂತ ನೀರಾಗಬಾರದು ಅದು ಸದಾ ಹರಿಯುತ್ತಿರುವ ನೀರಾಗಬೇಕೆನ್ನುವ ದೂರದೃಷ್ಠಿಯಿಂದ 11 ವರ್ಷದ ಹಿಂದೆ ಆರಂಭವಾದ ಈ ಶಾಲೆ ಇಂದು ಸ್ವಂತ ಕಟ್ಟಡವನ್ನು ಹೊಂದಿ ಮಕ್ಕಳಿಗೆ ಒಳ್ಳೆಯ ಗುಣಮಟ್ಟದ ಶಿಕ್ಷಣ ನೀಡುತ್ತಿರುವುದು ಶ್ಲಾಘನೀಯ ಎಂದು ಶಾಸಕ ವಿಜಯಾನಂದ ಕಾಶಪ್ಪನವರ ಹೇಳಿದರು. ಹುನಗುಂದ ತಾಲೂಕಿನ ಧನ್ನೂರ ಗ್ರಾಮದ ಧನೇಶ್ವರ ಹಿರಿಯ ಪ್ರಾಥಮಿಕ ಶಾಲೆಯ ವಾರ್ಷಿಕ ಸ್ನೇಹ ಸಮ್ಮೇಳನ ಹಾಗೂ ಧನ್ನೇಶ್ವರ ಸಂಭ್ರಮವನ್ನು ಉದ್ಘಾಟಿಸಿ ಮಾತನಾಡಿದ ಅವರು, ಕಲಿಕೆಯ ಪ್ರಾರಂಭ ಹಂತವೇ ಪೂರ್ವ ಪ್ರಾಥಮಿಕ ಶಾಲೆಯಾಗಿದೆ. ಗ್ರಾಮೀಣ ಪ್ರದೇಶದಲ್ಲಿ ಮಕ್ಕಳಿಗೆ ಗುಣಮಟ್ಟದ ಶಿಕ್ಷಣ ಸಿಗಬೇಕು ಎನ್ನುವ ಉದ್ದೇಶದಿಂದ ಸ್ವಂತ ಹಣದಲ್ಲಿ ಶಾಲೆ ಕಟ್ಟಿ ಇವತ್ತು ಉತ್ತಮ ಶಿಕ್ಷಣ ನೀಡುತ್ತಿದ್ದು. ಇಲ್ಲಿನ ಶಿಕ್ಷಕರು ಕೂಡಾ ಮಕ್ಕಳ ಕಲಿಕೆಗೆ ಹೆಚ್ಚಿನ ಆದ್ಯತೆಯನ್ನು ನೀಡುತ್ತಿದ್ದಾರೆ. ಪೂರ್ವ ಪ್ರಾಥಮಿಕ ಶಾಲೆ ಕಲಿಕೆ ಗಟ್ಟಿಯಾದರೆ ಮಾತ್ರ ಉನ್ನತ ಶಿಕ್ಷಣ ಸರಳವಾಗಲಿದೆ. ಈ ಒಂದು ಸಂಸ್ಥೆ ಮುಂದಿನ ದಿನಮಾನಗಳಲ್ಲಿ ಪೂರ್ವ ಪ್ರಾಥಮಿಕದಿಂದ ಪಿಯು ಶಿಕ್ಷಣ ಹಂತದವರೆಗೆ ಬೆಳವಣಿಗೆ ಹೊಂದಲಿ. ಈ ಸಂಸ್ಥೆ ಅಭಿವೃದ್ಧಿಗೆ ನಾನು ಕೂಡ ಸಹಾಯ ಸಹಕಾರ ಮಾಡುತ್ತೇನೆ ಎಂದರು. ಚಿತ್ತರಗಿಯ ಗುರುಮಹಾಂತ ಶ್ರೀಗಳು ಸಾನಿಧ್ಯ ವಹಿಸಿ ಮಾತನಾಡಿ, ಮನುಷ್ಯ ಜ್ಞಾನವನ್ನು ಹೊಂದಿ ಘಣತೆಯಿಂದ ಬದುಕಲು ಶಿಕ್ಷಣ ಬಹಳ ಮುಖ್ಯ. ಮಕ್ಕಳಿಗಾಗಿ ಆಸ್ತಿ ಮಾಡದೇ ಮಕ್ಕಳನ್ನೇ ಒಂದು ಆಸ್ತಿಯನ್ನಾಗಿ ಮಾಡಿ. ಸಾಲ ಮಾಡಿಯಾದರೂ ತಮ್ಮ ಮಕ್ಕಳಿಗೆ ಒಳ್ಳೆಯ ಶಿಕ್ಷಣವನ್ನು ನೀಡಿ ಎಂದು ಪಾಲಕರಿಗೆ ಕಿವಿ ಮಾತು ಹೇಳುವ ಮೂಲಕ ಈಶ್ವರಚಂದ್ರ ವಿದ್ಯಾಸಾಗರ ಅವರ ಬಡತನದ ಜೀವನ,ತಾಯಿ ಮಗನ ಕಲಿಕೆಗೆ ತಾಳಿ ಮಾರಿದ ಪ್ರಸಂಗ, ತಾಯಿಯ ಕಷ್ಟದ ಜೀವನ ಅರಿತು ಮುಂದೆ ಉತ್ತಮ ಶಿಕ್ಷಣ ಪಡೆದು ವಿಶ್ವವಿದ್ಯಾಲಯದ ಕುಲಪತಿಗಳಾಗಿ ಮುಂದೆ ಶಿಕ್ಷಣ ಸಂಸ್ಥೆ ಕಟ್ಟಿ ಗ್ರಾಮೀಣ ಪ್ರದೇಶದ ಮಕ್ಕಳಿಗೆ ಗುಣಮಟ್ಟದ ಶಿಕ್ಷಣ ನೀಡಿದಂತೆ ಇಂದು ಅಶೋಕ ಪಟ್ಟಣಶೆಟ್ಟಿ ಅವರು ಕೂಡಾ ಸ್ವಂತ ಹಣದಲ್ಲಿ ಶಿಕ್ಷಣ ಸಂಸ್ಥೆಯನ್ನು ಕಟ್ಟಿ ಉತ್ತಮ ಶಿಕ್ಷಣ ನೀಡುತ್ತಿದ್ದಾರೆ ಎಂದರು.

ಈ ಸಂದರ್ಭದಲ್ಲಿ. ಧನೇಶ್ವರ ಪೂರ್ವ ಪ್ರಾಥಮಿಕ ಶಾಲೆಯಲ್ಲಿ ಕಲಿತು ಮುರಾರ್ಜಿ ದೇಸಾಯಿ, ಕಿತ್ತೂರು, ನವೋದಯ ಸೇರದಂತೆ ವಿವಿಧ ವಸತಿ ಶಾಲೆಗಳಿಗೆ ಆಯ್ಕೆಯಾದ ವಿದ್ಯಾರ್ಥಿಗಳನ್ನು ಸಂಸ್ಥೆ ವತಿಯಿಂದ ಸನ್ಮಾನಿಸಿ ಗೌರವಿಸಲಾಯಿತು. ನಂತರ ಮಕ್ಕಳ ಸಾಂಸ್ಕೃತಿಕ ಚಟುವಟಿಕೆಗಳು ಜರುಗಿದವು. ಈ ಸಂದರ್ಭದಲ್ಲಿ ಸಂಸ್ಥೆಯ ಅಧ್ಯಕ್ಷ ಅಶೋಕ ಪಟ್ಟಣಶೆಟ್ಟಿ, ಪಂಚಾಕ್ಷರಯ್ಯ ಹಿರೇಮಠ, ಅರವಿಂದ ಕಟ್ಟಿಮನಿ, ಸಕ್ರಪ್ಪ ಹೂಗಾರ, ಈರಸಂಗಪ್ಪ ಅಂಗಡಿ, ಬಸವರಾಜ ಬೇವೂರ, ಬಸಯ್ಯ ಹಿರೇಮಠ, ವಾಯ್. ಎಚ್. ಹಿರೇಮಠ, ಸಂಗಮೇಶ ಬಂಡರಗಲ್ಲ, ಎಂ.ಎಸ್ ಪಾಟೀಲ, ಪಿಡಿಓ ಮಹಾಂತೇಶ ಕೋಟಿ, ವಸಂತ ಮೇಲಿನಮನಿ ಸೇರಿದಂತೆ ಅನೇಕರು ಇದ್ದರು. ಮುಖ್ಯೋಪಾಧ್ಯಾಯನಿ ವಿದ್ಯಾ ಪಟ್ಟಣಶೆಟ್ಟಿ ಶಾಲೆ ವಾರ್ಷಿಕ ವರದಿ ವಾಚಿಸಿದರು. ಪಿಡಿಓ ಗಿರಮಲ್ಲಪ್ಪ ಶಿರಗುಂಪಿ ಹಾಗೂ ಬಸವರಾಜ ಕಮ್ಮಾರ ಕಾರ್ಯಕ್ರಮ ನಿರೂಪಿಸಿ ವಂದಿಸಿದರು.

# ಕಾರು ಅಪಘಾತದಲ್ಲಿ ದೀಪಿಕಾ ನೋಟಗಾರ ಸಾವು



• ಮಲ್ಲಮ್ಮ ನುಡಿ ವಾರ್ತೆ ಬಾಗಲಕೋಟೆ

ನವನಗರದ ತೋಟಗಾರಿಕೆ ವಿಶ್ವವಿದ್ಯಾಲಯದ ಮುಂಭಾಗದ ಸಿಮಿಕೇರಿ ಬೈಪಾಸ್ ಗೆ ಹೋಗುವ ರಸ್ತೆಯಲ್ಲಿ ಕಾರು ಪಲ್ಟಿಯಾಗಿ, ನಗರದ ಬಿಟಿಡಿಎ ಸಹಾಯಕ ಕಾರ್ಯನಿರ್ವಾಹಕ ಅಭಿಯಂತರ ಸೋಮಲಿಂಗ ನೋಟಗಾರ ಅವರ ಪತ್ನಿ ದೀಪಿಕಾ ಸೋಮಲಿಂಗ ನೋಟಗಾರ (38) ಸ್ಥಳದಲ್ಲಿಯೇ ಮೃತಪಟ್ಟ ಘಟನೆ ರವಿವಾರ ಸಂಜೆ ಸಂಭವಿಸಿದೆ.

ದೀಪಿಕಾ ತಮ್ಮ ಪುತ್ರ, ಸಹೋದರನೊಂದಿಗೆ ಗದ್ದನಕೇರಿ ಕ್ರಾಸ್ ಗೆ ತರಕಾರಿ ತರಲು ಕಾರಿನಲ್ಲಿ ಹೊರಟಿದ್ದರು. ಈ ವೇಳೆ ಚಾಲಕನ ನಿಯಂತ್ರಣ ತಪ್ಪಿ, ರಸ್ತೆ ವಿಭಜಕ್ಕೆ ಕಾರು ಡಿಕ್ಕಿ ಹೊಡೆದು ಪಲ್ಟಿಯಾಗಿದ್ದು, ತಲೆಗೆ ತೀವ್ರ ಪೆಟ್ಟು ಬಿದ್ದ ಹಿನ್ನೆಲೆಯಲ್ಲಿ ದೀಪಿಕಾ ಅವರು ಸ್ಥಳದಲ್ಲಿಯೇ ಮೃತಪಟ್ಟರು.

ಘಟನೆಯಲ್ಲಿ ಪುತ್ರ ಹಾಗೂ ಸಹೋದರ ಗಾಯಗೊಂಡಿದ್ದಾರೆ. ಅವರನ್ನು ಚಿಕಿತ್ಸೆಗಾಗಿ ಖಾಸಗಿ ಆಸ್ಪತ್ರೆಗೆ ದಾಖಲಿಸಲಾಗಿದೆ.

# 28 ರವರೆಗೆ ನಿಷೇಧಾಜ್ಞೆ ಜಾರಿ

• ಮಲ್ಲಮ್ಮ ನುಡಿ ವಾರ್ತೆ ಬಾಗಲಕೋಟೆ

ಬಾಗಲಕೋಟೆ ಹಳೇ ನಗರ ವ್ಯಾಪ್ತಿಯಲ್ಲಿ ಫೆಬ್ರವರಿ 28 ರವರೆಗೆ ಕಲಂ 163 ಅನ್ವಯ ನಿಷೇಧಾಜ್ಞೆಯನ್ನು ಮುಂದುವರಿಸಲಾಗುತ್ತದೆ ಎಂದು ಜಿಲ್ಲಾ ಪೊಲೀಸ್ ಅಧೀಕ್ಷಕ ಸಿದ್ಧಾರ್ಥ ಗೋಯಲ್ ತಿಳಿಸಿದ್ದಾರೆ.

ನಗರದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಕಾನೂನು ಸುವ್ಯವಸ್ಥೆ ಕಾಪಾಡುವ ಉದ್ದೇಶದಿಂದ ಹಳೆ ನಗರ ಪ್ರದೇಶದ 4 ಕಿಲೋಮೀಟರ್ ವ್ಯಾಪ್ತಿಯಲ್ಲಿ ಕಲಂ 163 ಜಾರಿಯಲ್ಲಿರುತ್ತದೆ ಎಂದು ಸ್ಪಷ್ಟಪಡಿಸಿದರು. ಸಾರ್ವಜನಿಕರು ಯಾವುದೇ ರೀತಿಯ ಗೊಂದಲಕ್ಕೆ ಅವಕಾಶ ನೀಡದೆ ಶಾಂತಿ ಮತ್ತು ಸಾಮರಸ್ಯ ಕಾಪಾಡಬೇಕು ಎಂದು

ಎಸ್.ಪಿ.ಮನವಿ ಮಾಡಿದರು. ಫೆ.26 ರಂದು ಕೆಲವು ಸಂಘಟನೆಗಳು ಪ್ರತಿಭಟನೆ ನಡೆಸುವ ಸಾಧ್ಯತೆ ಇರುವ ಮಾಹಿತಿ ಲಭ್ಯವಾಗಿದ್ದು, ಹಳೆ ನಗರ ಪ್ರದೇಶದಲ್ಲಿ ಯಾವುದೇ ಪ್ರತಿಭಟನೆಗೆ ಅವಕಾಶ ನೀಡುವುದಿಲ್ಲ. ನಿಯಮ ಉಲ್ಲಂಘಿಸಿ ಗುಂಪು ಸೇರಿಕೆ, ಮೆರವಣಿಗೆ ಅಥವಾ ಸಾರ್ವಜನಿಕ ಸಭೆ ನಡೆಸಿದರೆ ಸಂಬಂಧಿಸಿದವರ ವಿರುದ್ಧ ಕಾನೂನು ಕ್ರಮ ಕೈಗೊಳ್ಳಲಾಗುವುದು

ಎಂದು ಹೇಳಿದರು. ಇದೇ ವೇಳೆ ಫೆ. 28 ರಿಂದ ಪಿಯುಸಿ ಪರೀಕ್ಷೆಗಳು ಆರಂಭವಾಗಲಿದ್ದು, ವಿದ್ಯಾರ್ಥಿಗಳ ಹಿತದೃಷ್ಟಿಯಿಂದ ಶಾಂತಿ ಕಾಪಾಡುವುದು ಅಗತ್ಯವಾಗಿದೆ. ವ್ಯಾಪಾರಸ್ಥರು ಹಾಗೂ ಸಾರ್ವಜನಿಕರಿಗೆ ತೊಂದರೆಯಾಗದಂತೆ ಪೊಲೀಸ್ ಇಲಾಖೆ ಅಗತ್ಯ ಬಂದೋಬಸ್ತ್ ವ್ಯವಸ್ಥೆ ಮಾಡಿದೆ ಎಂದು ಅವರು ತಿಳಿಸಿದರು. ಸಾರ್ವಜನಿಕರು ವದಂತಿಗಳಿಗೆ ಕಿವಿಗೊಡದೆ, ಪೊಲೀಸ್ ಇಲಾಖೆಯೊಂದಿಗೆ ಸಹಕರಿಸಿ ನಗರದಲ್ಲಿ ಶಾಂತಿ ಕಾಪಾಡಲು ಸಹಕರಿಸಬೇಕೆಂದು ಜಿಲ್ಲಾಡಳಿತ ಹಾಗೂ ಪೊಲೀಸ್ ಇಲಾಖೆ ಮನವಿ ಮಾಡಿವೆ.

# ಗ್ರಾಮೀಣ ಪ್ರದೇಶದಲ್ಲಿ ವಿದ್ಯುತ್ ವ್ಯತ್ಯಯ

• ಮಲ್ಲಮ್ಮ ನುಡಿ ವಾರ್ತೆ ರಾಯಚೂರು

ಫೆಬ್ರವರಿ 24 (ಕರ್ನಾಟಕ ವಾರ್ತೆ): ಜೆಸ್ಕಾಂ ಕಾರ್ಯ ಮತ್ತು ಪಾಲನೆ ಗ್ರಾಮೀಣ ಉಪ ವಿಭಾಗದ ವ್ಯಾಪ್ತಿಯ 33/11 ಕೆವಿ ಇಡಪನೂರು ವಿದ್ಯುತ್ ಉಪ ಕೇಂದ್ರದಲ್ಲಿ ತುರ್ತು ನಿರ್ವಹಣಾ ಕಾರ್ಯ ಹಮ್ಮಿಕೊಂಡಿರುವ

ಪ್ರಯುಕ್ತ ಫೆ.26ರ ಬೆಳಗ್ಗೆ 11ಗಂಟೆಯಿಂದ ಮಧ್ಯಾಹ್ನ 04ಗಂಟೆವರೆಗೆ ಇಡಪನೂರು ಉಪ ಕೇಂದ್ರದ ವ್ಯಾಪ್ತಿಯಲ್ಲಿ ವಿದ್ಯುತ್ ಪೂರೈಕೆಯಲ್ಲಿ ವ್ಯತ್ಯಯವಾಗಲಿದ್ದು, ಗ್ರಾಹಕರು ಸಹಕರಿಸುವಂತೆ ಜೆಸ್ಕಾಂ ಕಾರ್ಯ ಮತ್ತು ಪಾಲನೆ ಗ್ರಾಮೀಣ ಉಪ ವಿಭಾಗದ ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಉಳಿಮೇಶ್ವರ ಗ್ರಾಮದ ಶಾಲಾ ವಿಧ್ಯಾರ್ಥಿಗಳ ಆರೋಗ್ಯ ತಪಾಸಣೆ



• ಮಲ್ಲಮ್ಮ ನುಡಿ ವಾರ್ತೆ ಮುದಗಲ್

ನಾಗಲಾಪುರ ಗ್ರಾಮ ಪಂಚಾಯತಿ ವ್ಯಾಪ್ತಿಗೆ ಒಳಪಡುವ ಉಳಿಮೇಶ್ವರ ಗ್ರಾಮದಲ್ಲಿ ಸಮುದಾಯ ಆರೋಗ್ಯ ಅಧಿಕಾರಿ ಎಂ.ಬಿ ರವಿರಾಜ ಮಂಗಳವಾರ ಸರಕಾರಿ ಪ್ರಾಥಮಿಕ ಶಾಲಾ ವಿಧ್ಯಾರ್ಥಿಗಳ ಆರೋಗ್ಯ ತಪಾಸಣೆ ಮಾಡಿದರು. ಉಳಿಮೇಶ್ವರ ಗ್ರಾಮದ ಗ್ರಾಮಸ್ಥರೊಂದಿಗೆ ಸಮಾಲೋಚಿಸಿ ಬೇಸಿಗೆಯಿಂದ ಎಲ್ಲಾ ಪಾಲಕರು ಸೇರಿದಂತೆ ಮನೆಯಲ್ಲಿ ತಮ್ಮ ಮಕ್ಕಳು ಆರೋಗ್ಯವಂತರಾಗಿರಲು ಬಿಸಿ ನೀರು ಸೇವನೆ ಅತ್ಯವಶ್ಯಕವಾಗಿದೆ.

ಬಿಸಿ ನೀರು ಕುಡಿಯುವುದರಿಂದ ನೆಗಡಿ, ಕೆಮ್ಮು, ಜ್ವರದಂತ ಕಾಯಿಲೆಗಳಿಗೆ ಮುನ್ನೆಚ್ಚರಿಕೆ ವಹಿಸಬಹುದು. ಎಣ್ಣೆಯಲ್ಲಿ ಖರೀದ ಪದಾರ್ಥ, ಬೇಕರಿ ತಿನಿಸು, ಹಾಗೂ ರಸ್ತೆ ಬದಿ ಮರಾಟ ತಿನಿಸುಗಳಿಂದ ದೂರವಿರಬೇಕು, ಸ್ವಚ್ಚತೆಗೆ ಹಚ್ಚಿನ ಆಧ್ಯತೆ ನೀಡಬೇಕು, ಆಹಾರ ಸೇವನೆ ಮುನ್ನ ನಮ್ಮ ಕೈಗಳನ್ನು ಶುದ್ಧಿಕರಿಸಿಕೊಳ್ಳಬೇಕು ಎಂದು ತಿಳಿಸಿದರು. ಆರೋಗ್ಯ ನೀರಿಕ್ಷಣಾಧಿಕಾರಿ ಕೋರಿ ಸಿದ್ಧಯ್ಯ, ಮುಖ್ಯಗುರುಗಳು ಮೋಹನ ಪತ್ತಾರ ಕಟಗೂರು ಸೇರಿದಂತೆ ಗ್ರಾಮಸ್ಥರು, ಶಾಲಾ ಸಿಬ್ಬಂದಿಗಳು ಇದ್ದರು.



**ಹುಣಸೂರು :ತಾಲ್ಲೂಕಿನ ಬಿಳಿಕೆರೆಯಲ್ಲಿ ನಯನಜ ಕ್ಷತ್ರಿಯ ಸವಿತಾ ಸಮಾಜ ಸಮುದಾಯ ಭವನವನ್ನು ಮಾಜಿ ಶಾಸಕ ಹಾಗೂ ಸ್ನೇಹಜೀವಿ ಎಚ್ ಪಿ ಮಂಜುನಾಥ್ ರವರು ಸಮಾಜದ ಗಣ್ಯರೊಂದಿಗೆ ಉದ್ಘಾಟಿಸಿದರು ಈ ವೇಳೆ ಮಾತನಾಡಿ ನಾನು ಶಾಸಕನಾಗಿದ್ದ ಅವಧಿಯಲ್ಲಿ ಈ ಸಮುದಾಯ ಭವನ ನಿರ್ಮಾಣದ ಜಾಗಕ್ಕಾಗಿ ವೈಯಕ್ತಿಕ ಸಹಾಯ ಮಾಡಿ ನಂತರ ಭವನ ನಿರ್ಮಾಣಕ್ಕೆ ಶಾಸಕರ ಅನುದಾನದಡಿ 10 ಲಕ್ಷ ರೂಪಾಯಿಗಳ ಅನುದಾನವನ್ನು ನೀಡಿದ್ದು, ಇದಲ್ಲದೆ ಸವಿತಾ ಸಮಾಜದ ಎಲ್ಲಾ ಅಭಿವೃದ್ಧಿ ಕಾರ್ಯಗಳು ಸೇರಿದಂತೆ ಅವರ ಕಷ್ಟ ಸುಖಗಳಿಗೆ ಬೆನ್ನೆಲುಬಿನಂತೆ ಕಾರ್ಯ ನಿರ್ವಹಿಸಿದ್ದೇನೆ ಅಲ್ಲದೇ ಇಂದು ವೈಯಕ್ತಿಕವಾಗಿ ಸವಿತಾ ಸಮುದಾಯದ ಅಭ್ಯುದಯಕ್ಕಾಗಿ 50 ಸಾವಿರ ರೂಪಾಯಿಗಳನ್ನು ದೇಣಿಗೆಯಾಗಿ ನೀಡಿದರು.**

# ಐಟಿಸಿ ಕಪಿಮುಷ್ಟಿಯಲ್ಲಿ ತಂಬಾಕು ಮಂಡಳಿ ಮಾಜಿ ಶಾಸಕ ಮಂಜುನಾಥ್ ಆಕ್ರೋಶ

• ಮಲ್ಲಮ್ಮ ನುಡಿ ವಾರ್ತೆ ಹುಣಸೂರು



ತಂಬಾಕು ಖರೀದಿ ದಿಗ್ಗಜ ಐ.ಟಿ.ಸಿ ಕಂಪನಿ ದರ ನಿಗದಿ ಕುತಂತ್ರದಿಂದ ಇಂದು ರೈತರು ಬೀದಿಗೆ ಬೀಳುವ ಪರಿಸ್ಥಿತಿ ನಿರ್ಮಾಣವಾಗಿದೆ ಹಾಗೂ ರೈತರ ಹಿತ ಕಾಯಬೇಕಿದ್ದ ತಂಬಾಕು ಮಂಡಳಿ ಕೂಡ ಐಟಿಸಿ ಕಪಿಮುಷ್ಟಿಗೆ ಸಿಲುಕಿರುವುದು ಆತಂಕಕಾರಿ ಬೆಳವಣಿಗೆ ಎಂದು ಮಾಜಿ ಶಾಸಕ ಎಚ್.ಪಿ.ಮಂಜುನಾಥ್ ಆಕ್ರೋಶ ವ್ಯಕ್ತಪಡಿಸಿದ್ದಾರೆ.

ಸತತ ಒಂದು ವಾರದಿಂದ ಐ.ಟಿ.ಸಿ ಹಾಗೂ ಇನ್ನಿತರೆ ತಂಬಾಕು ಖರೀದಿ ಕಂಪನಿ ಹಾಗೂ ತಂಬಾಕು ಮಂಡಳಿಯವರಿಂದ ತಮಗೆ ಆಗುತ್ತಿರುವ ಅನ್ಯಾಯದ ವಿರುದ್ಧ ರೈತರು ನಡೆಸುತ್ತಿರುವ ಪ್ರತಿಭಟನೆಯಲ್ಲಿ ಪಾಲ್ಗೊಂಡು ಮಾತನಾಡಿದ ಮಂಜುನಾಥ್, ಈ ಹಿಂದಿನಿಂದಲೂ ಕೂಡ ತಂಬಾಕು ಬೆಳೆಗಾರರಿಗೆ ಅನ್ಯಾಯವಾಗುತ್ತಿದ್ದು, ಖರೀದಿದಾರ ಕಂಪನಿಗಳು ಸರಿಯಾದ ದರ ನಿಗದಿ ಮಾಡದೆ ಅವರನ್ನು ಸಂಕಷ್ಟಕ್ಕೆ ದೂಡುತ್ತಿದೆ.

ಇಡೀ ಪ್ರಪಂಚದಲ್ಲೇ ನಮ್ಮ ಕರ್ನಾಟಕ ಭಾಗದಲ್ಲಿ ಬೆಳೆಯುವ ತಂಬಾಕಿಗೆ ಸೂಕ್ತ ಮಾರುಕಟ್ಟೆ ಹಾಗೂ ಬೇಡಿಕೆ ಇದ್ದರೂ, ಬೆಲೆ ನಿಗದಿ ಮಾಡುವಲ್ಲಿ ಖರೀದಿದಾರ ಕಂಪನಿಗಳು ಪಾರುಪತ್ಯ ಮಾಡುತ್ತ ಬಂದಿವೆ, ಪಕ್ಕದ ರಾಜ್ಯಗಳಲ್ಲಿ ಒಂದು ರೀತಿ ದರ, ನಮ್ಮಲ್ಲಿ ಒಂದು ರೀತಿ ದರ ನಿಗದಿ ಮಾಡಿ ನಮ್ಮ ರೈತರಿಗೆ ಅನ್ಯಾಯ ವೆಸಗುತ್ತಿದ್ದಾರೆ ಎಂದರು.

ಇಷ್ಟೆಲ್ಲಾ ಆಗುತ್ತಿದ್ದರು ನ್ಯಾಯ ಕೊಡಿಸಬೇಕಿರುವ ತಂಬಾಕು ಮಂಡಳಿ ಮಾತ್ರ ನೆಪ ಮಾತ್ರಕ್ಕೆ ಕಾರ್ಯನಿರ್ವಹಿಸುತ್ತಿರುವುದು ನೋಡಿದರೆ ಖರೀದಿದಾರ ಕಂಪನಿಗಳ ಜೊತೆ ಕೈಜೋಡಿಸಿರುವ ಅನುಮಾನ ಮೂಡುತ್ತದೆ ಎಂದು ದೂರಿದರು.

ಈ ವಿಚಾರವಾಗಿ ನಾನು ಹಾಗೂ ನಮ್ಮ ಪಕ್ಷದ ಕೆಲ ಮುಖಂಡರು ಮುಖ್ಯಮಂತ್ರಿಗಳ ಗಮನಕ್ಕೆ ತಂದು ಜಿಲ್ಲಾಧಿಕಾರಿ ನೇತೃತ್ವದಲ್ಲಿ ಎಲ್ಲಾ ಜನಪ್ರತಿನಿಧಿಗಳ ಹಾಗೂ ರೈತ ಮುಖಂಡರುಗಳ ಸಭೆ ನಡೆಸಿದ್ದು, ತಂಬಾಕು ಮಂಡಳಿಗೆ ಹಾಗೂ ಖರೀದಿದಾರರಿಗೆ ಎಚ್ಚರಿಕೆ ನೀಡಲಾಗಿದೆ.

ಮುಂದಿನ ದಿನಗಳಲ್ಲಿ ಖರೀದಿದಾರರು ಹಾಗೂ ಮಂಡಳಿಯವರು ಸೂಕ್ತ ರೀತಿಯಲ್ಲಿ ರೈತರನ್ನು ನಡೆಸಿಕೊಳ್ಳದೆ ಹೋದರೆ ಉಗ್ರ ಪ್ರತಿಭಟನೆ ಹಮ್ಮಿಕೊಳ್ಳಲಾಗುವುದೆಂದು ಮಂಜುನಾಥ್ ಎಚ್ಚರಿಸಿದ್ದಾರೆ.

# ಅಭಿನವ ರೇಣುಕ ಶ್ರೀ ಪ್ರಶಸ್ತಿ 2026: ಗಣ್ಯರ ಆಯ್ಕೆ

• ಮಲ್ಲಮ್ಮ ನುಡಿ ವಾರ್ತೆ. ಬಸವಕಲ್ಯಾಣದ



ಇಲ್ಲಿನ ತಿಪುರಾಂತಿನ ಶ್ರೀ ಘನಲಿಂಗರುದ್ರಮುನಿ ಶಿವಾಚಾರ್ಯ ಗವಿಮಠದ ವತಿಯಿಂದ ಪ್ರತಿಷ್ಠಿತ 2026 ರ ಅಭಿನವ ರೇಣುಕ ಶ್ರೀ ಪ್ರಶಸ್ತಿಗೆ ನಾಲ್ಕು ಜನ ಗಣ್ಯರನ್ನು ಆಯ್ಕೆ ಮಾಡಲಾಗಿದೆ. ಪ್ರಶಸ್ತಿ ಪುರಸ್ಕೃತರಾದ.

ನಿವೃತ್ತ ಉಪನ್ಯಾಸಕರಾದ ಮಲ್ಲಿಕಾರ್ಜುನ ಧೂಳಯ್ಯಾ ಕಾಡಾದಿ ಮಠ.

ಗ್ಯಾರಂಟಿ ನ್ಯೂಸ್ ಜಿಲ್ಲಾ ವರದಿಗಾರರಾದ ಶಿವಯ್ಯಾ ಕರಬಸಯ್ಯಾ ಮಠಪತಿ ನಾರಾಯಣಪೂರ. ಬಸವರಾಜ ಹನುಮಶೆಟ್ಟಿ ಮಾಲಿ ಪಾಟೀಲ ತ್ರಿಪೂರಾಂತ. ಸದಾನಂದ ವೀರಯ್ಯಾಸ್ವಾಮಿ ಕಣಜೆ. ಈ ವಿಷಯವನ್ನು ಗವಿಮಠದ ಪೀಠಾಧಿಪತಿಗಳಾದ ಪೂಜ್ಯಶ್ರೀ ಡಾ. ಅಭಿನವ ಘನಲಿಂಗ ರುದ್ರಮುನಿ ಶಿವಾಚಾರ್ಯರು ತಿಳಿಸಿದ್ದಾರೆ. ದಿನಾಂಕ: ಮಾರ್ಚ್ 1 ರಂದು ಸಮಯ: ಸಂಜೆ 4. ಗಂಟೆ ಸ್ಥಳ: ಗವಿಮಠದಲ್ಲಿ ಈ ಪ್ರಶಸ್ತಿ ಪ್ರಧಾನ ಸಮಾರಂಭವು ಜಗದ್ಗುರು ರೇಣುಕಾಚಾರ್ಯ ಜಯಂತಿ ಯುಗಮಾನೋತ್ಸವ ಅಂಗವಾಗಿ ಜರುಗಲಿದೆ.

ಸಕಲ ಸದ್ಭಕ್ತರು ಹೆಚ್ಚಿನ ಸಂಖ್ಯೆಯಲ್ಲಿ ಆಗಮಿಸಿ ಶ್ರೀ ಜಗದ್ಗುರು ರೇಣುಕಾಚಾರ್ಯರ ಹಾಗೂ ಶ್ರೀ ಘನಲಿಂಗರುದ್ರಮುನಿ ಶಿವಯೋಗಿಗಳ ದರ್ಶನ ಪಡೆದು ಮಹಾಪ್ರಸಾದ ಸ್ವೀಕರಿಸಿ ಪುನೀತರಾಗಬೇಕೆಂದು ಗವಿಮಠ ಟ್ರಸ್ಟ್ ವತಿಯಿಂದ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಬಸವಕಲ್ಯಾಣ ರೈತ ಸಂಪರ್ಕ ಕೇಂದ್ರದ ಮುಂಭಾಗದಲ್ಲಿ ರಸ್ತೆ ನಿರ್ಮಾಣಕ್ಕೆ ಒತ್ತಾಯ

• ಮಲ್ಲಮ್ಮ ನುಡಿ ವಾರ್ತೆ ಬಸವಕಲ್ಯಾಣ



ತಾಲೂಕಿನ ಮಂಠಾಳ ಗ್ರಾಮದ ರೈತ ಸಂಪರ್ಕ ಕೇಂದ್ರದ ಎದುರುಗಡೆ ರಸ್ತೆ ಹಾಗೂ ಚರಂಡಿ ನಿರ್ಮಾಣಕ್ಕೆ ಮುಂದಾಗಬೇಕು ಎಂದು ಸಸ್ತಾಪೂರ ಗ್ರಾಮದ ರೈತ ಮುಖಂಡರಾದ ಮಡಿವಾಳಪ್ಪಾ ಪಾಟೀಲ ಒತ್ತಾಯಿಸಿದ್ದಾರೆ. ಈ ಸ್ಥಳದಲ್ಲಿ ಸುಮಾರು ದಿನಗಳಿಂದ ಹಾಗೆ ಉಳಿದಿರುವ ರಸ್ತೆ ಕಾಮಗಾರಿ ಪೂರ್ಣಗೊಳಿಸಿ ರೈತ ಸಂಪರ್ಕ ಕೇಂದ್ರಕ್ಕೆ ಬರಲು ಅನುಕೂಲ ಮಾಡಿಕೊಡಬೇಕು ಒತ್ತಾಯಿಸಿದರು. ರೈತ ಸಂಪರ್ಕ ಕೇಂದ್ರಕ್ಕೆ ಸುಮಾರು ಗ್ರಾಮಗಳ ರೈತರು ರೈತ ಸಂಪರ್ಕಕ ಕೇಂದ್ರಕ್ಕೆ ಬಂದು ಹೋಗುತ್ತಾರೆ. ಈ ರಸ್ತೆಯಿಂದ ಬಹಳಷ್ಟು ಜನರಿಗೆ ತೊಂದರೆ ಯಾಗುತದೆ ಎಂದರು. ಇನ್ನೂ ಮುಂದೆ ಯಾದರು ಸಂಬಂಧಿಸಿದ ಅಧಿಕಾರಿಗಳು ಹಾಗೂ ಜನಪ್ರತಿನಿಧಿಗಳು ಇತ ಕಡೆ ಗಮನ ಹರಿಸಿ ಆದಷ್ಟು ಬೇಗ ಸುಗಮ ಸಂಚಾರಕ್ಕೆ ಅನುಕೂಲ ಮಾಡಿಕೊಡಬೇಕು ಎಂದು ಆಗ್ರಹಿಸಿದರು.

# ಅರ್ಹ ಫಲಾನುಭವಿಗಳಿಗೆ ಸಾಲ ಸೌಲಭ್ಯ ತಲುಪಿಸಿ : ಗದ್ದಿಗೌಡರ

• ಮಲ್ಲಮ್ಮ ನುಡಿ ವಾರ್ತೆ ಬಾಗಲಕೋಟೆ



ಪ್ರಧಾನಮಂತ್ರಿ ಉದ್ಯೋಗ ಸೃಜನ ಯೋಜನೆ, ಮುದ್ರಾ, ಕೃಷಿ, ಪ್ರಧಾನಮಂತ್ರಿ ವಿಶ್ವಕರ್ಮ ಹಾಗೂ ಶಿಕ್ಷಣ ಸಾಲಗಳ ಮಂಜೂರಾತಿಯಲ್ಲಿ ಬ್ಯಾಂಕ್‌ಗಳು ವೇಗ ಹೆಚ್ಚಿಸುವ ಮೂಲಕ ಅರ್ಹ ಫಲಾನುಭವಿಗಳಿಗೆ ಸಾಲಸೌಲಭ್ಯ ತಲುಪಿಸುವಲ್ಲಿ ಅಧಿಕಾರಿಗಳು ಸಮನ್ವಯದಿಂದ ಕಾರ್ಯನಿರ್ವಹಿಸಬೇಕು ಎಂದು ಸಂಸದ ಪಿ.ಸಿ.ಗದ್ದಿಗೌಡರ ತಿಳಿಸಿದರು.

ಜಿಲ್ಲಾ ಪಂಚಾಯತ ನೂತನ ಸಭಾಭವನದಲ್ಲಿ ಮಂಗಳವಾರ ಜರುಗಿದ ಜಿಲ್ಲಾ ಅಭಿವೃದ್ಧಿ ಸಂಯೋಜನಾ ಸಮಿತಿ ಹಾಗೂ ಜಿಲ್ಲಾ ಮಟ್ಟದ ಬ್ಯಾಂಕ್‌ಗಳ ಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು ವಿವಿಧ ಸರಕಾರದ ಯೋಜನೆಗಳ ಪ್ರಗತಿ, ಬ್ಯಾಂಕ್‌ಗಳ ಸಾಲ ವಿತರಣೆ ಸ್ಥಿತಿ, ಸ್ವ–ಉದ್ಯೋಗ ಯೋಜನೆಗಳ ಅನುಷ್ಠಾನ ಹಾಗೂ ಸಾರ್ವಜನಿಕರಿಗೆ ದೊರೆಯುವ ಸೌಲಭ್ಯಗಳ ಕುರಿತು ಪರಿಶೀಲನೆ ಮಾಡಿದರು.

ನಬಾರ್ಡ ಯೋಜನೆಗಳ ಬಗ್ಗೆ ಮಾಹಿತಿ ಇಲ್ಲ. ಯೋಜನೆಗಳ ಅರಿವು ಮೂಡಿಸಿದಾಗ ಮಾತ್ರ ಸಾಲ ಸೌಲಭ್ಯಗಳು ಅರ್ಹ ಫಲಾನುಭವಿಗಳಿಗೆ ದೊರೆಯಲು ಸಾಧ್ಯವಾಗುತ್ತದೆ. ಕೃಷಿ ಮತ್ತು ಪಶುಪಾಲನಾ ಸಾಲಗಳ ಗುರಿ ಸಾಧನೆ ಆಗಬೇಕು. ಮುದ್ರಾ ಯೋಜನೆಗಳ ಅನುಷ್ಠಾನ, ಬಾಕಿ ಇರುವ ಸಾಲ ಅರ್ಜಿಗಳ ತ್ವರಿತ ಪರಿಹಾರ ದೊರೆಯುವ ಕೆಲಸವಾಗಬೇಕು. ಜನಸಾಮಾನ್ಯರಿಗೆ ಬ್ಯಾಂಕಿಂಗ್ ಸೇವೆಗಳು ಸರಳವಾಗಿ ದೊರೆಯುವಂತೆ ಆಗಬೇಕು. ಈ ನಿಟ್ಟಿನಲ್ಲಿ ಬ್ಯಾಂಕ್ ಅಧಿಕಾರಿಗಳು ಜವಾಬ್ದಾರಿಯಿಂದ ಕೆಲಸ ಮಾಡಿದಾಗ ಮಾತ್ರ ಸಾಧ್ಯವಾಗುತ್ತದೆ ಎಂದು ತಿಳಿಸಿದರು.


ಜಿಲ್ಲಾಧಿಕಾರಿ ಸಂಗಪ್ಪ ಮಾತನಾಡಿ ಬ್ಯಾಂಕಿನಿಂದ ಅನು ಕೂಲ ತೆಗೆದುಕೊಳ್ಳುವುದು ಬಹಳ ಕಷ್ಟವಾಗುತ್ತಿದೆ ಎಂದರು.



ಬಳ್ಳಾರಿ, ಕೊಪ್ಪಳ ಹಾಗೂ ವಿಜಯನಗರ ಜಿಲ್ಲಾ ಬ್ಯುರೋಗಳ ಮುಖ್ಯಸ್ಥರ ಜೊತೆ ನಡೆದ ಸಭೆಯಲ್ಲಿ ಪಾಲ್ಗೊಂಡ ಮಲ್ಲಮ್ಮನುಡಿ ಪತ್ರಿಕಾ ಬಳಗ.

## ಸಾವಿನಲ್ಲೂ ಒಂದಾದ ದಂಪತಿ

**ಬಾಗಲಕೋಟೆ:** ಪತಿಯ ಸಾವಿನ ಸುದ್ದಿ ಕೇಳಿ ಆಘಾತಕ್ಕೊಳಗಾಗಿ ಪತ್ನಿಯೂ ಸಾವನ್ನಪ್ಪಿದ ಘಟನೆ ಜಿಲ್ಲೆಯ ಬೀಳಗಿ ತಾಲ್ಲೂಕಿನ ಹೊಸರೊಳ್ಳಿ ಗ್ರಾಮದಲ್ಲಿ ನಡೆದಿದೆ. ಹೊಸರೊಳ್ಳಿಯ ರೈತ ಅಪ್ಪಣ್ಣ ಭೀಮಪ್ಪ ಗಲಗಲಿ(84), ಪತ್ನಿ ಯಲ್ಲವ್ವ ಅಪ್ಪಣ್ಣ ಗಲಗಲಿ(72) ಹೃದಯಾಘಾತದಿಂದ ಅಸುನೀಗಿ ಸಾವಿನಲ್ಲೂ ಒಂದಾಗಿದ್ದಾರೆ. ಸೋಮವಾರ ಬೆಳಿಗ್ಗೆ 9 ಗಂಟೆಗೆ ಅಪ್ಪಣ್ಣ ಅವರಿಗೆ ಎದೆ ನೋವು ಕಾಣಿಸಿಕೊಂಡಿದ್ದು ಸಮೀಪದ ಬಾಡಗಂಡಿ ಎಸ್.ಆರ್. ಪಾಟೀಲ ಆಸ್ಪತ್ರೆಗೆ ಕರೆದುಕೊಂಡು ಹೋಗಿದ್ದು, ಅಲ್ಲಿ ವೈದ್ಯರು ಪರಿಕ್ಷೀಸಿ ಹೃದಯಾಘಾತವಾಗಿ ಪ್ರಾಣ ಹೋಗಿರುವುದಾಗಿ ತಿಳಿಸಿದ್ದಾರೆ. ಇತ್ತ ಊರಿನಲ್ಲಿದ್ದ ಪತ್ನಿ ಯಲ್ಲವ್ವಳಿಗೆ ಪತಿಯ ಮರಣದ ಸುದ್ದಿ ಕೇಳಿ ಆಘಾತಗೊಂಡು ಕುಸಿದು ಬಿದ್ದದ್ದ-ರಿಂದ ಅವಳನ್ನು ಆಸ್ಪತ್ರೆಗೆ ಕರೆದುಕೊಂಡು ಹೋದಾಗ ಅವರಿಗೂ ಹೃದಯಾಘಾತವಾಗಿದೆ ಎಂದು ವೈದ್ಯರು ಖಚಿತಪಡಿಸಿದರು. ಸಾವಿನಲ್ಲೂ ಒಂದಾದ ದಂಪತಿಗಳಿಗೆ ಮರು ಮದುವೆ ಮಾಡಿದ ಗ್ರಾಮಸ್ಥರು ಅಕ್ಷತೆ ಹಾಕಿ ಕಂಬನಿ ಮಿಡಿದರು. ದಂಪತಿಗಳಿಗೆ ಇಬ್ಬರು ಪುತ್ರಿಯರು ಹಾಗೂ ಬಸವೇಶ್ವರ ಹಾಲು ಉತ್ಪಾದಕರ ಸಹಕಾರಿ ಸಂಘದ ವ್ಯವಸ್ಥಾಪಕ ಅಡಿವೆಪ್ಪ ಗಲಗಲಿ ಸೇರಿ ಅಪಾರ ಬಂಧು ಬಳಗ ಇದ್ದಾರೆ.




## ರಾಘವೇಂದ್ರ ಶ್ರೀಗಳ 431ನೇ ವರ್ಧಂತಿ

**ಬಳ್ಳಾರಿ:** ಶ್ರೀ ರಾಘವೇಂದ್ರ ಸ್ವಾಮಿಗಳವರ 431 ನೆ ವರ್ಧಂತಿ ಮಹೋತ್ಸವ ಅಂಗವಾಗಿ ಇಂದು ಶ್ರೀ ರಾಘವೇಂದ್ರ ಸ್ವಾಮಿಗಳವರ ಮಠ, ತೇರು ಬೀದಿ,ಬಳ್ಳಾರಿಯಲ್ಲಿ ಶ್ರೀ ರಾಯರಿಗೆ ಬೆಣ್ಣೆ ಅಲಂಕಾರಮಾಡಲಾಯಿತು. ಈ ಸಂದರ್ಭದಲ್ಲಿವ್ಯವಸ್ಥಾಪಕರಾದ ಪಂಡಿತ ರಾಮಕೃಷ್ಣಾಚಾರ್ ,ಐಕೂರ್‌ಹನುಮೇಶಾಚರ್,ಶ್ರೀಧರ, ಪುರುಷೋತ್ತಮ,ರಾಘವೇಂದ್ರ, ಪಾಂಡುರಂಗ,ಧಾರವಾಡವಾಮನ, ಅನಂತ,ರಾಮಮೋಹನಾಚಾರ್, ರಾಘವೇಂದ್ರ ಆಚಾರ್ಯ, ಜಯತೀರ್ಥ ಅಚಾರ್, ಚೂಡಿ ನಾಗರಾಜ್, ಮಯೂರ ಹೋಟೆಲ್ ಮಧುಸೂದನ, ವಸುಧೇಂದ್ರ ಆಚಾರ್ಯರು, ವಿಜಯೇಂದ್ರ,ಪ್ರದೀಪ್,ವಿಜಯ ರಾವ್,ಹಾಗೋ ಭಕ್ತರು ಉಪಸ್ಥಿತರಿದ್ದರು.



## ಚಿಂತಕ ಡಾ.ಜಿ.ರಾಮಕೃಷ್ಣಗೆ ಪ್ರಶಸ್ತಿ

ನಾಡಿನ ಹೆಸರಾಂತ ವಿದ್ವಾಂಸ, ಮಾರ್ಕ್ಸ್‌ವಾದಿ ಚಿಂತಕ ಡಾ.ಜಿ.ರಾಮಕೃಷ್ಣ ಅವರಿಗೆ ಹಂಪಿ ವಿಶ್ವವಿದ್ಯಾನಿಲಯ ನಾಡೋಜ ಪ್ರಶಸ್ತಿಯನ್ನು ನೀಡಿ,ಪ್ರಶಸ್ತಿಯ ಘನತೆಯಯನ್ನು ಹೆಚ್ಚಿಸಿಕೊಂಡಿದೆ. ಇದು ಅವರಿಗೆ ಎಂದೋ ಸಿಗಬೇಕಾದ ಗೌರವ.ಸುಮಾರು ಐವತ್ತು ವರ್ಷಗಳಿಂದ ನನಗೆ ಜಿ.ಆರ್.ಅವರ ಒಡನಾಟ.ಅವರ ಪುಸ್ತಕಗಳು, ಉಪನ್ಯಾಸಗಳು,ತರಬೇತಿ ಶಿಬಿರಗಳಿಂದ ನಾವೆಲ್ಲ ಸೈದ್ಧಾಂತಿಕ ಸ್ಪಷ್ಟತೆ ಪಡೆದವರು. ಗುರುಗಳಿಗೆ ಮನದುಂಬಿ ಅಭಿನಂದನೆಗಳು.



## ಅಂಗನವಾಡಿ ಕಾರ್ಯಕರ್ತೆ ಹಾಗೂ ಸಹಾಯಕಿಯರ ಹುದ್ದೆಗಳಿಗೆ ಅರ್ಜಿ ಆಹ್ವಾನ

**ಬೆಂಗಳೂರು:** ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳ ಕಚೇರಿ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಬೆಂಗಳೂರು ಪೂರ್ವ ಯೋಜನಾ ವ್ಯಾಪ್ತಿಯಲ್ಲಿ ಅಂಗನವಾಡಿ ಕೇಂದ್ರಗಳ ಗೌರವಧನ ಆಧಾರಿತ ಅಂಗನವಾಡಿ ಕಾರ್ಯಕರ್ತೆಯರು 32 ಮತ್ತು ಸಹಾಯಕಿಯರ 94 ಹುದ್ದೆಗಳ ನೇಮಕಾತಿಗಾಗಿ ಭೌತಿಕವಾಗಿ (ಔಈಈಐಖಓಇ)ನಲ್ಲಿ ಅರ್ಹ ಸ್ಥಳೀಯ ಮಹಿಳಾ ಅಭ್ಯರ್ಥಿಗಳು ಹಾಗೂ ಮಹಿಳಾ ಲಿಂಗತ್ವ ಅಲ್ಪಸಂಖ್ಯಾತ ಅಭ್ಯರ್ಥಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ. ಆಸಕ್ತ ಅಭ್ಯರ್ಥಿಗಳು ಅರ್ಜಿಗಾಗಿ ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳ ಕಛೇರಿ, ಬೆಂಗಳೂರು 3ನೇ ಮಹಡಿ, ಅಂಚೆ ಕಚೇರಿ ಹತ್ತಿರ, ಆರ್.ಟಿ,ನಗರ ಮುಖ್ಯ ರಸ್ತೆ, ಬೆಂಗಳೂರು –560 032 ಇಲ್ಲಿ ಕಚೇರಿ ವೇಳೆಯಲ್ಲಿ ಅರ್ಜಿಗಳನ್ನು ಪಡೆದು ಸೂಕ್ತ ದಾಖಲೆಗಳೊಂದಿಗೆ ಅರ್ಜಿಯನ್ನು ಮಾರ್ಚ್ 24 ರೊಳಗೆ ಮುಚ್ಚಿದ ಲಕೋಟೆಯಲ್ಲಿ ಸಲ್ಲಿಸಬಹುದು. ಹೆಚ್ಚಿನ ಮಾಹಿತಿಗಾಗಿ ದೂರವಾಣಿ ಸಂಖ್ಯೆ 080– 29910051ಗೆ ಸಂಪರ್ಕಿಸಬಹುದು ಎಂದು ಬೆಂಗಳೂರು ಪೂರ್ವ ಯೋಜನೆ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.



ಹುಣಸೂರು ತಾಲ್ಲೂಕಿನ ಬಿಳಿಕೆರೆಯಲ್ಲಿ ನಯನಜ ಕ್ಷತ್ರಿಯ ಸವಿತಾ ಸಮಾಜ ಸಮುದಾಯ ಭವನವನ್ನು ಮಾಜಿ ಶಾಸಕ ಹಾಗೂ ಸ್ನೇಹಜೀವಿ ಎಚ್ ಪಿ ಮಂಜುನಾಥ್ ರವರು ಸಮಾಜದ ಗಣ್ಯರೊಂದಿಗೆ ಉದ್ಘಾಟಿಸಿದರು. ಈ ವೇಳೆ ಮಾತನಾಡಿ ನಾನು ಶಾಸಕನಾಗಿದ್ದ ಅವಧಿಯಲ್ಲಿ ಈ ಸಮುದಾಯ ಭವನ ನಿರ್ಮಾಣದ ಜಾಗಕ್ಕಾಗಿ ವೈಯಕ್ತಿಕ ಸಹಾಯ ಮಾಡಿ ನಂತರ ಭವನ ನಿರ್ಮಾಣಕ್ಕೆ ಶಾಸಕರ ಅನುದಾನದಡಿ 10 ಲಕ್ಷ ರೂಪಾಯಿಗಳ ಅನುದಾನವನ್ನು ನೀಡಿದ್ದು, ಇದಲ್ಲದೆ ಸವಿತಾ ಸಮಾಜದ ಎಲ್ಲಾ ಅಭಿವೃದ್ಧಿ ಕಾರ್ಯಗಳು ಸೇರಿದಂತೆ ಅವರ ಕಷ್ಟ ಸುಖಗಳಿಗೆ ಬೆನ್ನೆಲುಬಿನಂತೆ ಕಾರ್ಯ ನಿರ್ವಹಿಸಿದ್ದೇನೆ. ಅಲ್ಲದೇ ಇಂದು ವೈಯಕ್ತಿಕವಾಗಿ ಸವಿತಾ ಸಮುದಾಯದ ಅಭ್ಯುದಯಕ್ಕಾಗಿ 50 ಸಾವಿರ ರೂಪಾಯಿಗಳನ್ನು ದೇಣಿಗೆಯಾಗಿ ನೀಡಿದರು.

# ರಾಷ್ಟ್ರಪತಿ ಸೇರಿ ಗಣ್ಯರು, ಮಠಾಧೀಶರಿಗೆ ಆಹ್ವಾನ

• ಪರಶುರಾಮ ಕರಣಂ, ಭಾಲ್ಕಿ

ಕಲ್ಯಾಣ ಕರ್ನಾಟಕ ಭಾಗದಲ್ಲಿ ನಾಡೋಜ ಡಾ.ಬಸವಲಿಂಗ ಪಟ್ಟದ್ದೇವರು ಸಲ್ಲಿಸುತ್ತಿರುವ ಸೇವೆ ಅನುಪಮ. ಅಂತಹ ಪೂಜ್ಯರು 75ವಸಂತಗಳನ್ನು ಪೂರೈಸುತ್ತಿರುವುದು ಸಂತಸದ ಸಂಗತಿ ಅವರ ಅಮೃತ ಮಹೋತ್ಸವ ಐತಿಹಾಸಿಕವಾಗಿ ಆಚರಿಸಲು ಅಗತ್ಯ ಸಿದ್ಧತೆ ಮಾಡಿಕೊಳ್ಳಲಾಗುತ್ತಿದೆ ಎಂದು ಜಿಲ್ಲಾ ಉಸ್ತುವಾರಿ ಸಚಿವರು, ಅಮೃತ ಮಹೋತ್ಸವ ಸಮಿತಿ ಅಧ್ಯಕ್ಷರು ಆಗಿರುವ ಈಶ್ವರ ಖಂಡ್ರೆ ಹೇಳಿದರು.

ಪಟ್ಟಣದ ಹಿರೇಮಠ ಸಂಸ್ಥಾನದಲ್ಲಿ ಹಿರೇಮಠ ಸಂಸ್ಥಾನ, ಅಮೃತ ಮಹೋತ್ಸವ ಸಮಿತಿ ವತಿಯಿಂದ ಮಂಗಳವಾರ ಆಯೋಜಿಸಿದ್ದ ಬಸವಣ್ಣನವರ ಜಯಂತ್ಯುತ್ಸವ, ವಚನ ಜಾತ್ರೆ–2026, ಡಾ.ಚನ್ನಬಸವ ಪಟ್ಟದ್ದೇವರ 27ನೇ ಸ್ಮರಣೋತ್ಸವ ಮತ್ತು ಡಾ.ಬಸವಲಿಂಗ ಪಟ್ಟದ್ದೇವರ ಅಮೃತ ಮಹೋತ್ಸವದ ಕರಪತ್ರ ಬಿಡುಗಡೆಗೊಳಿಸಿ ಅವರು ಮಾತನಾಡಿದರು.



ಪಟ್ಟಣದಲ್ಲಿ ಮುಂದಿನ ತಿಂಗಳು ಏಪ್ರಿಲ್‌ನಲ್ಲಿ ಮೂರು ದಿವಸ ಐತಿಹಾಸಿಕವಾಗಿ ಸಮಾರಂಭ ಜರುಗಲಿದೆ. ಈಗಾಗಲೇ ದೇಶದ ರಾಷ್ಟ್ರಪತಿ ದ್ರೌಪದಿ ಮುರ್ಮು, ಸುತ್ತೂರು, ತುಮಕೂರು, ಆದಿಚಿಂಚನಗಿರಿ ಶ್ರೀಗಳು, ರವಿಶಂಕರ್ ಗುರೂಜಿ ಸೇರಿ ನಾಡಿನ ನಾನಾ ಮಠಾಧೀಶರು, ಗಣ್ಯರನ್ನು ಭೇಟಿಯಾಗಿ ಈ ಸಮಾರಂಭಕ್ಕೆ ಆಹ್ವಾನ ನೀಡಲಾಗಿದ್ದು, ಎಲ್ಲರೂ ಭಾಗವಹಿಸುವ ನಿರೀಕ್ಷೆಯಿದೆ ಎಂದರು.

ಸಮಿತಿ ಗೌರವಾಧ್ಯಕ್ಷರು, ಮಾಜಿ ಶಾಸಕರು ಆಗಿರುವ ಪ್ರಕಾಶ ಖಂಡ್ರೆ ಮಾತನಾಡಿ, ನಾಡಿನಾದ್ಯಂತ ಬಸವತತ್ವ ಪ್ರಚಾರ ಮತ್ತು ಪ್ರಸಾರ ಮಾಡುವಲ್ಲಿ ಹಿರೇಮಠ ಸಂಸ್ಥಾನದ ಕೊಡುಗೆ ದೊಡ್ಡದಿದೆ. ಶತಾಯುಷಿ ಡಾ.ಚನ್ನಬಸವ ಪಟ್ಟದ್ದೇವರು ಅಪ್ಪಟ ಬಸವತತ್ವ ಅನುಯಾಯಿ ಆಗಿದ್ದರು. ಅವರ ದಾರಿಯಲ್ಲೇ ಪರಮ ಪೂಜ್ಯ ಡಾ.ಬಸವಲಿಂಗ ಪಟ್ಟದ್ದೇವರು ನಡೆದು ಈ ಭಾಗದ ಪ್ರಗತಿಗೆ ಶ್ರಮಿಸುತ್ತಿದ್ದಾರೆ. ಅವರ ಅಮೃತ ಮಹೋತ್ಸವ ಎಲ್ಲರೂ ಸೇರಿ ಅರ್ಥಪೂರ್ಣವಾಗಿ ಆಚರಿಸೋಣ ಎಂದು ತಿಳಿಸಿದರು.

ಸಾನ್ನಿಧ್ಯ ವಹಿಸಿದ್ದ ನಾಡೋಜ ಡಾ.ಬಸವಲಿಂಗ ಪಟ್ಟದ್ದೇವರು ಮಾತನಾಡಿ, ಭಕ್ತರ ಒತ್ತಾಸೆಗೆ ಮಣಿದು ಅಮೃತ ಮಹೋತ್ಸವ ಆಚರಿಸಿ ಕೊಳ್ಳಲು ಒಪ್ಪಿಗೆ ನೀಡಿದ್ದೇನೆ ಎಂದು ತಿಳಿಸಿದರು.

ಈ ಸಂದರ್ಭದಲ್ಲಿ ಅರಣ್ಯ ಅಭಿವೃದ್ಧಿ ನಿಗಮದ ಉಪಾಧ್ಯಕ್ಷ ಹಣಮಂತರಾವ ಚವ್ಹಾಣ, ಪುರಸಭೆ ಮಾಜಿ ಅಧ್ಯಕ್ಷ ಬಸವರಾಜ ವಂಕೆ, ತಾಲೂಕು ಬಿಜೆಪಿ ಅಧ್ಯಕ್ಷ ವೀರಣ್ಣ ಕಾರಬಾರಿ, ಪ್ರಮುಖರಾದ ಝರೆಪ್ಪ, ಅಮರ ಜಲ್ದೆ, ಮಹಾದೇವ ಬೇಲೂರೆ, ಕಾಶಿನಾಥ ಲದ್ದೆ, ಪ್ರಶಾಂತ ಕೊಟಗೀರಾ, ದೀಪಕ ಸಿಂಧೆ ಸೇರಿದಂತೆ ಹಲವರು ಇದ್ದರು.

> **ನಾಡೋಜ ಡಾ.ಬಸವಲಿಂಗ ಪಟ್ಟದ್ದೇವರು ಅನೇಕ ವಿಧಾಯಕ ಕಾರ್ಯಗಳ ಮೂಲಕ ಶ್ರೀಮಠದ ಕೀರ್ತಿ ರಾಜ್ಯ, ರಾಷ್ಟ್ರ ವ್ಯಾಪಿ ಪಸರಿಸುವ ಕೆಲಸ ಮಾಡಿದ್ದಾರೆ. ಅಂತಹ ಪೂಜ್ಯರ ಅಮೃತ ಮಹೋತ್ಸವ ಪಕ್ಷಾತೀತ ಮತ್ತು ಜಾತ್ಯತೀತವಾಗಿ ಎಲ್ಲರೂ ಸೇರಿ ಐತಿಹಾಸಿಕವಾಗಿ ಆಚರಿಸೋಣ.**
> **–ಈಶ್ವರ ಖಂಡ್ರೆ,** ಅಧ್ಯಕ್ಷರು ಅಮೃತ ಮಹೋತ್ಸವ ಸಮಿತಿ ಭಾಲ್ಕಿ

# ಕಂಡಕ್ಟರ್‌ಗೆ ಒಲಿದ ಚಿನ್ನದ ಪದಕ

• ಮಲ್ಲಮ್ಮ ನುಡಿ ವಾರ್ತೆ ಕಲಬುರಗಿ

ಸದ್ಯ ಬೆಂಗಳೂರಿನ ಬಿಎಂಟಿಸಿಯಲ್ಲಿ ಕಂಡಕ್ಟರ್ ಆಗಿ ಸೇವೆ ಸಲ್ಲಿಸುತ್ತಿರುವ ಗುಲಬರ್ಗಾ ವಿಶ್ವವಿದ್ಯಾಲಯದ ಪತ್ರಿಕೋದ್ಯಮ ಮತ್ತು ಸಮೂಹ ಸಂವಹನ ವಿಭಾಗದಲ್ಲಿ ಎರಡು ಚಿನ್ನದ ಪದಕ ಪಡೆದ ಅಫಜಲಪುರ ತಾಲ್ಲೂಕಿನ ರೇವೂರ (ಬಿ) ಗ್ರಾಮದ ಭೌರಮ್ಮ ಬಸವರಾಜ ಕಲ್ಬುರ್ಗಿ ಅವರಿಗೆ ಸರ್ಕಾರಿ ನೌಕರಿ ಮಾಡುವ ಆಸೆ.

ಸದಾ ಗ್ರಂಥಾಲಯದಲ್ಲಿದ್ದುಕೊಂಡು ಪುಸ್ತಕ ಓದುತ್ತಿದ್ದ ಈಕೆಗೆ ಕಿತ್ತು ತಿನ್ನುವ ಬಡತನ ಅಡ್ಡಿಯಾಗಲೇ ಇಲ್ಲ. ಪತ್ರಿಕೋದ್ಯಮ ಮತ್ತು ಸಮೂಹ ಸಂವಹನ ವಿಭಾಗದ ಸಂಚಾಲಕ ಡಾ. ಸುರೇಶ ಜಂಗೆ ಹಾಗೂ ಅತಿಥಿ ಪ್ರಾಧ್ಯಾಪಕ ಡಾ. ಅಶೋಕ ದೊಡ್ಡಮನಿಯವರು ಓದಿಗೆ ನೆರವಾಗಿ ಪ್ರೋತ್ಸಾಹ ನೀಡಿದವರು. ತಂದೆ ಬಸವರಾಜ ತಾಯಿ ಶ್ರೀದೇವಿ ಹಾಗೂ ಮನೆಯವರ ಬೆಂಬಲದಿಂದ ಇದೆಲ್ಲ ಸಾಧ್ಯವಾಗಿದೆ. ಟಿವಿ, ಪತ್ರಿಕೆಗಳೆಂದರೆ ಮೊದಲಿನಿಂದಲೂ ಆಸಕ್ತಿ ಇತ್ತು. ಹೀಗಾಗಿ ಮಾಧ್ಯಮ ಕ್ಷೇತ್ರದ ಕೋರ್ಸ್ ಆಯ್ಕೆ ಮಾಡಿಕೊಂಡೆ. ಈಗಲೂ ನಾನು ಓದಿನಲ್ಲಿ ಹಿಂದೆ ಬಿದ್ದಿಲ್ಲ. ಉನ್ನತ ಹುದ್ದೆಗೇರುವ ಆಸೆ ಇದೆ. ಈಗ ಕಂಡಕ್ಟರ್ ಮುಂದೆ ಬದುಕು ಎಲ್ಲಿಗೆ ಕರೆದು-ಕೊಂಡು ಹೋಗುತ್ತದೋ ಕಾದು ನೋಡಬೇಕು ಎಂದು ನಗುತ್ತಲೇ ಉತ್ತರಿಸಿದಳು ಭೌರಮ್ಮ.

ಚಿನ್ನದ ಹುಡುಗಿಯ ಈ ಚಂದದ ಮಾತುಗಳು ಇತರರಿಗೆ ಪ್ರೇರಣೆಯಾಗಲಿ ಎಂಬುದೇ ಪತ್ರಿ-ಕೆಯ ಆಶಯ.




# ಒಳಮೀಸಲಾತಿ ಅನ್ಯಾಯ ಸರಿಪಡಿಸಲು ಒತ್ತಾಯಿಸಿ ಪತ್ರ

• ಮಲ್ಲಮ್ಮ ನುಡಿ ವಾರ್ತೆ ಬೀದರ

ಒಳಮೀಸಲಾತಿಯಿಂದ ಬಲಗೈ ಸಮುದಾಯಕ್ಕೆ ಆಗುತ್ತಿರುವ ಅನ್ಯಾಯವನ್ನು ತಕ್ಷಣ ಸರಿಪಡಿಸುವಂತೆ ಆಗ್ರಹಿಸಿ ಬಲಗೈ ಸಮುದಾಯಗಳ ಒಳಮೀಸಲಾತಿ ಹೋರಾಟ ಸಮಿತಿಯವರು ಇಂದು ಜಿಲ್ಲಾಧಿಕಾರಿಗಳ ಕಚೇರಿಯಲ್ಲಿ ಒತ್ತಾಯ ಪತ್ರ ಸಲ್ಲಿಸಿದರು.

ಮಾನ್ಯ ಮುಖ್ಯಮಂತ್ರಿಗಳು, ಮಾನ್ಯ ರಾಜ್ಯಪಾಲರು, ಸಮಾಜ ಕಲ್ಯಾಣ ಇಲಾಖೆ ಸಚಿವರಾದ ಹೆಚ್.ಸಿ. ಮಹಾದೇವಪ್ಪ, ಗೃಹ ಸಚಿವರಾದ ಡಾ. ಜಿ. ಪರಮೇಶ್ವರ, ಪಂಚಾಯತ್ ರಾಜ್ ಇಲಾಖೆ ಸಚಿವರಾದ ಪ್ರಿಯಾಂಕ್ ಖರ್ಗೆ ಹಾಗೂ ವಿಧಾನ ಪರಿಷತ್ ವಿರೋಧ ಪಕ್ಷದ ನಾಯಕ ಛಲವಾದಿ ನಾರಾಯಣಸ್ವಾಮಿ ಅವರಿಗೆ ಜಿಲ್ಲಾಧಿಕಾರಿಗಳ ಮೂಲಕ ಮನವಿ ಸಲ್ಲಿಸಲಾಗಿದೆ.

ಇದೇ ವೇಳೆ ಕರ್ನಾಟಕ ಅನುಸೂಚಿತ ಜಾತಿಗಳು ಮತ್ತು ಅನುಸೂಚಿತ ಬುಡಕಟ್ಟುಗಳ ಆಯೋಗದ ಅಧ್ಯಕ್ಷರಾದ ಡಾ. ಮೂರ್ತಿ ಎಲ್ ಅವರಿಗೆ ಬೀದರ ಜಿಲ್ಲಾಧಿಕಾರಿಗಳ ಕಚೇರಿಯಲ್ಲಿ ಪ್ರತ್ಯೇಕವಾಗಿ ಪತ್ರ ನೀಡಲಾಗಿದೆ. ಒಂದು ವಾರದೊಳಗೆ ಸಮಸ್ಯೆ ಬಗೆಹರಿಯದಿದ್ದರೆ ಸಮುದಾಯದ ವತಿಯಿಂದ ಸಭೆ ನಡೆಸಿ ಬೀದರ ಬಂದ್‌ಗೆ ಕರೆ ನೀಡಲಾಗುವುದು ಎಂದು ಬಲಗೈ ಸಮುದಾಯಗಳ ಒಳಮೀಸಲಾತಿ ಹೋರಾಟ ಸಮಿತಿ ಅಧ್ಯಕ್ಷ ಮಹೇಶ ಗೋರನಾಳಕರ ತಿಳಿಸಿದ್ದಾರೆ. ಈ ಸಂದರ್ಭದಲ್ಲಿ ಕಾರ್ಯಕಾರಿ ಸಮಿತಿ ಸದಸ್ಯರಾದ ಪ್ರದೀಪ್ ನಾಟೆಕರ್, ಪ್ರಕಾಶ ರಾವಣ್, ಭೀಮರಾವ ಮಾಲಗತ್ತಿ, ರಾಹುಲ್ ಡಾಂಗೆ, ಪವನ ಮಿಠಾರೆ, ಸಂಜುಕುಮಾರ ಸಾಗರ, ವಿನೋದ ಬಂದಗೆ, ಸೂರ್ಯಕಾಂತ ಸಾಧೂರೆ, ಅರುಣ ಪಟೇಲ್ ಸೇರಿದಂತೆ ಹಲವರು ಉಪಸ್ಥಿತರಿದ್ದರು. ಬಲಗೈ ಸಮುದಾಯದ ಹೋರಾಟಗಾರರಾದ ಮಾರುತಿ ಬೌದ್ಧೆ, ಅನೀಲಕುಮಾರ ಬೆಲ್ದಾರ, ಡಾ. ಕಾಶಿನಾಥ ಚೆಲ್ವಾ, ವಿಠಲದಾಸ ಪ್ಯಾಗೆ, ಶ್ರೀಪತರಾವ ದಿನೆ, ಶಿವಕುಮಾರ ನೀಲಿಕಟ್ಟಿ, ದಶರಥ ಗುರು, ಸಂದೀಪ್ ಕಾಂಟೆ, ಸುನೀಲ ಸಂಗಮ್ ಸೇರಿದಂತೆ ಸಮುದಾಯದ ನೂರಾರು ಹೋರಾಟಗಾರರು ಭಾಗವಹಿಸಿದ್ದರು. ಪ್ರದೀಪ ನಾಟೆಕರ್, ಪ್ರಕಾಶ ರಾವಣ್, ಭೀಮರಾವ ಮಾಲಗತ್ತಿ, ರಾಹುಲ್ ಡಾಂಗೆ, ಪವನ ಮಿಠಾರೆ, ಸಂಜುಕುಮಾರ ಸಾಗರ, ವಿನೋದ ಬಂದಗೆ, ಸೂರ್ಯಕಾಂತ ಸಾಧೂರೆ ಅರುಣ ಪಟೇಲ್, ಮಾರುತಿ ಬೌದ್ಧೆ, ವಿಠಲದಾಸ ಪ್ಯಾಗೆ, ಶ್ರೀಪತರಾವ ದಿನೆ, ಶಿವಕುಮಾರ ನೀಲಿಕಟ್ಟಿ, ದಶರಥ ಗುರು, ಸಂದೀಪ್ ಕಾಂಟೆ, ಸುನೀಲ ಸಂಗಮ್, ಸಮುದಾಯದ ನೂರಾರು ಜನ ಹೋರಾಟಗಾರರು ಉಪಸ್ಥಿತರಿದ್ದರು.



# ಅತ್ಯಾಧುನಿಕ ತಂತ್ರಜ್ಞಾನದಲ್ಲಿ ತಾಯಿ ಹಾಲು ಸಂಗ್ರಹ

• ಮಲ್ಲಮ್ಮ ನುಡಿ ವಾರ್ತೆ ವಿಜಯಪುರ

ರಾಜ್ಯದಲ್ಲಿಯೇ ಜಿಲ್ಲಾಸ್ಪತ್ರೆಯಲ್ಲಿ ಮೊದಲ ಬಾರಿಗೆ ಹೈಟೆಕ್ ತಾಯಂದಿರ ಹಾಲಿನ ಬ್ಯಾಂಕ್ ತೆರೆಯದಿದ್ದು ಈ ಆಸ್ಪತ್ರೆಯಲ್ಲಿ ಸಿ ಎಸ್ ಆರ್ ಫಂಡ್ ಮೂಲಕ ತೆರೆದ ಜಿಲ್ಲಾಸ್ಪತ್ರೆ ಅನ್ನೋ ಹೆಗ್ಗಳಿಕೆಗೆ ಪಾತ್ರವಾಗಿದೆ. ಬಾಣಂತಿ ತಾಯಿಗೆ ಎದೆ ಹಾಲು ಕಡಿಮೆಯಿದ್ದಾಗ ಪೌಡರ್ ಹಾಲಿಗೆ ಮೊರೆ ಹೋಗುತ್ತಿದ್ದರು, ಆದರೆ ಇನ್ನು ಮುಂದೆ ಈ ಜಿಲ್ಲಾಸ್ಪತ್ರೆಯಲ್ಲಿ ತಾಯಂದಿರ ಹಾಲಿನ ಬ್ಯಾಂಕ್ ನಲ್ಲಿ ಗುಣಮಟ್ಟದ ಹಾಲು ಸಿಗಲಿದೆ, ಮಕ್ಕಳಲ್ಲಿನ ಅಪೌಷ್ಟಿಕತೆ ಹೋಗಲಾಡಿಸಲು ಇದೊಂದು ಮಹತ್ವದ ಹೆಜ್ಜೆಯಾಗಿದೆ.

ವಿಜಯಪುರ ಜಿಲ್ಲಾಸ್ಪತ್ರೆಯಲ್ಲಿರೋ ತಾಯಿ ಮತ್ತು ಮಕ್ಕಳ ಆಸ್ಪತ್ರೆಯಲ್ಲಿ ಅತ್ಯಾಧುನಿಕ ತಂತ್ರಜ್ಞಾನದಲ್ಲಿ ತಾಯಂದಿರ ಹಾಲಿನ ಬ್ಯಾಂಕ್ ತೆರೆಯಲಾಗಿದ್ದು ಬೆಂಗಳೂರಿನ ಆಶ್ರಯ ಹಸ್ತ ಟ್ರಸ್ಟ್ ನವರು ಸಿ ಎಸ್ ಆರ್ ಅನುದಾನದಲ್ಲಿ 1 ಕೋಟಿ 40 ಲಕ್ಷ ಹಣವನ್ನು ಹೈಟೆಕ್ ತಾಯಂದಿರ ಹಾಲಿನ ಬ್ಯಾಂಕ್ ಗೆ ವಿನಿಯೋಗಿಸಿದ್ದಾರೆ. ಈ ತಾಯಂದಿರ ಹಾಲಿನ ಬ್ಯಾಂಕ್ ಎರಡು ವರ್ಷಗಳ ಕಾಲ ನಿರ್ವಹಣೆ ಜವಾಬ್ದಾರಿ ಹೈದ್ರಾಬಾದ್ ನ ಸುಶೆನಾ ಹೆಲ್ತ್ ಫೌಂಡೇಶನ್ ಹೊತ್ತಿದೆ. ಎರಡು ವರ್ಷವಾದ ಬಳಿಕ ಕರ್ನಾಟಕ ಸರ್ಕಾರಕ್ಕೆ ಮಿಲ್ಕ್ ಬ್ಯಾಂಕ್ ಹಸ್ತಾಂತರಿಸಲಿದ್ದಾರೆ.




ವಿಜಯಪುರ ಆಸ್ಪತ್ರೆಯಲ್ಲಿ ಪ್ರತಿ ತಿಂಗಳು 800 ರಿಂದ 1 ಸಾವಿರ ಹೆರಿಗೆ ಆಗುತ್ತವೆ. ಕಡಿಮೆ ತೂಕ ಹಾಗೂ ಅವಧಿ ಪೂರ್ವ ಹುಟ್ಟುವ ಮಕ್ಕಳಿಗೆ ತಾಯಂದಿರ ಹಾಲಿನ ಬ್ಯಾಂಕ್ ಉಪಯೋಗ ಆಗುತ್ತಿದೆ. ಅಪೌಷ್ಟಿಕತೆಯಿಂದ ಬಳಲುವ ಮಕ್ಕಳಿಗೆ ತಾಯಂದಿರ ಹಾಲಿನ ಬ್ಯಾಂಕ್ ಮೂಲಕ ಹಾಲುಣಿಸಲಾಗ್ತಿದೆ. ಎದೆ ಹಾಲು ಕಡಿಮೆ ಬರುವ ತಾಯಂದಿರ ಮಕ್ಕಳಿಗೆ ಇದೊಂದು ವರದಾನವಾಗಿದೆ. ಪೌಡರ್ ಹಾಲು ಕೊಡುತ್ತಿದ್ದರು ಅದು ಅಷ್ಟು ಉಪಯುಕ್ತವಲ್ಲ. ವಿಜಯಪುರದಲ್ಲಿ ಅಪೌಷ್ಟಿಕತೆಯಿಂದ ವರ್ಷಕ್ಕೆ 2500 ಮಕ್ಕಳು ಬಳಲುತ್ತಿದ್ದವು. ಇದೀಗ ತಾಯಂದಿರ ಹಾಲಿನ ಬ್ಯಾಂಕ್ ಮೂಲಕ ಅಂತಹ ಮಕ್ಕಳಿಗೆ ಗುಣಮಟ್ಟದ ಹಾಲು ನೀಡಲಾಗುತ್ತಿದೆ. ಈ ಹಾಲಿನ ಬ್ಯಾಂಕ್ ಗೆ ಹೆಚ್ಚು ಹಾಲು ಬರುವ ತಾಯಂದಿರು ತಮ್ಮ ಹಾಲನ್ನು ದಾನ ಮಾಡುತ್ತಿದ್ದಾರೆ. ಈಗಾಗಲೇ 30 ಲೀಟರ್ ನಷ್ಟು ತಾಯಂದಿರ ಹಾಲನ್ನು ಸಂಗ್ರಹಿಸಿಡಲಾಗಿದೆ. ಉಚಿತವಾಗಿ ಹಾಲನ್ನು ನೀಡಲಾಗುತ್ತಿದೆ. ತಾಯಂದಿರ ಹಾಲಿನ ಬ್ಯಾಂಕ್ ತೆರೆದಿರೋದ್ರಿಂದ ಶಿಶು ಮರಣ ತಡೆಗಟ್ಟಬಹುದು, ಜೊತೆಗೆ ಅಪೌಷ್ಟಿಕತೆಯಿಂದ ಬಳಲುವ ಮಕ್ಕಳಿಗೆ ಆರೋಗ್ಯಕರ ಹಾಲು ನೀಡುವ ಮೂಲಕ ರೋಗ ನಿರೋಧಕ ಶಕ್ತಿ ಹೆಚ್ಚಿಸುವಲ್ಲಿ ಪ್ರಮುಖ ಪಾತ್ರ ವಹಿಸುತ್ತದೆ. ಹೆಚ್ಚು ಎದೆ ಹಾಲು ಬರುವ ತಾಯಂದಿರು ಹಾಲನ್ನು ವೇಸ್ಟ್ ಮಾಡದೇ ಈ ಹಾಲಿನ ಬ್ಯಾಂಕ್ ಗೆ ಕೊಡಲು ಸ್ವಯಂಪ್ರೇರಿತರಾಗಿ ಮುಂದೆ ಬರಬೇಕು. ಇಲ್ಲಿ ಸಂಗ್ರಹಿಸುವ ಹಾಲು 6 ತಿಂಗಳವರೆಗೆ ಬಳಸಲು ಬರುತ್ತದೆ. ಅಂತಹ ಅತ್ಯಾಧುನಿಕ ರೆಫ್ರಿಜರೇಟರ್ ಅಳವಡಿಸಲಾಗಿದೆ. ಇನ್ನು ಹಾಲಿನ ಬ್ಯಾಂಕ್ ನಲ್ಲಿ ಚೊಚ್ಚಲ ಹೆರಿಗೆಯಾದ ಬಾಣಂತಿಯರಿಗೆ ಮಗುವಿಗೆ ಹೇಗೆ ಹಾಲುಣಿಸಬೇಕು ಹಾಗೂ ಆಹಾರ ಪದಾರ್ಥ ಯಾವುದೆಲ್ಲ ಸೇವಿಸಬೇಕು ಎಂದು ವೈದ್ಯಾಧಿಕಾರಿಗಳು ಮಾಹಿತಿ ನೀಡುತ್ತಾರೆ. ತಾಯಂದಿರಿಗೆ ಇದು ತುಂಬಾ ಉಪಯುಕ್ತವಾಗಿದೆ ಎಂದು ಸಂತಸ ವ್ಯಕ್ತಪಡಿಸಿದರು. ತಾಯಂದಿರ ಬ್ಯಾಂಕ್ ನಲ್ಲಿ ತಾಯಂದಿರ ವಿಶ್ರಾಂತಿ ಕೊಠಡಿ ಜೊತೆಗೆ ತಾಯಂದಿರಿಗೆ ಕೌನ್ಸಿಲಿಂಗ್ ಮಾಡುವ ಕೊಠಡಿ, ಪ್ರಾಥಮಿಕ ಮಾಹಿತಿ ಸಂಗ್ರಹಣೆ ಆ ಬಳಿಕ ತಾಯಂದಿರ ಎದೆ ಹಾಲು ವೈಜ್ಞಾನಿಕವಾಗಿ ಸಂಗ್ರಹಿಸಿ, ಸ್ಟೋರ್ ಮಾಡಲಾಗಿದೆ.

ಒಟ್ಟಿನಲ್ಲಿ ವಿಜಯಪುರ ಸರಕಾರಿ ಆಸ್ಪತ್ರೆಯಲ್ಲಿ ಸಿ ಎಸ್ ಆರ್ ಅನುದಾನದಡಿಯಲ್ಲಿ ತಾಯಿ ಎದೆ ಹಾಲು ಉಣಿಸು ಕೇಂದ್ರ ಸ್ಥಾಪಿಸಿರುವದು ಅದೆಷ್ಟೋ ಅಪೌಷ್ಟಿಕತೆಯ ಮಕ್ಕಳ ಪಾಲಿಗೆ ವರದಾನವಾಗಿದೆ.

Printed, Published and Owned by: Ramesh Reddy and Printed at Metropolitan Media Company Ltd., Plot No.224, in Sy.No.41/2, 41/B & 42, Kapnoor 2nd stage, Industrial Area, Kalburagi-585104. Published at Sy.No. 466, TMC No. 22-405, First Floor, Gada Complex, Opp. Inspection Bungalow, Humnabad-585330.Editor: Ramesh Reddy, Office Ph. No: +91 9449732000.

PRGI NO. 120927
(RNINO:KARKAN/2011/48371)